

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ನವೆಂಬರ್ 22 ಬುಧವಾರ 2023

ಸಂಪುಟ: 44 | ಸಂಚಿಕೆ: 215 | ಪುಟಗಳು: 10

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ– ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.cor..

₹4



ನಿಗಮ–ಮಂಡಳಿಗೆ ಶಾಸಕರ ಪಟ್ಟಿ

ಪ್ರತಿ ಶಾಸಕರಿಗೆ ಕರೆ ಮಾಡಿ ಅಭಿಪ್ರಾಯ ಸಂಗ್ರಹಿಸಿದ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೇವಾಲ

ಬೆಂಗಳೂರು, ನ. 21– ನಿಗಮ



ಮಂಡಳಿಗಳ ಅಧ್ಯಕ್ಷ ಸ್ಥಾನ ನೇಮಕ ವಿಚಾರವಾಗಿ ಬೆಂಗಳೂರಿನ ತಾಜ್ ವೆಸ್ಟ್ ಎಂಡ್ ಹೋಟೆಲ್‌ನಲ್ಲಿ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ನೇತೃತ್ವದಲ್ಲಿ ಸಭೆ ನಡೆದು ಸಂಭಾವ್ಯರ ಪಟ್ಟಿ ಸಿದ್ಧವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜತೆಗಿನ ಸಭೆಯ ನಡುವೆಯೇ ಸುರ್ಜೇವಾಲ ಅವರು ಶಾಸಕರಿಗೆ ದೂರವಾಣಿ ಕರೆ ಮಾಡಿ ಮಾತನಾಡುತ್ತಿದ್ದಾರೆ.

ಸಭೆಯಲ್ಲಿ ಸಚಿವರಾದ ಡಾ. ಜಿ. ಪರಮೇಶ್ವರ್, ಕೆ.ಜೆ.ಜಾರ್ಜ್ ಕೂಡ ಭಾಗವಹಿಸಿದ್ದಾರೆ. ಸಭೆ ನಡುವೆಯೇ ಹಿರಿಯ ಶಾಸಕರಿಗೆ ಸುರ್ಜೇವಾಲ ದೂರವಾಣಿ ಕರೆ ಮಾಡಿದ್ದು, ಪಟ್ಟಿ ಪ್ರಕಟಿಸಿದ ನಂತರ ತಕರಾರು ಮಾಡಬಾರದು ಎಂದು ಸೂಚನೆ ಕೊಟ್ಟಿದ್ದಾರೆ. ಅಲ್ಲದೆ, ಕೊಟ್ಟ ನಿಗಮ ಮಂಡಳಿ ಜವಾಬ್ದಾರಿ ನಿಭಾಯಿಸಬೇಕೆಂದು ಸೂಚನೆಯನ್ನೂ ನೀಡಿದ್ದಾರೆ. ಏನಾದರೂ ಆಕ್ಷೇಪಗಳಿದ್ದರೆ ಈಗಲೇ ತಿಳಿಸಿ ಎಂದೂ ಹೇಳಿದ್ದಾರೆ. ಯಾರೆಲ್ಲ ಒಪ್ಪಿಕೊಳ್ಳಲಿದ್ದಾರೆಂದು ಖಚಿತಪಡಿಸಿಕೊಂಡಿರುವ ಸುರ್ಜೇವಾಲ, ಒಬ್ಬೊಬ್ಬರೇ ಹಿರಿಯ ಶಾಸಕರಿಗೆ ಕರೆ ಮಾಡಿ ಮಾತನಾಡಿದ್ದಾರೆ. ▶ 8ನೇ ಪುಟಕ್ಕೆ

ಬೇಸಿಗೆಯಲ್ಲೂ ವಿದ್ಯುತ್ ಅಭಾವ ಉಂಟಾಗಲ್ಲ!



- ಇಂಧನ ಸಚಿವ ಕೆ.ಜೆ.ಜಾರ್ಜ್ ಅಭಯ
- ಅಗತ್ಯ ಎಲ್ಲಾ ಮುನ್ನೆಚ್ಚರಿಕಾ ಕ್ರಮ ಕೈಗೊಂಡಿದ್ದೇವೆ
- ಪಂಪ್‌ಸೆಟ್‌ಗೆ 7 ಗಂಟೆ ವಿದ್ಯುತ್ ಪೂರೈಕೆ
- 1500 ಮೆ.ವ್ಯಾಟ್ ವಿದ್ಯುತ್ ಖರೀದಿ
- ಯಲಹಂಕ ಅನಿಲ ಸ್ಥಾವರದಲ್ಲೂ ಉತ್ಪಾದನೆ
- ಉಷ್ಣ ವಿದ್ಯುತ್ ಗರಿಷ್ಠ ಮಟ್ಟದಲ್ಲಿ ಹೆಚ್ಚಳ
- ಉ.ಪ್ರದೇಶ, ಪಂಜಾಬ್‌ನಿಂದ ವಿದ್ಯುತ್ ವಿನಿಮಯ



ಬೆಂಗಳೂರು, ನ.21 (ಕೆಎಂಶಿ)– **ಮುಂಬರುವ ಬೇಸಿಗೆಯಲ್ಲಿ ವಿದ್ಯುತ್ ಅಭಾವ ಉಂಟಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಇಂದಿಲ್ಲಿ ತಿಳಿಸಿದ್ದಾರೆ.**

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನೀರಾವರಿ ಪಂಪ್‌ಸೆಟ್‌ಗಳಿಗೆ ದಿನನಿತ್ಯ 7ಗಂಟೆ ವಿದ್ಯುತ್ ಪೂರೈಕೆ ಮಾಡಲಾಗುವುದು ಎಂದರು. ತೀವ್ರ ಬರದ ನಡುವೆಯೂ ಹೆಚ್ಚುತ್ತಿರುವ ವಿದ್ಯುತ್ ಬೇಡಿಕೆಯನ್ನು ಪೂರೈಸಲು ರಾಜ್ಯ ಸರ್ಕಾರವು ಸಾಧ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಂಡಿದೆ. ಸದ್ಯದ ಅಂಕಿ–ಅಂಶಗಳ ಪ್ರಕಾರ, ರಾಜ್ಯದ ದೈನಂದಿನ ವಿದ್ಯುತ್ ಬೇಡಿಕೆ ಸುಮಾರು 14,000 ಮೆ.ವ್ಯಾ. ಮತ್ತು ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಬೇಡಿಕೆ ಸುಮಾರು 4,500 ಮೆ.ವ್ಯಾ. ಇದೆ. ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆ ಪ್ರಮಾಣ ಹೆಚ್ಚಳದ ಜತೆಗೆ ಸೆಕ್ಷನ್ 11 ಜಾರಿ ಮಾಡಲಾಗಿದೆ. ಬೇರೆ ರಾಜ್ಯಗಳಿಂದ ವಿದ್ಯುತ್ ವಿನಿಮಯ ಮಾಡಿಕೊಳ್ಳಲಾಗುವುದು. ಬರುವ ಫೆಬ್ರವರಿ, ಮಾರ್ಚ್ ಮತ್ತು ಏಪ್ರಿಲ್‌ನಲ್ಲಿ ಸರಾಸರಿ ವಿದ್ಯುತ್ ಬೇಡಿಕೆ ಸುಮಾರು 15,500 ಮೆ.ವ್ಯಾ.ನಿಂದ 16,500 ಮೆ.ವ್ಯಾ. ತಲುಪುವ ನಿರೀಕ್ಷೆಯಿದೆ. ರಾಜ್ಯದ ವಿದ್ಯುತ್ ಬೇಡಿಕೆ ಪೂರೈಸಲು ಪಂಜಾಬ್ ಮತ್ತು ಉತ್ತರ ಪ್ರದೇಶದಿಂದ ವಿದ್ಯುತ್ ವಿನಿಮಯ ಮಾಡಿಕೊಳ್ಳಲಾಗುವುದು ಎಂದು ಹೇಳಿದರು.

ರಾಜ್ಯದ ಉಷ್ಣ ವಿದ್ಯುತ್ ಉತ್ಪಾದನೆಯನ್ನು ಗರಿಷ್ಠ ಮಟ್ಟಕ್ಕೆ ಹೆಚ್ಚಿಸುವುದು ಮತ್ತು ಎಟಿಹೆಚ್ ಜನರೇಟರ್‌ಗಳ ಕಾರ್ಯಾಚರಣೆ ಪುನಾರಂಭಿಸಲಾಗುವುದು.

370 ಮೆ.ವ್ಯಾ. ಸಾಮರ್ಥ್ಯದ ಯಲಹಂಕ ಅನಿಲ ಸ್ಥಾವರದಲ್ಲಿ ಶೀಘ್ರದಲ್ಲೇ ಉತ್ಪಾದನೆ ಆರಂಭಿಸಲು ಕ್ರಮ ಕೈಗೊಳ್ಳಲಾಗುವುದು. ಬೇಡಿಕೆ ಆಧರಿಸಿ ಅಲ್ಪಾವಧಿ ಆಧಾರದಲ್ಲಿ 1500 ಮೆ.ವ್ಯಾ. ವಿದ್ಯುತ್ ಖರೀದಿಸಲು ಕೆಇಆರ್‌ಸಿ ಅನುಮೋದನೆ ಪಡೆದು, ಪ್ರಕ್ರಿಯೆ ಪ್ರಾರಂಭಿಸಲಾಗಿದೆ. ಥರ್ಮಲ್ ಜನರೇಟರ್‌ಗಳ ಕಾರ್ಯಕ್ಷಮತೆಯನ್ನು ಸುಧಾರಿಸಲು ದೇಶೀಯ ಕಲ್ಲಿದ್ದಲಿನೊಂದಿಗೆ ಆಮದು ಕಲ್ಲಿದ್ದಲನ್ನು ಸರಾಸರಿ ಶೇ.10ರಷ್ಟು ಮಿಶ್ರಣ ಮಾಡಲಾಗುವುದು.

ಭಾಗ್ಯಜ್ಯೋತಿ, ಕುಟೀರ ಜ್ಯೋತಿ ಬಾಕಿ ಮನ್ನಾ: ಭಾಗ್ಯ ಜ್ಯೋತಿ, ಕುಟೀರ ಜ್ಯೋತಿ ಯೋಜನೆಯ 2.64 ಲಕ್ಷ ಫಲಾನುಭವಿಗಳು ಬಾಕಿ ಉಳಿಸಿಕೊಂಡಿದ್ದ ವಿದ್ಯುತ್ ಶುಲ್ಕ 389.66 ▶ 8ನೇ ಪುಟಕ್ಕೆ

ಕಾಂಗ್ರೆಸ್ ಪೋಸ್ಟರ್ ಚಾಳಿ ಬಿಡದಿದ್ದರೆ ಹಾದಿ ಬೀದಿಯಲ್ಲಿ ಕಾರ್ಯಕರ್ತರ ಮಾರಾಮಾರಿ

- ಮುಂದಿನ ಪರಿಣಾಮಕ್ಕೆ ಸರ್ಕಾರವೇ ಹೊಣೆ; ಜೆಡಿಎಸ್ ಎಚ್ಚರಿಕೆ
- ನಾವು ಬೀದಿಗಿಳಿಯುವುದಾಗಿ ಜೆಡಿಎಸ್ ಮಾಜಿ ಶಾಸಕರ ಆಕ್ರೋಶ



ಬೆಂಗಳೂರು, ನ.21(ಕೆಎಂಶಿ)– ಕಾಂಗ್ರೆಸ್ ಪೋಸ್ಟರ್ ಚಾಳಿ ಬಿಡದಿದ್ದರೆ ಕಾನೂನು ಸುವ್ಯವಸ್ಥೆ ಹದಗೆಟ್ಟು ರಕ್ತಪಾತವಾದರೆ ಸರ್ಕಾರವೇ ಹೊಣೆ ಎಂದು ಜೆಡಿಎಸ್ ಎಚ್ಚರಿಕೆ ನೀಡಿದೆ.

ಪೋಸ್ಟರ್ ಚಾಳಿಗೆ ಪೊಲೀಸರು ಕಡಿವಾಣ ಹಾಕದಿದ್ದರೆ ಹಾದಿ–ಬಿದಿಯಲ್ಲಿ ಮಾರಾಮಾರಿ ಆಗುತ್ತದೆ. ಗೃಹ ಇಲಾಖೆ ತಕ್ಷಣ ಕ್ರಮ ಕೈಗೊಳ್ಳದಿದ್ದರೆ, ನಾವೂ ಪೋಸ್ಟರ್ ರಾಜಕೀಯ ಮಾಡುತ್ತೇವೆ ಎಂದಿದೆ. ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಮಾಜಿ ಶಾಸಕರಾದ ಎ.ಮಂಜುನಾಥ್, ಅಶ್ವಿನ್‌ಕುಮಾರ್ ಹಾಗೂ ಎಚ್.ಎಂ. ರಮೇಶ್‌ಗೌಡ, ನಮ್ಮ ರಾಜ್ಯಾಧ್ಯಕ್ಷರು, ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರ ವಿರುದ್ಧ ಪೋಸ್ಟರ್ ಪಾಲಿಟಿಕ್ಸ್ ಮಾಡಲಾಗುತ್ತಿದೆ ಎಂದರು.

ಗೃಹ ಸಚಿವರು ತಕ್ಷಣ ಮಧ್ಯೆ ಪ್ರವೇಶ ಮಾಡಿ ಇದನ್ನು ತಡೆಯಬೇಕು. ಕಾಂಗ್ರೆಸ್ ತಮ್ಮ ಪಕ್ಷದ ನಾಯಕರ ಮೇಲೆ ಬರುತ್ತಿರುವ ಆರೋಪಗಳನ್ನು ಸಹಿಸಲಾಗದೆ ಇಂತಹ ಅನಿಷ್ಟ ಪದ್ಧತಿಗೆ ಇಳಿದಿದೆ.

ಕಾಂಗ್ರೆಸ್ ಪಕ್ಷದವರು ಬಿಜೆಪಿ ಸರ್ಕಾರದ ಸಮಯದಲ್ಲಿ ಪೇ–ಸಿಎಂ ಪೋಸ್ಟರ್‌ಗಳನ್ನು ರಾತ್ರೋರಾತ್ರಿ ಅಂಟಿಸಿದರು. ಈಗ ಜನಪರ ವಿಷಯಗಳ ಬಗ್ಗೆ ಪ್ರಸ್ತಾಪ ಮಾಡುತ್ತಿರುವ ಕುಮಾರಸ್ವಾಮಿ ಅವರ ಬಗ್ಗೆ ಅಶ್ಲೀಲ, ಕೀಳು ಅಭಿರುಚಿಯ ಪೋಸ್ಟರ್ ಅಂಟಿಸಿ ಮೇಲುಗೈ ಸಾಧಿಸುತ್ತೇವೆ ಎನ್ನುವ ಭ್ರಮೆಯಲ್ಲಿದ್ದಾರೆ.

ನಾವು ಕಾಂಗ್ರೆಸ್‌ನವರ ವಿರುದ್ಧದ ಪೋಸ್ಟರ್‌ಗಳನ್ನು ಅಂಟಿಸುವುದು ದೊಡ್ಡ ವಿಚಾರವಲ್ಲ, ಅವರು ಒಂದು ಮಾಡಿದರೆ ಹತ್ತು ಮಾಡುವ ಶಕ್ತಿ ನಮಗೂ ಇದೆ. ಇದು ಯಾವುದು ರಾಜಕಾರಣದಲ್ಲಿ ಶಾಶ್ವತ ಅಲ್ಲ ಎಂದರು.

ಪೊಲೀಸ್ ಮಹಾನಿರ್ದೇಶಕರಿಗೂ ಮನವಿ ಮಾಡುತ್ತೇವೆ. ಇದಕ್ಕೆಲ್ಲಾ ಕಡಿವಾಣ ಹಾಕುವ ಕೆಲಸ ಮಾಡಬೇಕು. ವಿದ್ಯುತ್ ವಿಚಾರವಾಗಿ ಕುಮಾರಸ್ವಾಮಿ ವಿರುದ್ಧ ಪೋಸ್ಟರ್ ಅಂಟಿಸಿದಾಗ ಗೃಹ ಇಲಾಖೆ ಏನು ಮಾಡುತ್ತಿತ್ತು ಮತ್ತೆ ಪೋಸ್ಟರ್ ಅಂಟಿಸಿದ್ದಾರೆ. ▶ 8ನೇ ಪುಟಕ್ಕೆ

ಲೋಕಸಭೆ ಚುನಾವಣೆ ನಂತರ ಕಾಂಗ್ರೆಸ್ ಸರ್ಕಾರ ಪತನ

ಬೆಂಗಳೂರು, ನ.21– 2019ರಲ್ಲಿ ಬೆಳಗಾವಿ



ರಾಜಕಾರಣದಿಂದಾಗಿಯೇ ಸರ್ಕಾರ ಪತನವಾಗಿತ್ತು. ಈಗಲೂ ಅಂತಹ ಜ್ವಾಲೆ ಬೆಳಗಾವಿಯಲ್ಲಿ ಕಾಣಿಸಿಕೊಂಡಿದ್ದು, ಲೋಕಸಭಾ ಚುನಾವಣೆ ನಂತರ ಕಾಂಗ್ರೆಸ್ ಸರ್ಕಾರ ಇರುವುದು ಅನುಮಾನ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಭವಿಷ್ಯ ನುಡಿದಿದ್ದಾರೆ.

ಮಾಜಿ ಸಿಎಂ ಬಸವರಾಜ್ ಬೊಮ್ಮಾಯಿ ನಿವಾಸದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಚಿವ ಸತೀಶ್ ಜಾರಕಿಹೊಳಿ ಅವರು ಶಾಸಕರನ್ನು ದುಬೈ ಪ್ರವಾಸಕ್ಕೆ ಕರೆದೊಯ್ದಿದ್ದಾರೆ. ಹಿಂದೆ ಬೆಳಗಾವಿ ರಾಜಕಾರಣದಿಂದ ಸರ್ಕಾರವೇ ಬಿದ್ದು ಹೋಗಿತ್ತು. ಮತ್ತೆ ಬೆಳಗಾವಿ ಬೆಂಕಿ ಜ್ವಾಲೆಯಾಗಿ ದುಬೈವರೆಗೆ ಹೋಗಿದೆ.

ಡಿಸಿಎಂ ಡಿ.ಕೆ.ಶಿವಕುಮಾರ್ ಮನೆಗೆ ಹೋದರೂ ಶಾಸಕರನ್ನು ಸತೀಶ್ ಜಾರಕಿಹೊಳಿ ಕರೆದುಕೊಂಡು ಹೋಗಿದ್ದಾರೆ. ಲೋಕಸಭಾ ಚುನಾವಣೆ ನಂತರ ಸರ್ಕಾರ ಇರೋದಿಲ್ಲ. ಕಾಂಗ್ರೆಸ್‌ನ ಅವನತಿಗೆ ಇದೆಲ್ಲವೂ ಕಾರಣ. ರಾಜ್ಯದಲ್ಲಿ ಒಬ್ಬರು ಅಲ್ಲ, ಮೂವರು ಸಿಎಂ ಗಳಿದ್ದಾರೆ ಮುಂದೆ ಅವರು ಯಾವ ಯಾವ ದಿಕ್ಕಿನಲ್ಲಿ ಹೋಗ್ತಾರೋ ನೋಡೋಣ ಎಂದು ಹೇಳಿದರು. ಇದಕ್ಕೂ ಮುನ್ನ, ಮಾಜಿ ಸಿಎಂ ಬಸವರಾಜ್ ಬೊಮ್ಮಾಯಿ ಮನೆಗೆ ನಿರ್ಮಲಾನಂದನಾಥ ಶ್ರೀಗಳು ಭೇಟಿ ನೀಡಿ, ಬೊಮ್ಮಾಯಿ ಅವರ ಯೋಗಕ್ಷೇಮ ವಿಚಾರಿಸಿದರು. ಸುತ್ತೂರು ಮಠದ ಸ್ವಾಮೀಜಿಗೆ ಕರೆ ಮಾಡಿ ಮಾತನಾಡಿದ್ದು, ಉಳಿದ ಧಾರ್ಮಿಕ ಮುಖಂಡರನ್ನು ಶೀಘ್ರವೇ ಭೇಟಿ ಮಾಡಿ ಆಶೀರ್ವಾದ ಪಡೆಯುವುದಾಗಿ ಹೇಳಿದರು.

ಕಲ್ಯಾಣ ಕರ್ನಾಟಕ ಭಾಗದಿಂದ ಬರ ಅಧ್ಯಯನ ಪ್ರವಾಸ ಮಾಡುತ್ತೇನೆ. ಕಲಬುರಗಿ ಮತ್ತು ಬೀದರ್ ಭಾಗಕ್ಕೆ ಭೇಟಿ ಕೊಡುತ್ತೇನೆ. ರೈತರ ಸಮಸ್ಯೆ ಆಲಿಸುತ್ತೇನೆ. ಮತ್ತೆ ಅಧಿಕಾರಿಗಳಿಗೂ ಸೂಚನೆ ಕೊಡುತ್ತೇನೆ, ಕಾಟಾಚಾರಕ್ಕೆ ಮಂತ್ರಿಗಳು ಹೋಗಿ ಬಂದಿದ್ದಾರೆ. ಇದೆಲ್ಲದರ ಬಗ್ಗೆ ಸರ್ಕಾರಕ್ಕೆ ಕಿವಿ ಹಿಂಡುವ ಕೆಲಸ ಮಾಡುತ್ತೇನೆ ಎಂದಿದ್ದಾರೆ. ವಿಪಕ್ಷ ನಾಯಕನಾಗಿ ಆಯ್ಕೆಯಾದ ನಂತರ ಆರ್.ಅಶೋಕ್ ಸದಾನಂದಗೌಡರ ನಿವಾಸಕ್ಕೆ ಭೇಟಿ ನೀಡಿ ಮಾತುಕತೆ ನಡೆಸಿದ್ದಾರೆ. ಡಿ.ವಿ.ಸದಾನಂದಗೌಡರನ್ನು ಭೇಟಿ ಮಾಡಿ ಆಶೀರ್ವಾದ ಪಡೆದಿದ್ದೇನೆ. ಪಕ್ಷ ಸಂಘಟನೆ ಬಗ್ಗೆ ಸದಾನಂದಗೌಡ ಹಲವು ಸಲಹೆ ಕೊಟ್ಟಿದ್ದಾರೆ. ರಾಷ್ಟ್ರೀಯ ಅಧ್ಯಕ್ಷರು ಸಹ ಸದಾನಂದಗೌಡ ಜೊತೆ ಮಾತಾಡಿದ್ದಾರೆ. ಚೆನ್ನಾಗಿ ಕೆಲಸ ಮಾಡಿ ಎಂದು ಡಿ.ವಿ.ಸದಾನಂದಗೌಡ ಹಾರೈಸಿದ್ದಾರೆ ಎಂದರು. ಮಾಜಿ ಸಚಿವ ವಿ. ಸೋಮಣ್ಣ ಉತ್ತಮ ಸ್ನೇಹಿತರಾಗಿರುವ ಕಾರಣ ಅವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುತ್ತೇನೆ ಎಂದು ಅಶೋಕ ಸುದ್ದಿಗಾರರಿಗೆ ತಿಳಿಸಿದರು.

ರಾಜ್ಯದ ನೂತನ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯೆಲ್

ಬೆಂಗಳೂರು: ರಾಜ್ಯ ಸರ್ಕಾರದ ನೂತನ



ಮುಖ್ಯ ಕಾರ್ಯದರ್ಶಿಯಾಗಿ ಹಿರಿಯ ಐಎಎಸ್ ಅಧಿಕಾರಿ ರಜನೀಶ್ ಗೋಯೆಲ್ ಅವರನ್ನು ನೇಮಕ ರಾಜ್ಯ ಸರ್ಕಾರ ಮಂಗಳವಾರ ಆದೇಶ ಹೊರಡಿಸಿದೆ.

ಹಾಲಿ ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮಾ ನವೆಂಬರ್ 30 ರಂದು ನಿವೃತ್ತಿಯಾಗುತ್ತಿದ್ದು, ಅವರಿಂದ ತೆರವಾಗುವ ಸ್ಥಾನಕ್ಕೆ 1986ನೇ ಬ್ಯಾಚ್ ಐಎಎಸ್ ಅಧಿಕಾರಿ ರಜನೀಶ್ ಗೋಯಲ್ ಅವರನ್ನು ನೇಮಕ ಮಾಡಲಾಗಿದೆ.

ಪರೀಕ್ಷಾ ಅಕ್ರಮಕ್ಕೆ 12 ವರ್ಷದವರೆಗೆ ಜೈಲು, 10 ಕೋಟಿ ದಂಡ!

ಬೆಂಗಳೂರು: ರಾಜ್ಯದಲ್ಲಿ ನೇಮಕಾತಿ ಪರೀಕ್ಷೆಗಳಲ್ಲಿ ಅಕ್ರಮ ಎಸಗುವವರಿಗೆ ರೂ. 10 ಕೋಟಿಯವರೆಗೆ ದಂಡ ಮತ್ತು 12 ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಲು ಅವಕಾಶ ಕಲ್ಪಿಸುವ 'ಸಾರ್ವಜನಿಕ ಪರೀಕ್ಷಾ ಅಕ್ರಮ ನಿಯಂತ್ರಣ ಮಸೂದೆ'ಗೆ ಸಂಪುಟ ಒಪ್ಪಿಗೆ ನೀಡಿದೆ. ಇಂತಹ ಪ್ರಕರಣಗಳ ಅಪರಾಧಿಗಳ ಆಸ್ತಿ ಮುಟ್ಟುಗೋಲಿಗೂ ಕಾನೂನಿನಲ್ಲಿ ಅವಕಾಶ ಕಲ್ಪಿಸಲಾಗುತ್ತಿದೆ.

ರಾಜ್ಯದಲ್ಲಿ ನಿರಂತರವಾಗಿ ನೇಮಕಾತಿ ಪರೀಕ್ಷೆಗಳಲ್ಲಿ ಅಕ್ರಮಗಳು ನಡೆಯುತ್ತಲೇ ಇವೆ. ಪೊಲೀಸ್ ಸಬ್ ಇನ್‌ಸ್ಪೆಕ್ಟರ್, ಸಹಾಯಕ ಪ್ರಾಧ್ಯಾಪಕರ ನೇಮಕಾತಿ, ಇತ್ತೀಚೆಗೆ ನಡೆದ ಪ್ರಥಮ ದರ್ಜೆ ಸಹಾಯಕರ ಪರೀಕ್ಷೆಯಲ್ಲೂ ಅಕ್ರಮ ನಡೆದಿತ್ತು. ಇಂತಹ ಪರೀಕ್ಷಾ ಅಕ್ರಮಗಳನ್ನು ತಡೆಯುವ ಉದ್ದೇಶದಿಂದ ರೂಪಿಸಿರುವ 'ಕರ್ನಾಟಕ ಸಾರ್ವಜನಿಕ ಪರೀಕ್ಷೆ (ನೇಮಕಾತಿಯಲ್ಲಿನ ಭ್ರಷ್ಟಾಚಾರ ಮತ್ತ ಅನುಚಿತ ವಿಧಾನಗಳ ಪ್ರತಿಬಂಧಕ ಕ್ರಮಗಳು) ಮಸೂದೆ–2023ಕ್ಕೆ ಕಳೆದ ವಾರ ನಡೆದ ಸಚಿವ ಸಂಪುಟ ಸಭೆಯು ಒಪ್ಪಿಗೆ ನೀಡಿದೆ.

ಪರೀಕ್ಷೆಯಲ್ಲಿ ನಕಲು ಮಾಡುವುದು, ಪ್ರಶ್ನೆಪತ್ರಿಕೆಗಳ ಸೋರಿಕೆ, ಉತ್ತರ ಪತ್ರಿಕೆ ಮತ್ತು ಒಎಂಆರ್ ಹಾಳೆಗಳನ್ನು ತಿದ್ದುವುದು, ಲಿಖಿತ ಅಥವಾ ವಿದ್ಯುನ್ಮಾನ ಅಥವಾ ಯಾಂತ್ರೀಕೃತ ಸಾಧನ, ಉಪಕರಣ ಬಳಸುವುದು, ಪರೀಕ್ಷಾ ಕೇಂದ್ರದೊಳಕ್ಕೆ ಅಕ್ರಮ ಪ್ರವೇಶ ಮಾಡುವುದು, ಅನಧಿಕೃತ ಸ್ಥಳಗಳಲ್ಲಿ ಪರೀಕ್ಷೆ ಬರೆಸುವುದು ಸೇರಿದಂತೆ ಯಾವುದೇ ಬಗೆಯ ಪರೀಕ್ಷಾ ಅಕ್ರಮಗಳಲ್ಲಿ ಭಾಗಿಯಾಗುವುದನ್ನು ಶಿಕ್ಷಾರ್ಹ ಅಪರಾಧ ಎಂದು ಈ ಮಸೂದೆಯು ಘೋಷಿಸಲಿದೆ. ▶ 8ನೇ ಪುಟಕ್ಕೆ

ಮೊಬೈಲ್ ಅಂಗಡಿಗೆ ನುಗ್ಗಿ ದಾಂಧಲೆ, ಪುಂಡಾಟ

ಮೈಸೂರು ಯುವ ಕಾಂಗ್ರೆಸ್ ಮುಖಂಡ ರೌಡಿಶೀಟರ್ ಬಂಧನ

ಮೈಸೂರು, ನ.21(ಬಿಎಲ್‌ಯು)–



ನೇವಲ್

ಅಂಗಡಿಗೆ ನುಗ್ಗಿ ದಾಂಧಲೆ, ಪುಂಡಾಟ ನಡೆಸಿದ್ದ ಮೈಸೂರು ಯುವ ಕಾಂಗ್ರೆಸ್ ಮುಖಂಡನನ್ನು ಪೊಲೀಸರು ಬಂಧಿಸಿ, ಸ್ಟೇಷನ್ ಬೇಲ್ ಮೇಲೆ ಬಿಡುಗಡೆ ಮಾಡಿದ್ದಾರೆ.

ಮೈಸೂರು ನಗರ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ನೇವಲ್ ಅಶೋಕ್ ಬಂಧಿತ ಆರೋಪಿ. ಈತ ಕಾಂಗ್ರೆಸ್ ಮುಖಂಡ ಎಂ.ಕೆಅಶೋಕ್ ಪುತ್ರ. ಮೈಸೂರಿನ ಕೃಷ್ಣರಾಜ ಪೊಲೀಸ್ ಠಾಣೆಯಲ್ಲಿ ರೌಡಿಶೀಟರ್ ಆಗಿರುವ ಈತ ಭಾನುವಾರ ನಗರದ ಜಗನ್ಮೋಹನ ಅರಮನೆ ಬಳಿಯ ಮೊಬೈಲ್ ಅಂಗಡಿಗೆ ನುಗ್ಗಿ, ಅದರ ಮಾಲೀಕನಿಗೆ ಡಿಚ್ಚಿ ಹೊಡೆದು, ತೀವ್ರ ಹಲ್ಲೆ ನಡೆಸಿದ್ದನು. ಸ್ನೇಹಿತ ತಡೆದರೂ ನೇವಲ್ ದಾಂಧಲೆ ನಡೆಸಿ, ದರ್ಪ ಮೆರೆದಿದ್ದನು. ಈ ಸಂಬಂಧ ಮೊಬೈಲ್ ಅಂಗಡಿ ಮಾಲೀಕ ದೇವರಾಜ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಪ್ರಕರಣ ದಾಖಲಿಸಿಕೊಂಡ ಪೊಲೀಸರು ನೇವಲ್ ಅಶೋಕ್‌ನನ್ನು ಬಂಧಿಸಿ ಸ್ಟೇಷನ್ ಬೇಲ್ ಮೇಲೆ ಬಿಡುಗಡೆ ಮಾಡಿದ್ದಾರೆ. ಆದರೆ ಪ್ರತಿದಿನ ಪೊಲೀಸ್ ಠಾಣೆಗೆ ಹಾಜರಾಗಿ ಸಹಿ ಹಾಕುವಂತೆ ತಾಕೀತು ಮಾಡಿದ್ದಾರೆ. ರಾಜಕೀಯ ಹಿನ್ನೆಲೆ ಇರುವ ನೇವಲ್ ಅಶೋಕ್ ಈ ಹಿಂದೆ ಕೂಡ ಹಲವು ಪ್ರಕರಣಗಳಲ್ಲಿ ಭಾಗಿಯಾಗಿದ್ದನು. ಈ ಸಂಬಂಧ ಈತನ ವಿರುದ್ಧ ಕೆಆರ್.ಪೊಲೀಸ್ ಠಾಣೆಯಲ್ಲಿ ರೌಡಿಶೀಟರ್ ತೆರೆಯಲಾಗಿದೆ. ▶ 8ನೇ ಪುಟಕ್ಕೆ

ರಾಜ್ಯೋತ್ಸವ ಪ್ರಶಸ್ತಿ ವಾಪಸ್ ಪಡೆಯಲು ಜಿಲ್ಲಾಡಳಿತ ನಿರ್ಧಾರ

ರೌಡಿ ಶೀಟರ್ ಆಗಿರುವ ಎಂ.ಕೆ.ಅಶೋಕ್‌ಗೆ ಈ ಬಾರಿ ಮೈಸೂರು ಜಿಲ್ಲಾ



ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಲಾಗಿದೆ. ಮೈಸೂರಿನ ಓವಲ್ ಮೈದಾನದಲ್ಲಿ ನವೆಂಬರ್ 1 ರಂದು ನಡೆದ ರಾಜ್ಯೋತ್ಸವ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ, ಅಶೋಕ್‌ಗೆ ರಾಜ್ಯೋತ್ಸವ ಪ್ರಶಸ್ತಿ ನೀಡಿ, ಗೌರವಿಸಿದ್ದರು. ಆದರೆ ಈಗ ಮಗನ ಅಪರಾಧ ಕೃತ್ಯದಿಂದ ತಂದೆಯೂ ರೌಡಿಶೀಟರ್ ಎಂಬುದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಗಮನಕ್ಕೆ ಬಂದಿದೆ. ಈ ಹಿನ್ನೆಲೆಯಲ್ಲಿ ಅಶೋಕ್‌ಗೆ ನೀಡಿದ್ದ ರಾಜ್ಯೋತ್ಸವ ಪ್ರಶಸ್ತಿಯನ್ನು ವಾಪಸು ಪಡೆಯುವುದಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸುದರ್ಶನ್ ತಿಳಿಸಿದ್ದಾರೆ. ರಾಜ್ಯೋತ್ಸವದ ಪಟ್ಟಿಯಲ್ಲಿ ಕಡೇ ಘಳಿಗೆಯಲ್ಲಿ ಎಂ.ಕೆ.ಅಶೋಕ್ ▶ 8ನೇ ಪುಟಕ್ಕೆ

ಜಾತಿ ಸಮೀಕ್ಷೆ ದೇಶದ ಎಕ್ಸ್–ರೇ ಇದ್ದಂತೆ; ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಗಣತಿ ಗ್ಯಾರಂಟಿ

ಜೈಪುರ: ಜಾತಿ ಗಣತಿ ದೇಶದ



'ಎಕ್ಸ್–ರೇ' ಎಂದು ಬಣ್ಣಿಸಿದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಜಾತಿ ಗಣತಿ ನಡೆಸಲಾಗುವುದು ಎಂದು ಮಂಗಳವಾರ ಹೇಳಿದ್ದಾರೆ. ಇಂದು ರಾಜಸ್ಥಾನದ ಉದಯಪುರದ ವಲ್ಲಭನಗರದಲ್ಲಿ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ರಾಹುಲ್ ಗಾಂಧಿ, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ರಾಜಸ್ಥಾನದಲ್ಲಿ ಜಾತಿ ಗಣತಿ ನಡೆಸಲಿದೆ. ನಮ್ಮ ಪಕ್ಷ ಕೇಂದ್ರದಲ್ಲಿ ಸರ್ಕಾರ ರಚಿಸಿದರೆ ರಾಷ್ಟ್ರ ಮಟ್ಟದಲ್ಲಿಯೂ ಜಾತಿ ಗಣತಿ ಮಾಡುತ್ತೇವೆ ಎಂದು ಭರವಸೆ ನೀಡಿದರು. ರಾಜಸ್ಥಾನ ವಿಧಾನಸಭೆ ಚುನಾವಣೆಗೆ ಕಾಂಗ್ರೆಸ್ ಇಂದು ತನ್ನ ಪ್ರಣಾಳಿಕೆ ಬಿಡುಗಡೆ ಮಾಡಿದ್ದು, ಜಾತಿ ಸಮೀಕ್ಷೆ, ರೈತರಿಗೆ 2 ಲಕ್ಷ ರೂ.ವರೆಗೆ ಬಡ್ಡಿ ರಹಿತ ಸಾಲ ▶ 8ನೇ ಪುಟಕ್ಕೆ

ಮುಖ್ಯಮಂತ್ರಿ ಸಿದ್ದರಾಮಯ್ಯ–ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಡುವೆ ಜಾತಿ ಗಣತಿ ವಾರ್

ವರದಿ ಜಾರಿಯ ನನ್ನ ನಿರ್ಧಾರ ಅಚಲ: ಸಿಎಂ

ಬೆಂಗಳೂರು, ನ.21– ರಾಜ್ಯ ಸರ್ಕಾರದ ಮಹತ್ವದ ಜಾತಿ ಗಣತಿ ವರದಿಗೆ ಸ್ವತಃ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರೇ ವಿರೋಧ ವ್ಯಕ್ತಪಡಿಸಿದ್ದು, ಮತ್ತೊಂದು ಕಡೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಾತಿ ಗಣತಿ ವರದಿ ಸ್ವೀಕರಿಸಿ, ಅವಕಾಶ ವಂಚಿತ ಸಮುದಾಯಗಳಿಗೆ ನ್ಯಾಯ ಕೊಡಿಸುವ ನನ್ನ ನಿರ್ಧಾರ ಅಚಲ ಎಂದು ಹೇಳಿದ್ದಾರೆ. ಈ ಮೂಲಕ ಜಾತಿ ಗಣತಿ ವಿಚಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಡುವೆ ನೇರ ಸಂಘರ್ಷಕ್ಕೆ ಕಾರಣವಾಗಿದೆ.

ಕಾಂತರಾಜ್ ಆಯೋಗದ ವರದಿ ತಿರಸ್ಕರಿಸಲು ಒಕ್ಕಲಿಗರ ಸಂಘ ಸಲ್ಲಿಸಿದ ಮನವಿ ಪತ್ರಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಅವರು ಸಹಿ ಹಾಕಿದ ಬೆನ್ನಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಟ್ವೀಟ್ ಮೂಲಕ ಸ್ಪಷ್ಟನೆ ನೀಡಿದ್ದಾರೆ ಮತ್ತು ರಾಹುಲ್ ಗಾಂಧಿ ಅವರ ನಿಲುವಿಗೆ ನನ್ನ ಸಂಪೂರ್ಣ ಸಹಮತ ಇದೆ ಎಂದು ಹೇಳುವ ಮೂಲಕ ಡಿಕೆಶಿಯನ್ನು ಇಕ್ಕಟ್ಟಿಗೆ ಸಿಲುಕಿಸುವ ದಾಳ ಉರುಳಿಸಿದ್ದಾರೆ. ನಮ್ಮ ಹೆಮ್ಮೆಯ ನಾಯಕರಾದ ರಾಹುಲ್ ಗಾಂಧಿಯವರ ನಿಲುವಿಗೆ ನನ್ನ ಪೂರ್ಣ ಸಹಮತವಿದೆ. ದೇಶಾದ್ಯಂತ ಜಾತಿಗಣತಿ ನಡೆದು, ಅದರ ವರದಿಯ ಆಧಾರದ ಮೇಲೆ 'ಸರ್ವರಿಗೂ ಸಮಪಾಲು – ಸರ್ವರಿಗೂ ಸಮಬಾಳು' ದಕ್ಕಿದಾಗಲೇ ದೇಶಕ್ಕೆ ದೊರೆತ ಸ್ವಾತಂತ್ರ್ಯ ಸಾರ್ಥಕವಾಗಲಿದೆ ಎಂಬುದು ನನ್ನ ಭಾವನೆ. ನಮ್ಮ ಸರ್ಕಾರದ ಹಿಂದಿನ ಅವಧಿಯಲ್ಲಿ ನಡೆಸಿದ ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿ ಸ್ವೀಕರಿಸಿ, ಅವಕಾಶಗಳಿಂದ ವಂಚಿತವಾದ ಸಮುದಾಯಗಳಿಗೆ ನ್ಯಾಯ ಕೊಡಿಸುವ ನನ್ನ ನಿರ್ಧಾರ ಅಚಲವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಅವರು ಪೋಸ್ಟ್ ಮಾಡಿದ್ದಾರೆ.



ಶುಕ್ರವಾರ ಸರ್ಕಾರಕ್ಕೆ ಜಾತಿಗಣತಿ ವರದಿ ಸಲ್ಲಿಕೆ

ಬೆಂಗಳೂರು, ನ.21– ರಾಜ್ಯದಲ್ಲಿ ಜಾತಿ ಜನಗಣತಿ ವರದಿ ಸಲ್ಲಿಕೆಗೆ ದಿನಾಂಕ



ನಿಗದಿಯಾಗಿದೆ. ಇದೇ ಶುಕ್ರವಾರ ಹಿಂದುಳಿದ ವರ್ಗಗಳ ಆಯೋಗ ಜಾತಿ ಜನಗಣತಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಿದೆ. ಈ ಜಾತಿ ಜನಗಣತಿ ವರದಿ ರಾಜ್ಯ ರಾಜಕಾರಣದಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಸುವ ಸಾಧ್ಯತೆಯಿದೆ. ಇದು ಮುಂದಿನ ಲೋಕಸಭೆ ಚುನಾವಣೆ ಮೇಲೆಯೂ ಪರಿಣಾಮ ಬೀರಲಿದೆ ಎಂದು ರಾಜ್ಯ ಗುಪ್ತಚರ ಇಲಾಖೆ ಎಚ್ಚರಿಸಿದೆ.

ಇದರ ಸಾಧಕ–ಬಾಧಕಗಳ ವಿವರಗಳನ್ನು ಗುಪ್ತಚರ ಇಲಾಖೆ ಸಿಎಂಗೆ ವರದಿ ಸಲ್ಲಿಸಿದೆ. ಇದರಲ್ಲಿ ವರದಿಗೆ ಪ್ರಬಲ ಲಿಂಗಾಯತ, ಒಕ್ಕಲಿಗ ಸಮುದಾಯಗಳಿಂದ ತೀವ್ರ ವಿರೋಧ ಬರಲಿದೆ. ಪ್ರತಿಭಟನೆಗಳು ತೀವ್ರಗೊಳ್ಳಲಿದ್ದು, ಇದಕ್ಕೆ ಕೆಲ ಕಾಂಗ್ರೆಸ್ ಮುಖಂಡರೂ ಕೈಜೋಡಿಸಬಹುದು. ▶ 8ನೇ ಪುಟಕ್ಕೆ

ವರದಿ ತಿರಸ್ಕಾರ ಮನವಿಗೆ ಸಹಿ ಹಾಕಿದ ಡಿಸಿಎಂ

ಬೆಂಗಳೂರು, ನ.21– ರಾಜ್ಯ ಸರ್ಕಾರದ ಮಹತ್ವದ ಜಾತಿ ಗಣತಿ ವರದಿಗೆ ಸ್ವತಃ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರೇ ವಿರೋಧ ವ್ಯಕ್ತಪಡಿಸಿದ್ದು, ಕಾಂತರಾಜ್ ಆಯೋಗದ ವರದಿ ತಿರಸ್ಕರಿಸಲು ಒಕ್ಕಲಿಗರ ಸಂಘ ಸಲ್ಲಿಸಿದ ಮನವಿ ಪತ್ರಕ್ಕೆ ಡಿಸಿಎಂ ಸಹಿ ಹಾಕಿದ್ದಾರೆ.

ಈ ಮೂಲಕ ಎಚ್. ಕಾಂತರಾಜು ನೇತೃತ್ವದ ರಾಜ್ಯ ಶಾಶ್ವತ ಹಿಂದುಳಿದ ವರ್ಗಗಳ ಆಯೋಗ ಸಿದ್ಧಪಡಿಸಿರುವ 'ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ –2015' ವರದಿಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಸಹ ಅಧಿಕೃತವಾಗಿ ವಿರೋಧ ವ್ಯಕ್ತಪಡಿಸಿದಂತೆ ಆಗಿದೆ.

ಕಾಂತರಾಜು ಆಯೋಗದ ವರದಿ ತಿರಸ್ಕರಿಸುವ ಸಂಬಂಧ ಒಕ್ಕಲಿಗರ ಸಂಘ ಮನವಿ ಪತ್ರವನ್ನು ಸಿದ್ಧಪಡಿಸಿತ್ತು. ಇದಕ್ಕೆ ಈಗ ಡಿ.ಕೆ.ಶಿವಕುಮಾರ್ ಅವರ ಸಹಿಯನ್ನು ಪಡೆದುಕೊಳ್ಳಲಾಗಿದ್ದು, ಆ ಪತ್ರವನ್ನು ಹಿಂದುಳಿದ ವರ್ಗಗಳ ಆಯೋಗಕ್ಕೆ ಸಲ್ಲಿಸಲಾಗಿದೆ. ಇದರ ಪ್ರತಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೂ ಸಲ್ಲಿಸಲಾಗಿದೆ.

ಈ ಮನವಿ ಪತ್ರಕ್ಕೆ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಮಾಜಿ ಮುಖ್ಯಮಂತ್ರಿಗಳಾದ ಎಸ್.ಎಂ. ಕೃಷ್ಣ, ಎಚ್ ಡಿ ಕುಮಾರಸ್ವಾಮಿ, ಡಿ.ವಿ. ಸದಾನಂದಗೌಡ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಡಿಸಿಎಂ ಡಿ.ಕೆ. ಶಿವಕುಮಾರ್, ಪ್ರತಿಪಕ್ಷ ನಾಯಕ ಆರ್ ಅಶೋಕ್ ಹಾಗೂ ಮಾಜಿ ಸಚಿವ ಅಶ್ವತ್ಥನಾರಾಯಣ ಸೇರಿದಂತೆ ಹಲವು ಒಕ್ಕಲಿಗ ಸಮುದಾಯದ ಹಲವು ಶಾಸಕರು ಸಹಿ ಹಾಕಿದ್ದಾರೆ.

ಇತ್ತೀಚೆಗೆ ಆದಿಚುಂಚನಗಿರಿ ಶ್ರೀಗಳಾದ ನಿರ್ಮಲಾನಂದನಾಥ ಸ್ವಾಮೀಜಿ ಹಾಗೂ ಸ್ಫಟಿಕಪುರಿ ಸಂಸ್ಥಾನದ ಶ್ರೀ ನಂಜಾವಧೂತ ಸ್ವಾಮೀಜಿಯವರ ನೇತೃತ್ವದಲ್ಲಿ ಒಕ್ಕಲಿಗ ಸಮುದಾಯದ ಮುಖಂಡರ ಸಭೆ ನಡೆದು, ಕಾಂತರಾಜ್ ಆಯೋಗದ ವರದಿಗೆ ಆಕ್ಷೇಪ ವ್ಯಕ್ತಪಡಿಸಲಾಗಿತ್ತು.


ಮೈಸೂರು ಮಿತ್ರ ಬುಧವಾರ 22 ನವೆಂಬರ್ 2023

ಕುರುಚಲು ಕಾಡಾಗಿರುವ ಮೈಸೂರಿನ ಟ್ರಕ್ ಟರ್ಮಿನಲ್!

- ಗಿಡ-ಗಂಟಿಗಳು ಬೆಳೆದು ಮಿನಿ ಅರಣ್ಯವಾಗಿ ಪರಿವರ್ತನೆಯಾದ ಟ್ರಕ್ ಟರ್ಮಿನಲ್
- ವಿಷಜಂತುಗಳ ಆವಾಸ ಸ್ಥಾನ; ಕೋಟ್ಯಾಂತರ ರೂಪಾಯಿ ಯೋಜನೆ ನಿಷ್ಪ್ರಯೋಜಕ
- ಕ್ಯಾಂಟಿನ್ ಇಲ್ಲ, ವಿಶ್ರಾಂತಿ ಕೊಠಡಿ ಇಲ್ಲ
- ರಿಂಗ್ ರಸ್ತೆ, ಹೆದ್ದಾರಿಯಲ್ಲೇ ನಿಲ್ಲುವ ಲಾರಿಗಳು
- 17 ಎಕರೆ ಜಾಗವಿದ್ದರೂ ಪ್ರಯೋಜನವಿಲ್ಲ
- ಸಮಸ್ಯೆ ಪರಿಹಾರಕ್ಕೆ ಲಾರಿ ಮಾಲೀಕರ ಸಭೆ

ಲಾರಿ, ಟ್ರಕ್‌ಗಳ ನಿಲುಗಡೆಗೆ ಕಾಂಕ್ರೀಟ್ ರಸ್ತೆ ನಿರ್ಮಿಸಲಾಗಿದೆ. ಉಳಿದ ಪ್ರದೇಶದಲ್ಲಿ ಗಿಡ, ಮರಗಳು ಬೆಳೆದಿದ್ದು, ಕಿರು ಅರಣ್ಯದಂತೆ ಮಾರ್ಪಾಡಾಗಿದೆ. ಹಾವು ಸೇರಿದಂತೆ ವಿಷಜಂತುಗಳು ರಸ್ತೆಯಲ್ಲೇ ಓಡಾಡುತ್ತವೆ. ಇದರಿಂದ ಲಾರಿ ನಿಲ್ಲಿಸಲು ಚಾಲಕರು ಹೆದರುತ್ತಾರೆ. ಇನ್ನು ರಾತ್ರಿ ವೇಳೆಯಂತೂ ಇತ್ತ ಯಾರೂ ಸುಳಿಯುವುದೇ ಇಲ್ಲ.





ಮೈಸೂರು,ನ.21(ಬಿಎಲ್‌ಯು)– ಮೈಸೂರಿನ ರಿಂಗ್ ರಸ್ತೆಯ ಎಂಪಿಎಂಸಿ ಬಳಿ ನಿರ್ಮಾಣವಾಗಿರುವ ಟ್ರಕ್ ಟರ್ಮಿನಲ್ ಗಿಡ-ಗಂಟಿಗಳು, ಪೊದೆಗಳಿಂದ ಪಾಳು ಕೊಂಪೆಯಾಗಿದೆ. ಲಾರಿ ಚಾಲಕರು ಹಾಗೂ ಕ್ಲೀನರ್‌ಗಳಿಗೆ ಕ್ಯಾಂಟಿನ್, ವಿಶ್ರಾಂತಿ ಕೊಠಡಿ, ಶುದ್ಧ ಕುಡಿಯುವ ನೀರು ಸೇರಿದಂತೆ ಯಾವುದೇ ಮೂಲ ಸೌಕರ್ಯಗಳಿಲ್ಲ. ಟ್ರಕ್ ಟರ್ಮಿನಲ್ ನಿರ್ಮಾಣವಾಗಿ 11 ವರ್ಷವಾದರೂ ಅಭಿವೃದ್ಧಿ ಕಂಡಿಲ್ಲ. ಟ್ರಾನ್ಸ್‌ಪೋರ್ಟ್ ಆಫೀಸ್‌ಗಳಂತೂ ಮರೀಚಿಕೆಯಾಗಿದೆ. ಬೆರಳೆಣಿಕೆಯಷ್ಟು ಲಾರಿಗಳು ಮಾತ್ರ ನಿಲ್ಲುತ್ತಿದ್ದು, ಕೋಟ್ಯಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಾಣ ಮಾಡಿರುವ ಟ್ರಕ್ ಟರ್ಮಿನಲ್ ನಿಷ್ಪ್ರಯೋಜಕವಾಗಿದೆ.

ನಗರದೊಳಗೆ ಲಾರಿ, ಟ್ರಕ್ ಸೇರಿದಂತೆ ಇತರೆ ಭಾರಿ ವಾಹನಗಳು ಸಂಚರಿಸುವುದರಿಂದ ಅಪಘಾತಗಳು ಸಂಭವಿಸುತ್ತಿದ್ದವು. ಹೊರ ರಾಜ್ಯದಿಂದ ಬರುವ ಲಾರಿಗಳು ರಾತ್ರಿ ವೇಳೆ ಹೆದ್ದಾರಿ ಬದಿ ನಿಲ್ಲುವುದರಿಂದಲೂ ಸಂಚಾರಕ್ಕೆ ಅಡೆತಡೆ ಉಂಟಾಗುವುದರ ಜೊತೆಗೆ ಅಪಘಾತಕ್ಕೂ ಆಸ್ಪದವಾಗುತ್ತಿತ್ತು. ರಸ್ತೆಬದಿ ಲಾರಿ ನಿಲ್ಲಿಸಿ ಮಲಗುತ್ತಿದ್ದ ಚಾಲಕರ ಸುಲಿಗೆ ಮಾಡಲಾಗುತ್ತಿತ್ತು. ಲಾರಿಗಳ ಟ್ಯಾಂಕ್‌ಗಳಿಂದ ಡೀಸೆಲ್ ಕಳವು ಮಾಡಲಾಗುತ್ತಿತ್ತು. ಹೊರ ರಾಜ್ಯದಿಂದ ತರುವ ವಸ್ತುಗಳನ್ನು ಲೋಡ್, ಅನ್‌ಲೋಡ್ ಮಾಡಲು ಸ್ಥಳವೇ ಇರಲಿಲ್ಲ.

ಈ ಎಲ್ಲಾ ಸಮಸ್ಯೆಗೆ ಪರಿಹಾರವಾಗಿ ಟ್ರಕ್ ಟರ್ಮಿನಲ್ ಇರಬೇಕೆಂದು ಸಾರಿಗೆ ಇಲಾಖೆಯ ಕಟ್ಟುನಿಟ್ಟಿನ ನಿಯಮವಿದೆ. ಈ ಹಿನ್ನೆಲೆಯಲ್ಲಿ ಮೈಸೂರಿನಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣ ಮಾಡುವಂತೆ ಮೈಸೂರು ಜಿಲ್ಲಾ ಲಾರಿ ಮಾಲೀಕರ ಒಕ್ಕೂಟದವರು 1994ರಿಂದ ಹೋರಾಟ ಮಾಡಿದ್ದರು. ಇದರ ಫಲವಾಗಿ 2007ರಲ್ಲಿ ಮೈಸೂರಿನ ರಿಂಗ್ ರಸ್ತೆಯ ಎಪಿಎಂಸಿ ಯಾರ್ಡ್ ಬಳಿ 17 ಎಕರೆ ಪ್ರದೇಶದಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣ ಮಾಡಲಾಗಿದೆ.

ಟ್ರಕ್ ಟರ್ಮಿನಲ್ ಸುತ್ತ ಕಾಂಪೌಂಡ್ ನಿರ್ಮಿಸಲಾಗಿದೆ. ಹೆಸರಿಗೆ ಒಂದು ಕಚೇರಿ ಹಾಗೂ ಕ್ಯಾಂಟಿನ್ ನಿರ್ಮಾಣ ಮಾಡಲಾಗಿದೆ. ಆದರೆ ಇದೆಲ್ಲವೂ ನಾಮಕಾವಸ್ಥೆ ಅಷ್ಟೆ, ಯಾವುದೂ ಕಾರ್ಯ ನಿರ್ವಹಿಸುತ್ತಿಲ್ಲ. ಇದರಿಂದ ಮೈಸೂರಿನ ರಿಂಗ್ ರಸ್ತೆ, ಹೆದ್ದಾರಿ ಸೇರಿದಂತೆ ಇತರೆಡೆ ಲಾರಿಗಳು ರಸ್ತೆಬದಿ ನಿಲ್ಲುತ್ತವೆ. ರಾತ್ರಿ ವೇಳೆ ಇಲ್ಲಿ ಅಪಘಾತಗಳು ಸಂಭವಿಸಿ ಅದೆಷ್ಟೋ ಅಮಾಯಕರು ಬಲಿಯಾಗಿದ್ದಾರೆ. ಲಾರಿ ನಿಲ್ಲಿಸಿ ವಿಶ್ರಾಂತಿ ಪಡೆಯುವ ಚಾಲಕರನ್ನು ಸುಲಿಗೆ ಮಾಡಿರುವ ಬಹಳಷ್ಟು ಪ್ರಕರಣಗಳಿವೆ. ಹೊರ ರಾಜ್ಯದಿಂದ ಬರುವ ಸರಕುಗಳನ್ನು ಲೋಡ್ ಮತ್ತು ಅನ್‌ಲೋಡ್ ಮಾಡಲು ಸ್ಥಳವಿಲ್ಲದೆ ಲಾರಿ ಚಾಲಕರು ತೊಂದರೆ ಅನುಭವಿಸುತ್ತಿದ್ದಾರೆ. 11 ವರ್ಷವಾದರೂ ಯಾವುದೇ ಸಮಸ್ಯೆಗಳು ಪರಿಹಾರವಾಗಿಲ್ಲ.

ಟ್ರಕ್ ಟರ್ಮಿನಲ್ ಪ್ರದೇಶದಲ್ಲಿ 23x30 ಅಳತೆಯ 134 ಟ್ರಾನ್ಸ್‌ಪೋರ್ಟ್ ಕಚೇರಿ ತೆರೆಯಲು ಜಾಗವಿದೆ. ಆದರೆ ಇಲ್ಲಿವರೆಗೆ ಟ್ರಾನ್ಸ್‌ಪೋರ್ಟ್ ಕಚೇರಿ ತೆರೆಯುವ ಯಾವುದೇ ಪ್ರಕ್ರಿಯೆಗಳು ನಡೆದಿಲ್ಲ.

ಈ ಹಿನ್ನೆಲೆ ಮೈಸೂರು ಜಿಲ್ಲಾ ಲಾರಿ ಮಾಲೀಕರ ಒಕ್ಕೂಟದ ಅಧ್ಯಕ್ಷ ಕೋದಂಡರಾಮು ನೇತೃತ್ವದಲ್ಲಿ ಇಂದು ಒಕ್ಕೂಟದ ಸದಸ್ಯರು ಸಭೆ ನಡೆಸಿದರು.

ಟ್ರಕ್ ಟರ್ಮಿನಲ್‌ನಲ್ಲಿ ಇಂದಿರಾ ಕ್ಯಾಂಟಿನ್, ವಿಶ್ರಾಂತಿ ಕೊಠಡಿ ತೆರೆಯಬೇಕು. ಟ್ರಾನ್ಸ್‌ಪೋರ್ಟ್ ಕಚೇರಿ ನಿರ್ಮಿಸಲು ಜಾಗ ನೀಡಬೇಕು, ಸ್ಥಳೀಯರಿಗೆ ಮೊದಲ ಆದ್ಯತೆ ನೀಡಬೇಕು, ಶುದ್ಧ ನೀರಿನ ಘಟಕ ಸ್ಥಾಪನೆ ಮಾಡಬೇಕು, ಲೋಡ್ ಮತ್ತು ಅನ್‌ಲೋಡ್‌ಗೆ ಸ್ಥಳಾವಕಾಶ ನೀಡಬೇಕು, ಉಗ್ರಾಣದ ವ್ಯವಸ್ಥೆ ಮಾಡಬೇಕು ಎಂಬುದು ಸೇರಿದಂತೆ ಹಲವು ಸೌಲಭ್ಯ ಕಲ್ಪಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಮೈಸೂರು ನಗರ ದಿನ ಕಳೆದಂತೆ ವಿಶಾಲವಾಗಿ ಬೆಳೆಯುತ್ತಿದೆ. ಈ ಹಿನ್ನೆಲೆಯಲ್ಲಿ ಹೆಬ್ಬಾಳು, ಮೇಟಗಳ್ಳಿ ಕೈಗಾರಿಕಾ ಪ್ರದೇಶ ಹಾಗೂ ಕಡಕೊಳ ಬಳಿಯ ತಾಂಡ್ಯ ಕೈಗಾರಿಕಾ ಪ್ರದೇಶದಲ್ಲಿ ಟ್ರಕ್ ಟರ್ಮಿನಲ್ ತೆರೆಯುವಂತೆ ಕೂಡ ಸರ್ಕಾರವನ್ನು ಆಗ್ರಹಿಸಲು ನಿರ್ಧಾರ ಮಾಡಲಾಯಿತು. ಒಕ್ಕೂಟದ ಚಾಮರಾಜನಗರದ ಅಧ್ಯಕ್ಷ ಜಿ.ನಾರಾಯಣ, ನಂಜನಗೂಡು ಅಧ್ಯಕ್ಷ ವಿಶ್ವನಾಥ್, ಬನ್ನೂರು ಅಧ್ಯಕ್ಷ ಪ್ರದೀಪ್, ಟ್ರಕ್ ಟರ್ಮಿನಲ್ ಮಂಡಳಿಯಲ್ಲಿರುವ ಒಕ್ಕೂಟದ ಪ್ರತಿನಿಧಿ ಶ್ರೀನಿವಾಸರಾವ್, ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಪ್ರಕಾಶ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಎಸ್‌ಸಿಪಿ, ಟಿಎಸ್‌ಪಿ ಅನುದಾನ ಸಂಪೂರ್ಣ ಬಳಕೆ ಮಾಡಿ

ಮೈಸೂರು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಸಲಹೆ



ಮೈಸೂರು,ನ.21–ಎಸ್‌ಸಿಪಿ, ಟಿಎಸ್‌ಪಿ ಅನುದಾನ ಅರ್ಹ ಫಲಾನುಭವಿಗಳಿಗೆ ಸಂಪೂರ್ಣವಾಗಿ ಬಳಕೆ ಆಗಬೇಕು ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಎಸ್.ಸಿ.ಪಿ/ಟಿ.ಎಸ್.ಪಿ ಅನುದಾನ ಬಳಕೆ ಕುರಿತ ಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಮಾಜದ ಕಟ್ಟ ಕಡೆಯ ವ್ಯಕ್ತಿಗೆ ಸರ್ಕಾರದ ಸೌಲಭ್ಯಗಳು ದೊರೆಯಬೇಕು. ಅರ್ಹ ಫಲಾನುಭವಿಗಳಿಗೆ ಸೌಲಭ್ಯ ದೊರೆಯುತ್ತಿದೆಯೇ ಎಂಬುದನ್ನು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ರ್‍ಯಾಂಡಮ್ ಆಗಿ ಪರಿಶೀಲಿಸಿ ವರದಿ ನೀಡಬೇಕು ಎಂದರು.

ಹಾಸ್ಟೆಲ್‌ಗಳಿಗೆ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಹಾಸ್ಟೆಲ್‌ಗಳಲ್ಲಿ ನೀಡುತ್ತಿರುವ ಆಹಾರದ ಗುಣಮಟ್ಟ ಹಾಗೂ ಸ್ವಚ್ಛತೆ ಬಗ್ಗೆ ಪರಿಶೀಲನೆ ನಡೆಸಬೇಕು. ಎಸ್‌ಸಿಪಿ, ಟಿಎಸ್‌ಪಿ ಅಡಿ ನಡೆಯುತ್ತಿರುವ ಕಾಮಗಾರಿಗಳ ಗುಣಮಟ್ಟವನ್ನು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಪರಿಶೀಲಿಸಬೇಕು ಎಂದರು. ಸಭೆಗೆ ಹಾಜರಾಗದ ಅಧಿಕಾರಿಗಳಿಗೆ ಶೋಕಾಸ್ ನೋಟಿಸ್ ಜಾರಿ ಮಾಡಲಾಗುವುದು ಎಂದರು. ಸಭೆಯಲ್ಲಿ ನಗರಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಷರೀಫ್, ಕಾರ್ಮಿಕ ಇಲಾಖೆ ಸಹಾಯಕ ಆಯುಕ್ತೆ ನಾಜಿಯಾ ಸುಲ್ತಾನ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಂಗೇಗೌಡ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಚಂದ್ರಶೇಖರ್ ಇತರರಿದ್ದರು.

ಮಾಜಿ ಮೇಯರ್ ನಾರಾಯಣರಿಗೆ ಕೊಳಗೇರಿ ಇಲ್ಲವೆ ಸಫಾಯಿ ಕರ್ಮಚಾರಿ ನಿಗಮದ ಅಧ್ಯಕ್ಷ ಸ್ಥಾನ ಕಲ್ಪಿಸಲು ಆಗ್ರಹ



ಮೈಸೂರು,ನ.21(ಎಂಟಿವೈ)–ಪೌರಕಾರ್ಮಿಕರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಮಾಜಿ ಮೇಯರ್ ನಾರಾಯಣ ಅವರಿಗೆ ರಾಜ್ಯ ಕೊಳಗೇರಿ ಅಭಿವೃದ್ಧಿ ನಿಗಮ ಮಂಡಳಿ ಅಥವಾ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನ ನೀಡುವಂತೆ ಕರ್ನಾಟಕ ರಾಜ್ಯ ನಗರಪಾಲಿಕೆ, ನಗರಸಭೆ, ಪುರಸಭೆಗಳ ಪೌರಕಾರ್ಮಿಕರ ಮಹಾಸಂಘದ ರಾಜ್ಯ ಸಂಚಾಲಕ ಎಸ್.ಎಂ.ಪಳನಿಸ್ವಾಮಿ ಒತ್ತಾಯಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪೌರಕಾರ್ಮಿಕ ಸಮುದಾಯಕ್ಕೆ ಸೇರಿದ ಮಾಜಿ ಮೇಯರ್ ನಾರಾಯಣ್, ಕಳೆದ 40 ವರ್ಷದಿಂದ ಪೌರಕಾರ್ಮಿಕ ಸಮುದಾಯದ ಹಿತ ಕಾಯಲು ಹೋರಾಟ ಮಾಡುತ್ತಲೇ ಬಂದಿದ್ದಾರೆ. ಮೈಸೂರು ಮಹಾನಗರಪಾಲಿಕೆಯ ಮೇಯರ್ ಆಗಿ ಉತ್ತಮ ಸೇವೆ ಸಲ್ಲಿಸಿದ್ದಾರೆ. ಪೌರಕಾರ್ಮಿಕರ ಮಕ್ಕಳ ಶಿಕ್ಷಣ ಹಾಗೂ ಆರೋಗ್ಯ ಕಾಪಾಡುವುದರೊಂದಿಗೆ ಪೌರಕಾರ್ಮಿಕರ ಕಲ್ಯಾಣಕ್ಕಾಗಿ ಶ್ರಮಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬೆಂಬಲಿಗರಾಗಿ, ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಮುಖಂಡರಾಗಿರುವ ನಾರಾಯಣ್, ಕೆಪಿಸಿಸಿ ಸದಸ್ಯರಾಗಿ ನಗರ, ಜಿಲ್ಲೆ ಮತ್ತು ರಾಜ್ಯ ಮಟ್ಟದಲ್ಲಿ ಪೌರಕಾರ್ಮಿಕರ ಬೆಂಬಲವನ್ನು ಪಕ್ಷಕ್ಕೆ ಸೆಳೆದಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ನಾರಾಯಣ್ ಅವರನ್ನು ರಾಜ್ಯ ಕೊಳಗೇರಿ ಅಭಿವೃದ್ಧಿ ನಿಗಮ ಮಂಡಳಿ ಅಥವಾ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ನೇಮಕ ಮಾಡಬೇಕು. ಇದರಿಂದ ಪೌರಕಾರ್ಮಿಕರ ಸಮುದಾಯಕ್ಕೆ ನ್ಯಾಯ ಒದಗಿಸಿದಂತಾಗುತ್ತದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ನಗರಪಾಲಿಕೆ, ನಗರಸಭೆ, ಪುರಸಭೆಗಳ ಪೌರಕಾರ್ಮಿಕರ ಮಹಾಸಂಘ ಪದಾಧಿಕಾರಿಗಳಾದ ಆರ್.ದಾಸ್, ಆರ್.ಶಿವಣ್ಣ, ಆರ್ಟಿಸ್ಟ್ ಎಸ್.ನಾಗರಾಜು ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.



ಕರ್ನಾಟಕ ರಾಜ್ಯ 'ಸಹಕಾರ ರತ್ನ ಪ್ರಶಸ್ತಿ' ಪುರಸ್ಕೃತ ಗುಂಡ್ಲುಪೇಟೆ ಮಲ್ಲೇಶ್ ಅವರನ್ನು ಮೈಸೂರು ಜಿಲ್ಲೆಯ ನಾಯಕ ಸಮುದಾಯದ ಹಿರಿಯ ಮುಖಂಡರ ವತಿಯಿಂದ ಅವರ ನಿವಾಸದಲ್ಲಿ ಸನ್ಮಾನಿಸಿ, ಗೌರವಿಸಲಾಯಿತು. ಈ ವೇಳೆ ನಾಯಕ ಸಮುದಾಯದ ಹಿರಿಯ ಮುಖಂಡರಾದ ಟೆನ್ನಿಸ್ ಗೋಪಿ, ಸಾಹುಕಾರ್ ಹುಂಡಿ ಮಹದೇವ, ತಿಮ್ಮನಾಯಕ, ರಮ್ಮನಹಳ್ಳಿ ಸೋಮಣ್ಣ, ನಾಗವಾಲ ವಿನೋದ್, ಹಿನಕಲ್ ಚಂದ್ರು, ರಾಘವ ನಾಯಕ ಉಪಸ್ಥಿತರಿದ್ದರು.

ಯುವಕ ಆತ್ಮಹತ್ಯೆ ಪ್ರಕರಣ: ಇಬ್ಬರು ಪೊಲೀಸರ ಅಮಾನತು

ನಂಜನಗೂಡು: ಪೊಲೀಸರ ವಿಚಾರಣೆಗೆ ಹೆದರಿ ಯುವಕ ಆತ್ಮಹತ್ಯೆ ಮಾಡಿಕೊಂಡನೆಂಬ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಪೊಲೀಸ್ ಸಿಬ್ಬಂದಿಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮಾನತು ಮಾಡಿದ್ದಾರೆ. ಬಿಳಿಗೆರೆ ಪೊಲೀಸ್ ಠಾಣೆಯ ಮುಖ್ಯಪೇದೆ ನಂಜೇಶ್ ಹಾಗೂ ಪೇದೆ ಪ್ರಸನ್ನಕುಮಾರ್ ಅವರನ್ನು ಕರ್ತವ್ಯ ಲೋಪದಡಿ ಎಸ್ಪಿ ಅಮಾನತುಪಡಿಸಿ, ಆದೇಶಿಸಿದ್ದಾರೆ. ಗಲಾಟೆ ವಿಚಾರದಲ್ಲಿ ನ.12ರಂದು ಬಿಳಿಗೆರೆ ಠಾಣೆಸಬ್‌ಇನ್ಸ್‌ಪೆಕ್ಟರ್, ಇಬ್ಬರು ಆರೋಪಿಗಳನ್ನು ಠಾಣೆಗೆ ಕರೆತಂದಿದ್ದರು. ಮತ್ತೋರ್ವ ಆರೋಪಿಯನ್ನು ವಶಕ್ಕೆ ಪಡೆಯಲು ಹೋಗುವಾಗ ಠಾಣೆಯಲ್ಲಿದ್ದ ಇಬ್ಬರು ಆರೋಪಿಗಳ ಜವಾಬ್ದಾರಿಯನ್ನು ಕರ್ತವ್ಯದಲ್ಲಿದ್ದ ಸಿಬ್ಬಂದಿ ನಂಜೇಶ್ ಹಾಗೂ ಪ್ರಸನ್ನಕುಮಾರ್‌ಗೆ ವಹಿಸಿದ್ದರು. ಆದರೆ ಇಬರ ಪೈಕಿ ನಗರ್ಲೆ ಕಿರಣ್‌ಕುಮಾರ್ ಠಾಣೆಯಿಂದ ತಪ್ಪಿಸಿಕೊಂಡು ಪರಾರಿಯಾಗಿದ್ದ. ನಂತರ ಬೆಂಕಿಹಚ್ಚಿಕೊಂಡು ಆತ್ಮಹತ್ಯೆಗೆ ಯತ್ನಿಸಿ ಚಿಕಿತ್ಸೆ ಫಲಕಾರಿಯಾಗದೆ ನ.13ರಂದು ಕೆ.ಆರ್.ಆಸ್ಪತ್ರೆಯಲ್ಲಿ ಮೃತಪಟ್ಟ. ಆತ ಠಾಣೆಯಿಂದ ತಪ್ಪಿಸಿಕೊಳ್ಳಲು ಸಿಬ್ಬಂದಿ ಕರ್ತವ್ಯ ಲೋಪವೇ ಕಾರಣ ಎಂದು ಅವರನ್ನು ಅಮಾನತುಪಡಿಸಲಾಗಿದೆ.



ಮೈಸೂರಿನ ಬ್ಯೂಟಿಷಿಯನ್ ವೆಲ್‌ಫೇರ್ ಅಸೋಸಿಯೇಷನ್ ವತಿಯಿಂದ ಇತ್ತೀಚೆಗೆ ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಮೈಸೂರು ಲಿಟರರಿ ಫೋರಂ ಚಾರಿಟೆಬಲ್ ಟ್ರಸ್ಟ್ ಅಧ್ಯಕ್ಷೆ ಶುಭ ಸಂಜಯ್ ಅರಸ್ ಭಾಗವಹಿಸಿದ್ದರು. ಈ ವೇಳೆ ಅಸೋಸಿಯೇಷನ್ ಅಧ್ಯಕ್ಷೆ ವೇದ ರೈ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಎನ್‌ಇಪಿ ಜಾರಿಗೆ ಆಗ್ರಹಿಸಿ 15 ದಿನಗಳ ಕಾಲ ಕೋಟಿ ಸಹಿ ಸಂಗ್ರಹ

ಪೀಪಲ್ಸ್ ಫೋರಮ್ ಫಾರ್ ಕರ್ನಾಟಕ ಎಜುಕೇಷನ್ ವತಿಯಿಂದ ಅಭಿಯಾನ



ಮೈಸೂರು,ನ.21(ಎಂಟಿವೈ)–ರಾಜ್ಯದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ(ಎನ್‌ಇಪಿ) ಜಾರಿಗೊಳಿಸುವಂತೆ ಆಗ್ರಹಿಸಿ ರಾಜ್ಯಾದ್ಯಂತ ನ.15ರಿಂದ ನ.30ರವರೆಗೆ ಪೀಪಲ್ಸ್ ಫೋರಮ್ ಫಾರ್ ಕರ್ನಾಟಕ ಎಜುಕೇಷನ್ ವತಿಯಿಂದ ಒಂದು ಕೋಟಿ ಸಹಿ ಸಂಗ್ರಹ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಮೈಸೂರು ಸಂಚಾಲಕ ಡಾ.ಈ.ಸಿ. ನಿಂಗರಾಜ್‌ಗೌಡ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ರಾಷ್ಟ್ರೀಯ ಶಿಕ್ಷಣ ನೀತಿ 2020 (ಎನ್‌ಇಪಿ)ಗೆ ಪರ್ಯಾಯವಾಗಿ ರಾಜ್ಯ ಶಿಕ್ಷಣ ನೀತಿಯನ್ನು ಜಾರಿಗೊಳಿಸಲು ಮುಂದಾಗಿದೆ. ಪ್ರಧಾನಿ ನರೇಂದ್ರ ಮೋದಿ ಜಾರಿಗೊಳಿಸಿದ್ದಾರೆಂಬ ಒಂದೇ ಕಾರಣಕ್ಕಾಗಿ, ರಾಜಕೀಯ ದುರುದ್ದೇಶದಿಂದ ನೂತನ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರದ್ದುಗೊಳಿಸಲು ಹೊರಟಿರುವ ರಾಜ್ಯ ಸರ್ಕಾರದ ಕ್ರಮ ಖಂಡನೀಯ. ಭಾರತವನ್ನು ಸದೃಢ ಹಾಗೂ ಸ್ವಾಭಿಮಾನಿ ರಾಷ್ಟ್ರವನ್ನಾಗಿಸುವ ಉದ್ದೇಶದಿಂದ ನೂತನ ರಾಷ್ಟ್ರೀಯ ಶಿಕ್ಷಣ ನೀತಿ 2020 ಜಾರಿಗೊಳಿಸಲಾಗಿತ್ತು. ಸತತ 3 ವರ್ಷಗಳ ಕಾಲ ಅಧ್ಯಯನ ನಡೆಸಿ ಎಲ್ಲಾ ರಾಜ್ಯಗಳಿಂದ ಅಭಿಪ್ರಾಯ ಸಂಗ್ರಹಿಸಿ ನೂತನ ಶಿಕ್ಷಣ ನೀತಿ ಜಾರಿಗೆ ತರಲಾಗಿತ್ತು. ಅದಕ್ಕಾಗಿ ಡಾ.ಕಸ್ತೂರಿ ರಂಗನ್ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿತ್ತು ಆದರೆ ರಾಜ್ಯ ಕಾಂಗ್ರೆಸ್ ಸರ್ಕಾರ ನೂತನ ನೀತಿಯನ್ನು ರದ್ದುಗೊಳಿಸಿ ರಾಜ್ಯ ಶಿಕ್ಷಣ ನೀತಿ ಜಾರಿಗೆ ಮುಂದಾಗಿರುವುದು ಸರಿಯಲ್ಲ ಎಂದು ವಿಷಾದಿಸಿದರು.

ರಾಜ್ಯದಲ್ಲಿ ಎನ್‌ಇಪಿ ಜಾರಿಗೊಳಿಸುವಂತೆ ಆಗ್ರಹಿಸಿ ನ.15ರಿಂದ 30ರವರೆಗೆ ಒಂದು ಕೋಟಿ ಸಹಿ ಸಂಗ್ರಹ ಅಭಿಯಾನ ನಡೆಸಲಾಗುತ್ತಿದ್ದು, ಇದರಲ್ಲಿ ಎಬಿವಿಪಿ, ಕರ್ನಾಟಕ ರಾಜ್ಯ ಮಾಧ್ಯಮಿಕ ಶಿಕ್ಷಕರ ಸಂಘ, ವಿದ್ಯಾಭಾರತಿ, ಭಾರತೀಯ ಶಿಕ್ಷಣ ಮಂಡಲ, ಸಂಸ್ಕೃತ ಭಾರತಿ, ಗುರುಕುಲ ಜನಸೇವಾ ವಿದ್ಯಾಕೇಂದ್ರ, ರಾಷ್ಟ್ರೋತ್ಥಾನ ವಿದ್ಯಾಕೇಂದ್ರ ಹಾಗೂ ಪೀಪಲ್ಸ್ ಫೋರಮ್ ಫಾರ್ ಕರ್ನಾಟಕ ಎಜುಕೇಷನ್ ಮೈಸೂರು ಹಾಗೂ ಶಿಕ್ಷಣ ಕ್ಷೇತ್ರ ಜನಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ. ಆ ಮೂಲಕ ಸರ್ಕಾರದ ಮೇಲೆ ಎನ್‌ಇಪಿ ಜಾರಿಗಾಗಿ ಒತ್ತಡ ಹೇರಲಾಗುತ್ತದೆ ಎಂದರು. ರಾಜ್ಯ ಸರ್ಕಾರ ಶಿಕ್ಷಣವನ್ನು ರಾಜಕೀಯ ಸ್ವಾರ್ಥ ಸಾಧನೆಯ ವಸ್ತುವಾಗಿಸದೆ, ಈಗಿನ ಎನ್‌ಇಪಿಯನ್ನು ಅದರ ಗುಣಾಧಾರದಲ್ಲಿ ಪರಿಶುದ್ಧ ಶೈಕ್ಷಣಿಕ ದೃಷ್ಟಿಯಿಂದ ಪರಾಮರ್ಶೆ ನಡೆಸಬೇಕು. ಅದರಲ್ಲಿ ಸಣ್ಣಪುಟ್ಟ ದೋಷ ಕಂಡುಬಂದಲ್ಲಿ ಅವುಗಳನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರಿಪಡಿಸಿಕೊಂಡು ಎನ್‌ಇಪಿ ವಿರೋಧದ ತನ್ನ ನಿಲುವನ್ನು ಕೈಬಿಡಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಹಂಪಿ ಕನ್ನಡ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಮಾಜಿ ಸದಸ್ಯ ಪ್ರೊ.ಜಿ.ಸಿ. ರಾಜಣ್ಣ, ಡಾ.ಕೆ.ವಸಂತಕುಮಾರ್, ಪ್ರಜ್ವಲ್ ಇದ್ದರು.

ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ.ಸಿ.ಸೋಮಶೇಖರ್



ಮೈಸೂರು,ನ.21–ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ನಿವೃತ್ತ ಐಎಎಸ್ ಅಧಿಕಾರಿ, ಗಡಿನಾಡು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ, ಸಾಹಿತಿ ಹಾಗೂ ವಾಗ್ಮಿ ಡಾ.ಸಿ. ಸೋಮಶೇಖರ್ ಅವರನ್ನು ನೇಮಿಸಲಾಗಿದೆ. ಇವರು ಈ ಹಿಂದೆಯೂ ಕಾರ್ಯಾಧ್ಯಕ್ಷರಾಗಿ ಕೆಲಕಾಲ ಸೇವೆ ಸಲ್ಲಿಸಿದ್ದರು. ಡಾ.ಸಿ.ಸೋಮಶೇಖರ್ ಅವರು ನೂತನ ಅಧ್ಯಕ್ಷರಾಗಿ ನ.23ರ ಗುರುವಾರ ಮಧ್ಯಾಹ್ನ 3.00 ಗಂಟೆಗೆ ಅಧಿಕಾರ ಸ್ವೀಕರಿಸಲಿದ್ದಾರೆ. ಶರಣ ಸಾಹಿತ್ಯ ಪರಿಷತ್ತಿನ ಗೌರವ ಸಲಹೆಗಾರ ಗೊ.ರು. ಚನ್ನಬಸಪ್ಪ ಹಾಗೂ ಪರಿಷತ್ತಿನ ಅಧ್ಯಕ್ಷ ಅಪ್ಪಾರಾವ ಅಕ್ಕೋಣೆ ಉಪಸ್ಥಿತರಿರುವರು.

ದಕ್ಷಿಣ ವಲಯ ಅಂತರ ವಿವಿ ಕಬಡ್ಡಿ ಪಂದ್ಯಾವಳಿಗೆ ಮೈಸೂರು ವಿವಿ ಮಹಿಳೆಯರ ತಂಡ ಭಾಗಿ



2023–24ನೇ ಸಾಲಿನ ದಕ್ಷಿಣ ವಲಯ ಅಂತರ ವಿಶ್ವವಿದ್ಯಾನಿಲಯ ಕಬಡ್ಡಿ ಪಂದ್ಯಾವಳಿಯು ನ.22ರಿಂದ 26ರವರೆಗೆ ಅಲಗಪ್ಪನ್ ವಿಶ್ವವಿದ್ಯಾನಿಲಯ, ಕರೈಕುಡಿಯಲ್ಲಿ ನಡೆಯಲಿದೆ. ಪಂದ್ಯಾವಳಿಗೆ ಮೈಸೂರು ವಿಶ್ವವಿದ್ಯಾನಿಲಯದ ಮಹಿಳೆಯರ ಕಬಡ್ಡಿ ತಂಡ ಭಾಗವಹಿಸಲಿದೆ. ಈ ವೇಳೆ (ನಿಂತಿರುವವರು: ಎಡದಿಂದ) ವರ್ಷ, ಸೋನಿಕಾ, ಗೌರಿ, ಸ್ಪಂದನಾ, ಸುಲ್ತಾನಾ, ಪ್ರಿಯಾಂಕ, ಚಂದುಶ್ರೀ, ಹರ್ಷಿತಾ, ರುಚಿತಾ, ರುಚಿತಾ, ಮೈತ್ರಿ. (ಕುಳಿತಿರುವವರು): ಶ್ವೇತಾ (ನಾಯಕಿ) ಚಂದ್ರಶೇಖರ್ (ತರಬೇತುದಾರರು), ಡಾ.ಸಿ.ವೆಂಕಟೇಶ್, ನಿರ್ದೇಶಕರು, ಪ್ರಸಾದ್(ವ್ಯವಸ್ಥಾಪಕರು) ಅವರನ್ನು ಕಾಣಬಹುದು.

ರಾಷ್ಟ್ರ ಮಟ್ಟದ ಖೋ ಖೋ ಪಂದ್ಯಾವಳಿಯಲ್ಲಿ ಸಾಧನೆ



ಇತ್ತೀಚೆಗೆ ಗೋವಾದಲ್ಲಿ ನಡೆದ 10ನೇ ಮಾಡರ್ನ್ ಖೋ–ಖೋ ರಾಷ್ಟ್ರೀಯ ಚಾಂಪಿಯನ್‌ಶಿಪ್ 2023ರಲ್ಲಿ ಹರಿ ವಿದ್ಯಾಲಯದ ಭುವನ್ ಎಸ್, ದಕ್ಷಿಣ ಕರ್ನಾಟಕ ಖೋ–ಖೋ ತಂಡವನ್ನು ಪ್ರತಿನಿಧಿಸಿ 2ನೇ ಸ್ಥಾನ ಗಳಿಸಿದ್ದಾರೆ. ಇದಲ್ಲದೆ, ಮತ್ತೋರ್ವ ಪ್ರಥಮ ಪಿಯುಸಿ ವಿದ್ಯಾರ್ಥಿ ಆನಂದು ಆರ್ ಕುಮಾರ್ ಉತ್ತರ ಕರ್ನಾಟಕವನ್ನು ಪ್ರತಿನಿಧಿಸಿ 3ನೇ ಸ್ಥಾನ ಗಳಿಸಿದ್ದಾರೆ.

ಗೌರಮ್ಮ ನಿಧನ



ಮೈಸೂರು,ನ.21–ಮೈಸೂರಿನ ತೊಣಚಿಕೊಪ್ಪಲು ನಿವಾಸಿ ದಿವಂಗತ ಈಶ್ವರಪ್ಪನವರ ಪತ್ನಿ ಶ್ರೀಮತಿ ಗೌರಮ್ಮ(75) ತಮ್ಮ ನಿವಾಸ ದಲ್ಲಿ ಅನಾರೋಗ್ಯದ ಕಾರಣ ಇಂದು ನಿಧನರಾದರು. ಇವರ ಅಂತ್ಯಕ್ರಿಯೆ ಕೆ.ಜಿ.ಕೊಪ್ಪಲು ರುದ್ರಭೂಮಿಯಲ್ಲಿ ನ.22ರಂದು (ಗುರುವಾರ) ಮಧ್ಯಾಹ್ನ 12 ಗಂಟೆಗೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮೃತರು ಪತ್ರಿಕಾ ವಿತರಕ ಸಿದ್ದರಾಮು ಸೇರಿದಂತೆ ಮೂವರು ಪುತ್ರರು ಹಾಗೂ ಅಪಾರ ಬಂಧು ವರ್ಗವನ್ನು ಅಗಲಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

22.11.2023 ಬುಧವಾರ, ಮಳೆ ನಕ್ಷತ್ರ: ಅನುರಾಧ, 20.11.2023ರಿಂದ 02.12.2023 ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಶುಕ್ಲ ಪಕ್ಷ, ತಿಥಿ: ದಶಮಿ, ನಕ್ಷತ್ರ: ಪೂಭಾ, ರಾಹುಕಾಲ: ಮಧ್ಯಾಹ್ನ 12ರಿಂದ 1.30ರವರೆಗೆ

- **ಶ್ರೀ ನಟರಾಜ ಪ್ರಥಮ ದರ್ಜೆ ಮಹಿಳಾ ಕಾಲೇಜು:** ಫನ್‌ಫೇರ್, ಸಾನ್ನಿಧ್ಯ: ಶ್ರೀ ನಟರಾಜ ಪ್ರತಿಷ್ಠಾನ ಅಧ್ಯಕ್ಷರಾದ ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ: ಪತ್ರಕರ್ತ ಎಂ.ಆರ್.ಸತ್ಯನಾರಾಯಣ, ಅತಿಥಿಗಳು: ಕನ್ನಡ ಸಾಹಿತ್ಯ ಕಲಾಕೂಟ ನಿರ್ದೇಶಕ ಎಂ. ಚಂದ್ರಶೇಖರ್, ಚಲನಚಿತ್ರ ನಟ ಡಾ.ರಥಕಿರಣ್, ಲಯನ್ಸ್ ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಎಸ್.ಇ. ಗಿರೀಶ್, ಅಧ್ಯಕ್ಷತೆ: ಪ್ರಿನ್ಸಿಪಾಲ್ ಡಾ.ಶಾರದಾ, ಉಪಸ್ಥಿತರು: ವಿಶೇಷಾಧಿಕಾರಿ ಡಾ.ಶಿವರಾಜಪ್ಪ, ಡಾ.ಪ್ರಸಾದಮೂರ್ತಿ, ಡಾ.ಲೋಕೇಶ್, ಡಿ.ಪಿ. ಗುರುಶಾಂತಮ್ಮ, ಟಿ.ಕೃಪಾಲಿನಿ, ಸ್ಥಳ: ಶ್ರೀ ನಟರಾಜ ಕಾಲೇಜು ಆವರಣ, ಬೆಳಗ್ಗೆ 9.30ಕ್ಕೆ.
- **ರಾಮ್‌ಸನ್ಸ್ ಬೊಂಬೆ ಮನೆ :** ದಸರಾ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ರಿಂದ ಸಂಜೆ 7 ಗಂಟೆವರೆಗೆ.
- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಸಂಧಿವಾತ, ಮಂಡಿ ನೋವು, ಕೀಲು ನೋವು ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 10ರಿಂದ.
- **ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು:** ಕನ್ನಡ ಹಬ್ಬ, ಅಧ್ಯಕ್ಷತೆ: ಕಾಲೇಜು ಪ್ರಿನ್ಸಿಪಾಲ್ ಪ್ರೊ. ಅಬ್ದುಲ್ ರಹಿಮಾನ್, ಮುಖ್ಯ ಅತಿಥಿಗಳು: ಕನ್ನಡ ಪ್ರಾಧ್ಯಾಪಕ ಡಾ.ಬೆಟ್ಟೇಗೌಡ, ಕನ್ನಡ ವಿಭಾಗದ ಮುಖ್ಯಸ್ಥ ಡಾ.ಕೆಂಡಗಣ್ಣೇಗೌಡ, ಡಾ.ವಿ.ಲಲಿತಾ, ಆರ್.ರಶ್ಮಿ, ಸ್ಥಳ: ಕಾಲೇಜಿನ ಕಲಾ ಮಂಟಪ, ಬೆಳಗ್ಗೆ 10.30ಕ್ಕೆ.
- **ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು:** ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಗಳ ಉದ್ಘಾಟನೆ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ: ಕನ್ನಡ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ನಾಡೋಜ ಡಾ.ಮಹೇಶ್ ಜೋಷಿ, ಅಧ್ಯಕ್ಷತೆ: ಮೈಸೂರು ನಗರಪಾಲಿಕೆ ಉಪ ಆಯುಕ್ತ ಜಿ.ಎಸ್.ಸೋಮಶೇಖರ್, ಮುಖ್ಯ ಅತಿಥಿಗಳು: ಪ್ರೊ.ಎಂ.ಚಂದ್ರಶೇಖರ್, ಪ್ರೊ. ಬಿ.ವಿ.ಸಾಂಬಶಿವಯ್ಯ, ಡಾ.ಎಸ್.ಪ್ರತಿಭಾ, ಸ್ಥಳ: ಸುವರ್ಣ ಮಹೋತ್ಸವ ಭವನ, ಬೆಳಗ್ಗೆ 11ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಗಳಿಕೆ–ಉಳಿಕೆ–ಹೂಡಿಕೆ–ಹಣಕಾಸಿನ ಮಾಹಿತಿಯ ಬಾನುಲಿ ಸರಣಿ, ಪ್ರಸ್ತುತಿ–ಮೂಕನಹಳ್ಳಿ ರಂಗಸ್ವಾಮಿ, 6.40 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ–ಜಿ.ಕೆ.ರವೀಂದ್ರಕುಮಾರ್, 6.45 ಕಲ್ಯಾಣ ಕರೆದಿದೆ ಕಲ್ಯಾಣ–ಪ್ರಾಯೋಜಿತ ಕಾರ್ಯಕ್ರಮ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು–ಎಂ.ಎಸ್. ಲಕ್ಷ್ಮೀಶ, ಇಂದು ನಾಗರಾಜ್, 9.00 ವೃತ್ತಿ ಮಾರ್ಗದರ್ಶನ, ವಿಷಯ–ಪಾಲಿಮರ್ ಸೈನ್ಸ್ ಅಂಡ್ ಟೆಕ್ನಾಲಜಿ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಡಾ.ಎಸ್.ರೂಪಾ ಅವರೊಂದಿಗೆ ಮಾತುಕತೆ. ನಡೆಸಿಕೊಡುತ್ತಾರೆ ಬೇಂದ್ರೆ ಮಂಜುನಾಥ್, 10.00 ಪಂಡಿತ್ ಶಿವಕುಮಾರ್ ಶರ್ಮ–ಸಂತೂರ್ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.30 ದೇವರನಾಮ, 12.45 ಕನಕ ಗೀತ ಗಾಂಭೀರ್ಯ–ಬಾನುಲಿ ಸರಣಿ. ರಚನೆ– ಡಾ. ಶ್ರೀಧರ ಹೆಗಡೆ ಭದ್ರನ್, ಪ್ರಸ್ತುತಿ– ದಿವಾಕರ ಹೆಗಡೆ, 1.20 ಭಾವಗೀತೆಗಳು–ಬಿ.ಎಸ್. ವಿಜಯ ರಾಘವನ್, 3.00 ಎನ್. ಚೊಕ್ಕಮ್ಮ– ವೀಣಾವಾದನ ಹಾಗೂ ಹಾಡುಗಾರಿಕೆ, 6.50 ಕೃಷಿರಂಗ– ಬೆಳೆ ತ್ಯಾಜ್ಯ ನಿರ್ವಹಣೆ ಮೂಲಕ ಮಣ್ಣಿನ ಸಾವಯವ ಇಂಗಾಲದ ಅಭಿವೃದ್ಧಿ ಕುರಿತು ಡಾ. ಜಿ.ಹೆಚ್. ಯೋಗೇಶ್ ಅವರೊಂದಿಗೆ ಸಂದರ್ಶನ, 8.00 ಕ್ಷಿತಿಜ ಲಿಟರರಿ ಗುರು–ಸಾಹಿತ್ಯ ದಿಗ್ಗಜರೊಂದಿಗೆ ಸಂವಾದ. ಮೈಸೂರಿನ ಪ್ರೊ.ಸಿ. ನಾಗಣ್ಣ ಅವರೊಂದಿಗೆ ಸಂವಾದ. ನಡೆಸಿಕೊಡುತ್ತಾರೆ ದಿವಾಕರ ಹೆಗಡೆ, 9.30 ಉಸ್ತಾದ್ ಅಮ್ಜದ್ ಆಲಿಖಾನ್–ಸರೋಡ್ ವಾದನ, 10.00 ಜನಪದ ಸಂಗೀತ–ಬಸವನಹಳ್ಳಿ ತಂಬೂರಿ ದೊಡ್ಡರಾಚಪ್ಪ ಮತ್ತು ಸಂಗಡಿಗರು, 10.30 ಸವಿನೆನಪು

- **ಶ್ರೀ ರಾಘವೇಂದ್ರ ಸ್ವಾಮಿ ಸೇವಾ ಸಮಿತಿ :** ವಿದ್ವಾನ್ ಶ್ರೀ ಖೇಡ ವೇದ ವ್ಯಾಸಚಾರ್ಯ ಅವರಿಂದ ಉಪನಿಷದ್‌ಗಳ ಬಗ್ಗೆ ಪ್ರವಚನ, ಸ್ಥಳ: ಮಠದ ಆವರಣ, ಸಂಜೆ 5ರಿಂದ 6.30 ರವರೆಗೆ.
- **ಶ್ರೀ ಮಲೆ ಮಹದೇಶ್ವರಸ್ವಾಮಿ ದೇವಸ್ಥಾನ ಟ್ರಸ್ಟ್ :** 46ನೇ ವರ್ಷದ ಕಾರ್ತಿಕ ಮಾಸದ ಶ್ರೀ ಮಲೆ ಮಹದೇಶ್ವರಸ್ವಾಮಿ ಪೂಜಾ ಮಹೋತ್ಸವ, ಸಂಜೆ 7 ಗಂಟೆಗೆ ಶ್ರೀ ಚಾಮುಂಡೇಶ್ವರಿ ಭಜನಾ ಮಂಡಳಿಯಿಂದ ಭಜನಾ ಕಾರ್ಯಕ್ರಮ, ಸ್ಥಳ: ದೇವಸ್ಥಾನದ ಆವರಣ, ಲಷ್ಕರ್ ಮೊಹಲ್ಲಾ.

ಸುತ್ತೂರು ಶ್ರೀ ಕ್ಷೇತ್ರದಲ್ಲಿಂದು, ನಂಜನಗೂಡು ತಾಲೂಕು

- **ಶ್ರೀ ವೀರ ಸಿಂಹಾಸನ ಮಹಾಸಂಸ್ಥಾನ ಮಠ :** ಕಾರ್ತಿಕ ಮಾಸದ ವಿಶೇಷ ಪೂಜಾ ಕಾರ್ಯಕ್ರಮ, ಸ್ಥಳ: ಸುತ್ತೂರು ಶ್ರೀಕ್ಷೇತ್ರ.

ಹುಣಸೂರಿನಲ್ಲಿಂದು

- **ಹಿರಣ್ಮಯಿ ಪ್ರತಿಷ್ಠಾನ, ಕಾವೇರಿ ಬಳಗ:** ಮಕ್ಕಳ ಹಬ್ಬ, ಅಧ್ಯಕ್ಷತೆ: ಮುಖ್ಯ ಶಿಕ್ಷಕ ಜೆ.ಮಧು, ಮುಖ್ಯ ಅತಿಥಿಗಳು: ಸಾಹಿತಿ ಬನ್ನೂರು ಕೆ.ರಾಜು, ಉದ್ಘಾಟನೆ: ಕಲಾವಿದೆ ಡಾ.ಜಮುನಾರಾಣಿ ಮಿರ್ಲೆ, ವಿಶೇಷ ಆಹ್ವಾನಿತರು: ಒರಿಗಾಮಿ ಕಲಾವಿದ ಹೆಚ್.ವಿ.ಮುರಳೀಧರ್, ಮುಕ್ತಕ ಕವಿ ಎಂ.ಮುತ್ತುಸ್ವಾಮಿ, ಬಹುಮಾನ ವಿತರಣೆ: ಬಳಗದ ಅಧ್ಯಕ್ಷೆ ಎನ್.ಕೆ.ಕಾವೇರಿಯಮ್ಮ, ಹಿರಣ್ಮಯಿ ಪ್ರತಿಷ್ಠಾನ ಅಧ್ಯಕ್ಷ ಎ.ಸಂಗಪ್ಪ, ಸ್ಥಳ: ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆ, ಹುಣಸೂರು, ಬೆಳಗ್ಗೆ 11.30ಕ್ಕೆ.

ಬೆಸ್ಕಾಂ ಬೇಜವಾಬ್ದಾರಿಗೆ ತಾಯಿ-ಹಸುಳೆ ಬಲಿ; ಚೆಸ್ಕಾಂಗೆ ಇದೊಂದು ಎಚ್ಚರಿಕೆ ಪಾಠ

ಮೈಸೂರಲ್ಲೂ ರಸ್ತೆಬದಿ ಬಳ್ಳಿಯಂತೆ ನೇತಾಡುತ್ತಿವೆ ವೈರ್‌ಗಳು; ಟ್ರಾನ್ಸ್‌ಫಾರ್ಮರ್ ಬಳಿ ಸುರಕ್ಷತೆ ಇಲ್ಲ

● ಬೀದಿದೀಪಗಳ ಕಂಬಗಳಿಂದ ಚಾಚಿಕೊಂಡಿವೆ ಸಜೀವ ವೈರ್‌ಗಳು ● ಕಂಡ ಕಂಡಲ್ಲಿ ಅಳವಡಿಸಿರುವ ಬಾಕ್ಸ್‌ಗಳಿಗೆ ಮುಚ್ಚಳವೇ ಇಲ್ಲ ● ಮಕ್ಕಳು ರಸ್ತೆ ಹಾದು ಹೋಗುವಾಗ ತಾಗಿದರೆ ಗತಿಯೇನು?



ಕೋರ್ಟ್ ಬಳಿ ಟೆನ್ನಿಸ್ ಕೋರ್ಟ್ ಪಕ್ಕದ ಕಂಬ



ಕೆ.ಜಿ.ಕೊಪ್ಪಲು ಕಂಬದಲ್ಲಿ ಜೋತುಬಿದ್ದ ವೈರ್



ಸ್ವಿಮ್ಮಿಂಗ್ ಪೂಲ್ ರಸ್ತೆಯಲ್ಲಿ ವಾಲಿರುವ ಕಂಬ



ಕಾಳಿದಾಸ ರಸ್ತೆಯಲ್ಲಿ ಹರಡಿರುವ ಕೇಬಲ್‌ಗಳು

ಮೈಸೂರು, ನ.21(ಎಸ್‌ಬಿಡಿ)- ಮೈಸೂರು ನಗರದಲ್ಲಿ ವಿದ್ಯುತ್ ಕಂಬಗಳು, ಅವುಗಳಿಗೆ ಅಳವಡಿಸಿರುವ ಉಪಕರಣಗಳ ಸ್ಥಿತಿ ನೋಡಿದರೆ ವಿದ್ಯುತ್ ಸುರಕ್ಷತೆ ಬಗ್ಗೆ ತುರ್ತು ಕ್ರಮ ವಹಿಸುವ ಅಗತ್ಯವಿದೆ.

ಮನುಷ್ಯನ ಜೀವನದಲ್ಲಿ ವಿದ್ಯುತ್ ಅವಿಭಾಜ್ಯವಾಗಿದೆ. ವಿದ್ಯುತ್ ಇಲ್ಲದೆ ಕೆಲ ನಿಮಿಷ ಕಳೆಯುವುದೂ ಅಸಾಧ್ಯ ಎನ್ನುವಂತಾಗಿದೆ. ಆದರೆ ಸ್ವಲ್ಪ ನಿರ್ಲಕ್ಷ್ಯ ವಹಿಸಿದರೂ ವಿದ್ಯುತ್ ಅತ್ಯಂತ ಅಪಾಯಕಾರಿ ಎಂಬುದಕ್ಕೆ ಬೆಂಗಳೂರಿನ ಕಾಡುಗೋಡಿಯಲ್ಲಿ ಸಂಭವಿಸಿದ ತಾಯಿ-ಮಗು ದುರಂತ ಸಾವು ಜ್ವಲಂತ ಸಾಕ್ಷಿ. ಈ ದುರ್ಘಟನೆ ಬಗ್ಗೆ ಕಳವಳ ವ್ಯಕ್ತಪಡಿಸಿರುವ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ, ಆರು ವಾರಗಳಲ್ಲಿ ಸಮಗ್ರ ವರದಿ ಸಲ್ಲಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಪೊಲೀಸ್ ಮಹಾನಿರ್ದೇಶಕರಿಗೆ ನೋಟೀಸ್ ನೀಡಿದೆ.

ವಿದ್ಯುತ್ ಸರಬರಾಜು, ನಿರ್ವಹಣೆ ಹಾಗೂ ಬಳಕೆ ವೇಳೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಈ ಬಗ್ಗೆ ಸ್ವಲ್ಪ ನಿರ್ಲಕ್ಷ್ಯ ತೋರಿದರೂ ಸಾವು-ನೋವು ನಿಶ್ಚಿತ. ವಿದ್ಯುತ್ ಅವಘಡದಿಂದ ಅದೆಷ್ಟೋ ಅಮಾಯಕರು ಬಲಿಯಾಗಿರುವ ನಿದರ್ಶನಗಳಿವೆ. ದುರಂತ ಸಂಭವಿಸಿದ ನಂತರ ಎಚ್ಚರ ವಹಿಸುವುದಕ್ಕಿಂತ ಮುಂಜಾಗ್ರತೆ ವಹಿಸಿದರೆ ಪ್ರಾಣಹಾನಿ ತಪ್ಪಿಸಬಹುದು. ಈ ನಿಟ್ಟಿನಲ್ಲಿ ಮೈಸೂರು ನಗರದಲ್ಲೂ ಗಮನಹರಿಸುವುದು ಮುಖ್ಯವಾಗಿದೆ.

ಪೋಲ್ ಬಾಕ್ಸ್ ಅಧ್ವಾನ: ಮೈಸೂರು ನಗರದ ಬೀದಿದೀಪ ಕಂಬಗಳಲ್ಲಿ ಅಳವಡಿಸಿರುವ ಬಹುತೇಕ ಕಂಟ್ರೋಲ್ ಬಾಕ್ಸ್‌ಗಳಲ್ಲಿ ಮುಚ್ಚಳವೇ ಇಲ್ಲ. ವೈರ್‌ಗಳು ಹೊರಗೆ ಬಂದಿವೆ. ಹಲವು ಕಡೆ ಈ ಬಾಕ್ಸ್‌ಗಳು ಮಕ್ಕಳ ಕೈಗೂ ಎಟಕುತ್ತವೆ. ಶಾಲೆಗೆ ಹೋಗುವಾಗಲೋ ಅಥವಾ ಆಟವಾಡುವಾಗಲೋ ಆಕಸ್ಮಿಕವಾಗಿ ವೈರ್ ಮುಟ್ಟಿದರೆ ಪ್ರಾಣಾಪಾಯ ನಿಶ್ಚಿತ. ಮಕ್ಕಳಿಗಷ್ಟೇ ಅಲ್ಲ ದೊಡ್ಡವರಿಗೂ ಅಪಾಯಕಾರಿಯೇ. ಮತ್ತಷ್ಟು ಕಂಬಗಳಲ್ಲಿ ಬಾಕ್ಸ್‌ಗಳೂ ಇಲ್ಲ, ಕನಿಷ್ಠ ಸ್ವಿಚ್ ಕೂಡ ಇಲ್ಲ. ಎರಡು ವೈರ್‌ಗಳನ್ನು ಜೋತು ಬಿಡಲಾಗಿದ್ದು, ಅವುಗಳನ್ನು ಜೋಡಿಸಿ ಬೀದಿದೀಪ ಆನ್ ಮಾಡುವ ದುಃಸ್ಥಿತಿ ಇದೆ.

ವಾಲಿರುವ ಕಂಬಗಳು: ಗಾಳಿ-ಮಳೆ ವೇಳೆ ವಿದ್ಯುತ್ ಕಂಬಗಳು ನೆಲಕ್ಕುರುಳುತ್ತವೆ. ಆದಾಗ್ಯೂ ಕಂಬಗಳ ಭದ್ರತೆ ಬಗ್ಗೆಯೂ ನಿರ್ಲಕ್ಷ್ಯ ವಹಿಸಲಾಗಿದೆ. ಸರಸ್ವತಿಪುರಂ ಸ್ವಿಮ್ಮಿಂಗ್ ಪೂಲ್ ರಸ್ತೆಯಲ್ಲಿ ಮೂರ್‍ನಾಲ್ಕು ವಿದ್ಯುತ್ ಕಂಬಗಳು ವಾಲಿವೆ. ನಗರದ ಹಲವು ಕಡೆ ಈ ಸಮಸ್ಯೆ ಇದೆ. ಕೆಲವೆಡೆ ವಿದ್ಯುತ್ ತಂತಿಗಳೂ ಜೋತು ಬಿದ್ದಿವೆ. ಗಾಳಿ ಜೋರಾದಾಗ ಪಕ್ಕದ ಮರದ ಕೊಂಬೆಗಳಿಗೆ ತಾಕಿ ಸಮಸ್ಯೆ ಉಂಟಾಗುತ್ತದೆ.

ಕೇಬಲ್ ಗೊಂಚಲು: ವಿದ್ಯುತ್ ಕಂಬಗಳಲ್ಲಿ ಇತರ ಕೇಬಲ್‌ಗಳು ರಾಶಿ ಇವೆ. ಬಹುತೇಕ ಕಂಬಗಳಲ್ಲಿ ವಿದ್ಯುತ್ ತಂತಿಗಳ ನಡುವೆಯೇ ನೆಟ್‌ವರ್ಕ್ ಇನ್ನಿತರ ಕೇಬಲ್‌ಗಳನ್ನು ಅಳವಡಿಸಲಾಗಿದೆ. ಹಲವು ಕಂಬಗಳಲ್ಲಿ ಕೇಬಲ್ ಸುರಳಿ ಸುತ್ತಿ ಕೈಗೆಟಕುವಂತೆ ಕಟ್ಟಲಾಗಿದೆ. ಅನೇಕ ಕಡೆಗಳಲ್ಲಿ ಕೇಬಲ್ ತುಂಡಾಗಿ ಫುಟ್‌ಪಾತ್ ಹಾಗೂ ರಸ್ತೆಯಲ್ಲಿ ಬಿದ್ದಿವೆ. ವಿದ್ಯುತ್ ತಂತಿಗೆ ಸ್ಕಿನ್ ಆಗಿರುವ ಕೇಬಲ್ ತಾಕಿದರೆ ವಿದ್ಯುತ್ ಪ್ರವಹಿಸುವ ಸಾಧ್ಯತೆ ಇರುತ್ತದೆ. ಯಾವುದೋ ಕೇಬಲ್ ಎಂದು ತುಳಿದವರ ಪ್ರಾಣಕ್ಕೆ ಕುತ್ತಾಗಬಹುದು.

ಈ ರೀತಿಯ ಕೇಬಲ್‌ಗಳನ್ನು ತೆರವುಗೊಳಿಸಲು ಮುಂದಾದ ಮೈಸೂರು ನಗರಪಾಲಿಕೆ ನಂತರದಲ್ಲಿ ಮೌನ ತಾಳಿದೆ. ತಕ್ಷಣಕ್ಕೆ ತೆರವುಗೊಳಿಸಲು ಸಾಧ್ಯವಾಗದಿದ್ದರೂ ಸುರಕ್ಷತೆ ದೃಷ್ಟಿಯಿಂದ ಸೂಕ್ತ ಕ್ರಮ ವಹಿಸಬೇಕಿತ್ತು.


ಇನ್ನು ಹಲವಾರು ಕಡೆ ಫುಟ್‌ಪಾತ್‌ನಲ್ಲೇ ಬೃಹತ್ ಗಾತ್ರದ ವಿದ್ಯುತ್ ಉಪಕರಣ ಅಳವಡಿಸಲಾಗಿರುತ್ತದೆ. ಸುರಕ್ಷತೆ ದೃಷ್ಟಿಯಿಂದ ಅವುಗಳ ಸುತ್ತ ಜಾಲರಿ ಮಾದರಿಯನ್ನು ಅಳವಡಿಸಿಲ್ಲ. ಟ್ರಾನ್ಸ್‌ಫಾರ್ಮರ್‌ಗಳು ಕೆಲವೆಡೆ ತಳಮಟ್ಟದಲ್ಲಿವೆ. ಇವುಗಳಿಂದಲೂ ಅಪಾಯ ಸಂಭವಿಸುವ ಸಾಧ್ಯತೆ ಇದೆ. ಒಟ್ಟಾರೆ ಮೈಸೂರಿನಲ್ಲಿ ವಿದ್ಯುತ್ ಸುರಕ್ಷತೆಯ ಅಗತ್ಯತೆ ಅನಿವಾರ್ಯ ಎನ್ನುವುದಕ್ಕೆ ಹಲವು ಕಾರಣಗಳಿವೆ.

ಅವಘಡಕ್ಕೆ ಮುನ್ನ ಎಚ್ಚೆತ್ತುಕೊಳ್ಳಬೇಕಿದೆ...

ಬೆಂಗಳೂರಿನ ಕಾಡುಗೋಡಿಯಲ್ಲಿ ನ.19ರಂದು ನಸುಕಿನಲ್ಲಿ ಬಸ್ ಇಳಿದು ಮನೆಗೆ ನಡೆದುಕೊಂಡು ಹೋಗುವಾಗ ಸೌಂದರ್ಯ ಎನ್ನುವವರು ವಿದ್ಯುತ್ ತಂತಿ ತುಳಿದು ತಮ್ಮ 9 ತಿಂಗಳ ಮಗುವಿನೊಂದಿಗೆ ದುರಂತ ಸಾವಿಗೀಡಾದರು. ಸೌಂದರ್ಯ ಪತಿ ಸಂತೋಷ್, ಪತ್ನಿ ಹಾಗೂ ಮಗುವನ್ನು ಕಣ್ಣೆದುರೇ ಕಳೆದುಕೊಂಡರು. ಹೃದಯವಿದ್ರಾವಕ ಘಟನೆಯಿಂದ ಮರುಗುತ್ತಿರುವ ಸಾರ್ವಜನಿಕರು ವಿದ್ಯುತ್ ಪ್ರಸರಣ ನಿಗಮ ಹಾಗೂ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ನಿರ್ಲಕ್ಷ್ಯ ಧೋರಣೆಯನ್ನು ಖಂಡಿಸುತ್ತಿದ್ದಾರೆ. ಆದರೆ ಈ ಬಗ್ಗೆ ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಮಹಂತೇಶ್ ಬೀಳಗಿ ಪ್ರತಿಕ್ರಿಯಿಸಿ, ಟ್ರಾನ್ಸ್‌ಫಾರ್ಮರ್ ಒಳಗೆ ಹೆಗ್ಗಣ ನುಗ್ಗಿ, ವೈರ್ ಕಡಿದು ತಂತಿ ತುಂಡಾಗಿ ಬಿದ್ದಿತ್ತು ಎಂದು ಹೇಳಿರುವುದನ್ನೂ ಜನ ಖಂಡಿಸಿದ್ದಾರೆ. ಈ ನಡುವೆ ಮಾಧ್ಯಮಗಳ ವರದಿ ಆಧರಿಸಿ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಸ್ವಯಂಪ್ರೇರಿತವಾಗಿ ಕ್ರಮ ವಹಿಸಿದೆ. ಇಂತಹ ಘಟನೆಗಳು ಮತ್ತೆಲ್ಲೂ ಘಟಿಸಬಾರದು. ವಿದ್ಯುತ್ ಕಂಬಗಳಲ್ಲಿ ಸಮಸ್ಯೆಗಳನ್ನು ನಿರ್ಲಕ್ಷಿಸಿದರೆ ಅವಘಡ ಸಂಭವಿಸಬಹುದು. ಮೈಸೂರು ನಗರ ಪಾಲಿಕೆ ಹಾಗೂ ಸೆಸ್ಕ್ ಅಧಿಕಾರಿಗಳು ಸಮನ್ವಯದಿಂದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಸೂಕ್ತ ನಿರ್ದೇಶನ ನೀಡಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ರಾಷ್ಟ್ರೀಯ ಹಿತಾಸಕ್ತಿಗಾಗಿ 'ಒಂದು ದೇಶ, ಒಂದು ಚುನಾವಣೆ'

ಮಾಜಿ ರಾಷ್ಟ್ರಪತಿ ರಾಮನಾಥ ಕೋವಿಂದ್ ಸಮರ್ಥನೆ



ರಾಯಬರೇಲಿ: ದೇಶದಲ್ಲಿ ಏಕಕಾಲಕ್ಕೆ ಚುನಾವಣೆ ನಡೆಸಬೇಕು ಎಂಬುದರಲ್ಲಿ ರಾಷ್ಟ್ರೀಯ ಹಿತಾಸಕ್ತಿಯಿದೆ. ಇದು ಯಾವುದೇ ರಾಜಕೀಯ ಪಕ್ಷಕ್ಕೆ ಸಂಬಂಧಿಸಿದ್ದಲ್ಲ ಎಂದು 'ಒಂದು ದೇಶ, ಒಂದು ಚುನಾವಣೆ'ಯ ಸಾಧ್ಯತೆಯನ್ನು ಅನ್ವೇಷಿಸುವ ಸಮಿತಿ ಮುಖ್ಯಸ್ಥ ರಾಮನಾಥ್ ಕೋವಿಂದ್ ಹೇಳಿದರು.

ಇದರಿಂದ ಜನರಿಗೆ ಅನುಕೂಲವಾಗಲಿದೆ. ಉಳಿದ ಹಣವನ್ನು ಅಭಿವೃದ್ಧಿ ಕೆಲಸಗಳಿಗೆ ಬಳಸಲಾಗುವುದು ಎಂದರು.

ಸಂಸದೀಯ ಸಮಿತಿ, ನೀತಿ ಆಯೋಗ, ಚುನಾವಣಾ ಆಯೋಗವು ಸೇರಿದಂತೆ ಹಲವು ಸಮಿತಿಗಳು 'ಒಂದು ದೇಶ, ಒಂದು ಚುನಾವಣೆ'ಯ ಸಂಪ್ರದಾಯವನ್ನು ದೇಶದಲ್ಲಿ ಪುನಶ್ಚೇತನಗೊಳಿಸುವ ಅಗತ್ಯವಿದೆ ಎಂದು ಹೇಳಿವೆ. ರಾಷ್ಟ್ರೀಯ ಹಿತಾಸಕ್ತಿಗಾಗಿ ಎಲ್ಲ ರಾಜಕೀಯ ಪಕ್ಷಗಳು ಸಹಕರಿಸಬೇಕು ಎಂದು ಮನವಿ ಮಾಡಿಕೊಳ್ಳುವೆ ಎಂದು ಹೇಳಿದರು.

ಇದರ ಸಾಕಾರಕ್ಕಾಗಿಯೇ ಕೇಂದ್ರ ಸರ್ಕಾರ ನನ್ನ ನೇತೃತ್ವದಲ್ಲಿ ಸಮಿತಿ ರಚಿಸಿದೆ. ನಾವು ಜನರೊಂದಿಗೆ ಕೆಲಸ ಮಾಡುತ್ತಿದ್ದೇವೆ. ಈಗಾಗಲೇ ಎಲ್ಲಾ ರಾಜಕೀಯ ಪಕ್ಷಗಳನ್ನು ಸಂಪರ್ಕಿಸಿದ್ದು, ಸಲಹೆ ನೀಡುವಂತೆ ಕೋರಿದ್ದೇನೆ. ಎಲ್ಲರ ಬೆಂಬಲ ಸಿಕ್ಕಿದೆ. ಈ ಸಂಪ್ರದಾಯವನ್ನು ಹೇಗೆ ಕಾರ್ಯಗತಗೊಳಿಸಬೇಕು ಎಂಬ ಕುರಿತಂತೆ ಸರ್ಕಾರಕ್ಕೆ ಸಲಹೆ ನೀಡುವೆ ಎಂದು ಅವರು ಹೇಳಿದರು.

ಒಂದು ದೇಶ, ಒಂದು ಚುನಾವಣೆಯು ಜಾರಿಗೊಂಡರೆ ಯಾವುದೇ ಒಂದು ರಾಜಕೀಯ ಪಕ್ಷಕ್ಕೆ ಪ್ರಯೋಜನವಾಗಲ್ಲ ಎಂದು ಪ್ರತಿಪಾದಿಸಿದ ಕೋವಿಂದ್, ಕೇಂದ್ರದ ಚುಕ್ಕಾಣಿ ಹಿಡಿಯಲು ಎಲ್ಲ ಪಕ್ಷಕ್ಕೂ ಇದು ಸಹಕಾರಿಯಾಗಲಿದೆ. ಇದರಲ್ಲಿ ಯಾವುದೇ ತಾರತಮ್ಯವಾಗಲ್ಲ ಎಂದರು.

ವೈಟ್‌ಫೀಲ್ಡ್‌ನಲ್ಲಿ ವಿದ್ಯುತ್ ತಂತಿ ತುಳಿದು ತಾಯಿ-ಮಗು ಸಾವು

ತನಿಖೆಗೆ 4 ತಂಡ ರಚನೆ; ಸರ್ಕಾರಕ್ಕೆ NHRC ನೋಟಿಸ್



ಬೆಂಗಳೂರು: ನಗರದ ಹೊರವಲಯದಲ್ಲಿರುವ ವೈಟ್‌ಫೀಲ್ಡ್‌ನಲ್ಲಿ ವಿದ್ಯುತ್ ತಂತಿ ತುಳಿದು ಮಹಿಳೆ ಮತ್ತು ಆಕೆಯ 9 ತಿಂಗಳ ಮಗು ಸಾವಿಗೀಡಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಕರಣದ ತನಿಖೆಗಾಗಿ ನಾಲ್ಕು ತಂಡಗಳನ್ನು ರಚಿಸಲಾಗಿದೆ ಎಂದು ಇಂಧನ ಸಚಿವ ಕೆಜೆ ಜಾರ್ಜ್ ತಿಳಿಸಿದ್ದಾರೆ. ಪ್ರಕರಣ ಸಂಬಂಧ ಬೆಸ್ಕಾಂ ಒಂದು ತಂಡ, ಪೊಲೀಸರ ಇನ್ನೊಂದು ತಂಡ, ರಾಜ್ಯ ವಿದ್ಯುತ್ ಇಲಾಖೆಯಿಂದ ಮೂರನೇ ತಂಡ ಮತ್ತು ಸ್ವತಂತ್ರ ಸಂಸ್ಥೆಯಾಗಿರುವ ನಾಲ್ಕನೇ ತಂಡ ಸಾವಿನ ತನಿಖೆ ನಡೆಸಲಿದೆ ಎಂದು ಕೆ.ಜೆ.ಜಾರ್ಜ್ ಹೇಳಿದರು.

ನಾವು ನಾಲ್ಕು ತಂಡಗಳಿಂದ ವಿಚಾರಣೆ ನಡೆಸುತ್ತಿದ್ದೇವೆ ಮತ್ತು ಘಟನೆಗೆ ಸಂಬಂಧಿಸಿದವರನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ ಮತ್ತು ಮುಂದಿನ ಕ್ರಮವನ್ನು ಕೈಗೊಳ್ಳುತ್ತೇವೆ ಎಂದರು.

ವಿದ್ಯುತ್ ತಂತಿ ತುಳಿದು ತಾಯಿ ಮತ್ತು ಮಗು ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ(ಎನ್‌ಎಚ್‌ಆರ್‌ಸಿ) ರಾಜ್ಯ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ.ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಧ್ಯಮಗಳ ವರದಿ ಆಧರಿಸಿ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡಿರುವ ಎನ್‌ಎಚ್‌ಆರ್‌ಸಿ, ಘಟನೆ ಬಗ್ಗೆ ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಆರು ವಾರಗಳಲ್ಲಿ ವಿವರವಾದ ವರದಿ ನೀಡುವಂತೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಹಾಗೂ ಪೊಲೀಸ್ ಮಹಾನಿರ್ದೇಶಕರಿಗೆ ನೋಟಿಸ್ ನೀಡಿದೆ.

ಈ ಘಟನೆಯು ಬೆಂಗಳೂರಿನ ವಿದ್ಯುತ್ ಇಲಾಖೆ ನಿರ್ಲಕ್ಷ್ಯವನ್ನು ಸೂಚಿಸುತ್ತದೆ ಮತ್ತು ಮಾನವ ಹಕ್ಕುಗಳ ಸ್ಪಷ್ಟ ಉಲ್ಲಂಘನೆಯಾಗಿದೆ. ಬೆಸ್ಕಾಂ ಅಧಿಕಾರಿಗಳು ಮತ್ತು ಸಿಬ್ಬಂದಿಯ ನಿರ್ಲಕ್ಷ್ಯದಿಂದಲೇ ತಾಯಿ, ಮಗು ಪ್ರಾಣ ಕಳೆದುಕೊಂಡಿದ್ದಾರೆ ಎಂಬುದು ಮೇಲ್ನೋಟಕ್ಕೆ ತೋರುತ್ತದೆ. ಸಿಬ್ಬಂದಿ, ಅಧಿಕಾರಿಗಳ ವಿರುದ್ಧ ಏನು ಕ್ರಮ ಕೈಗೊಂಡಿರಿ, ಸಂತ್ರಸ್ತರಿಗೆ ಯಾವ ರೀತಿ ಪರಿಹಾರ ನೀಡಲಾಗಿದೆ ಎಂಬ ಬಗ್ಗೆ ವರದಿ ನೀಡುವಂತೆ ಎನ್‌ಎಚ್‌ಆರ್‌ಸಿ ರಾಜ್ಯ ಸರ್ಕಾರ ಸೂಚಿಸಿದೆ.

ಅಂತಹ ಕೇಬಲ್‌ಗಳಿಗೆ ಪ್ರತ್ಯೇಕವಾಗಿ ಡಕ್ಟ್‌ಗಳನ್ನು ಹೊಂದಿರುವ ರಸ್ತೆಗಳಲ್ಲಿ ಯಾವುದೇ ತೂಗಾಡುವ ತಂತಿಗಳು ಇರದಂತೆ ನೋಡಿಕೊಳ್ಳುವುದಾಗಿ ಸಚಿವರು ಭರವಸೆ ನೀಡಿದರು. 15 ದಿನಗಳಲ್ಲಿ ಟೆಲಿಕಾಂ ಕಂಪನಿಗಳು ತಮ್ಮ ಓವರ್ ಹೆಡ್ ವೈರ್‌ಗಳನ್ನು ಡಕ್ಟ್‌ಗಳಿಗೆ ಸ್ಥಳಾಂತರಿಸಬೇಕಾಗುತ್ತದೆ. ವಿಫಲವಾದರೆ ವಿದ್ಯುತ್ ಇಲಾಖೆ ಅವುಗಳನ್ನು ತೆಗೆದು ಹಾಕುತ್ತದೆ. ಘಟನೆಗೆ ಸಂಬಂಧಿಸಿದಂತೆ ಇಬ್ಬರು ಅಧಿಕಾರಿಗಳು ಸೇರಿದಂತೆ ಬೆಸ್ಕಾಂನ ಐವರು ನೌಕರರನ್ನು ಅಮಾನತುಗೊಳಿಸಲಾಗಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು.

ರಾಜ್ಯದ ಓಟದ ಸ್ಪರ್ಧೆಗೆ ಹುಣಸೂರು ಬಾಲಕಿ ಅನುಶ್ರೀ



ಮೈಸೂರು,ನ.21(ಎಸ್‌ಪಿಎನ್)- ಮಂಗಳೂರಿನಲ್ಲಿ ಶಾಲಾ ಶಿಕ್ಷಣ ಇಲಾಖೆ ಆಯೋಜಿಸಿರುವ ರಾಜ್ಯಮಟ್ಟದ ಓಟದ ಸ್ಪರ್ಧೆಗೆ ಜಿಲ್ಲಾಮಟ್ಟದಿಂದ ರಾಜ್ಯಮಟ್ಟಕ್ಕೆ ಹುಣಸೂರು ತಾಲೂಕು ಹುಂಡಿಮಾಳ ಸರ್ಕಾರಿ ಪ್ರೌಢಶಾಲಾ ವಿದ್ಯಾರ್ಥಿನಿ ಎಚ್.ವಿ.ಅನುಶ್ರೀ ಆಯ್ಕೆಯಾಗಿದ್ದಾರೆ.

ಮೈಸೂರು ಜಿಲ್ಲೆಯ ಶಾಲಾ ಶಿಕ್ಷಣ ಇಲಾಖೆ ಈ ಹಿಂದೆ ನಡೆಸಿದ 100 ಮೀ, 200 ಮೀ ಹಾಗೂ 400 ಮೀಟರ್ ಓಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನಗಳಿಸಿ, ಜಿಲ್ಲೆಗೆ ಕೀರ್ತಿ ತಂದಿದ್ದರು.

ಹ್ಯಾಂಡ್‌ಬಾಲ್‌ನಲ್ಲಿ ತೃತೀಯ ಸ್ಥಾನ: ಅಲ್ಲದೆ, ಎಚ್.ವಿ.ಅನುಶ್ರೀ ನೇತೃತ್ವದ ತಂಡ ಶಾಲಾ ಶಿಕ್ಷಣ ಇಲಾಖೆ ನಡೆಸಿದ ರಾಜ್ಯಮಟ್ಟದ ಹ್ಯಾಂಡ್‌ಬಾಲ್ ಸ್ಪರ್ಧೆಯಲ್ಲಿ ಭಾಗವಹಿಸಿ ತೃತೀಯ ಸ್ಥಾನ ಗಳಿಸಿ ಜಿಲ್ಲೆಗೆ ಕೀರ್ತಿ ತಂದುಕೊಟ್ಟಿದ್ದಾರೆ.

ಅಂತೆಯೇ ಜಿಲ್ಲಾ ಮತ್ತು ವಿಭಾಗೀಯ ಮಟ್ಟದ ಹ್ಯಾಂಡ್‌ಬಾಲ್ ಸ್ಪರ್ಧೆಯಲ್ಲಿ ಅನುಶ್ರೀ ನೇತೃತ್ವದ ತಂಡ ಭಾಗವಹಿಸಿ ಪ್ರಥಮ ಸ್ಥಾನ ಗಳಿಸಿ, ಗಮನ ಸೆಳೆದಿದೆ. ಅಲ್ಲದೆ ದಸರಾ ಕ್ರೀಡಾಕೂಟದಲ್ಲಿ 100 ಮೀ, 200 ಮೀ, 400 ಮೀಟರ್ ಓಟದ ಸ್ಪರ್ಧೆಯಲ್ಲಿ ಅನುಶ್ರೀ ಭಾಗವಹಿಸಿ ಪ್ರಥಮ ಸ್ಥಾನಗಳಿಸಿದ್ದಾರೆ. ರಾಜ್ಯಮಟ್ಟಕ್ಕೆ ಆಯ್ಕೆಯಾದ ಅನುಶ್ರೀಗೆ ಶಾಲಾ ಮುಖ್ಯಶಿಕ್ಷಕ ಕೆ.ರವಿ, ದೈಹಿಕ ಶಿಕ್ಷಕ ಬಿ.ಮಂಜುನಾಥ್ ಶುಭ ಹಾರೈಸಿದ್ದಾರೆ.

ಪಂಕಜ್ ಅಡ್ವಾಣಿಗೆ ವಿಶ್ವ ಚಾಂಪಿಯನ್ ಪಟ್ಟ



ದೋಹಾ, ನ.21- ಭಾರತದ ಹೆಮ್ಮೆಯ ಬಿಲಿಯರ್ಡ್ಸ್ ತಾರೆ ಪಂಕಜ್ ಅಡ್ವಾಣಿ ಅವರು ಮಂಗಳವಾರ ಐಬಿಎಸ್‌ಎಫ್ ವಿಶ್ವ ಬಿಲಿಯರ್ಡ್ಸ್ ಚಾಂಪಿಯನ್‌ಶಿಪ್ ಪ್ರಶಸ್ತಿಯನ್ನು ತಮ್ಮ ಮುಡಿಗೇರಿಸಿಕೊಂಡಿದ್ದಾರೆ. ಇಂದು ದೋಹಾದಲ್ಲಿ ನಡೆದ ಫೈನಲ್‌ನಲ್ಲಿ ಬೆಂಗಳೂರಿನ ಪಂಕಜ್ ಅಡ್ವಾಣಿ ಅವರು, ಭಾರತದವರೇ ಆದ ಸೌರವ್ ಕೊಠಾರಿ ಅವರನ್ನು ಸೋಲಿಸುವ ಮೂಲಕ 26ನೇ ಅಂತಾರಾಷ್ಟ್ರೀಯ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ.

2005ರಲ್ಲಿ ಮೊದಲ ಬಾರಿ ವಿಶ್ವ ಪ್ರಶಸ್ತಿ ಗೆದ್ದ ಪಂಕಜ್ ಅಡ್ವಾಣಿ ಅವರು ಈಗ 9ನೇ ಬಾರಿಗೆ ಲಾಂಗ್ ಫಾರ್ಮ್ಯಾಟ್‌ನಲ್ಲಿ ಪ್ರಶಸ್ತಿ ಗೆದ್ದಿದ್ದಾರೆ. ಅಲ್ಲದೆ ಎಂಟು ಬಾರಿ 'ಪಾಯಿಂಟ್ ಫಾರ್ಮ್ಯಾಟ್' ಚಾಂಪಿಯನ್‌ಶಿಪ್‌ನಲ್ಲಿ ಜಯಗಳಿಸಿದ್ದಾರೆ ಮತ್ತು ಒಮ್ಮೆ ವಿಶ್ವ ಟೀಮ್ ಬಿಲಿಯರ್ಡ್ಸ್ ಚಾಂಪಿಯನ್‌ಶಿಪ್ ಗೆದ್ದಿದ್ದಾರೆ.

752 ಕೋಟಿ ಮೌಲ್ಯದ ನ್ಯಾಷನಲ್ ಹೆರಾಲ್ಡ್ ಆಸ್ತಿ ಜಪ್ತಿ ಮಾಡಿದ ಇಡಿ

ನವದೆಹಲಿ: ಮಹತ್ವದ ಬೆಳವಣಿಗೆಯಲ್ಲಿ ನ್ಯಾಷನಲ್ ಹೆರಾಲ್ಡ್ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸುತ್ತಿರುವ ಜಾರಿ ನಿರ್ದೇಶನಾಲಯ ನ್ಯಾಷನಲ್ ಹೆರಾಲ್ಡ್ ಪತ್ರಿಕೆಯ ಮಾಲೀಕತ್ವದ ಸುಮಾರು 752 ಕೋಟಿ ರೂ ಮೌಲ್ಯದ ಆಸ್ತಿ-ಪಾಸ್ತಿಗಳನ್ನು ಜಪ್ತಿ ಮಾಡಿದೆ.

ನ್ಯಾಷನಲ್ ಹೆರಾಲ್ಡ್ ಪತ್ರಿಕೆಯ ಮಾಲೀಕತ್ವ ಹೊಂದಿರುವ ಕಾಂಗ್ರೆಸ್ ಪಕ್ಷದ ಪ್ರವರ್ತಿತ ಯಂಗ್ ಇಂಡಿಯನ್ ವಿರುದ್ಧ ಅಕ್ರಮ ಹಣ ವರ್ಗಾವಣೆ ತನಿಖೆಯ ಭಾಗವಾಗಿ 751.9 ಕೋಟಿ ಮೌಲ್ಯದ ಆಸ್ತಿಯನ್ನು ಜಪ್ತಿ ಮಾಡಿದೆ ಎಂದು ಜಾರಿ ನಿರ್ದೇಶನಾಲಯ ತಿಳಿಸಿದೆ. ಪತ್ರಿಕೆಯ ಪ್ರಕಾಶಕ ಅಸೋಸಿಯೇಟೆಡ್ ಜರ್ನಲ್ಸ್ ಲಿಮಿಟೆಡ್ ಮತ್ತು ಅದರ ಹಿಡುವಳಿ ಕಂಪನಿ ಯಂಗ್ ಇಂಡಿಯನ್ ಸಂಸ್ಥೆ ವಿರುದ್ಧ ಮನಿಲಾಂಡರಿಂಗ್ ತಡೆ ಕಾಯ್ದೆಯಡಿ ತಾತ್ಕಾಲಿಕ ಆದೇಶವನ್ನು ಹೊರಡಿಸಲಾಗಿದೆ ಎಂದು ಕೇಂದ್ರ ತನಿಖಾ ಸಂಸ್ಥೆ ಹೇಳಿಕೆಯಲ್ಲಿ ತಿಳಿಸಿದೆ.

ಅಸೋಸಿಯೇಟೆಡ್ ಜರ್ನಲ್ಸ್ ಲಿಮಿಟೆಡ್ ಭಾರತದ ದೆಹಲಿ, ಮಹಾರಾಷ್ಟ್ರದ ಮುಂಬೈ ಮತ್ತು ಉತ್ತರ ಪ್ರದೇಶದ ಲಖನೌ ನಂತಹ ಅನೇಕ ನಗರಗಳಲ್ಲಿ ಸುಮಾರು 661.69 ಕೋಟಿ ಗಳಷ್ಟು ಸ್ಥಿರಾಸ್ತಿಗಳ ರೂಪದಲ್ಲಿ ಅಪರಾಧದ ಆದಾಯವನ್ನು ಹೊಂದಿದೆ ಮತ್ತು ಯಂಗ್ ಇಂಡಿಯನ್ ಸಂಸ್ಥೆ ಕೂಡ ಅಪರಾಧದ ಆದಾಯವನ್ನು ಹೊಂದಿದೆ.

ಜ್ಞಾನವಾಪಿ ಸಮೀಕ್ಷೆ: ನ.28ರೊಳಗೆ ವರದಿ ಸಲ್ಲಿಸುವಂತೆ ಕೋರ್ಟ್ ಆದೇಶ



ವಾರಣಾಸಿ: ಜ್ಞಾನವಾಪಿ ಮಸೀದಿ ಸಂಕೀರ್ಣದ ವೈಜ್ಞಾನಿಕ ಸಮೀಕ್ಷೆಯನ್ನು ಪೂರ್ಣಗೊಳಿಸಿ ವರದಿ ಸಲ್ಲಿಸಲು ವಾರಣಾಸಿ ನ್ಯಾಯಾಲಯ ಮಂಗಳವಾರ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಗೆ(ಎಎಸ್‌ಐ) ಮತ್ತೆ 10 ದಿನಗಳ ಕಾಲಾವಕಾಶ ನೀಡಿದೆ. ಈ ಹಿಂದೆ ವರದಿ ಸಲ್ಲಿಸಲು ಎಎಸ್‌ಐಗೆ ನ.17ರವರೆಗೆ ಸಮಯ ನೀಡಲಾಗಿತ್ತು. ಆದರೆ ಎಎಸ್‌ಐ ಪರ ವಕೀಲರು 15 ದಿನಗಳ ಕಾಲಾವಕಾಶ ಕೋರಿದ್ದರು. ಇಂದು ಅರ್ಜಿ ವಿಚಾರಣೆ ನಡೆಸಿದ ಜಿಲ್ಲಾ ನ್ಯಾಯಾಧೀಶ ಎ.ಕೆ. ವಿಶ್ವೇಶ್, ನ.28ರೊಳಗೆ ವರದಿ ಸಲ್ಲಿಸುವಂತೆ ಎಎಸ್‌ಐಗೆ ಸೂಚಿಸಿದ್ದಾರೆ. ASI ಇಲ್ಲಿಯ ಕಾಶಿ ವಿಶ್ವನಾಥ ದೇವಸ್ಥಾನದ ಪಕ್ಕದಲ್ಲಿರುವ ಜ್ಞಾನವಾಪಿ ಮಸೀದಿ ಆವರಣದ ವೈಜ್ಞಾನಿಕ ಸಮೀಕ್ಷೆ ನಡೆಸುತ್ತಿದೆ.



ಮೈಸೂರು ಮೆಡಿಕಲ್ ಕಾಲೇಜು (ಎಂಎಂಸಿ) ಸಭಾಂಗಣದಲ್ಲಿ ನ.18ರಂದು ಆಯೋಜಿಸಿದ್ದ ಹಿರಿಯ ನಾಗರಿಕರ ಆಟೋಟ ಸ್ಪರ್ಧೆಯಲ್ಲಿ ಮೈಸೂರಿನ ವಿಜಯನಗರದ ನಿವಾಸಿ ಎನ್.ಶಾಂತಕುಮಾರಿ ಅವರು ಮ್ಯೂಸಿಕಲ್ ಚೇರ್ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನದೊಂದಿಗೆ ಚಿನ್ನದ ಪದಕ ಪಡೆದರು.

ಕಲ್ಯಾಣಿ ಕಬಳಿಸುವ ಹುನ್ನಾರ; ಆರಂಭವಾಗಿದೆ ತ್ಯಾಜ್ಯ ಸುರಿಯುವ ಕಾರ್ಯ!

ಪರಿಸರವಾದಿಗಳ ಬೇಸರ

ಮೈಸೂರು,ನ.21(ಎಸ್‌ಪಿಎನ್)- ಮೈಸೂರಿನ ಜಲಮೂಲಗಳಾದ ಕಲ್ಯಾಣಿಗಳನ್ನು ನೀರು ಸಂಗ್ರಹವಾಗುವಂತೆ ಅಭಿವೃದ್ಧಿಪಡಿಸಿ, ಸಂರಕ್ಷಣೆ ಮಾಡಲು ಜಿಲ್ಲಾಡಳಿತ ಮುಂದಾಗಬೇಕು ಎಂದು ಸಾರ್ವಜನಿಕರಿಂದ ಒತ್ತಾಯಗಳು ಕೇಳಿ ಬರುತ್ತಿವೆ.

ಮೈಸೂರು ಸರಸ್ವತಿಪುರಂನ ಈಜುಕೊಳದ ಪಕ್ಕದಲ್ಲಿರುವ (ಕುಕ್ಕರಹಳ್ಳಿ ಕೆರೆ ರಸ್ತೆ ಮಾರ್ಗದಲ್ಲಿರುವ) ಕಲ್ಯಾಣಿಗೆ ಕಟ್ಟಡ ತ್ಯಾಜ್ಯಗಳನ್ನು ತುಂಬಿಸಿ ಮುಚ್ಚಲು ಪಟ್ಟಭದ್ರ ಹಿತಾಸಕ್ತಿಗಳು ಹೊಂಚು ಹಾಕುತ್ತಿದ್ದು, ಈಗಾಗಲೇ ಸಣ್ಣ ಪ್ರಮಾಣದಲ್ಲಿ ಕಟ್ಟಡ ತ್ಯಾಜ್ಯಗಳನ್ನು ಜನ ಸಂಚಾರ ಇಲ್ಲದ ವೇಳೆ ಟ್ರಾಕ್ಟರ್ ಮೂಲಕ ತುಂಬಿಸುತ್ತಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡಿದರೂ ತ್ಯಾಜ್ಯ ಸುರಿಯುವುದನ್ನು ತಡೆಗಟ್ಟುತ್ತಿಲ್ಲ ಎಂದು ಸರಸ್ವತಿಪುರಂ ನಿವಾಸಿ ಹಾಗೂ ಪರಿಸರವಾದಿ ಲತಾ 'ಮೈಸೂರು ಮಿತ್ರ'ನಲ್ಲಿ ದೂರಿದ್ದಾರೆ.

ಈಗಾಗಲೇ ಹೂಟಗಳ್ಳಿ ನನ್ನೇಶ್ವರ ದೇವಸ್ಥಾನದ ಮುಂಭಾಗದ ಕಲ್ಯಾಣಿಯನ್ನು ರಕ್ಷಿಸಿರುವ ಮಾದರಿಯಲ್ಲೇ ಈ ಕಲ್ಯಾಣಿಯನ್ನು ಜಿಲ್ಲಾಡಳಿತ ಸಂರಕ್ಷಣೆ ಮಾಡಲು





ಮುಂದಾಗಬೇಕು. ನಗರೀಕರಣ ಹೆಚ್ಚಾದಂತೆ ಮೈಸೂರಿನ ಕೆರೆ-ಕಟ್ಟೆ ಹಾಗೂ ಕಲ್ಯಾಣಿಗಳ ಜಾಗದ ಮೇಲೆ ರಿಯಲ್ ಎಸ್ಟೇಟ್ ಮಾಫಿಯಾದವರ ಕಣ್ಣು ಬಿದ್ದಿದೆ. ಜಲಮೂಲಗಳ ಜಾಗವನ್ನು ಕಬಳಿಸುವ ಮೊದಲು ಜಿಲ್ಲಾಡಳಿತ ಕೂಡಲೇ ಎಚ್ಚೆತ್ತು ಸಂರಕ್ಷಣೆ ಮಾಡುವಂತೆ ಒತ್ತಾಯಿಸಿದರು.

ರಾಜ-ಮಹಾರಾಜರ ಕಾಲದಿಂದಲೂ ಈ ಕಲ್ಯಾಣಿ ಸಂರಕ್ಷಣೆಗೊಂಡು ಈ ಕಲ್ಯಾಣಿಯ ನೀರು ಸಾರ್ವಜನಿಕವಾಗಿ ಬಳಕೆಯಾಗುತ್ತಿತ್ತು. ದಿನಕಳೆದಂತೆ ಈ ಕಲ್ಯಾಣಿ ನೀರಿನ ಬಳಕೆ ಕಡಿಮೆ ಆದ ಬಳಿಕ ಪಾಳು ಬಿದ್ದು ನೀರಿನ ಸಂಗ್ರಹ ಕಡಿಮೆಯಾಗಿದೆ. ಮುಂದೊಂದು ದಿನ ಭೂಮಿಯಲ್ಲಿ ಅಂತರ್ಜಲ ಕಡಿಮೆ ಆಗಿ ಬಳಕೆಗೆ ಯೋಗ್ಯವಲ್ಲದ ಬೋರ್‌ವೆಲ್ ನೀರನ್ನು ಅನಿವಾರ್ಯವಾಗಿ ಬಳಕೆ ಮಾಡಬೇಕಾಗುವ ಸನ್ನಿವೇಶ ಎದುರಾಗುವ ಸಂಭವ ಇದೆ ಎಂದರು. ಈ ಕಲ್ಯಾಣಿ ಪಕ್ಕದಲ್ಲಿರುವ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಚಂದವನ-ಔಷಧಿಯ ಗಿಡಮೂಲಿಕೆಗಳ ನರ್ಸರಿಯಲ್ಲಿ ಈಗಾಗಲೇ ಕಲ್ಯಾಣಿಯೊಂದನ್ನು ರಕ್ಷಿಸಿ, ಅಲ್ಲಿನ ನೀರನ್ನು ನರ್ಸರಿ ಗಿಡಗಳಿಗೆ ಉಪಯೋಗಿಸಲಾಗುತ್ತಿದೆ. ಅದರ ಪಕ್ಕದಲ್ಲಿರುವ ಈ ಕಲ್ಯಾಣಿ ಜಾಗವನ್ನು ಸರ್ವೆ ಮಾಡಿಸಿ, ಆಯುರ್ವೇದ ಕಾಲೇಜಿಗೆ ವರ್ಗಾಯಿಸುವಂತೆ ಮುಡಾ ಆಯುಕ್ತರು, ಜಿಲ್ಲಾಧಿಕಾರಿಗಳು ಮತ್ತು ಈ ಭಾಗದ ಜನಪ್ರತಿನಿಧಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಲಿಲ್ಲ. ಒಟ್ಟಿನಲ್ಲಿ ಅಧಿಕಾರಗಳ ಇಚ್ಛಾಶಕ್ತಿ ಕೊರತೆಯಿಂದ ಕಲ್ಯಾಣಿ ಪಾಳುಬಿದ್ದು, ಪಟ್ಟಭದ್ರರ ಹಿತಾಸಕ್ತಿಗಳ ಪಾಲಾಗುವ ಸಂಭವ ಹೆಚ್ಚಾಗಿದೆ ಎಂದು 'ಮೈಸೂರು ಮಿತ್ರ'ನ ಬಳಿ ಬೇಸರ ವ್ಯಕ್ತಪಡಿಸಿದರು.

ನಕ್ಕರೆ ಅದೇ ಸ್ವರ್ಗ

ಒಬ್ಬಾಕೆ : "ನಮ್ಮ ಯಜಮಾನ್ರು ಒಂದೇ ದಿನದಲ್ಲಿ ಡ್ರೈವಿಂಗ್ ಕಲ್ತು ಕಾರು ತಂದು ಮನೆ ಮುಂದೆ ನಿಲ್ಲಿಸ್ತೀನಿ ಅಂತ ಹೇಳಿದ್ರು"

ಗೆಳತಿ : "ಆಮೇಲೆ ಏನಾಯ್ತು?"

ಆಕೆ : "ಡ್ರೈವಿಂಗ್ ಕಲಿಯುವಾಗ ಆಕ್ಸಿಡೆಂಟ್ ಆಗಿ ಮನೆ ಮುಂದೆ ಕಾರು ಬದಲು ಆಂಬುಲೆನ್ಸ್ ತಂದು ನಿಲ್ಲಿಸಿದರು!"

ಮೈಸೂರು ಮಿತ್ರ

ಬುಧವಾರ, 22 ನವೆಂಬರ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಜೀವನದ ಉದ್ದೇಶ ಚೆನ್ನಾಗಿ ಬಾಳುವುದು – ಟಾಲ್‌ಸ್ಟಾಯ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಅನ್ನವಿದ್ದರೆ ಸಾರಿಲ್ಲ, ಸಾರಿದ್ದರೆ ಅನ್ನವಿಲ್ಲ

ನಿಮ್ಮ ಪತ್ರಗಳು

ಮುಂದಿನ ಪೀಳಿಗೆ ಇತಿಹಾಸದ ನೈಜ ರೂಪ ತಿಳಿಯಬೇಕಿದೆ

ಮಾನ್ಯರೆ,

ಮೈಸೂರಿನ ಸಾವರ್ಕರ್ ಪ್ರತಿಷ್ಠಾನದ ವತಿಯಿಂದ ಕಿರು ರಂಗಮಂದಿರದಲ್ಲಿ ಅಡ್ಡಂಡ ಕಾರ್ಯಪ್ಪನವರು ನಿರ್ದೇಶಿಸಿದ 3 ಗಂಟೆಗಳ ಕಾಲ ಪ್ರದರ್ಶನಗೊಂಡ ಕರಿನೀರ ವೀರ ನಾಟಕ ಇತಿಹಾಸವನ್ನು ನೆನಪಿಸಿತು.

ಸ್ವಾತಂತ್ರ್ಯ ದೊರೆತು 77 ವರ್ಷಗಳಾದರೂ ವೀರ ಸಾವರ್ಕರ್ ಅವರ ಜೀವನದ ಸರಿಯಾದ ಇತಿಹಾಸವನ್ನು ಯಾರೂ ನೀಡಿರಲಿಲ್ಲ. 53 ವರ್ಷಗಳ ಕಾಲ ಕರಿನೀರಿನ ಶಿಕ್ಷೆ ಅನುಭವಿಸಿ, ಬ್ರಿಟಿಷರ ವಿರುದ್ಧ ಭಾರತ ಸ್ವಾತಂತ್ರ್ಯಕ್ಕೆ ಹೋರಾಡಿದ ಸಾವರ್ಕರ್ ಅವರ ನಿಜ ಜೀವನದ ಒಂದೊಂದು ಭಾಗಗಳನ್ನು ಅರ್ಥವತ್ತಾಗಿ ಚಿತ್ರಿಸಿ, ನಮ್ಮ ನಾಡಿನಲ್ಲಿ ಸ್ವಾತಂತ್ರ್ಯಕ್ಕೋಸ್ಕರ ಮಡಿದ ವೀರ ಜನರ ಇತಿಹಾಸವನ್ನು ಮನಮುಟ್ಟುವಂತೆ ನಿರ್ದೇಶಿಸಿದ್ದಾರೆ. ಕಲಾವಿದರ ಅಭಿನಯ ಕೂಡ ಮನೋಜ್ಞವಾಗಿದೆ. ಬ್ಯಾರಿಸ್ಟರ್ ಆಗಿದ್ದರೂ ಸಹ ಭಾರತದ ಸ್ವಾತಂತ್ರ್ಯಕ್ಕೆ ಇಡೀ ಕುಟುಂಬವನ್ನು ಬಲಿಕೊಟ್ಟ ವೀರ ಸಾವರ್ಕರ್ ಅವರ ನಿಜ ಜೀವನವನ್ನು ಮತ್ತು ಅಂದಿನ ಭಾರತ ಸರ್ಕಾರ ಸಾವರ್ಕರ್ ಅವರನ್ನು ನಡೆಸಿಕೊಂಡ ರೀತಿ, ಗಾಂಧಿ ಹಾಗೂ ನೆಹರೂ ಅವರ ನಿಜ ಬಣ್ಣವನ್ನು ಮಾರ್ಮಿಕವಾಗಿ ಅಭಿನಯಿಸಿ ತೋರಿಸಿದ್ದಾರೆ. ರಂಗಾಸಕ್ತರು ಸ್ವಾತಂತ್ರ್ಯ ಪ್ರೇಮಿಗಳು ಈ ನಾಟಕವನ್ನು ತಪ್ಪದೇ ನೋಡಬೇಕು. ಅಡ್ಡಂಡ ಕಾರ್ಯಪ್ಪನವರ ಶ್ರಮವನ್ನು ಮೆಚ್ಚಲೇಬೇಕು. ಇನ್ನು ಎಷ್ಟೋ ಸ್ವಾತಂತ್ರ್ಯ ವೀರರ ಕಥೆಗಳು ಇತಿಹಾಸದ ಪುಟಗಳಲ್ಲಿ ಕಮರಿ ಹೋಗಿವೆ. ಮುಂದಿನ ಪೀಳಿಗೆಗೆ ನಮ್ಮ ಇತಿಹಾಸ ನೈಜ ರೂಪ ತಿಳಿಯಬೇಕಿದೆ. ಒಟ್ಟಾರೆ ಈ ನಾಟಕ ಜನರ ಹೃದಯವನ್ನು ಮಾರ್ಮಿಕವಾಗಿ ತಟ್ಟಿದೆ.

–ಮಜೂರು ರಘುವೀರ ಪುರಾಣಿಕ, ಸಿದ್ಧಾರ್ಥನಗರ, ಮೈಸೂರು.

ಅನ್ನಭಾಗ್ಯ ತಲಾ 5 ಕೆಜಿ ಅಕ್ಕಿಯೇ ಸಾಕು

ಮಾನ್ಯರೆ,

ಮೈಸೂರು ಜಿಲ್ಲೆಯಾದ್ಯಂತ "ಅನ್ನಭಾಗ್ಯ" ಅಕ್ಕಿ ಮಾರಾಟ ದಂಧೆ ವ್ಯಾಪಕವಾಗಿರುವ ಬಗ್ಗೆ ಮಾಧ್ಯಮಗಳಲ್ಲಿ ವರದಿಯಾದ ಹಿನ್ನೆಲೆಯಲ್ಲಿ ಮಾರುವವರು ಹಾಗೂ ಕೊಳ್ಳುವವರಿಗೆ ಎಚ್ಚರಿಕೆ ನೀಡಿರುವ ಜಿಲ್ಲಾಧಿಕಾರಿಗಳು, ಪಡಿತರ ಕಾರ್ಡ್ ರದ್ದು ಸೇರಿದಂತೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದ್ದಾರೆ.

ಕಾಂಗ್ರೆಸ್ ಪಕ್ಷದ 5 ಗ್ಯಾರಂಟಿಗಳಲ್ಲಿ ಪ್ರತಿ ಬಿಪಿಎಲ್ ಸದಸ್ಯನಿಗೂ 10 ಕೆಜಿ ಅಕ್ಕಿ ನೀಡಲಾಗುವುದು. ಈಗ ನೀಡಲಾಗುತ್ತಿರುವ 5 ಕೆಜಿ ಅಕ್ಕಿಯನ್ನು ಕೇಂದ್ರ ಸರ್ಕಾರ ನೀಡುತ್ತಿರುವುದೆಂದು ಬಿಜೆಪಿಯವರ ವಾದ. ಇದೇ ಕಾರಣಕ್ಕೆ ತಮ್ಮದೂ 5 ಕೆಜಿ ಅಕ್ಕಿ ಕೊಡಲು ಕಾಂಗ್ರೆಸ್ ನಿರ್ಧರಿಸಿತು. ಆದರೆ ಅವರೆಣಿಸಿದಂತೆ ತನ್ನ ದಾಸ್ತಾನಿನಿಂದ ರಿಯಾಯಿತಿ ದರದಲ್ಲಿ ಅಕ್ಕಿ ಕೊಡಲು ಕೇಂದ್ರ ಸರ್ಕಾರ ರಾಜಕೀಯ ಕಾರಣವೂ ಸೇರಿ ಕೊಡಲು ನಿರಾಕರಿಸಿದ ಮೇಲೆ ಅಕ್ಕಿ ಕಡಿಮೆ ದರಕ್ಕೆ ಎಲ್ಲೂ ದೊರೆಯದಿದ್ದ ಕಾರಣ, ಸರ್ಕಾರ ಸದ್ಯ ಅದೇ ದರದ ಮೊತ್ತವನ್ನು ಬಿಪಿಎಲ್ ಕಾರ್ಡ್‌ದಾರರ ಖಾತೆಗೆ ಜಮೆ ಮಾಡುತ್ತಿದೆ.

ಇನ್ನು ಬಿಪಿಎಲ್ ಕಾರ್ಡ್‌ನ ಪ್ರತಿ ಸದಸ್ಯನಿಗೂ ತಲಾ 5 ಕೆಜಿ ಅಕ್ಕಿಯಂತೆ, ಒಂದು ಕುಟುಂಬದಲ್ಲಿ ನಾಲ್ವರು ಸದಸ್ಯರಿದ್ದರೆ ಆ ಕುಟುಂಬಕ್ಕೆ 20 ಕೆಜಿ ಅಕ್ಕಿ ದೊರೆಯುತ್ತದೆ. (ಒಂದು ವೇಳೆ 10 ಕೆಜಿಯಂತೆ ನೀಡಿದರೆ 40 ಕೆಜಿ ಆಗುತ್ತದೆ.) ಆದರೆ ಈ 20 ಕೆಜಿ ಅಕ್ಕಿಯನ್ನೇ ಬಹುತೇಕ ಬಿಪಿಎಲ್ ಕುಟುಂಬದವರು ಬಳಸದೆ ಅದನ್ನು ಕೇವಲ ದೋಸೆ, ಇಡ್ಲಿ, ರೊಟ್ಟಿಗೆ ಬೇಕಾಗುವಷ್ಟನ್ನು ಮಾತ್ರ ತಾವು ಇಟ್ಟುಕೊಂಡು ಉಳಿದ ಅಕ್ಕಿಯನ್ನು ಕಾಳಸಂತೆಯಲ್ಲಿ ಮಾರಾಟ ಮಾಡುತ್ತಾರೆ ಇದು ವಾಸ್ತವ.

ಇನ್ನು ತಮಗೆ ಲಭ್ಯವಾದ ಅಕ್ಕಿಯನ್ನು ಪೂರ್ತಿಯಾಗಿ ಊಟಕ್ಕೆ ಬಳಸದಿರಲು ಮತ್ತೊಂದು ಕಾರಣ ಈ ಅಕ್ಕಿ ದಪ್ಪವಾಗಿರುವುದು. ಅಕ್ಕಿಯನ್ನು ತಿಂಗಳುಗಟ್ಟಲೇ ದಾಸ್ತಾನು ಮಾಡಲು ಆಹಾರ ಇಲಾಖೆ ಸಿಂಪಡಿಸುವ ಔಷಧಗಳ ಪರಿಣಾಮ ಹಾಗೂ ಸರಿಯಾಗಿ ದಾಸ್ತಾನು ಮಾಡದಿರುವುದರಿಂದ ಹಾಗೂ ವರ್ಷಗಟ್ಟಲೆ ದಾಸ್ತಾನು ಮಾಡಿರುವ ಕಾರಣ ಮುಗ್ಗಲು ಬಂದು ಅಕ್ಕಿ ವಾಸನೆ ಬರುವುದು. ಅನ್ನ ಮಾಡಿದರೆ ಅದು ಹೆಚ್ಚು ಕಾಲ ಇರದೆ ಹಾಳಾಗುವುದು ಮುಖ್ಯ ಕಾರಣವಾದರೆ, ಇನ್ನೊಂದು ಕಾರಣ ಈಗ ದುಡಿಯುವ ಮಂದಿಯ ವೇತನ, ಕೂಲಿಯೂ ಹೆಚ್ಚಿದ್ದು, ಅವರು ಕೂಡ ರೇಷನ್ ಅಕ್ಕಿಯನ್ನು ದೋಸೆ, ಇಡ್ಲಿಗೆ ಬೇಕಾಗುವಷ್ಟನ್ನು ಮಾತ್ರ ಇಟ್ಟುಕೊಂಡು ಉಳಿದ ಅಕ್ಕಿಯನ್ನು ಮಾರಾಟ ಮಾಡುತ್ತಾರೆ. ಮೊನ್ನೆ ನಮ್ಮ ಮನೆಯಲ್ಲಿರುವ ಸ್ಥಳೀಯ ಮರದ ಸೋಫಾ ಸೆಟ್ ಅನ್ನು ಪಾಲಿಶ್ ಮಾಡಲು ಬಂದಿದ್ದ ವ್ಯಕ್ತಿಯೊಬ್ಬರು, ನನ್ನ ಮಗ ಖಾಸಗಿ ಕಂಪನಿಯೊಂದರಲ್ಲಿ ಕೆಲಸ ಮಾಡುತ್ತಾನೆ. ತಿಂಗಳಿಗೆ 30 ಸಾವಿರ ಸಂಬಳ ತರುತ್ತಾನೆ. ನಾವು ಊಟಕ್ಕೆ 60 ರೂ. ದರದ ಅಕ್ಕಿಯನ್ನು ಬಳಸುತ್ತೇವೆ. ರೇಷನ್ ಅಕ್ಕಿಯನ್ನು ದೋಸೆ, ಇಡ್ಲಿಗೆ ಮಾತ್ರ ಬಳಸುತ್ತೇವೆ ಎಂದು ಹೇಳಿದರು.

ಉಚಿತ ಅನ್ನಭಾಗ್ಯ ಯೋಜನೆ ಜಾರಿಯಾದ ದಿನಾಂಕ ಘೋಷಣೆಯಾದ ದಿನದಿಂದಲೇ ಕಿರಾಣಿ ಅಂಗಡಿ, ಮಾಲ್‌ಗಳಲ್ಲಿನ ಅಕ್ಕಿಯ ಬೆಲೆ ಗಗನನೌಕೆ ಮಂಗಳ ಯಾನ ಮಾಡಲು ಪ್ರಯಾಣಿಸುವಂತೆ ಯಾನ ಆರಂಭಿಸಿದೆ! ಅಂದು 42–45 ರೂ.ಗೆ ದೊರೆಯುತ್ತಿದ್ದ ಸೋನಾ ಮಸೂರಿ ಅಕ್ಕಿ ಬೆಲೆ ಇಂದು 57–60 ತಲುಪಿದೆ. 32–35ಕ್ಕೆ ಅಂಗಡಿಗಳಲ್ಲಿ ದೊರೆಯುತ್ತಿದ್ದ ದೋಸೆ –ಇಡ್ಲಿ ಅಕ್ಕಿ ಇಂದು ರೂ 50 ಕ್ಕೇರಿದೆ. 10 ಕೆಜಿ ಅಕ್ಕಿ ನೀಡದಿದ್ದರೂ ಕೇವಲ ಅನುಷ್ಠಾನದ ಘೋಷಣೆಯ ಪರಿಣಾಮವನ್ನು ಕಾಳ ಸಂತೆಕೋರರು ಅಕ್ರಮ ದಾಸ್ತಾನುದಾರರು ಉಪಯೋಗಿಸಿಕೊಂಡು ಫಲಾನುಭವಿಗಳಲ್ಲದವರನ್ನು ದೋಚುವಂತಾಗಿದೆ. ಇದು ಅನ್ನಭಾಗ್ಯ ಕಾರ್ಯಕ್ರಮದ ಮತ್ತೊಂದು ಕರಾಳ ಮುಖ.


–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

ವಿಶ್ವಕಪ್‌ಗೆ ಅವಮಾನ

ಮಾನ್ಯರೆ,

ವಿಶ್ವಕಪ್ ಗೆದ್ದ ಬಳಿಕ ಆಸ್ಟ್ರೇಲಿಯಾ ಆಟಗಾರ ಮಿಚೆಲ್ ಮಾರ್ಷ್ ಕೈಯಲ್ಲಿ ಬಿಯರ್ ಹಿಡಿದು ಕಾಲನ್ನು ವಿಶ್ವಕಪ್ ಮೇಲೆ ಇಟ್ಟುಕೊಂಡು ಫೋಟೋ ಪೋಸ್ ಕೊಟ್ಟಿರುವುದು ನಿಜಕ್ಕೂ ಆಘಾತಕಾರಿ. ಇದು ಆ ಆಟಗಾರನ ಅಹಂಕಾರವನ್ನು ತೋರಿಸುತ್ತದೆ. ಜೊತೆಗೆ ಆ ತಂಡದ ನಾಯಕ ಕಮಿನ್ಸ್ ಈ ಫೋಟೋವನ್ನು ಗರ್ವದಿಂದ ಹಂಚಿಕೊಂಡಿರುವುದು ತಂಡದ ಹೀನ ಸಂಸ್ಕೃತಿ ತೋರಿಸುತ್ತದೆ. ಆಸ್ಟ್ರೇಲಿಯಾ ತಂಡದ ಆಟಗಾರರಿಗೆ ವಿಶ್ವಕಪ್ ಮೇಲೆ ಯಾವುದೇ ಗೌರವ ಇಲ್ಲದಿದ್ದರೆ ಆ ಕಪ್ ಇಟ್ಟುಕೊಳ್ಳುವ ಯೋಗ್ಯತೆಯೂ ಆ ತಂಡಕ್ಕಿಲ್ಲ. ಆದ್ದರಿಂದ ಕ್ರಿಕೆಟ್ ಆಸ್ಟ್ರೇಲಿಯಾ ವಿಶ್ವಕಪ್ ಅನ್ನು ವಿಶ್ವ ಕ್ರಿಕೆಟ್ ಸಂಸ್ಥೆಗೆ ವಾಪಸ್ ಕೊಟ್ಟು ಇರುವ ಅಲ್ಪ ಸ್ವಲ್ಪ ಮರ್ಯಾದೆಯನ್ನಾದರು ಉಳಿಸಿಕೊಳ್ಳುವುದು ಒಳಿತು.

–ಕೇಶವಮೂರ್ತಿ, ವಿಜಯನಗರ, ಮೈಸೂರು.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು

ಸಂಸ್ಕೃತಿ ಚಿಂತನಾ

ಧಮ್ಮಪದ : ಒಂದು ಅವಲೋಕನ

ಬೌದ್ಧ ಧರ್ಮದಲ್ಲಿ ಹೆಚ್ಚು ಗೌರವಕ್ಕೆ ಪಾತ್ರವಾಗಿರುವ ಗ್ರಂಥವೆನಿಸಿರುವ ಧಮ್ಮಪದ (=ಧರ್ಮಪದ) ಚಿಕ್ಕದಾದರೂ ಉದಾತ್ತ ವಿಚಾರಗಳಿಂದ ತುಂಬಿರುವ ಪುಸ್ತಕ. ಭಗವದ್ಗೀತೆಯಲ್ಲಿ ಏಳು ನೂರು ಶ್ಲೋಕಗಳಿವೆ. ಧಮ್ಮಪದದಲ್ಲಿರುವುದು (423) ನಾನೂರ ಇಪ್ಪತ್ತಮೂರು ಶ್ಲೋಕಗಳು ಮಾತ್ರ. ಧಮ್ಮಪದದ ಭಾಷೆ ಈಗ ಪಾಲೀ ಎಂದು ಪ್ರಸಿದ್ಧವಾಗಿರುವ ಒಂದು ಹಳೆಯ ಪ್ರಾಕೃತ ಭಾಷೆ. ಇದರಲ್ಲಿರುವ ಶ್ಲೋಕಗಳು ಅಥವಾ ಪದ್ಯಗಳು ಬುದ್ಧನೇ ಹೇಳಿದ ಮಾತುಗಳೆಂಬುದು ಬೌದ್ಧರ ನಂಬಿಕೆ.

ಬೌದ್ಧ ಧರ್ಮದ ಪವಿತ್ರ ಗ್ರಂಥಗಳನ್ನು ತ್ರಿಪಿಟಕಗಳೆಂದು ಕರೆಯುತ್ತಾರೆ. ಮೂರು ಬುಟ್ಟಿಗಳಲ್ಲಿ ಅಥವಾ ಭಾಗಗಳಲ್ಲಿ ಸಂಗ್ರಹಿಸಲ್ಪಟ್ಟ ಗ್ರಂಥಗಳೆಂದು ಇದರ ಅರ್ಥ. ಈ ಮೂರು ಪಿಟಕಗಳು ಯಾವುವೆಂದರೆ 1) ವಿನಯ ಪಿಟಕ, 2) ಸುತ್ತ ಪಿಟಕ 3) ಅಭಿಧಮ್ಮ ಪಿಟಕ. ವಿನಯ ಪಿಟಕದಲ್ಲಿ ಬೌದ್ಧ ಸಂಘದಲ್ಲಿರುವ ಸಂನ್ಯಾಸಿಗಳು ಪಾಲಿಸಬೇಕಾದ ನಿಯಮಗಳನ್ನೂ ಶಿಸ್ತನ್ನೂ ಹೇಳಲಾಗಿದೆ. ಇದರಲ್ಲಿ ಸುತ್ತವಿಭಂಗ, ಪಾರಜಿಕ, ಪಚಿತ್ತಾಯ, ಕಂಧಕ, ಮಹಾವಗ್ಗ, ಚುಲ್ಲವಗ್ಗ, ಪರಿವಾರ ಎಂಬ ವಿಭಾಗಗಳಿವೆ.

ಸುತ್ತ ಪಿಟಕವು ದೊಡ್ಡದಾಗಿದ್ದು, ಅದರಲ್ಲಿ ಐದು ನಿಕಾಯಗಳು (ಅಥವಾ ವಿಭಾಗಗಳು) ಇವೆ. ಅವನ್ನು ದೀರ್ಘ ನಿಕಾಯ, ಮಜ್ಝಿಮ ನಿಕಾಯ, ಸಂಯುತ್ತ ನಿಕಾಯ, ಅಂಗುತ್ತರ ನಿಕಾಯ, ಖುದ್ದಕ ನಿಕಾಯ ಎಂದು ಕರೆದಿದ್ದಾರೆ. ಖುದ್ದಕ ನಿಕಾಯದಲ್ಲಿ ಧಮ್ಮಪದವೂ ಸೇರಿದೆ.

ಅಭಿಧಮ್ಮ ಪಿಟಕವು ಧರ್ಮದ ವಿಚಾರವನ್ನೂ ಚರ್ಚೆಯನ್ನೂ ಒಳಗೊಂಡಿದೆ. ಧಮ್ಮಸಂಗನಿ, ವಿಭಂಗ, ಕಥಾವತ್ಥು, ಪುಗ್ಗಲ ಪಣ್ಣತಿ, ಧಾತುಕಥಾ, ಯಮಕ ಮತ್ತು ಪತ್ಥಾನ ಎಂಬ ಭಾಗಗಳನ್ನು ಅದರಲ್ಲಿ ಕಾಣಬಹುದು.

ಧಮ್ಮಪದಕ್ಕೆ ಬುದ್ಧಘೋಷನೆಂಬ ವಿದ್ವಾಂಸನು ವಿಸ್ತೃತವಾದ ವ್ಯಾಖ್ಯೆಯನ್ನು ಬರೆದಿದ್ದಾನೆಂದು ಹೇಳುತ್ತಾರೆ. ಇದರ ವ್ಯಾಖ್ಯೆಯ ರಚನೆ ಕ್ರಿಶ ಐದನೇ ಶತಮಾನದಲ್ಲಿ ಆಯಿತೆಂದು ಇತಿಹಾಸಕಾರರು ಹೇಳುತ್ತಾರೆ. ಪಾಲಿ ಧರ್ಮಪದದಂತೆ ಚೀನಿ ಭಾಷೆಯ ಧರ್ಮಪದವೂ ಇದೆ. ಅದರಲ್ಲಿ ಏಳುನೂರ ಅರವತ್ತು ಶ್ಲೋಕಗಳಿವೆ ಎಂದು ಹೇಳಲಾಗಿದೆ. ಟಿಬೆಟಿಯನ್ ಭಾಷೆಗೆ ಅನುವಾದಗೊಂಡಿದ್ದ ಧಮ್ಮಪದದಲ್ಲಿ ಸುಮಾರು ಒಂದು ಸಾವಿರ ಶ್ಲೋಕಗಳು ಇದ್ದವಂತೆ.

ಧಮ್ಮಪದವನ್ನು ಇಂಗ್ಲಿಷಿಗೆ ಅನುವಾದಿಸಿದವನು ಮ್ಯಾಕ್ಸ್ ಮುಲ್ಲರ್ (1881). ಆಮೇಲೆ ಅನೇಕ ಅನುವಾದಗಳು ಇಂಗ್ಲಿಷಿನಲ್ಲೂ ಇತರ ಯೂರೋಪಿಯನ್ ಭಾಷೆಗಳಲ್ಲೂ ಆಮೇಲೆ ಅನೇಕ ಭಾರತೀಯ ಭಾಷೆಗಳಲ್ಲೂ ಬಂದಿವೆ. ಅಶ್ವತ್ಥ ನಾರಾಯಣರಾವ್ 1908ರಲ್ಲೂ, ಜೆ.ಪಿ.ರಾಜರತ್ನಂ 1945ರಲ್ಲೂ ಕನ್ನಡದಲ್ಲಿ ಅನುವಾದ ಮಾಡಿದರೆಂದು ತಿಳಿದು ಬಂದಿದೆ. ನಾನು ಈ ಅನುವಾದಗಳನ್ನು ನೋಡಿಲ್ಲ.

ಈಗ ಧಮ್ಮಪದದ ಕೆಲವು ಪದ್ಯಗಳನ್ನು ನೋಡೋಣ.

ಮನೋಪುಬ್ಬಂಗಮಾ ಧಮ್ಮಾ
ಮನೋಸೇಟ್ಠಾ ಮನೋಮಯಾ।
ಮನಸಾ ಚೇ ಪದುಟ್ಠೇನ ಭಾಸತಿ ವಾ ಕರೋತಿ ವಾ ।
ತತೋ ನಂ. ದುಕ್ಖಮನ್ವೇತಿ ಚಕ್ಕಂ ವ ವಹತೋ ಪದಮ್ ।

ಧರ್ಮಗಳು ಮನಸ್ಸನ್ನು ಅನುಸರಿಸಿ ಹೋಗುತ್ತವೆ. ಮನಸ್ಸೇ ಅವುಗಳ ಮುಖ್ಯ ಕಾರಣ. ಮನೋಮಯವೇ ಆಗಿರುವುವು ಧರ್ಮಗಳು. ದುಷ್ಟ ಮನಸ್ಸಿನಿಂದ ಮನುಷ್ಯನು ಮಾತನಾಡಿದರೆ ಅಥವಾ ಯಾವುದೇ ಕಾರ್ಯವನ್ನು ಮಾಡಿದರೆ, ಚಕ್ರವನ್ನು (ರಥವನ್ನು) ಹೊತ್ತ ಅಥವಾ ಎಳೆಯುವ ಪ್ರಾಣಿಗೆ ಆಗುವಂತಹ ದುಃಖವು ಅನುಸರಿಸಿ ಬರುತ್ತದೆ.

ಇಲ್ಲಿ ಎಲ್ಲ ಕಾರ್ಯವನ್ನು ಒಳ್ಳೆಯ ಮನಸ್ಸಿನಿಂದ ಎಲ್ಲರ ಒಳಿತಿಗಾಗಿ ಮಾಡಬೇಕು ಎನ್ನುವ ತತ್ವವನ್ನು ತಿಳಿಸಲಾಗಿದೆ. ಕೆಟ್ಟ ಮನಸ್ಸಿನಿಂದ ಪರರಿಗೆ ಕೇಡಾಗಲೆಂದು ಮಾತನಾಡುವುದು ಅಥವಾ ಕೆಲಸ ಮಾಡುವುದು ದುಃಖವನ್ನು ತರುತ್ತದೆ. ಗಾಡಿಯನ್ನು ಎಳೆಯುವ ಎತ್ತಿಗೋ ಕತ್ತೆಗೋ ಹೇಗೆ ನೋವಾಗುವುದೋ ಹಾಗೆ ದುಷ್ಟ ಕಾರ್ಯವನ್ನು ಮಾಡುವ ಕೇಡುಗನಿಗೂ ದುಃಖವು ಬರುವುದು ನಿಶ್ಚಿತ. ಆದ್ದರಿಂದ ಧರ್ಮಾಧರ್ಮಗಳು ಕರ್ತೃವಿನ ಮನಸ್ಸನ್ನು ಅವಲಂಬಿಸುತ್ತವೆ ಎಂಬ ತತ್ವವನ್ನು ಇಲ್ಲಿ ಪ್ರತಿಪಾದಿಸಲಾಗಿದೆ. ಇದೇ ಧಮ್ಮಪದದ ಮೊದಲನೆಯ ಶ್ಲೋಕ.

ವೈರವು ಮತ್ತೆ ವೈರಕ್ಕೆ ಕಾರಣವಾಗುತ್ತದೆ. ವ್ಯಕ್ತಿಗಳ ಮಧ್ಯೆ ಅಥವಾ ರಾಷ್ಟ್ರಗಳ ಮಧ್ಯೆ ವೈರ ಇರಬಾರದು ಎಂದು ಧಮ್ಮಪದವು ಉಪದೇಶಿಸುತ್ತದೆ.

ನಹಿ ವೇರೇನ ವೇರಾನಿ ಸಮ್ಮಂತೀಧ ಕುದಾಚನಂ।
ಅವೇರೇನ ಚ ಸಮ್ಮಂತಿ ಏಸ ಧಮ್ಮೋ ಸನಾತನೋ॥

ವೈರದಿಂದ ವೈರಗಳು ಎಂದೂ ಶಾಂತವಾಗುವುದಿಲ್ಲ. ಅವೈರ (ಸ್ನೇಹ)ದಿಂದಲೇ ವೈರವು ಶಾಂತವಾಗುವುದು. ಇದು ಸನಾತನವಾದ ಎಂದರೆ ಎಲ್ಲ ಕಾಲದಲ್ಲೂ ಇರುವ ಧರ್ಮ.

ಮಾರ ಎಂಬ ಶಬ್ದದ ಒಂದು ಅರ್ಥ ಮನ್ಮಥ. ಆದರೆ ಬೌದ್ಧ ಧರ್ಮದಲ್ಲಿ ಮಾರ ಶಬ್ದಕ್ಕೆ ಮುಕ್ತಿ ವಿರೋಧಿಯಾದ



ಪ್ರಬಲ ಶತ್ರು ಎಂಬ ಅರ್ಥವಿದೆ. ಈ ಮಾರನ ಉಪಟಳಕ್ಕೆ ಯಾರು ತುತ್ತಾಗುತ್ತಾರೆ ಎಂಬುದನ್ನು ಧಮ್ಮಪದವು ಹೇಳಿದೆ.

ಸುಭಾನುಪಸ್ಸಿಂ ವಿಹರಂತಂ ಇಂದ್ರಿಯೇಸು ಅಸಂವ್ರತಂ ।
ಭೋಜನಮ್ಹಿ ಅಮತ್ತಞ್ಞುಂ ಕುಸೀತಂ ಹೀನವೀರಿಯಂ ।
ತಂ ವೇ ಪಸಹತಿ ಮಾರೋ ವಾತೋ ರುಕ್ಖಂ ವ ದುಬ್ಬಲಂ ॥

(ರೂಪ ರಸಗಂಧ ಶಬ್ಧ ಸ್ಪರ್ಶಗಳಲ್ಲಿ) ಸುಖವಿದೆ ಎಂದು ಭಾವಿಸುವವನನ್ನು, ಇಷ್ಟ ಬಂದಂತೆ ವಿಹರಿಸುವವನನ್ನು, ಇಂದ್ರಿಯಗಳಲ್ಲಿ ಹತೋಟಿ ಇಟ್ಟುಕೊಳ್ಳದವನನ್ನು ಊಟದಲ್ಲಿ ಮಿತಿಯನ್ನು ತಿಳಿಯದೆ ತಿನ್ನುವವನನ್ನು, ಸೋಮಾರಿಯನ್ನು ಹಾಗೂ ಶಕ್ತಿಹೀನನನ್ನು ದುರ್ಬಲವಾದ ಮರವನ್ನು ಬಲವಾಗಿ ಬೀಸುವ ಗಾಳಿಯು ಬೀಳಿಸುವಂತೆ ಮಾರನು ಕೆಡವುತ್ತಾನೆ.

ಮಾನವನನ್ನು ಕೆಳಗೆ ಬೀಳಿಸಲು ಮಾರನು ಸದಾ ಯತ್ನಿಸುತ್ತಿರುತ್ತಾನೆ. ಮೇಲೆ ಹೇಳಿದ ದೌರ್ಬಲ್ಯಗಳಿರುವ ಮನುಷ್ಯನನ್ನು ಕೆಡವಿ ಉರುಳಿಸುವುದು ಮಾರನಿಗೆ ಸುಲಭ ಎಂದು ಈ ಪದ್ಯದಲ್ಲಿ ಹೇಳಲಾಗಿದೆ. ಇದಕ್ಕೆ ವಿರುದ್ಧವಾಗಿ ಇಂದ್ರಿಯ ನಿಗ್ರಹ ಮಾಡಿದವರನ್ನು, ಭೋಜನದಲ್ಲಿ ಮಿತಿಯನ್ನು ಮೀರದವರನ್ನು, ಶ್ರದ್ಧೆಯನ್ನುಳ್ಳವರನ್ನು, ಸದಾ ಕ್ರಿಯಾಶೀಲರನ್ನು ಮಾರನು ಕೆಡವಲಾರನು ಎಂದು ತಿಳಿಸಿ ಧಮ್ಮಪದವು ಬದುಕಿನ ದಾರಿಯನ್ನು ತಿಳಿಸುತ್ತದೆ.

ಪುಪ್ಫ ವಗ್ಗ (ಪುಷ್ಪ ವರ್ಗ) ಎಂಬ ಅಧ್ಯಾಯದಲ್ಲಿ ಹೂವುಗಳನ್ನು ಉಪಮಾನವನ್ನಾಗಿ ತೆಗೆದುಕೊಂಡು ಅನೇಕ ನೀತಿಗಳನ್ನು ತಿಳಿಸಲಾಗಿದೆ. ಹೂವಿನ ಪರಿಮಳಕ್ಕಿಂತ ಸತ್ಪುರುಷನ ಎಂದರೆ ಒಳ್ಳೆಯ ಮನುಷ್ಯನ ಕೀರ್ತಿಯು ಎಲ್ಲ ದಿಕ್ಕುಗಳಲ್ಲೂ ಹರಡುವ ಶಕ್ತಿಯನ್ನು ಹೊಂದಿದೆ ಎಂದು ಅಲ್ಲಿ ಹೇಳಲಾಗಿದೆ.

ನ ಪುಪ್ಫ ಗಂಧೋ ಪಟಿವಾತಮೇತಿ
ನ ಚಂದನಂ ತಗರಂ ಮಲ್ಲಿಕಾ ವಾ ।
ಸತಂ ಚ ಗಂಧೋ ಪಟಿವಾತಮೇತಿ
ಸಬ್ಬಾ ದಿಪಾ ಸಪ್ಪುರಿಸೋ ಪವಾತಿ॥

ಹೂವಿನಿಂದ ಗಂಧವು ಬೀಸುವ ಗಾಳಿಗೆ ವಿರುದ್ಧವಾಗಿ ಹರಡಲಾರದು. ಶ್ರೀಗಂಧ, ಅಗುರು, ಮಲ್ಲಿಗೆ ಇತ್ಯಾದಿಗಳ ಪರಿಮಳವೂ ಗಾಳಿ ಬೀಸುವ ದಿಕ್ಕಿಗೆ ವಿರುದ್ಧವಾಗಿ ಪಸರಿಸಲಾರದು. ಆದರೆ ಸತ್ಪುರುಷರ ಕೀರ್ತಿ ಸೌರಭವು ಗಾಳಿ ಬೀಸುವ ದಿಕ್ಕಿನಲ್ಲೂ, ಅದಕ್ಕೆ ವಿರುದ್ಧವಾದ ದಿಕ್ಕಿನಲ್ಲೂ ಹರಡುತ್ತದೆ. ಸತ್ಪುರುಷನ ಪ್ರಭಾವ ಎಲ್ಲ ದಿಕ್ಕುಗಳಲ್ಲೂ ಪಸರಿಸುತ್ತದೆ.

ಬಾಲವಗ್ಗದಲ್ಲಿ ಬಾಲರಿಗೆ, ಎಂದರೆ ಸತ್ಯವನ್ನು ಅರಿಯಲಾರದ ಮೂಢರಿಗೆ ಸದಾ ಸಂಸಾರವೇ ಅವರಿಗೆ ಮುಕ್ತಿ ದುರ್ಲಭ ಎಂಬ ನೀತಿಯನ್ನು ಪ್ರತಿಪಾದಿಸಲಾಗಿದೆ.

ದೀಘಾ ಜಾಗರತೋ ರತ್ತಿ ದೀಘಂ ಸಂತಸ್ಸ ಯೋಜನಂ ।
ದೀಘೋ ಬಾಲಾನು ಸಂಸಾರೋ ಸದ್ಧಮ್ಮಂ ಅವಿಜಾನತಂ ॥

ಎಚ್ಚರವಾಗಿರುವವನಿಗೆ (ನಿದ್ದೆಯೇ ಬರದಿದ್ದವನಿಗೆ) ರಾತ್ರಿಯು ದೀರ್ಘವಾಗಿ ತೋರುತ್ತದೆ. ಬಳಲಿದವನಿಗೆ ಎಲ್ಲ ಕೆಲಸವೂ ದೀರ್ಘವಾಗಿರುವಂತೆ ಕಾಣಿಸುತ್ತದೆ. ಅಜ್ಞಾನಿಗಳಿಗೆ ಸಂಸಾರವು ಕೊನೆಯಿಲ್ಲದಷ್ಟು ಉದ್ದವಾಗಿ ಬೆಳೆಯುತ್ತದೆ. ಏಕೆಂದರೆ ಅವರಿಗೆ ಸತ್ಯವಾದ ಧರ್ಮದ ಜ್ಞಾನ ಇರುವುದಿಲ್ಲ.

ಅಜ್ಞಾನಿಗಳು 'ನನ್ನ ಮಕ್ಕಳು' 'ನನ್ನ ಹಣ' ಎಂಬ ಭ್ರಾಂತಿಯಲ್ಲೇ ಕಾಲವನ್ನು ಸವೆಸುತ್ತಾರೆ. ಅದರಿಂದಲೇ ಕೆಡುತ್ತಾರೆ ಎಂಬ ತತ್ವವನ್ನು ಈ ವರ್ಗದ ಒಂದು ಪದ್ಯವು ತಿಳಿಸುತ್ತದೆ.

ಪುತ್ತಾ ಮತ್ಥಿ ಧನಂ ಮತ್ಥಿ ಇತಿ ಬಾಲೋ ವಿಹಞ್ಞತಿ।
ಅತ್ತಾ ಹಿ ಅತ್ತನೋ ನತ್ಥಿ ಕುತೋ ಪುತ್ತಾ ಕುತೋ ಧನಂ ।

ನನಗೆ ಪುತ್ರರಿದ್ದಾರೆ. ನನ್ನ ಬಳಿ ಹಣವಿದೆ ಎಂದೇ ತಿಳಿದುಕೊಂಡು ಮೂಢನು ಕಷ್ಟಪಟ್ಟು ಹಾಳಾಗುತ್ತಾನೆ. ವಸ್ತುತಃ ಹೇಳಬೇಕೆಂದರೆ ತನಗೆ ತಾನೇ ಇಲ್ಲ, ಹೀಗಿರುವಾಗ ಮಕ್ಕಳೆಲ್ಲಿ, ಹಣವೆಲ್ಲಿ?

ಬೌದ್ಧ ಧರ್ಮದಲ್ಲಿ ಆತ್ಮ ಎಂಬ ಶಾಶ್ವತ ವಸ್ತುವೇ ಇಲ್ಲ. ನನಗೆ ನಾನೇ ಇಲ್ಲ. ಹಾಗಿರುವಾಗ ನನ್ನ ಮಕ್ಕಳು, ನನ್ನ ಧನ ಎಂಬ ಮಾತಿಗೆ ಅರ್ಥವೆಲ್ಲಿದೆ ಎಂಬ ತತ್ವವನ್ನು ಇಲ್ಲಿ ನಿರೂಪಿಸಲಾಗಿದೆ.

ಪಂಡಿತವಗ್ಗ ಎಂಬ ಅಧ್ಯಾಯದಲ್ಲಿ ಪಂಡಿತನು ಅಥವಾ ಗುರುವು ಏನು ಮಾಡಬೇಕೆಂದು ಮಾರ್ಮಿಕವಾಗಿ ತಿಳಿಸಲಾಗಿದೆ.

ಓವೇದೇಯ್ಯಾನುಸಾಸೇಯ್ಯ ಅಸಬ್ಭಾ ಚ ನಿವಾರಯೇ।
ಸತಂ ಹಿ ಸೋ ಪಿಯೋ ಹೋತಿ ಅಸತಂ ಹೋತಿ ಅಪ್ಪಿಯೋ॥

ಶಿಷ್ಯರು ತಪ್ಪು ಮಾಡಿದಾಗ ಪಂಡಿತನು ಆ ತಪ್ಪನ್ನು ಎತ್ತಿ ತೋರಿಸಬೇಕು. ಅಂತಹ ತಪ್ಪನ್ನು ಮಾಡದೆ ಹೇಗೆ ನಡೆದುಕೊಳ್ಳಬೇಕೆಂದು ತಿಳಿಸಿಕೊಡಬೇಕು. ಅಸಭ್ಯವಾದ ನಡೆ ನುಡಿಗಳಿಂದ ಶಿಷ್ಯರು ಕೆಟ್ಟು ಹೋಗದಂತೆ ಅವರನ್ನು ಅಂತಹ ಕಾರ್ಯಗಳನ್ನು ಮಾಡದ ಹಾಗೆ ನಿವಾರಿಸಬೇಕು. ಹೀಗೆ ಮಾಡಿದ ಗುರು ಒಳ್ಳೆಯ ಜನರಿಗೆ ಇಷ್ಟವಾಗುತ್ತಾನೆ. ಆದರೆ ದುಷ್ಟರಿಗೆ ಅನಿಷ್ಟನಾಗುತ್ತಾನೆ.

ಶಿಷ್ಯರು ತಪ್ಪು ಮಾಡಿದಾಗ ಅವರ ಹಿತದಷ್ಟಿಯಿಂದ ಗುರು ತಪ್ಪನ್ನು ತೋರಿಸಿ ನಿಂದಿಸಬಹುದು. ಬೈಯಬಹುದು. ಇದರಿಂದ ಒಳ್ಳೆಯ ಜನರು ಸಂತೋಷ ಪಡುತ್ತಾರೆ. ಅವರಿಗೆ ಅಂತಹ ಗುರುವೇ ಪ್ರಿಯ. ಆದರೆ ದುರ್ಜನರು ಗುರುವಿನ ಉದ್ದೇಶವನ್ನರಿಯದೆ ಅವನು ಬೈದುದನ್ನೇ ದೊಡ್ಡದು ಮಾಡಿ ಅವನನ್ನೇ ದ್ವೇಷಿಸುತ್ತಾರೆ. ಇದನ್ನು ಲೋಕದಲ್ಲಿ ಇಂದೂ ನಾವು ಕಾಣುತ್ತೇವೆ.

ಅರಹಂತವಗ್ಗ (ಅರ್ಹದ್ ವರ್ಗ)ದಲ್ಲಿ ಪೂಜ್ಯರಾದ ಅರ್ಹಂತರ, ಎಂದರೆ ಪೂರ್ಣ ಜ್ಞಾನಿಗಳ ಲಕ್ಷಣಗಳನ್ನು ತಿಳಿಸಲಾಗಿದೆ. ಅಲ್ಲಿರುವ ಒಂದು ಪದ್ಯವಿಂತಿದೆ–

ಯಸ್ಸಿಂದಿಯಾನಿ ಸಮಥಂ ಗತಾನಿ
ಅಸ್ಸಾ ಯಥಾ ಸಾರಥಿನಾ ಸುದಂತಾ।
ಪಹೀನಮಾನಸ್ಸ ಅನಾಸವಸ್ಸ
ದೇವಾಪಿ ತಸ್ಸ ಪಿಹಯಂತಿ ತಾದಿನೋ ॥

ಸಾರಥಿಯಿಂದ ಚೆನ್ನಾಗಿ ಪಳಗಿಸಲ್ಪಟ್ಟ, ನಿಯಂತ್ರಣದಲ್ಲಿರುವ ಕುದುರೆಗಳಂತೆ ಯಾವನ ಇಂದ್ರೀಯಗಳು ಶಾಂತಿಯನ್ನು ಹೊಂದಿರುವುವೋ ಅವನು ಗರ್ವವನ್ನು ತ್ಯಜಿಸಿರುತ್ತಾನೆ. ಅವನ ಪಾಪಕಾರಣಗಳೆಲ್ಲ ದೂರವಾಗಿರುತ್ತವೆ. ಅಂತಹ ವಿರಾಗಿಯನ್ನು ನೋಡಬೇಕು. ಅವನಂತೆ ತಾವೂ ಆಗಬೇಕೆಂದು ದೇವತೆಗಳೂ ಆಸೆ ಪಡುತ್ತಾರೆ. ಸಹಸ್ಸವಗ್ಗ (ಸಹಸ್ರ ವರ್ಗ) ಎಂಬ ಅಧ್ಯಾಯದಲ್ಲಿ ಪ್ರತಿಯೊಂದು ಪದ್ಯದಲ್ಲೂ ಸಹಸ್ರ (ಸಾವಿರ) ಅಥವಾ ತತ್ಸಮಾನಾರ್ಥದ ಒಂದು ಪದ ಇರುವುದನ್ನು ಕಾಣಬಹುದು. ಒಂದು ಉದಾಹರಣೆ–

ಸಹಸ್ಸಮಪಿ ಚೇ ವಾಚಾ ಅನತ್ಥಪದ ಸಂಹಿತಾ ।
ಏಕಂ ಅತ್ಥಪದಂ ಸೇಯ್ಯೋ ಯಂ ಸುತ್ವಾ ಉಪ ಸಮ್ಮತಿ ॥

ಅರ್ಥವಿಲ್ಲದ ಅಥವಾ ತಪ್ಪು ಮಾಹಿತಿಯನ್ನು ಕೊಡುವ ಸಾವಿರ ಮಾತುಗಳಿಂದ ಅರ್ಥವತ್ತಾದ ಒಂದು ಮಾತು ಎಷ್ಟೋ ಮೇಲು. ಅರ್ಥವುಳ್ಳ ಒಂದೇ ಮಾತಿನಿಂದ ವಿವಾದ ಇಲ್ಲವಾಗುತ್ತದೆ. (ಕೋಪಿಷ್ಠರ ಕೋಪವೂ ಶತ್ರುಗಳ ವೈರವೂ) ತಗ್ಗುತ್ತದೆ. ಇದರಿಂದ ನಿರರ್ಥಕವಾದ ಮಾತುಗಳನ್ನು ಆಡದಿರುವುದೇ ಲೇಸು ಎಂಬ ನೀತಿಯನ್ನು ಧಮ್ಮಪದವು ತಿಳಿಸುತ್ತದೆ. ಪಾಪ ವಗ್ಗ (ಪಾಪ ವರ್ಗ)ದಲ್ಲಿ ಮನುಷ್ಯನು ಸದಾ ಒಳ್ಳೆಯ ಕಾರ್ಯದಲ್ಲಿ ತೊಡಗಿರಬೇಕು ಎಂಬ ಬೋಧನೆ ಇದೆ.

ಅಭಿತ್ಥರೇಥ ಕಲ್ಯಾಣೇ ಪಾಪಾ ಚಿತ್ತಂ ನಿವಾರಯೇ।
ದಂಧಂ ಹಿ ಕರೋಂತೋ ಪುಞ್ಞಂ ಪಾಪಸ್ಮಿಂ ರಮತೀಮನೋ।

ಒಳ್ಳೆಯ ಕೆಲಸಗಳನ್ನು ಮಾಡಲು ಯಾವಾಗಲೂ ತ್ವರೆ ಮಾಡಬೇಕು. ಸದಾ ಮನಸ್ಸನ್ನು ಪಾಪದ ದೆಸೆಯಿಂದ ದೂರದಲ್ಲಿಡಬೇಕು. ಪುಣ್ಯ ಕಾರ್ಯಗಳನ್ನು ಮಾಡುವುದರಲ್ಲಿ ಆಲಸ್ಯವನ್ನು ಮಾಡಿದರೆ, ಮನಸ್ಸು ಪಾಪದಲ್ಲಿ ತೊಡಗುತ್ತದೆ.

ಧಮ್ಮಪದದಲ್ಲಿರುವ ಒಂದೊಂದು ಪದ್ಯವೂ ಅನುಭವದ ಮೂಸೆಯಲ್ಲಿ ಕುದಿದು ಶುದ್ಧವಾಗಿರುವ ಚಿನ್ನದಂತಿದೆ. ಬೌದ್ಧರಿಗೆ ಮಾತ್ರ ಇದು ಸಂಬಂಧಿಸಿದ ಗ್ರಂಥವೆಂದು ನಾವು ತಿಳಿಯಬಾರದು. ಇದರ ಅಧ್ಯಯನ ಎಲ್ಲರಿಗೂ ಪ್ರಯೋಜನವನ್ನುಂಟು ಮಾಡುವುದರಲ್ಲಿ ಸಂಶಯವಿಲ್ಲ.

ಧಮ್ಮಪದದ ಕೊನೆಯ ವರ್ಗ ಬ್ರಾಹ್ಮಣ ವರ್ಗ ಗೌತಮ ಬುದ್ಧನು ಬ್ರಾಹ್ಮಣರಲ್ಲಿ ಎಷ್ಟು ಗೌರವವನ್ನಿಟ್ಟಿದ್ದನೆಂಬುದು ಇಲ್ಲಿ ಸ್ಪಷ್ಟವಾಗುತ್ತದೆ. ಧಮ್ಮಪದದ ಕೊನೆಯ ಪದ್ಯವನ್ನು ನೋಡೋಣ.

ಪುಬ್ಬೇ ನಿವಾಸಂ ಯೋ ವೇದಿ ಸಗ್ಗಾಪಾಯಂ ಚ ಪಸ್ಸತಿ।
ಅಥೋ ಜಾತಿಕ್ಖಯಂ ಪತ್ತೋ ಅಭಿಞ್ಞಾವೋಸಿತೋ ಮುನಿ।
ಸಬ್ಬವೋಸಿತವೋಸಾನಂ ತಮಹಂ ಬ್ರೂಮಿ ಬ್ರಾಹ್ಮಣಂ॥

ಹಿಂದಿನ ಜನ್ಮಗಳ ಸ್ಥಿತಿಯನ್ನು ಯಾವನು ತಿಳಿದಿರುವನೋ, ಸ್ವರ್ಗ, ನರಕಗಳ ಸ್ವರೂಪವನ್ನು ಯಾವನು ನೋಡಿರುವನೋ, ಜನ್ಮಗಳ ಕೊನೆಯನ್ನು ಯಾವನು ಕಂಡಿರುವನೋ ಅಥವಾ ಪಡೆದಿರುವನೋ, ಜ್ಞಾನದಲ್ಲೇ ಯಾವನ ಮನಸ್ಸು ನೆಲೆಸಿರುವುದೋ, ಎಲ್ಲ ಕರ್ತವ್ಯಗಳನ್ನು ಸಮರ್ಪಕವಾಗಿ ಯಾವನು ಮುಗಿಸಿರುವನೋ ಅಂತಹವನನ್ನು ನಾನು 'ಬ್ರಾಹ್ಮಣ' ಎಂದು ಕರೆಯುತ್ತೇನೆ.

ಬುದ್ಧಂ ಶರಣಂ ಗಚ್ಛಾಮಿ ।
ಸಂಘಂ ಶರಣಂ ಗಚ್ಛಾಮಿ ।
ಧಮ್ಮಂ ಶರಣಂ ಗಚ್ಛಾಮಿ ॥

ಪ್ರತಾಪ ಸಿಂಹ ಒಳ್ಳೆ ಕೆಲಸ ಮಾಡಿದ್ದಾರೆ ಅವರನ್ನು ಮತ್ತೆ ಗೆಲ್ಲಿಸಲೇಬೇಕಿದೆ

• ಮಾಜಿ ಸಚಿವ ಶ್ರೀರಾಮುಲು ಕಾರ್ಯಕರ್ತರಿಗೆ ಕರೆ • ಮೈಸೂರು ಬಿಜೆಪಿ ಕಚೇರಿಗೆ ಭೇಟಿ; ಪುತ್ರಿ ವಿವಾಹಕ್ಕೆ ಆಮಂತ್ರಣ

ಮೈಸೂರು, ನ.21– ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮೈಸೂರು–ಕೊಡಗು ಕ್ಷೇತ್ರದಲ್ಲಿ ಮತ್ತೆ ಬಿಜೆಪಿ ಗೆಲ್ಲಿಸುವ ನಿಟ್ಟಿನಲ್ಲಿ ಒಗ್ಗಟ್ಟಿನಿಂದ ಕೆಲಸ ಮಾಡುವಂತೆ ಮಾಜಿ ಸಚಿವ ಶ್ರೀರಾಮುಲು, ಮುಖಂಡರು ಹಾಗೂ ಕಾರ್ಯಕರ್ತರಿಗೆ ಸಲಹೆ ನೀಡಿದರು.

ತಮ್ಮ ಪುತ್ರಿ ವಿವಾಹಕ್ಕೆ ಆಮಂತ್ರಣ ನೀಡಲೆಂದು ಮಂಗಳವಾರ ಮೈಸೂರಿಗೆ ಆಗಮಿಸಿದ್ದ ಅವರು, ಬಿಜೆಪಿ ಕಚೇರಿ ಬಳಿ ಪಕ್ಷದ ಕಾರ್ಯಕರ್ತರು, ವಾಲ್ಮೀಕಿ ಸಮುದಾಯದ ಮುಖಂಡರೊಂದಿಗೆ ಚುನಾವಣೆ ಸಿದ್ಧತೆ ಬಗ್ಗೆಯೂ ಮಾತನಾಡಿದರು.

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಹೆಚ್ಚಿನ ಕ್ಷೇತ್ರದಲ್ಲಿ ಗೆಲ್ಲಬೇಕು. ಚುನಾವಣೆ ಸಂದರ್ಭದಲ್ಲಿ ನಾನೂ ಮೈಸೂರಿಗೆ ಬರುತ್ತೇನೆ. ಎಲ್ಲರೂ ಒಟ್ಟಿಗೆ ಕೆಲಸ ಮಾಡೋಣ. ಹಾಲಿ ಸಂಸದ



ಪ್ರತಾಪ್ ಸಿಂಹ ಅವರೂ ಉತ್ತಮವಾಗಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ಪರಿವಾರ ಮತ್ತು ತಳವಾರವನ್ನು ಎಸ್ಟಿಗೆ ಸೇರಿಸುವಲ್ಲಿ ಬಹಳಷ್ಟು ಶ್ರಮಿಸಿದ್ದರು. ಇದೆಲ್ಲವನ್ನೂ ಜನರಿಗೆ ತಿಳಿಸಬೇಕು ಎಂದು ಕಿವಿಮಾತು ಹೇಳಿದರು. ಬಿಜೆಪಿ ಕಚೇರಿಯಲ್ಲಿ ಬಳಿ ಮಾಜಿ ಮೇಯರ್ ಶಿವಕುಮಾರ್, ಎಸ್‌ಟಿ ಮೋರ್ಚಾ ಗ್ರಾಮಾಂತರ ಉಪಾಧ್ಯಕ್ಷ ಡಿ.ಮಹೇಶ್ ನಾಯಕ, ಮಹೇಶ್ ಮತ್ತಿತರರು ಶ್ರೀರಾಮುಲು ಅವರನ್ನು ಆತ್ಮೀಯವಾಗಿ ಅಭಿನಂದಿಸಿದರು. ಶ್ರೀರಾಮುಲು ಹಾಗೂ ಭಾಗ್ಯಲಕ್ಷ್ಮಿ ದಂಪತಿ ಪುತ್ರಿ ದೀಕ್ಷಿತಾ ಅವರ ವಿವಾಹ ಮಹೋತ್ಸವ ಬೆಂಗಳೂರು ಅರಮನೆಯಲ್ಲಿ ಡಿ.8ರಂದು ನಿಶ್ಚಯವಾಗಿದ್ದು, ಈ ಹಿನ್ನೆಲೆಯಲ್ಲಿ ಅವರು ಮೈಸೂರಿಗೆ ಆಗಮಿಸಿ ನೂರಾರು ಮುಖಂಡರು ಹಾಗೂ ಕಾರ್ಯಕರ್ತರಿಗೆ ಆಮಂತ್ರಣ ನೀಡಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com






ವಿಜಯಪುರ ನಗರದ ಶ್ರೀ ಶಾಂತೇಶ್ವರ ವಿವಿಧೋದ್ದೇಶ ಸಹಕಾರ ಸಂಘವು ನೂತನವಾಗಿ ನಿರ್ಮಿಸಿರುವ ಕಟ್ಟಡವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಸಹಕಾರ ಮಹಾಮಂಡಳದ ಅಧ್ಯಕ್ಷರೂ ಆದ ಶಾಸಕ ಜಿ.ಟಿ.ದೇವೇಗೌಡರು ಉದ್ಘಾಟಿಸಿದರು. ಈ ವೇಳೆ ಸಚಿವರಾದ ಎಂ.ಬಿ.ಪಾಟೀಲ್, ಎನ್.ರಾಜಣ್ಣ, ಶಿವಾನಂದ ಪಾಟೀಲ್, ಶಾಸಕರು, ಆಡಳಿತ ಮಂಡಳಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಹಿರಿಯ ಸಹಕಾರಿಗಳು ಉಪಸ್ಥಿತರಿದ್ದರು. ಇದೇ ವೇಳೆ ಆಡಳಿತ ಮಂಡಳಿ ಸದಸ್ಯರು ಜಿ.ಟಿ.ದೇವೇಗೌಡ ಅವರನ್ನು ಭಾರೀ ಸ್ಮರಣಿಕೆಯೊಂದಿಗೆ ಸನ್ಮಾನಿಸಿದರು. ಕಾರ್ಯಕ್ರಮದಲ್ಲಿ ಸಿದ್ದರಾಮಯ್ಯ-ಜಿ.ಟಿ.ದೇವೇಗೌಡ ಲೋಕಾಭಿರಾಮವಾಗಿ ವಿಚಾರ ವಿನಿಮಯ ನಡೆಸಿದ್ದು ನೆರೆದವರಲ್ಲಿ ತೀವ್ರ ಕುತೂಹಲ ಮೂಡಿಸಿತು.

ಸ್ವಯಂ ಉದ್ಯೋಗ ಯೋಜನೆಗೆ ಅರ್ಜಿ ಆಹ್ವಾನ

ಮೈಸೂರು,ನ.21-ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ಕಾರ್ಯಾಲಯದ ವತಿಯಿಂದ ಪಂಚಾಯಿತಿ ವ್ಯಾಪ್ತಿಯ ಸಾರ್ವಜನಿಕರಿಗೆ 2023-24ನೇ ಸಾಲಿನ ಡೇ ನಲ್ಮ್ ಯೋಜನೆ ಅಡಿಯಲ್ಲಿ ಸ್ವಯಂ ಉದ್ಯೋಗ ಯೋಜನೆಗೆ ಉಪ ಘಟಕದಡಿ ಅರ್ಜಿ ಆಹ್ವಾನಿಸಲಾಗಿದ್ದು, ನ.24ರೊಳಗೆ ಸೂಕ್ತ ದಾಖಲೆಗಳೊಂದಿಗೆ ಡೇ ನಲ್ಮ್ ಶಾಖೆಗೆ ಅರ್ಜಿಯನ್ನು ಸಲ್ಲಿಸಬಹುದು ಎಂದು ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಕಡ್ಡಾಯ ಮತದಾನ ಜಾಗೃತಿ ಸಾರುವ ವಿವಿಧ ಸ್ಪರ್ಧೆಗಳು; ಉತ್ಸಾಹದಿಂದ ಪಾಲ್ಗೊಂಡ ಕಾಲೇಜು ವಿದ್ಯಾರ್ಥಿಗಳು

●ಮಹಾರಾಜ ಪದವಿ ಪೂರ್ವ ಕಾಲೇಜಲ್ಲಿ ಮತದಾರರ ಸಾಕ್ಷರತಾ ಕ್ಲಬ್ ವಿನೂತನ ಪ್ರಯತ್ನ ●ಪ್ರಬಂಧ, ರಸಪ್ರಶ್ನೆ, ಭಿತ್ತಿಪತ್ರ ರಚನಾ ಸ್ಪರ್ಧೆಯಲ್ಲಿ ಉತ್ಸಾಹದಿಂದ ಪಾಲ್ಗೊಂಡ ವಿದ್ಯಾರ್ಥಿಗಳು ●ಪ್ರಾಮಾಣಿಕವಾಗಿ ಮತ ಚಲಾಯಿಸಿದರೆ ಬಲಿಷ್ಠ ಪ್ರಜಾಪ್ರಭುತ್ವ ಸ್ಥಾಪನೆ ಅರಿವು



ಮೈಸೂರು,ನ.21(ಎಂಟಿವೈ)-ಸಾರ್ವತ್ರಿಕ ಚುನಾವಣೆಗಳಲ್ಲಿ ಕಡ್ಡಾಯವಾಗಿ ಮತದಾನ ಮಾಡುವ ಬಗ್ಗೆ ಜಾಗೃತಿ ಮೂಡಿಸಲು ಮೈಸೂರಿನ ಮಹಾರಾಜ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ಮೈಸೂರು ತಾಲೂಕಿನ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಮತದಾನದ ಮಹತ್ವವನ್ನು ಸಾರಿ, ಗಮನ ಸೆಳೆದರು.

ಮೈಸೂರಿನ ಮಹಾರಾಜ ಪದವಿ ಪೂರ್ವ ಕಾಲೇಜಿನ ಮತದಾರರ ಸಾಕ್ಷರತಾ ಕ್ಲಬ್ ಆಯೋಜಿಸಿದ್ದ ಪ್ರಬಂಧ, ರಸಪ್ರಶ್ನೆ ಹಾಗೂ ಭಿತ್ತಪತ್ರ ರಚನಾ ಸ್ಪರ್ಧೆಯಲ್ಲಿ ಮೈಸೂರು ತಾಲೂಕಿನ ವಿವಿಧ ಪದವಿ ಪೂರ್ವ ಕಾಲೇಜುಗಳ ಪ್ರಥಮ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ಪಾಲ್ಗೊಂಡು, ಮತದಾನದ ಮಹತ್ವದ ಬಗ್ಗೆ ತಮ್ಮದೇ ಆದ ಶೈಲಿಯಲ್ಲಿ ವ್ಯಾಖ್ಯಾನಿಸಿ, ಪ್ರಶಂಸೆಗೆ ಪಾತ್ರರಾದರು.

ಸ್ಪರ್ಧೆಯನ್ನು ಮಹಾರಾಜ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಉದಯಶಂಕರ್ ಉದ್ಘಾಟಿಸಿ ಮಾತನಾಡಿ, ಭಾರತದಲ್ಲಿ ಪ್ರಜಾಪ್ರಭುತ್ವದ ವ್ಯವಸ್ಥೆಯಿದ್ದು, 18 ವರ್ಷ ತುಂಬಿದವರಿಗೆ ಮತದಾನ ಮಾಡುವ ಹಕ್ಕಿದೆ. ಸಂವಿಧಾನದಲ್ಲಿ ಮತದಾನದ ಹಕ್ಕನ್ನು ನೀಡಲಾಗಿದ್ದು, ಎಲ್ಲರೂ ಈ ಹಕ್ಕನ್ನು ಚಲಾಯಿಸಬೇಕಾಗಿದೆ. ವಿದ್ಯಾರ್ಥಿಗಳಿಗೆ ಮತದಾನದ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮ ನಡೆಸಲಾಗುತ್ತಿದೆ ಎಂದು ಹೇಳಿದರು.

ಪದವಿ ಪೂರ್ವ ಕಾಲೇಜು ಹಂತದಲ್ಲೇ ವಿದ್ಯಾರ್ಥಿಗಳಿಗೆ ಮತದಾನದ ಬಗ್ಗೆ ಜಾಗೃತಿ ಮೂಡಿಸಿದರೆ 18 ವರ್ಷ ತುಂಬಿ ಮತದಾನದ ಹಕ್ಕು ದೊರೆತ ನಂತರ ತಮ್ಮ ಹಕ್ಕನ್ನು ಪ್ರತಿಪಾದಿಸಲು ನೆರವಾಗುತ್ತದೆ. ಹೆಸರು ನೋಂದಾಯಿಸಿಕೊಂಡು, ಪ್ರಾಮಾಣಿಕವಾಗಿ ಮತ ಚಲಾಯಿಸಿದರೆ ಬಲಿಷ್ಠ ಪ್ರಜಾಪ್ರಭುತ್ವ ಸ್ಥಾಪಿಸಬಹುದು ಎಂದು ಅಭಿಪ್ರಾಯಪಟ್ಟರು.

ಮತದಾರರ ಸಾಕ್ಷರತಾ ಸಂಘದ ಸಂಚಾಲಕಿ ಡಾ.ಮಂಗಳಮೂರ್ತಿ ಮಾತನಾಡಿ, ಲೋಕಸಭಾ ಚುನಾವಣೆ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ಈಗಾಗಲೇ ಮತದಾರರ ಪಟ್ಟಿ ಪರಿಷ್ಕರಣೆ, ಹೆಸರು ನೋಂದಾವಣಿ ಹಾಗೂ ತಿದ್ದುಪಡಿ ಪ್ರಕ್ರಿಯೆ ಆರಂಭಿಸಿದೆ. ಈ ನಿಟ್ಟಿನಲ್ಲಿ ಚುನಾವಣಾ ಆಯೋಗ ನೀಡಿರುವ ಕಾಲಾವಕಾಶದಲ್ಲಿ ಹೊಸ ಮತದಾರರು ಹೆಸರು ನೋಂದಾಯಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವಿಜೇತರ ಪಟ್ಟಿ: ಭಿತ್ತಿಪತ್ರ ಸ್ಪರ್ಧೆಯಲ್ಲಿ 10 ಕಾಲೇಜುಗಳ 17 ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಅವರಲ್ಲಿ ಮಹಾರಾಣಿ ಕಾಲೇಜಿನ ಆರ್.ಗಗನ ಪ್ರಥಮ, ನಜರ್‌ಬಾದ್‌ನಲ್ಲಿರುವ ವಾಣಿವಿಲಾಸ ಕಾಲೇಜಿನ ಎಸ್.ರಕ್ಷಿತ ದ್ವಿತೀಯ, ಸರಸ್ವತಿಪುರಂ ಜೆಎಸ್‌ಎಸ್ ಮಹಿಳಾ ಕಾಲೇಜಿನ ಎನ್.ಸಂಗೀತಾ ತೃತೀಯ ಬಹುಮಾನ ಪಡೆದರು.


ಕನ್ನಡ ಮಾಧ್ಯಮದ ಪ್ರಬಂಧ ಸ್ಪರ್ಧೆಯಲ್ಲಿ 11 ಕಾಲೇಜುಗಳ 21 ವಿದ್ಯಾರ್ಥಿಗಳು ಭಾಗವಹಿಸಿದ್ದರು. ಚಾಮರಾಜ ಜೋಡಿ ರಸ್ತೆಯ ಬಾಲಕಿಯರ ಪದವಿ ಪೂರ್ವ ಕಾಲೇಜಿನ ನಿತ್ಯಶ್ರೀ ಪ್ರಥಮ, ಊಟಿ ರಸ್ತೆಯ ಜೆಎಸ್‌ಎಸ್ ಕಾಲೇಜಿನ ಅಂಕಿತ ದ್ವಿತೀಯ, ಮಹಾರಾಜ ಪದವಿ ಪೂರ್ವ ಕಾಲೇಜಿನ ಎಂ.ಮಲ್ಲೇಶ್ ತೃತೀಯ ಬಹುಮಾನ ಪಡೆದರು.

ಇಂಗ್ಲೀಷ್ ಮಾಧ್ಯಮದ ಪ್ರಬಂಧ ಸ್ಪರ್ಧೆಯಲ್ಲಿ 5 ಕಾಲೇಜುಗಳ 9 ವಿದ್ಯಾರ್ಥಿಗಳು ಭಾಗವಹಿಸಿದ್ದರು. ಅವರಲ್ಲಿ ಮಹಾರಾಣಿ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿನಿಯರಾದ ಎಂ.ನಿಶ್ಚಿತಾ ಪ್ರಥಮ, ಆರ್.ಶ್ರೀನಿಧಿ ದ್ವಿತೀಯ ಹಾಗೂ ಜೆಎಸ್‌ಎಸ್ ಮಹಿಳಾ ಕಾಲೇಜಿನ ಶುಭಂಯಾದವ್ ತೃತೀಯ ಬಹುಮಾನ ಪಡೆದುಕೊಂಡರು.

ರಸಪ್ರಶ್ನೆ ಸ್ಪರ್ಧೆಯಲ್ಲಿ 14 ಕಾಲೇಜುಗಳ 28 ವಿದ್ಯಾರ್ಥಿಗಳು ಭಾಗವಹಿಸಿದ್ದರು. ಜೆಎಸ್‌ಎಸ್ ಮಹಿಳಾ ಕಾಲೇಜಿನ ವಿದ್ಯಾರ್ಥಿಗಳಾದ ಹೆಚ್.ಎನ್.ತನುಶ್ರೀ-ಬಿ.ಶ್ವೇತ ಜೋಡಿ ಪ್ರಥಮ ಬಹುಮಾನ, ಪೀಪಲ್ಸ್ ಪಾರ್ಕ್‌ನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ದಿವ್ಯಶ್ರೀ ಪಾಟೀಲ್-ಪವಿತ್ರಾ ದ್ವಿತೀಯ, ಮಹಾರಾಜ ಪದವಿ ಪೂರ್ವ ಕಾಲೇಜಿನ ಎಸ್.ಚಿನ್ಮಯ್-ವಿಶ್ವಾಸ್‌ಗೌಡ ತೃತೀಯ ಬಹುಮಾನ ಗಳಿಸಿದರು.

ಕಾರ್ಯಕ್ರಮದಲ್ಲಿ ಸ್ಪರ್ಧೆಯ ಸಂಘಟಕರಾದ ಡಾ.ಬಿ.ಶಶಿಕಲಾ, ಉಪನ್ಯಾಸಕರ ಸಂಘದ ಅಧ್ಯಕ್ಷ ಎಂ.ಎಂ ಮಹದೇವ್, ರಾಜ್ಯಶಾಸ್ತ್ರ ಉಪನ್ಯಾಸಕರ ಸಂಘದ ಅಧ್ಯಕ್ಷ ಪಶುಪತಿ, ರಾಜ್ಯ ಸರ್ಕಾರಿ ನೌಕರ ಸಂಘದ ಗೌರವಾಧ್ಯಕ್ಷ ಎಲ್.ಉಮೇಶ್, ತೀರ್ಪುಗಾರರಾದ ಶಿವಕುಮಾರ್, ಲೋಕೇಶ್, ಕಾಳಿ ಪ್ರಸಾದ್, ಸ್ವಾಮಿಗೌಡ, ಜಯಕುಮಾರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಮಹಾನಗರ ಪಾಲಿಕೆ ಸ್ಪಂದನೆ...!




ಮೈಸೂರಿನ ಅತ್ಯಧಿಕ ವಾಹನ ದಟ್ಟಣೆಯುಳ್ಳ ಇರ್ವಿನ್ ರಸ್ತೆಯಲ್ಲಿ ಮ್ಯಾನ್‌ಹೋಲ್ ಕುಸಿದು ತಿಂಗಳೇ ಕಳೆದಿತ್ತು. ಈ ಸಂಬಂಧ ಮೈಸೂರು ಸಿಟಿ ಕೋ-ಆಪರೇಟಿವ್ ನಿರ್ದೇಶಕ ಪಡುವಾರಹಳ್ಳಿ ರಾಮಕೃಷ್ಣರ ಮಾಹಿತಿ ಆಧರಿಸಿ ಮಂಗಳವಾರದ 'ಮೈಸೂರು ಮಿತ್ರ' ಸಂಚಿಕೆಯಲ್ಲಿ ವರದಿ ಪ್ರಕಟವಾದ ಕೆಲವೇ ಗಂಟೆಯಲ್ಲಿ ಹೊಸದಾಗಿ ಮ್ಯಾನ್ ಹೋಲ್ ನಿರ್ಮಾಣ ಮಾಡಲಾಗಿದೆ. 'ಮಿತ್ರ'ನ ವರದಿ ಹಾಗೂ ಜನರ ಸಮಸ್ಯೆಗೆ ತ್ವರಿತವಾಗಿ ಸ್ಪಂದಿಸಿದ ಮೈಸೂರು ಪಾಲಿಕೆ ಸಿಬ್ಬಂದಿ ವರ್ಗಕ್ಕೆ ವಂದನೆಗಳು.

-ಸಂಪಾದಕ

ನಾಳೆಯಿಂದ ಅಂತಾರಾಷ್ಟ್ರೀಯ ಕ್ಷಯರೋಗ ಸಮ್ಮೇಳನ



ಮೈಸೂರು,ನ.21(ಜಿಎ)-ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ ಸಮುದಾಯ ವೈದ್ಯಶಾಸ್ತ್ರ ವಿಭಾಗ ಮತ್ತು ಶ್ವಾಸಕೋಶ ಚಿಕಿತ್ಸಾ ವಿಭಾಗದ ಸಹಯೋಗದಲ್ಲಿ ನ.22ರಂದು ನಾಲ್ಕು ಪೂರ್ವ ಸಮ್ಮೇಳನ ಕಾರ್ಯಾಗಾರ, ನ.23 ಮತ್ತು 24ರಂದು ಅಂತಾರಾಷ್ಟ್ರೀಯ ಕ್ಷಯರೋಗ ಸಮ್ಮೇಳನವನ್ನು ಶಿವರಾತ್ರೀಶ್ವರ ನಗರದಲ್ಲಿರುವ ಜೆಎಸ್‌ಎಸ್ ವೈದ್ಯಕೀಯ ಮಹಾವಿದ್ಯಾಲಯದ ರಾಜೇಂದ್ರ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಜೆಎಸ್‌ಎಸ್ ಉನ್ನತ ಶಿಕ್ಷಾ ಮತ್ತು ಸಂಶೋಧನಾ ಅಕಾಡೆಮಿಯ ಕುಲಸಚಿವ ಡಾ.ಬಿ.ಮಂಜುನಾಥ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ.23ರಂದು ಆಪರೇಷನಲ್ ರಿಸರ್ಚ್, ಡಿಜಿಟಲ್ ಹೆಲ್ತ್ ಮತ್ತು ಎಐ, ಡಯಾಗ್ನೋಸ್ಟಿಕ್ಸ್ ಮತ್ತು ಟಿಬಿಯಲ್ಲಿನ ಗುಣಮಟ್ಟದ ಸುಧಾರಣೆಯ ವಿಷಯಗಳೊಂದಿಗೆ ನಾಲ್ಕು ಪೂರ್ವ ಸಮಾಲೋಚನಾ ಕಾರ್ಯಾಗಾರವನ್ನು ಏರ್ಪಡಿಸಲಾಗಿದೆ. ನ.23ರಂದು ಬೆಳಿಗ್ಗೆ 10.30ಕ್ಕೆ ಆಯೋಜಿಸಿರುವ ಅಂತಾರಾಷ್ಟ್ರೀಯ ಕ್ಷಯರೋಗ ಸಮ್ಮೇಳನವನ್ನು ಕೇಂದ್ರ ಸರ್ಕಾರದ ರಾಸಾಯನಿಕ, ರಸಗೊಬ್ಬರ, ಹೊಸ ಮತ್ತು ನವೀಕರಿಸಬಹುದಾದ ಇಂಧನ ಖಾತೆಯ ರಾಜ್ಯ ಸಚಿವ ಭಗವಂತ ಖೂಬಾ ಉದ್ಘಾಟಿಸಲಿದ್ದಾರೆ.

ಪುದುಚೇರಿ ಸರ್ಕಾರದ ಗೃಹ, ವಿದ್ಯುತ್, ಶಿಕ್ಷಣ, ಕೈಗಾರಿಕೆ ಮತ್ತು ವಾಣಿಜ್ಯ ಸಚಿವ ಎ.ನಮಸ್ಶಿವಾಯಂ ಅಧ್ಯಕ್ಷತೆ ವಹಿಸುವರು. ಮಧ್ಯಪ್ರದೇಶದ ಬೋಪಾಲ್ ಗಾಂಧಿ ವೈದ್ಯಕೀಯ ಕಾಲೇಜಿನ ಡೀನ್ ಡಾ.ಸಲೀಲ್ ಭಾರ್ಗವ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟಸೂರಮಠ, ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ ಪ್ರೊ ಚಾನ್ಸಲರ್ ಡಾ.ಬಿ.ಸುರೇಶ್, ಉಪಕುಲಪತಿ ಡಾ.ಸುರೀಂದರ್ ಸಿಂಗ್ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಅಂತಾರಾಷ್ಟ್ರೀಯ ಕ್ಷಯರೊಗ ಸಮ್ಮೇಳನ ಟಿಬಿಯಲ್ಲಿ ತಡೆಗಟ್ಟುವ, ರೋಗ ನಿರ್ಣಯ ಮತ್ತು ಚಿಕಿತ್ಸಕ ಪ್ರಗತಿಗಳ ಕುರಿತು ಮಾಹಿತಿ ಮತ್ತು ಉತ್ತಮ ಅಭ್ಯಾಸಗಳನ್ನು ಹಂಚಿಕೊಳ್ಳಲು ಪ್ರಪಂಚದಾದ್ಯಂತ ತಜ್ಞರನ್ನು ಒಟ್ಟುಗೂಡಿಸುವ ಗುರಿ ಹೊಂದಿದೆ. ಈ ಸಮ್ಮೇಳನದಲ್ಲಿ 500ಕ್ಕೂ ಹೆಚ್ಚು ಪ್ರತಿನಿಧಿಗಳು ಹಾಗೂ ಭಾರತ ಮತ್ತು ವಿದೇಶಗಳಲ್ಲಿನ ಪ್ರತಿಷ್ಠಿತ ಸಂಸ್ಥೆಗಳಿಂದ 34 ಹೆಸರಾಂತ ಸಂಪನ್ಮೂಲ ವ್ಯಕ್ತಿಗಳು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಆಡಳಿತ ಅಧಿಕಾರಿ ಸತೀಶ್ ಚಂದ್ರ, ಉಪಪ್ರಾಚಾರ್ಯರಾದ ಸುಮಾ, ಸಂಘಟನಾ ಅಧ್ಯಕ್ಷ ಡಾ.ಡಿ.ಸುನೀಲ್‌ಕುಮಾರ್, ಸಂಘಟನಾ ಕಾರ್ಯದರ್ಶಿ ಡಾ.ನಯನಾ ಶಾಬಾದಿ, ಡಾ.ಪ್ರವೀಣ್ ಕುಲಕರ್ಣಿ ಉಪಸ್ಥಿತರಿದ್ದರು.

ವಿಜೃಂಭಣೆಯಿಂದ ನೆರವೇರಿದ ಕೆಜಿ ಕೊಪ್ಪಲು ಶ್ರೀ ಮಾರಮ್ಮ ದೇವಾಲಯದ ಕುಂಭಾಭಿಷೇಕ



ಮೈಸೂರು,ನ.21(ಪಿಎಂ)- ಮೈಸೂರಿನ ಕನ್ನೇಗೌಡನ ಕೊಪ್ಪಲು(ಕೆಜಿ ಕೊಪ್ಪಲು) ಶ್ರೀ ಮಾರಮ್ಮ ದೇವಾಲಯದ 16ನೇ ವಾರ್ಷಿಕ ಕುಂಭಾಭಿಷೇಕ ಮಹೋತ್ಸವ ಭಕ್ತಿಭಾವದಿಂದ ನೆರವೇರಿತು.

ತಳಿರು ತೋರಣಗಳಿಂದ ಅಲಂಕೃತಗೊಂಡಿದ್ದ ದೇವಸ್ಥಾನದಲ್ಲಿ ಭಕ್ತಾದಿಗಳ ಸಂಭ್ರಮ ಮನೆ ಮಾಡಿತ್ತು. ಸೋಮವಾರ ಮತ್ತು ಮಂಗಳವಾರ ಸೇರಿದಂತೆ ಎರಡು ದಿನಗಳ ಕಾಲ ನಡೆದ ಮಹೋತ್ಸವದಲ್ಲಿ ಐದಾರು ಸಾವಿರ ಮಂದಿ ಭಕ್ತರು ಪಾಲ್ಗೊಂಡು, ಗ್ರಾಮ ದೇವತೆ ಮಾರಮ್ಮನಿಗೆ ವಿಶೇಷ ಪೂಜೆ ಸಲ್ಲಿಸಿ ಭಕ್ತಿ ಸಮರ್ಪಿಸಿದರು. ಸಂಸದ ಪ್ರತಾಪ್ ಸಿಂಹ, ಶಾಸಕರಾದ ಕೆ.ಹರೀಶ್‌ಗೌಡ, ಟಿ.ಎಸ್.ಶ್ರೀವತ್ಸ, ಮಹಾನಗರ ಪಾಲಿಕೆ ಮಾಜಿ ಸದಸ್ಯರಾದ ಶಿವಕುಮಾರ್, ಚನ್ನಪ್ಪ ಸೇರಿದಂತೆ ಹಲವು ಗಣ್ಯರು ದೇವಸ್ಥಾನಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿ, ಮಾರಮ್ಮನ ಕೃಪೆಗೆ ಪಾತ್ರರಾದರು.

ಸೋಮವಾರ ಸಂಜೆ ಗೋಧೂಳಿ ಲಗ್ನದಲ್ಲಿ ಅನುಜ್ಞೆ, ಅಗ್ರತೀರ್ಥ ಸಂಗ್ರಹ ಸಮೇತ ಯಾಗಶಾಲೆ ಪ್ರವೇಶ, ಪ್ರವೇಶ ಬಲಿ, ಗಣಪತಿ ಪೂಜಾಪೂರ್ವಕ ಪುಣ್ಯಾಹ, ಪಂಚಗವ್ಯ ಸಾಧನ, ಪ್ರೋಕ್ಷಣೆ, ವಾಸ್ತು ಪೂಜೆ, ಗಣಹೋಮ, ನವಗ್ರಹ ಮೃತ್ಯುಂ ಜಯ ಪೂಜೆ ಹೋಮ, ಪೂರ್ಣಾಹುತಿ ಸೇರಿದಂತೆ ವಿವಿಧ ಪೂಜಾ ಕೈಂಕರ್ಯ ನಡೆದವು. ಮಂಗಳವಾರ ಪ್ರಾತಃ ಪುಣ್ಯಾಹ, ಪ್ರಧಾನ ಕಳಸಸ್ಥಾಪನೆ, ಪೂಜೆ ಹಾಗೂ ದುರ್ಗಾ ಹೋಮ, ಪೂರ್ಣಾಹುತಿ, ಕಳಾಹೋಮ, ಕುಂಭಾಭಿಷೇಕ, ಅಲಂಕಾರ, ಮಹಾ ನೈವೇದ್ಯ, ಮಹಾ ಮಂಗಳಾರತಿ ಸೇರಿದಂತೆ ಮೊದಾಲದ ಪೂಜಾ ವಿಧಿವಿಧಾನಗಳು ಜರುಗಿದವು. ಬಳಿಕ ಭಕ್ತರಿಗೆ ತೀರ್ಥ ಪ್ರಸಾದ ವಿತರಣೆ ಮಾಡಲಾಯಿತು. ನಂತರ ಅನ್ನ ಸಂತರ್ಪಣೆ ನಡೆಯಿತು. ಇಂಡಿಯನ್ ಟಿವಿ ವ್ಯವಸ್ಥಾಪಕ ನಿರ್ದೇಶಕ ಎಸ್.ವೆಂಕಟೇಶ್‌ಕುಮಾರ್ ಕುಟುಂಬ ಸಮೇತ ದೇವಸ್ಥಾನಕ್ಕೆ ಭೇಟಿ ಪೂಜಾ ವಿಧಿವಿಧಾನದಲ್ಲಿ ಪಾಲ್ಗೊಂಡರು. 16ನೇ ವರ್ಷದ ಕುಂಭಾಭಿಷೇಕ ಮಹೋತ್ಸವದಲ್ಲಿ ಐದಾರು ಸಾವಿರ ಜನ ಪಾಲ್ಗೊಂಡಿದ್ದರು. ಮಾರಮ್ಮ ತಾಯಿ ಮೈಸೂರಿನ ಎಲ್ಲಾ ಜನತೆಗೆ ಆಶೀರ್ವಾದ ಮಾಡಲಿ. ಕೆಜಿಕೊಪ್ಪಲು, ಸರಸ್ವತಿಪುರಂ, ಜಯನಗರ, ಚಿನ್ನಗಿರಿಕೊಪ್ಪಲು ಸೇರಿದಂತೆ ಸುತ್ತಮುತ್ತಲ ಜನರು ಈ ದೇವಿಯನ್ನು ಆರಾಧಿಸುವುದು ರೂಢಿಯಲ್ಲಿದೆ ಎಂದು ದೇವಸ್ಥಾನದ ಸೇವಾ ಸಮಿತಿಯ ಅಧ್ಯಕ್ಷ ಎಂ.ರಾಮೇಗೌಡ ಹರ್ಷ ವ್ಯಕ್ತಪಡಿಸಿದರು. ಸೇವಾ ಸಮಿತಿ ಬಸವರಾಜು, ಶಿವಕುಮಾರ್, ಶಿವಣ್ಣ, ಈಶ್ವರ್, ಕುಮಾರ್ ಮತ್ತಿತರರು ಹಾಜರಿದ್ದರು.



ಮೈಸೂರಿನ ಕನ್ನೇಗೌಡನ ಕೊಪ್ಪಲು ಶ್ರೀ ಮಾರಮ್ಮ ದೇವಾಲಯದಲ್ಲಿ ಕುಂಭಾಭಿಷೇಕ ಮಹೋತ್ಸವದ ಪ್ರಯುಕ್ತ ಯುವ ಕ್ರೀಡಾ ಸಾಧಕರಾದ ಭರತ್, ಧನುಷ್‌ಗೌಡ, ಆರ್.ಕಿಶನ್ ಅವರನ್ನು ಅಭಿನಂದಿಸಲಾಯಿತು. ಈ ವೇಳೆ ದೇವಸ್ಥಾನದ ಸೇವಾ ಸಮಿತಿಯ ಅಧ್ಯಕ್ಷ ಎಂ.ರಾಮೇಗೌಡ, ನಗರಪಾಲಿಕೆ ಮಾಜಿ ಸದಸ್ಯ ಶಿವಕುಮಾರ್, ಕರ್ನಾಟಕ ಕಾವಲು ಪಡೆ ಅಧ್ಯಕ್ಷ ಎಂ.ಮೋಹನ್ ಕುಮಾರ್‌ಗೌಡ, ಮುಖಂಡರಾದ ಈಶ್ವರ್, ಕುಮಾರ್, ಶಿವಣ್ಣ, ಬಸವರಾಜು, ದತ್ತು ಮತ್ತಿತರರು ಉಪಸ್ಥಿತರಿದ್ದರು.

ಕನ್ನಡದಲ್ಲಿ ಓದಿದರೆ ಉನ್ನತ ಸ್ಥಾನ ಸಿಗಲ್ಲ ಎಂಬ ಭ್ರಮೆ ಬೇಡ

●ಲಿಡ್ಕರ್ ವ್ಯವಸ್ಥಾಪಕ ನಿರ್ದೇಶಕಿ ಕೆಎಂಎಸ್ ವಸುಂಧರಾ ಸಲಹೆ ●ಕನ್ನಡದಿಂದಲೂ ಬದುಕು ಕಟ್ಟಿಕೊಳ್ಳುವ ಸಾಮರ್ಥ್ಯವಿದೆ



ಮೈಸೂರು,ನ.21(ಎಂಟಿವೈ)-ಕನ್ನಡ ಮಾಧ್ಯಮದಲ್ಲಿ ಓದಿದರೆ ಉನ್ನತ ಸ್ಥಾನದಿಂದ ವಂಚಿತರಾಗುತ್ತೇವೆಂಬ ಭ್ರಮೆಯಿಂದ ಹೊರಬರುವಂತೆ ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ (ಲಿಡ್ಕರ್) ವ್ಯವಸ್ಥಾಪಕ ನಿರ್ದೇಶಕಿ ಕೆ.ಎಂ.ಎಸ್.ವಸುಂಧರಾ ಸಲಹೆ ನೀಡಿದ್ದಾರೆ.

ಮೈಸೂರಿನ ಮಹಾರಾಜ ಕಾಲೇಜಿನ ಪಠ್ಯೇತರ ಚಟುವಟಿಕೆಗಳ ಸಮಿತಿ ಹಾಗೂ ಕನ್ನಡ ವಿಭಾಗವು ಕಾಲೇಜಿನ ಶತಮಾನೋತ್ಸವ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ ಕರ್ನಾಟಕ ರಾಜ್ಯೋತ್ಸವ ಸುವರ್ಣ ಸಂಭ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅನೇಕರಿಗೆ ಇಂಗ್ಲಿಷ್ ಅಥವಾ ಬೇರೆ ಭಾಷೆಗಳನ್ನು ಓದಿದರೆ ಮಾತ್ರ ಉನ್ನತ ಸ್ಥಾನಕ್ಕೆ ಹೋಗಬಹುದು ಎಂಬ ತಪ್ಪು ಕಲ್ಪನೆ ಇದೆ. ಕನ್ನಡ ಮಾಧ್ಯಮದಲ್ಲಿ ಓದಿದರೆ ಅವಕಾಶ ವಂಚಿತರಾಗುತ್ತೇವೆಂಬ ಭಯಕ್ಕೂ ಒಳಗಾಗಿದ್ದಾರೆ. ಆದರೆ ನಮ್ಮ ಕನ್ನಡ ಭಾಷೆಯು ಸಮೃದ್ಧವಾಗಿದ್ದು, ಬದುಕನ್ನು ಕಟ್ಟಿಕೊಡುವ ಸಾಮರ್ಥ್ಯ ಹೊಂದಿದೆ. ಕನ್ನಡ ಮಾತನಾಡುವುದು ಅವಮಾನ ಎಂದುಕೊಳ್ಳಬಾರದು. ಕನ್ನಡಿಗರಾದ ನಾವೇ ನಮ್ಮ ಭಾಷೆಯನ್ನು ಮಾತನಾಡದಿದ್ದರೆ ಹೇಗೆ? ಕನ್ನಡ ಕೇವಲ ಭಾಷೆ ಮಾತ್ರವಲ್ಲ, ಅದು ನಮ್ಮ ಬದುಕಾಗಬೇಕು ಎಂದರು.

ವಿದ್ಯಾರ್ಥಿಗಳು ತಮ್ಮಲ್ಲಿರುವ ಪ್ರತಿಭೆಯನ್ನು ಕನ್ನಡ ಭಾಷೆಯಲ್ಲೇ ಸಮರ್ಥವಾಗಿ ವ್ಯಕ್ತಪಡಿಸುವುದನ್ನು ಕರಗತ ಮಾಡಿಕೊಳ್ಳಬೇಕು. ಆ ನಂತರ ಇತರೆ ಭಾಷೆಗಳಲ್ಲೂ ಪ್ರತಿಭೆ ಅನಾವರಣಗೊಳಿಸುವುದು ಸುಲಭವಾಗುತ್ತದೆ. ಓದು ನಮ್ಮ ಗ್ರಹಿಕೆಯನ್ನು ಹೆಚ್ಚಿಸುತ್ತದೆ. ಕನ್ನಡ ಸಾಹಿತ್ಯ, ಸಾಹಿತಿ, ಕವಿಗಳನ್ನು ಓದಿ ಅರ್ಥ ಮಾಡಿಕೊಳ್ಳಬೇಕು. ಕನ್ನಡ ಭಾಷೆಗೆ ಕಳಂಕ ಬಂದಾಗ ಪ್ರತಿಭಟಿಸುವ ಪ್ರಜ್ಞೆ ಎಲ್ಲರಲ್ಲೂ ಜಾಗೃತವಾಗಬೇಕು. ಕರ್ನಾಟಕದಲ್ಲಿ ಕನ್ನಡ ಮಾತ್ರವಲ್ಲದೇ ಇನ್ನಿತರ ಸ್ಥಳೀಯ ಭಾಷೆಗಳಿವೆ. ಈಗ ಆಚರಿಸುತ್ತಿರುವ ಕನ್ನಡ ರಾಜ್ಯೋತ್ಸವದ ಬದಲು ಕರ್ನಾಟಕ ರಾಜ್ಯೋತ್ಸವ ಎಂದು ಆಚರಿಸುತ್ತಿರುವುದು ಸೂಕ್ತ ಎಂದು ಅಭಿಪ್ರಾಯಪಟ್ಟರು.

ಕರ್ನಾಟಕ ರಾಜ್ಯ ಅಷ್ಟು ಸುಲಭವಾಗಿ ರಚನೆಗೊಂಡಿಲ್ಲ. ನಮ್ಮ ಘನತೆ, ಹಿರಿಮೆ ಹಾಗೂ ನಮ್ಮ ಇತಿಹಾಸ, ಸಂಸ್ಕೃತಿಯ ಹಿರಿಮೆಯನ್ನು ಮುಂದಿನ ಪೀಳಿಗೆಗೆ ತೆಗೆದುಕೊಂಡು ಹೋಗುವ ಕೆಲಸ ಆಗಬೇಕು. ನಮ್ಮ ಇತಿಹಾಸವನ್ನು ಅರ್ಥ ಮಾಡಿಕೊಳ್ಳುವ ಅರಿವು ನಮ್ಮಲ್ಲಿ ಮೂಡಬೇಕು. ಕನ್ನಡಿಗರು ಅಭಿಮಾನ ಶೂನ್ಯರಾಗಿದ್ದೇವೆ. ಕನ್ನಡ ಮಾತನಾಡುವುದು ಅವಮಾನವಲ್ಲ. ಪ್ರತಿಯೊಬ್ಬರೂ ಕನ್ನಡದಲ್ಲೇ ಮಾತನಾಡಬೇಕು. ಅದು ಮನೆಯಿಂದಲೇ ಆರಂಭವಾಗಬೇಕು. ಮಕ್ಕಳಿಗೆ ಕನ್ನಡ ಭಾಷೆಯ ಜೊತೆಗೆ ಕನ್ನಡ ಅಂಕಿಗಳನ್ನು ಕಲಿಸಬೇಕು ಎಂದು ಅವರು ಸಲಹೆ ನೀಡಿದರು. ಬೆಂಗಳೂರಿನ ಕಾನೂನು ಮಾಪನಶಾಸ್ತ್ರ ಇಲಾಖೆ ಸಹಾಯಕ ನಿರ್ದೇಶಕ ಎಂ.ಎಸ್.ಕುಮಾರ್, ಮಹಾರಾಜ ಕಾಲೇಜು ಪ್ರಭಾರ ಪ್ರಾಂಶುಪಾಲ ಪ್ರೊ.ವಿ.ಷಣ್ಮುಗಂ, ಕನ್ನಡ ವಿಭಾಗದ ಮುಖ್ಯಸ್ಥೆ ಪ್ರೊ.ಡಿ.ವಿಜಯಲಕ್ಷ್ಮಿ, ಪಠ್ಯೇತರ ಚಟುವಟಿಕೆ ಸಮಿತಿ ಸಂಚಾಲಕ ಪ್ರೊ. ಸಿ.ಈ.ಲೋಕೇಶ್, ಕನ್ನಡ ಸಂಘದ ಸಂಚಾಲಕ ಪ್ರೊ.ಸಿ.ಕೆ.ಪುಟ್ಟಸೋಮಾಚಾರ್ ಇನ್ನಿತರರು ಉಪಸ್ಥಿತರಿದ್ದರು.

ಲಿಡ್ಕರ್‌ಗೆ ನಟ ಧನಂಜಯ ರಾಯಭಾರಿ



ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದಡಿಯಲ್ಲಿ (ಲಿಡ್ಕರ್) 50 ಸಾವಿರಕ್ಕೂ ಹೆಚ್ಚು ಚರ್ಮ ಕುಶಲಕರ್ಮಿಗಳ ಕುಟುಂಬಗಳಿವೆ. ಲಿಡ್ಕರ್ ಉತ್ಪನ್ನಗಳಿಗೆ ನಟ ಡಾಲಿ ಧನಂಜಯ ಅವರು ರಾಯಭಾರಿಯಾಗಲು ಒಪ್ಪಿದ್ದಾರೆ. ಶೀಘ್ರವೇ ಅವರು ರಾಯಭಾರಿಯಾಗಿ ಅಧಿಕೃತ ಪ್ರಕಟಣೆ ಹೊರಬೀಳಲಿದೆ. **- ಕೆ.ಎಂ.ಎಸ್. ವಸುಂಧರಾ, ಲಿಡ್ಕರ್ ವ್ಯವಸ್ಥಾಪಕ ನಿರ್ದೇಶಕಿ**

ಕಾರ್ತಿಕ ಮಾಸ, ತುಳಸಿ ಹಬ್ಬ: ಉಚಿತ ತುಳಸಿ ಗಿಡ ವಿತರಣೆ



ಮೈಸೂರು,ನ.21-ವಿಶ್ವೇಶ್ವರನಗರದಲ್ಲಿರುವ ಶ್ರೀ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನದಲ್ಲಿ ಶ್ರೀ ಭುವನೇಶ್ವರಿ ಸೇವಾ ಟ್ರಸ್ಟ್ ವತಿಯಿಂದ ಕಾರ್ತಿಕ ಮಾಸ ಹಾಗೂ ತುಳಸಿ ಹಬ್ಬದ ಪ್ರಯುಕ್ತ ಭಕ್ತಾದಿಗಳಿಗೆ ಉಚಿತ ತುಳಸಿ ಗಿಡ ವಿತರಿಸಲಾಯಿತು.

ಈ ವೇಳೆ ಹಿರಿಯ ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ ಮಾತನಾಡಿ, ದೀಪವು ಜ್ಞಾನದ ಸಂಕೇತ. ಮನುಷ್ಯನಲ್ಲಿ ಅಜ್ಞಾನ ತೊಲಗಿ ಜ್ಞಾನ ಮೂಡಬೇಕು. ಧರ್ಮಾಚರಣೆಗಳನ್ನು ತಪ್ಪದೆ ಪಾಲಿಸೋಣ, ನಮ್ಮಲ್ಲಿ ಅಡಗಿರುವ ಅಜ್ಞಾನದ ಕತ್ತಲೆ ಕಲಿಯಲಿ ಎಂಬ ಕಾರಣಕ್ಕಾಗಿ ಎಲ್ಲರೂ ಕಾರ್ತಿಕ ಹಚ್ಚುವ ಪದ್ಧತಿ ರೂಢಿಯಲ್ಲಿದೆ. ಎಲ್ಲರೂ ತಪ್ಪದೇ ದೇವಸ್ಥಾನಗಳಿಗೆ ಹೋಗಬೇಕು ಎಂಬುದು ಇದರ ಹಿಂದಿರುವ ಉದ್ದೇಶ. ಈ ಹಿನ್ನೆಲೆಯಲ್ಲಿ ದೇವಸ್ಥಾನಗಳಲ್ಲೂ ಕಾರ್ತಿಕೋತ್ಸವ ನಡೆಯುತ್ತದೆ. ಭಾರತ ಧರ್ಮ ತಳಹದಿಯ ಮೇಲೆ ನಿಂತಿರುವ ದೇಶ, ನಮ್ಮ ಧರ್ಮಾಚರಣೆಗಳನ್ನು ತಪ್ಪದೇ ಪಾಲಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಅರ್ಚಕರ ಸಂಘದ ಅಧ್ಯಕ್ಷ ವಿದ್ವಾನ್ ಕೃಷ್ಣಮೂರ್ತಿ ಮಾತನಾಡಿ, ತುಳಸಿ ಗಿಡವು ಹಿಂದೂ ಧರ್ಮದಲ್ಲಿನ ಜನರಿಗೆ ಅವಿಭಾಜ್ಯ ಅಂಗ ಮತ್ತು ಇದನ್ನು ಮನೆಯಲ್ಲಿ ಬೆಳೆಸಿ ಬಳಸಿದರೆ ವಿವಿಧ ಕಾಯಿಲೆಗಳು ಬರುವುದಿಲ್ಲ. ಹಾಗೇ ತುಳಸಿಗಿಡವು ಯಥೇಚ್ಛವಾಗಿ ಆಮ್ಲಜನಕವನ್ನು ಉತ್ಪತ್ತಿ ಮಾಡುತ್ತದೆ. ತುಳಸಿ ಗಿಡದಿಂದ ಆಗುವ ಉಪಯೋಗಗಳ ಬಗ್ಗೆ ತಿಳಿಸಿದರು.

ಡಾ.ಲಕ್ಷ್ಮೀದೇವಿ, ಮುಖಂಡರಾದ ಓಂ ಶ್ರೀನಿವಾಸ್, ಶ್ರೀ ಭುವನೇಶ್ವರಿ ಸೇವಾ ಟ್ರಸ್ಟ್ ಅಧ್ಯಕ್ಷೆ ನಾಗಶ್ರೀ ಸುಚೆಂದ್ರ, ಕಾರ್ಯದರ್ಶಿ ಕಾವೇರಿ ನಾಗರಾಜ್, ವಿದ್ಯಾ, ಚಕ್ರಪಾಣಿ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಮಿತ್ರ ಬುಧವಾರ 22 ನವೆಂಬರ್ 2023

ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ

ಜನರ ಸಂಕಷ್ಟಕ್ಕೆ ಸ್ಪಂದಿಸುವಂತೆ ಅಧಿಕಾರಿಗಳಿಗೆ ಸೂಚನೆ



ಮುಂದಿನ 10 ದಿನದೊಳಗೆ ಫ್ರೂಟ್ಸ್ ಐಡಿ ಹಾಗೂ ಕೆವೈಸಿ ನೋಂದಣಿ, ದಾಖಲೆ ತಿದ್ದುಪಡಿ, ಆಧಾರ್ ಜೋಡಣೆ ಪೂರ್ಣಗೊಳ್ಳಬೇಕು. ಏಪ್ರಿಲ್ ವೇಳೆಗೆ ಹಂತ ಹಂತವಾಗಿ ಇಲಾಖೆಗಳಲ್ಲಿರುವ ಖಾಲಿ ಹುದ್ದೆಗಳ ಭರ್ತಿಗೆ ಕ್ರಮ ವಹಿಸಲಾಗುವುದು. ಅಲ್ಲಿವರೆಗೆ ಇರುವ ಅಧಿಕಾರಿ, ಸಿಬ್ಬಂದಿ ಯಾವುದೇ ಕೊರತೆ ಯಾಗದಂತೆ ಕೆಲಸ ಮಾಡಿ. ಶೇ.100 ರಷ್ಟು ಆರ್ಥಿಕ, ಭೌತಿಕ ಗುರಿ ಸಾಧನೆ ಮಾಡಿ.

- ಎನ್.ಚಲುವರಾಯಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ.

ಮಂಡ್ಯ, ನ.21– ಜನಸಾಮಾನ್ಯರ ಸಂಕಷ್ಟಕ್ಕೆ ಸ್ಪಂದಿಸಿ ಕಾಲಮಿತಿ ಹಾಗೂ ಗುಣಮಟ್ಟದೊಂದಿಗೆ ಯೋಜನೆಗಳನ್ನು ಅನುಷ್ಠಾನಗೊಳಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಪಂ ಸಭಾಂಗಣದಲ್ಲಿ ಕರ್ನಾಟಕ ಅಭಿವೃದ್ಧಿ ಕಾಮಗಾರಿಗಳ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ಬರ ಪರಿಸ್ಥಿತಿ ಇದ್ದು, ಕುಡಿಯುವ ನೀರು, ಜಾನುವಾರುಗಳ ಮೇವಿನ ಸಮಸ್ಯೆ ತಲೆದೋರದಂತೆ ಯೋಜನೆ ರೂಪಿಸಿ ನಿರ್ವಹಣೆ ಮಾಡಿ ಎಂದರು.

ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಕೊರತೆ ಎದುರಾಗಬಾರದು. ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆ ಪಡೆಯಿರಿ. ಅನಿವಾರ್ಯವಾದಲ್ಲಿ ಟ್ಯಾಂಕರ್ ಮೂಲಕವೂ ನೀರು ಪೂರೈಸಿ. ಅಗತ್ಯ ಬಂದಾಗ ಪರಿಸ್ಥಿತಿಗೆ ಅನುಗುಣವಾಗಿ ಜಾನುವಾರುಗಳಿಗೆ ಮೇವಿನ ಬ್ಯಾಂಕ್, ಗೋಶಾಲೆ ಪ್ರಾರಂಭಿಸಿ ಎಂದು ನಿರ್ದೇಶನ ನೀಡಿದರು.

ಗ್ಯಾರಂಟಿ ಯೋಜನೆ ಅನುಷ್ಠಾನದಲ್ಲಿ ಯಾವುದೇ ಲೋಪ ಸಹಿಸುವುದಿಲ್ಲ. ಎಲ್ಲಾ ಅರ್ಹ ಫಲಾನುಭವಿಗಳಿಗೆ ಅನ್ನ ಭಾಗ್ಯ, ಗೃಹಲಕ್ಷ್ಮಿ ಯೋಜನೆ ತಲುಪಬೇಕು. ಮನೆ ಮನೆ ಸಮೀಕ್ಷೆ ನಡೆಸಿ ಸೌಲಭ್ಯ ತಲುಪದ ಅರ್ಹರನ್ನು ಗುರುತಿಸಿ ಪಟ್ಟಿ ಮಾಡಿ, ಗಣಕೀಕರಣ ಪೂರ್ಣಗೊಳಿಸಿ ಎಂದರು.

ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕೆಲಸ ಮಾಡಬೇಕು. ಯಾವುದೇ ನಿರ್ಲಕ್ಷ್ಯ ಸಹಿಸುವುದಿಲ್ಲ ಎಂದ ಅವರು, ಕೆಆರ್‌ಎಸ್ ಜಲಾಶಯದ ನೀರಿನ ಲಭ್ಯತೆಯನ್ನು ಎಚ್ಚರಿಕೆಯಿಂದ ನಿಭಾಯಿಸಿ, ಮುಂದಿನ ಮಳೆಗಾಲ ಪ್ರಾರಂಭದವರೆಗೆ ಕುಡಿಯಲು ಲಭ್ಯವಾಗುವಂತೆ ನಿರ್ವಹಣೆ ಮಾಡಿ ಎಂದರು. ತೆಂಗಿನ ಬೆಳೆಗೆ ಕಾಡುತ್ತಿರುವ ಕಪ್ಪು ತಲೆ ಹುಳ ನಿಯಂತ್ರಿಸಿ, ರೈತರಿಗೂ ಜಾಗೃತಿ ಮೂಡಿಸಿ ಎಂದು ಸಚಿವರು ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ಟಿಎಪಿಸಿಎಂಎಸ್‌ಗೆ ಎಫ್‌ಸಿಐನಿಂದ ಬರುವ ಪಡಿತರದ ತೂಕದಲ್ಲಿ ವ್ಯತ್ಯಾಸ ಆಗುತ್ತಿದೆ. ಇದರಿಂದ ನ್ಯಾಯಬೆಲೆ ಅಂಗಡಿಗೆ ಹೋಗುವ ಪಡಿತರ ಕೊರತೆಯಾಗುತ್ತಿದೆ ಎಂದು ಶಾಸಕ ನರೇಂದ್ರ ಸ್ವಾಮಿ ಪ್ರಸ್ತಾಪ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು ತೂಕ ಮತ್ತು ಅಳತೆ ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳು ಈ ಬಗ್ಗೆ ನಿರಂತರ ನಿಗಾ ವಹಿಸಬೇಕು. ಲೋಪಗಳನ್ನು ಪತ್ತೆಹಚ್ಚಿ ಪ್ರಕರಣ ದಾಖಲಿಸಬೇಕು ಎಂದು ಸೂಚನೆ ನೀಡಿದರು. ಸಾಮಾಜಿಕ ಭದ್ರತಾ ಯೋಜನೆ ಫಲಾನುಭವಿಗಳಿಗೆ ಸಕಾಲದಲ್ಲಿ ಪಿಂಚಣಿ ತಲುಪಬೇಕು, ಹೊಸದಾಗಿ ಅರ್ಹರನ್ನು ಗುರುತಿಸಿ ಸೇರ್ಪಡೆ ಮಾಡಬೇಕು ಎಂದರು.

ಅಕ್ರಮ ಸಕ್ರಮ ತ್ವರಿತ ಅರ್ಜಿ ವಿಲೇವಾರಿಗೆ ಸೂಚನೆ: ಅಕ್ರಮ ಸಕ್ರಮ ಯೋಜನೆಯಡಿ ಸಲ್ಲಿಸಲಾಗಿರುವ ನಮೂನೆ 50–53 ಹಾಗೂ 94ಸಿ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಿ, ಅರ್ಹರಿಗೆ ತಾಂತ್ರಿಕ ತೊಂದರೆ ನೀಡಿ ಸೌಲಭ್ಯದಿಂದ ವಂಚಿತರನ್ನಾಗಿ ಮಾಡಬೇಡಿ ಎಂದು ಸಲಹೆ ನೀಡಿದರು.

ಎಲ್ಲಾ ಗ್ರಾಮಗಳಿಗೂ ಸ್ಮಶಾನ: ಎಲ್ಲಾ ಗ್ರಾಮಗಳಿಗೂ ಸ್ಮಶಾನ ಅಗತ್ಯ. ಸ್ಮಶಾನ ಇರದ ಗ್ರಾಮ ಗುರುತಿಸಿ ಕಾಯ್ದಿರಿಸಿ ಎಂದರು. ಜಿಲ್ಲಾಧಿಕಾರಿ ಕುಮಾರ್ ಈವರೆಗಿನ ಸ್ಥಿತಿಗತಿ ವಿವರ ನೀಡಿದರು. ಇದೇ ವೇಳೆ ಜಿಲ್ಲೆಯಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ ನಿರ್ವಹಣೆ ಬಗ್ಗೆ ಎಲ್ಲಾ ಶಾಸಕರು ಆಕ್ಷೇಪ ವ್ಯಕ್ತಪಡಿಸಿದರು.

ಎನ್‌ಹೆಚ್‌ಎಐ ಅಧಿಕಾರಿಗಳು ತಾತ್ಸಾರ ಬಿಟ್ಟು ಮುಂದುವರೆದ ಕಾಮಗಾರಿಗಳನ್ನು ತ್ವರಿತವಾಗಿ ಮುಗಿಸಬೇಕು. ಸ್ಥಳೀಯ ಜನಪ್ರತಿನಿಧಿಗಳೊಂದಿಗೆ ಚರ್ಚಿಸಿ ಯೋಜನೆಯಲ್ಲಿರುವಂತೆ ವೈಜ್ಞಾನಿಕವಾಗಿ ಕೆಲಸ ಮಾಡಬೇಕು. ಎಲ್ಲಾ ಕಡೆ ಸಂಚಾರ ಯೋಗ್ಯ ಮಾಡಬೇಕು ಎಂದರು.

ಸಭೆಯಲ್ಲಿ ಶಾಸಕರಾದ ಪಿ.ಎಂ. ನರೇಂದ್ರಸ್ವಾಮಿ, ರವಿಕುಮಾರ್‌ಗೌಡ, ಉದಯ್‌ಗೌಡ, ದರ್ಶನ್, ಜಿಲ್ಲಾಧಿಕಾರಿ ಕುಮಾರ್, ಎಸ್ಪಿ ಯತೀಶ್, ಜಿಪಂ ಸಿಇಓ ಶೇಖ್ ತನ್ವೀರ್ ಆಸೀಫ್, ಅಪರ ಜಿಲ್ಲಾಧಿಕಾರಿ ನಾಗರಾಜ್ ಸೇರಿದಂತೆ ಇತರರಿದ್ದರು.

ನಾಳೆ ಶ್ರೀಸತ್ಯಸಾಯಿ ಬಾಬಾ ಹುಟ್ಟುಹಬ್ಬ

ಶ್ರೀರಂಗಪಟ್ಟಣ, ನ.21– ಪಟ್ಟಣದ ಪಶ್ಚಿಮವಾಹಿನಿ ರಸ್ತೆಯಲ್ಲಿರುವ ಶ್ರೀಸತ್ಯ ಸಾಯಿ ಕೃಪಾದಲ್ಲಿ ನ.23ರಂದು ಶ್ರೀಸತ್ಯಸಾಯಿ ಬಾಬಾ ಅವರ 98ನೇ ಹುಟ್ಟುಹಬ್ಬ ಆಚರಿಸಲಾಗುವುದು ಎಂದು ಶ್ರೀಸಾಯಿ ಸೇವಾ ಅನಾಥಾಶ್ರಮ ಟ್ರಸ್ಟ್ ಅಧ್ಯಕ್ಷ ಕುಮಾರ್ ತಿಳಿಸಿದ್ದಾರೆ. ಅಂದು ಬೆಳಗ್ಗೆ 8.30ಕ್ಕೆ ಭಜನೆ ಹಾಗೂ ಮಧ್ಯಾಹ್ನ 1 ಗಂಟೆಗೆ ಪ್ರಸಾದ ವಿನಿಯೋಗ ನಡೆಯಲಿದ್ದು, ಟ್ರಸ್ಟ್ ವತಿಯಿಂದ ಅಂದು 98 ಬಡ ವಿದ್ಯಾರ್ಥಿಗಳನ್ನು ದತ್ತು ಪಡೆಯಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಳವಳ್ಳಿ, ಮದ್ದೂರಿನಲ್ಲಿ ಸಚಿವರಿಂದ ಬರ ಅಧ್ಯಯನ



ಮಳವಳ್ಳಿ/ ಮದ್ದೂರು, ನ.21– ಜಿಲ್ಲೆಯಲ್ಲಿ ಸಮರ್ಪಕ ಮಳೆಯಾಗದ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಮಳವಳ್ಳಿ ಹಾಗೂ ಮದ್ದೂರು ತಾಲೂಕಿನಲ್ಲಿ ಬರ ಅಧ್ಯಯನ ನಡೆಸಿದರು.

ಮಂಗಳವಾರ ಮಳವಳ್ಳಿ ತಾಲೂಕಿನ ಹಲಗೂರು ಹಾಗೂ ಕ್ಯಾತನಹಳ್ಳಿ ಸೇರಿದಂತೆ ಹಲವೆಡೆ ಶಾಸಕರು ಹಾಗೂ ಅಧಿಕಾರಿಗಳೊಂದಿಗೆ ಬರ ಅಧ್ಯಯನ ನಡೆಸಿದ ಸಚಿವರು, ಬಳಿಕ ಮದ್ದೂರು ತಾಲೂಕಿನ ಹನುಮಂತಪುರ ಹಾಗೂ ಆತಗೂರು ಗ್ರಾಮದಲ್ಲಿ ಬರ ಪರಿಸ್ಥಿತಿ ಬಗ್ಗೆ ಮಾಹಿತಿ ಪಡೆದುಕೊಂಡರು.

ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಮಾತನಾಡಿ, ರೈತರ ಕಷ್ಟಕ್ಕೆ ಸರ್ಕಾರ ಸ್ಪಂದಿಸು ತ್ತದೆ. ಕೇಂದ್ರ ತಂಡ ಬೆಳೆ ಸಮೀಕ್ಷೆ ನಡೆಸಿ ವರದಿ ಸಲ್ಲಿಸಿದೆ. ರಾಜ್ಯ ಸರ್ಕಾರ ಜನಪರ ಕೆಲಸ ಮಾಡುತ್ತಿದೆ. ಹಲವೆಡೆ ಬರ ಪರಿಸ್ಥಿತಿಯಿಂದ ಕಬ್ಬು, ರಾಗಿ ಹಾಗೂ ಮುಸುಕಿನ ಜೋಳದ ಬೆಳೆ ಹಾನಿಯಾಗಿದೆ. ರಾಜ್ಯದ 224 ತಾಲೂಕುಗಳೂ ಕೂಡ ಬರ ಪೀಡಿತವೆಂದು ಘೋಷಣೆಯಾಗಿದೆ. ಈಗಾಗಲೇ ಕೇಂದ್ರ ತಂಡ ರಾಜ್ಯದಲ್ಲಿ ಬರ ಅಧ್ಯಯನ ನಡೆಸಿ, ಕೇಂದ್ರಕ್ಕೆ ವರದಿ ಸಲ್ಲಿಸಿದೆ ಎಂದರು.

ಇಂದಿನ ವರದಿಯನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು. ಕೇಂದ್ರ ಸರ್ಕಾರ ಹಣ ಬಿಡುಗಡೆ ಮಾಡುವುದು ತಡವಾದರೆ, ರಾಜ್ಯ ಸರ್ಕಾರವೇ ರೈತರ ನೆರವಿಗೆ ನಿಲ್ಲಲಿದೆ ಎಂದರು.

ಕೇಂದ್ರ ಸರ್ಕಾರದಿಂದ 18 ಸಾವಿರ ಕೋಟಿ ಅನುದಾನ ಕೇಳಿದ್ದೇವೆ. ಕೇಂದ್ರ ಸರ್ಕಾರ ಹಣ ಬಿಡುಗಡೆ ಮಾಡಿದ ನಂತರ ಹಂತ ಹಂತವಾಗಿ ಪರಿಹಾರ ವಿತರಿಸುತ್ತೇವೆ ಎಂದು ಭರವಸೆ ನೀಡಿದರು. ಇದೇ ವೇಳೆ ಬರ ಪರಿಸ್ಥಿತಿ ಅಧ್ಯಯನ ನಡೆಸುವಾಗ ಸಚಿವರು ಹಾಗೂ ಅಧಿಕಾರಿಗಳಿಗೆ ಸ್ಥಳೀಯ ರೈತರು ಸಮಸ್ಯೆಗಳ ಬಗ್ಗೆ ಅವಲೋಕನ ಮಾಡಿಕೊಟ್ಟರು.

ಈ ವೇಳೆ ಶಾಸಕರಾದ ಪಿ.ಎಂ.ನರೇಂದ್ರ ಸ್ವಾಮಿ, ಕೆ.ಎಂ.ಉದಯ್, ಜಿಲ್ಲಾಧಿಕಾರಿ ಡಾ.ಕುಮಾರ್, ಜಿಪಂ ಸಿಇಓ ಶೇಖ್ ತನ್ವೀರ್ ಆಸಿಫ್, ಎಸ್ಪಿ ಎನ್.ಯತೀಶ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಅಶೋಕ್, ಉಪವಿಭಾಗಧಿಕಾರಿ ಶಿವಮೂರ್ತಿ, ತಹಸೀಲ್ದಾರ್ ಲೋಕೇಶ್ ಸೇರಿದಂತೆ ಇನ್ನಿತರ ಅಧಿಕಾರಿಗಳಿದ್ದರು.

ವಿಜಯೇಂದ್ರ ಶಕ್ತಿ ಪರಿಗಣಿಸಿ ಉನ್ನತ ಹುದ್ದೆ



ಮಂಡ್ಯ, ನ.21– ಅಧಿಕಾರ ನಿಭಾಯಿಸಲು ಬಿ.ವೈ.ವಿಜಯೇಂದ್ರ ಅವರಿಗೆ ಶಕ್ತಿ ಇಲ್ಲ ಎನ್ನುತ್ತಿದ್ದರು. ಆದರೆ ಯಡಿಯೂರಪ್ಪ ಅವರ ಮಗ ಎನ್ನುವುದಷ್ಟೇ ಅಲ್ಲ ಅವರು ಪಕ್ಷದಲ್ಲಿ ಅನೇಕ ಜವಾಬ್ದಾರಿಯನ್ನು ಸಮರ್ಪಕವಾಗಿ ನಿಭಾಯಿಸಿದ್ದಾರೆ ಎನ್ನುವುದನ್ನು ಪರಿಗಣಿಸಿ ಹೈಕಮಾಂಡ್ ಅವರಿಗೆ ಉನ್ನತ ಹುದ್ದೆ ನೀಡಿದೆ. ಅದನ್ನು ಆಡಳಿತ ಪಕ್ಷ ಕಾಂಗ್ರೆಸ್ ಅರ್ಥ ಮಾಡಿಕೊಳ್ಳಬೇಕು ಎಂದು ಮಾಜಿ ಸಚಿವ ಬಿ.ಶ್ರೀರಾಮುಲು ಟೀಕಿಸಿದರು.

ಮಂಗಳವಾರ ನಗರದ ಬಿಜೆಪಿ ಕಚೇರಿಯಲ್ಲಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಅವರು, ಕೆ.ಆರ್.ಪೇಟೆ ಉಪ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಗೆಲ್ಲಿಸಿಕೊಂಡು ಬಂದಾಗಲೇ ಅರ್ಥ ಆಗಬೇಕಿತ್ತು ಈ ಕಾಂಗ್ರೆಸ್‌ನವರಿಗೆ ಎಂದ ಅವರು, ಮುಂಬರುವ ಲೋಕಸಭಾ ಚುನಾವಣೆಯನ್ನು ವಿಜಯೇಂದ್ರ ಅಧ್ಯಕ್ಷತೆಯಲ್ಲಿ ಹಾಗೂ ವಿಪಕ್ಷ ನಾಯಕ ಅಶೋಕ್ ನೇತೃತ್ವದಲ್ಲಿ ಎದುರಿಸುತ್ತೇವೆ ಎಂದರು.

ರಾಷ್ಟ್ರ ರಾಜಕಾರಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಉನ್ನತ ಸಾಧನೆ ಮಾಡುತ್ತಿದ್ದಾರೆ. ವಿದೇಶಗಳಲ್ಲಿಯೂ ಹೆಸರು ನಮ್ಮ ದೇಶಕ್ಕಿದೆ. ಆರ್ಥಿಕತೆ ದೃಷ್ಟಿಯಿಂದ ನೋಡಿದರೆ ರಾಜ್ಯದಲ್ಲಿ ಕೆಟ್ಟ ಪರಿಸ್ಥಿತಿ ಇದೆ. ಅದನ್ನು ಹೋಗಲಾಡಿಸಲು ನರೇಂದ್ರ ಮೋದಿ ಅವರ ಹೆಸರೇ ಬಹು ಮುಖ್ಯವಾಗುತ್ತದೆ. ಅಶೋಕ್ ಅವರು ಪ್ರತಿಪಕ್ಷದ ನಾಯಕರಾಗಿದ್ದಾರೆ. ಅವರ ಆಶಯದಂತೆಯೇ ಹೋಗೋಣ, ನಮ್ಮ ಬಿಜೆಪಿ ಪರಿವಾರವನ್ನು ಬೆಳೆಸೋಣ ಎಂದು ಸಲಹೆ ನೀಡಿದರು.

ಈ ವೇಳೆ ಬಿಜೆಪಿ ಕಾರ್ಯಕಾರಿಣಿ ಸದಸ್ಯ ಸಿದ್ದರಾಮಯ್ಯ, ಜಿಲ್ಲಾ ವಕ್ತಾರ ಸಿ.ಟಿ.ಮಂಜುನಾಥ್, ಜಿಲ್ಲಾ ನಾಯಕರ ಸಂಘದ ಅಧ್ಯಕ್ಷ ಆರ್.ಜಗದೀಶ್, ಕಾರ್ಯದರ್ಶಿ ವೆಂಕಟೇಶ್, ಮುಖಂಡರಾದ ಫಣೀಶ್, ಪ.ನ.ಸುರೇಶ್, ಹರ್ಷ, ಶ್ರೀಧರ್, ಜವರೇಗೌಡ, ನವೀನ್, ದೇವರಾಜು, ಪ್ರಕಾಶ್, ನರೇಂದ್ರ, ಎಚ್.ಎನ್.ಕೃಷ್ಣ ಸೇರಿದಂತೆ ಕಾರ್ಯಕರ್ತರು ಮತ್ತು ಮುಖಂಡರು ಭಾಗವಹಿಸಿದ್ದರು.

ಪದವಿಪೂರ್ವ ಶಿಕ್ಷಣ ಇಲಾಖೆ ಅಸ್ಮಿತೆ ಉಳಿಸಲು ಒತ್ತಾಯ



ಮಂಡ್ಯ, ನ.21– ಗುಣಾತ್ಮಕ ಮತ್ತು ಸ್ಪರ್ಧಾತ್ಮಕ ಶಿಕ್ಷಣಕ್ಕೆ ದೇಶದಲ್ಲೇ ಮಾದರಿಯಾದ ಪದವಿಪೂರ್ವ ಶಿಕ್ಷಣ ಇಲಾಖೆಯ ಅಸ್ಮಿತೆ ಕಾಪಾಡುವಂತೆ ವಿಧಾನಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡ ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ಪದವಿಪೂರ್ವ ಶಿಕ್ಷಣ ಇಲಾಖೆಯನ್ನು ಶಾಲಾ ಶಿಕ್ಷಣ ಇಲಾಖೆಯೊಂದಿಗೆ ವಿಲೀನಗೊಳಿಸಿ 'ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)' ಎಂದು ಹೆಸರು ಬದಲಿಸಲಾಗಿದೆ. ಕರ್ನಾಟಕ ಪಬ್ಲಿಕ್ ಸ್ಕೂಲ್ ಹೆಸರಿನಲ್ಲಿ ಪಿಯುಸಿ ಹಂತವನ್ನು ಪ್ರೌಢಶಾಲೆಗಳಲ್ಲಿ ವಿಲೀನಗೊಳಿಸುವ ಪ್ರಕ್ರಿಯೆ ಹಿಂದಿನಿಂದಲೂ ನಡೆಯುತ್ತಿದೆ. ಇದನ್ನು ಕೂಡಲೇ ಕೈಬಿಟ್ಟು ಪದವಿ ಪೂರ್ವ ಶಿಕ್ಷಣ ಇಲಾಖೆ ಹೆಸರನ್ನೇ ಮುಂದುವರೆಸಬೇಕು. ಪ್ರತ್ಯೇಕ ಇಲಾಖೆಯೇ ಅದನ್ನು ನಿರ್ವಹಿಸಬೇಕು ಎಂದು ಸುದ್ದಿಗೋಷ್ಠಿಯಲ್ಲಿ ಆಗ್ರಹಿಸಿದರು.

ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣ ಹಂತಗಳ ನಡುವೆ ಒಂದು ಸೇತುವಾಗಿ ಗುಣಾತ್ಮಕ ಮತ್ತು ಸ್ಪರ್ಧಾತ್ಮಕ ಶಿಕ್ಷಣವನ್ನು ವಿದ್ಯಾರ್ಥಿಗಳಿಗೆ ನೀಡುವ ಮೂಲಕ ರಾಷ್ಟ್ರದಲ್ಲೇ ಮಾದರಿ ಶೈಕ್ಷಣಿಕ ವ್ಯವಸ್ಥೆ ಎಂಬ ಕೀರ್ತಿಗೆ ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆ ಪಾತ್ರವಾಗಿದೆ. ಆದರೀಗ ಈ ಇಲಾಖೆಯನ್ನು ವಿಲೀನಗೊಳಿಸುವ ಪ್ರಯತ್ನ ಸರಿಯಲ್ಲ ಎಂದರು. ವಿಪರ್ಯಾಸವೆಂದರೆ ಎಸ್.ಬಂಗಾರಪ್ಪ ಅಸ್ತಿತ್ವ ನೀಡಿದ ಇಲಾಖೆಯನ್ನು ಇದೀಗ ಅವರ ಮಗ(ಮಧು ಬಂಗಾರಪ್ಪ) ಬರಖಾಸ್ತು ಮಾಡಲು ಹೊರಟಿದ್ದಾರೆ. ಇದು ಸರಿಯಲ್ಲ. ಪದವಿಪೂರ್ವ ಶಿಕ್ಷಣ ವ್ಯವಸ್ಥೆಗೆ ಯಾವುದೇ ರಾಜಕೀಯ ಸೋಂಕು ಇರಬಾರದು. ಸ್ಥಳೀಯ ಸಂಸ್ಥೆಗಳಂತಹ(ಜಿಪಂ, ತಾಪಂ) ರಾಜಕೀಯ ವ್ಯವಸ್ಥೆಯು ಮೂಗು ತೂರಿಸಬಾರದೆಂದು ಒತ್ತಾಯಿಸಿದರು.

ಇಲಾಖೆಯ ವಿಲೀನ ಸಂಬಂಧ 2023ರ ಅ.18ರಂದು ಹೊರಡಿಸಿರುವ ಸುತ್ತೋಲೆ ಹಿಂಪಡೆಯಬೇಕು. ಡಿಡಿಪಿಯು ಕಚೇರಿ ಬಲಪಡಿಸಬೇಕು. ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಅಧೀಕ್ಷಕರು, ಎಫ್‌ಡಿಎ, ಎಸ್‌ಡಿಎ ಹಾಗೂ ಗ್ರೂಪ್–ಡಿ ಹುದ್ದೆಗಳನ್ನು ಮಂಜೂರು ಮಾಡಬೇಕೆಂದು ಆಗ್ರಹಿಸಿದರು. ಶಿಕ್ಷಣ ತಜ್ಞರೊಂದಿಗೆ ಯಾವುದೇ ಚರ್ಚೆ, ಸಮಾಲೋಚಿಸದೆ ಏಕಾಏಕಿ ಪಿಯು ವಿದ್ಯಾರ್ಥಿಗಳಿಗೆ 3 ಪರೀಕ್ಷೆಗಳನ್ನು ನಡೆಸಲುದ್ದೇಶಿಸಿರುವುದು ಸಂಪೂರ್ಣ ಅವೈಜ್ಞಾನಿಕವಾಗಿದೆ. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಮಾರಕವಾಗಿರುವ, ಸ್ಪರ್ಧಾತ್ಮಕ ಮನೋಭಾವ ಕಸಿಯುವ ಈ ವಿಧಾನದಿಂದ ಪ್ರಮಾಣಾತ್ಮಕ ಫಲಿತಾಂಶ ದೊರೆಯುತ್ತದೆಯೇ ವಿನಃ ಗುಣಾತ್ಮಕ ಫಲಿತಾಂಶವಲ್ಲ ಎಂದು ಆತಂಕ ವ್ಯಕ್ತಪಡಿಸಿದರು.

ಗೋಷ್ಠಿಯಲ್ಲಿ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಂಘದ ಅಧ್ಯಕ್ಷ ಭೈರೇಶ್, ಕಾರ್ಯದರ್ಶಿ ಶಿವಪ್ಪ, ಉಪನ್ಯಾಸಕರ ಸಂಘದ ಅಧ್ಯಕ್ಷ ಚನ್ನಕೃಷ್ಣ, ಬೋಧಕೇತರ ನೌಕರರ ಸಂಘದ ಅಧ್ಯಕ್ಷ ರಾಜೇಗೌಡ, ಗ್ರಂಥಪಾಲಕರ ಸಂಘದ ನಿರ್ಮಲ, ರವೀಂದ್ರ ಹಾಜರಿದ್ದರು.

ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರ

ಮಂಡ್ಯ, ನ.21– ಮೈಸೂರಿನ ಇಲವಾಲ ಬಳಿಯ ಯಲಚಹಳ್ಳಿಯಲ್ಲಿರುವ ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ನ.24 ರಂದು ಬೆಳಗ್ಗೆ 10.30ಕ್ಕೆ "ತೆಂಗು ಕೃಷಿಯಲ್ಲಿ ವೈಜ್ಞಾನಿಕ ತಂತ್ರಜ್ಞಾನಗಳು" ಕುರಿತಾದ ಜಿಲ್ಲಾಮಟ್ಟದ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ನುರಿತ ವಿಜ್ಞಾನಿಗಳು ಹಾಗೂ ಅನುಭವಿ ಕೃಷಿಕರು, ಗುಣಮಟ್ಟದ ಉತ್ಪಾದನೆ, ಸಂಸ್ಕರಣೆ ಮತ್ತು ಮಾರಾಟದಲ್ಲಿ ಎದುರಿಸುವ ಹಲವಾರು ಸಮಸ್ಯೆ ಮತ್ತು ಅದರ ಪರಿಹಾರದ ಕುರಿತು ರೈತರಿಗೆ ಮಾಹಿತಿ ನೀಡಲಿದ್ದಾರೆ. ಆಸಕ್ತ ರೈತರು ಕಾರ್ಯಕ್ರಮದಲ್ಲಿ ಭಾಗವಹಿಸಲು ಪೂರ್ವ ನೋಂದಣಿ ಮಾಡಿಸಬಹುದಾಗಿದೆ. ಮೊದಲು ಬಂದವರಿಗೆ ಆದ್ಯತೆ. ನೋಂದಣಿಗಾಗಿ 8147959226 / 9341997297 ಸಂಪರ್ಕಿಸಿ.

ಫ್ರೂಟ್ಸ್ ಐಡಿ ತಂತ್ರಾಂಶಕ್ಕೆ ಮೈಸೂರು ಜಿಲ್ಲೆಯಲ್ಲಿ 5,68,715 ಜಮೀನು ಸೇರ್ಪಡೆ; 4,38,718 ಬಾಕಿ

ಬರ ಪರಿಹಾರ ಸೇರಿ ಸರ್ಕಾರಿ ಸೌಲಭ್ಯ ಪಡೆಯಲು ಫ್ರೂಟ್ಸ್ ಐಡಿ ಕಡ್ಡಾಯ; ಕೃಷಿ ಇಲಾಖೆಯಿಂದ ಕರ ಪತ್ರ ಹಂಚಿ ರೈತರಿಗೆ ಮಾಹಿತಿ

ತಾಲೂಕು	ಫ್ರೂಟ್ಸ್‌ಗೆ ಸೇರ್ಪಡೆಯಾದ ಜಮೀನುಗಳ ಸಂಖ್ಯೆ	ಸೇರ್ಪಡೆಯಾಗದ ಜಮೀನುಗಳ ಸಂಖ್ಯೆ
ಪಿರಿಯಾಪಟ್ಟಣ	99,898	56,796
ಹುಣಸೂರು	78,157	53,468
ಕೆಆರ್ ನಗರ	39,531	38,422
ಮೈಸೂರು	49,041	73,920
ನಂಜನಗೂಡು	91,798	90,500
ಟಿ.ನರಸೀಪುರ	97,087	98,196
ಸರಗೂರು	15,409	12,494
ಸಾಲಿಗ್ರಾಮ	62,551	50,165

(ಕೃಷಿ ಇಲಾಖೆ ಮಾಹಿತಿಯಂತೆ ಅಂಕಿ ಅಂಶ, ಹೆಚ್‌ಡಿ ಕೋಟೆ ಮಾಹಿತಿ ಲಭ್ಯವಾಗಿಲ್ಲ)

ಮೈಸೂರು, ನ.21(ಪಿಎಂ)– ಸರ್ಕಾರದ ಯೋಜನೆಗಳ ಸೌಲಭ್ಯ ಪಡೆಯಲು ರೈತರು ತಮ್ಮ ಜಮೀನು (ಸರ್ವೇ ನಂಬರ್)ಗಳ ವಿವರಗಳನ್ನು ಫ್ರೂಟ್ಸ್ (ಫಾರ್ಮರ್ ರಿಜಿಸ್ಟ್ರೇಷನ್ ಅಂಡ್ ಯುನಿಫೈಡ್ ಬೆನೆಫಿಸಿಯರ್ಸ್ ಸಿಸ್ಟಮ್) ಐಡಿಯಲ್ಲಿ ದಾಖಲಿಸಿಕೊಳ್ಳಬೇಕಿದೆ. ಮೈಸೂರು ಜಿಲ್ಲೆಯಲ್ಲಿ ಫ್ರೂಟ್ಸ್ ಐಡಿ ತಂತ್ರಾಂಶಕ್ಕೆ ಸೇರ್ಪಡೆಗೊಳಿಸುವ ಸಂಬಂಧ ಒಟ್ಟು 10,07,433 ಜಮೀನುಗಳ ಗುರಿಯಲ್ಲಿ 5,68,715 ಜಮೀನುಗಳು ಸೇರ್ಪಡೆಗೊಂಡಿದ್ದರೆ, 4,38,718 ಜಮೀನುಗಳ ಸೇರ್ಪಡೆಯು ಬಾಕಿ ಉಳಿದಿದೆ.

ಕೃಷಿ ಇಲಾಖೆ ಮಾಹಿತಿಯಲ್ಲಿ ಈ ಅಂಕಿ ಅಂಶ ಉಲ್ಲೇಖಿಸಲಾಗಿದೆ (ಇದೇ ನ.10ರವರೆಗೆ). ಸರ್ಕಾರದ ವಿವಿಧ ಯೋಜನೆಗಳ ಪ್ರಯೋಜನ ಮತ್ತು ಪರಿಹಾರ ಪಡೆಯಲು ಈ ಎಫ್‌ಐಡಿ (ಫ್ರೂಟ್ಸ್ ಐಡಿ) ಕಡ್ಡಾಯಗೊಳಿಸಲಾಗಿದೆ. 2023–24ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಸಂಭವಿಸಿರುವ ಬರ ಪರಿಹಾರ ಪಡೆಯಲು ಈ ಎಫ್‌ಐಡಿ ಅಗತ್ಯವಾಗಿದೆ.

ರಾಜ್ಯ ಸರ್ಕಾರ ರಾಜ್ಯದ ಹಲವು ತಾಲೂಕುಗಳನ್ನು ಬರಪೀಡಿತ ಎಂದು ಘೋಷಣೆ ಮಾಡಿದೆ. ಈ ಪೈಕಿ ಜಿಲ್ಲೆಯ ಎಲ್ಲಾ 9 ತಾಲೂಕುಗಳೂ ಒಳಗೊಂಡಿವೆ. ಹೀಗಾಗಿ ಸರ್ಕಾರದಿಂದ ಪರಿಹಾರ ಬಿಡುಗಡೆಯಾದ ಸಂದರ್ಭದಲ್ಲಿ ರೈತರು ಫ್ರೂಟ್ಸ್ ಐಡಿಗೆ ಸೇರಿಸಿರುವ ಜಮೀನಿನ ವಿಸ್ತೀರ್ಣಗೆ ಅನುಗುಣವಾಗಿ ಪರಿಹಾರ ಧನವು ನೇರವಾಗಿ ಡಿಬಿಟಿ ಮೂಲಕ ವಿತರಣೆಯಾಗಲಿದೆ. ಈ ಹಿನ್ನೆಲೆಯಲ್ಲಿ ಕೃಷಿ ಇಲಾಖೆ ರಾಜ್ಯದಲ್ಲಿ ಎಫ್‌ಐಡಿ ಮಾಡಿಸುವ ಪ್ರಕ್ರಿಯೆ ಚುರುಕುಗೊಳಿಸಿದ್ದು, ಜಿಲ್ಲೆಯಲ್ಲಿಯೂ ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕರ ಪತ್ರ ಹಂಚುವ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ.

ಫ್ರೂಟ್ಸ್ ಐಡಿ ಅಂದರೆ ಯಾವುದೇ ಕಾರ್ಡ್ ಬರುವುದಿಲ್ಲ. ಬದಲಿಗೆ ಎಫ್‌ಐಡಿ ನಂಬರ್ ದೊರೆಯಲಿದೆ. ಈ ನಂಬರ್ ಮೂಲಕ ರೈತರು ಪಡೆದಿರುವ ಸೌಲಭ್ಯದ ಎಲ್ಲಾ ಮಾಹಿತಿ ಲಭ್ಯವಾ ಗಲಿದೆ. ಪ್ರಸಕ್ತ ಸಾಲಿನ ಬರ ಪರಿಹಾರ ಪಡೆಯುವುದೂ ಮಾತ್ರವಲ್ಲ, ಇನ್ನು ಮುಂದೆಯೂ ಸೌಲಭ್ಯ ಪಡೆಯಲು ಈ ಎಫ್‌ಐಡಿ ಹೊಂದಿರುವುದು ಅಗತ್ಯವಾಗಿದೆ.

ರೈತರು ತಮ್ಮ ಹತ್ತಿರದ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರ, ತೋಟಗಾರಿಕೆ ಇಲಾಖೆ, ಕಂದಾಯ ಇಲಾಖೆ, ಪಶು ಸಂಗೋಪನಾ ಇಲಾಖೆ, ರೇಷ್ಮೆ ಇಲಾಖೆ ಅಥವಾ ನಾಗರಿಕ ಸೇವಾ ಕೇಂದ್ರಗಳಿಗೆ ಭೇಟಿ ನೀಡಿ ಎಫ್‌ಐಡಿ ಮಾಡಿಸಿಕೊಳ್ಳಬಹುದಾಗಿದೆ. ಈ ವೇಳೆ ರೈತರು, ಆಧಾರ್ ಕಾರ್ಡ್ ಪ್ರತಿ, ಬ್ಯಾಂಕ್ ಖಾತೆ ಪುಸ್ತಕದ ಪ್ರತಿ, ತಮ್ಮ ಹೆಸರಿನಲ್ಲಿರುವ ಜಮೀನುಗಳ ಪಹಣಿ ಪತ್ರಿಕೆಗಳು, ತಮ್ಮ ಮೊಬೈಲ್ ಸಂಖ್ಯೆ ಮತ್ತು ಜಾತಿ ಪ್ರಮಾಣ ಪತ್ರದ ಪ್ರತಿ ಹಾಜರುಪಡಿಸಬೇಕಿದೆ.

ರೈತರು ಸರ್ಕಾರದ ಯಾವುದೇ ಯೋಜನೆಯಡಿ ಸವಲತ್ತು ಪಡೆಯಲು ಮತ್ತು ಬ್ಯಾಂಕ್ ಸಾಲ ಪಡೆಯಲು ಎಫ್‌ಐಡಿ ಕಡ್ಡಾಯ ಮಾಡಲಾಗಿದೆ. ಎಲ್ಲಾ ರೈತರು ತಪ್ಪದೇ ಎಫ್‌ಐಡಿ ಮಾಡಿಸಿ ಕೊಳ್ಳುವಂತೆ ಹಾಗೂ ತಮ್ಮ ಎಲ್ಲಾ ಜಮೀನುಗಳ ವಿವರಗಳನ್ನು ಎಫ್‌ಐಡಿಯಲ್ಲಿ ಸೇರ್ಪಡೆ ಮಾಡುವಂತೆ ಕೃಷಿ ಇಲಾಖೆ ಕೋರಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಎನ್‌ಐಸಿ ಸಹಯೋಗದೊಂದಿಗೆ ಫ್ರೂಟ್ಸ್ ಸಾಫ್ಟ್‌ವೇರ್ ತಂತ್ರಾಂಶ ಅಭಿವೃದ್ಧಿಪಡಿಸಿದೆ.

ರೈತ ಅನ್ನದಾತ ಮಾತ್ರವಲ್ಲ ಈಗ ಶಕ್ತಿದಾತನೂ ಆಗಿದ್ದಾನೆ

ಕೇಂದ್ರ ಸಚಿವ ನಿತಿನ್ ಗಡ್ಕರಿ ಅಭಿಮತ



ಮೈಸೂರು, ನ. 21– ರೈತನು ಈಗ ಕೇವಲ ಅನ್ನದಾತ ಮಾತ್ರವಲ್ಲ ಆತ ಶಕ್ತಿದಾತನೂ ಆಗಿದ್ದಾನೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ರಾಷ್ಟ್ರೀಯ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ತಿಳಿಸಿದರು.

ನ.21ರಂದು ನೊಯಿಡಾದ ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಅಕಾಡೆಮಿಯಲ್ಲಿ ಸೀಪಾ ಸಂಸ್ಥೆ ಆಯೋಜಿಸಿದ್ದ ಸುಸ್ಥಿರ ಭಾರತ–2023 ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತದಲ್ಲಿ ಇಂದು ಎಥಿನಾಲ್ ಬಳಕೆ ಹೆಚ್ಚುತ್ತಿದೆ. ಪೆಟ್ರೋಲಿಯಂ ಉತ್ಪನ್ನಗಳ ಬಳಕೆ ಕಡಿಮೆಯಾಗುತ್ತಿದೆ. ರೈತರು ರಸಗೊಬ್ಬರ ಮತ್ತು ಕ್ರಿಮಿನಾಶಕಗಳನ್ನು ಬಳಸುವುದನ್ನು ಕಡಿಮೆ ಮಾಡಬೇಕು. ಇದು ಅವರ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮವನ್ನು ಬೀರುತ್ತದೆ. ರಾಸಾಯನಿಕಗಳಿಗೆ ಬದಲಾಗಿ ಸಾವಯವ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು. ಇದರಿಂದ ಜನರ ಆರೋಗ್ಯವು ಉತ್ತಮವಾಗಿರುತ್ತದೆ. ಆಗ ಸದೃಢವಾದ ದೇಶವನ್ನು ಕಟ್ಟಲು ಸಾಧ್ಯವಾಗುತ್ತದೆ. ಜಗತ್ತಿನಲ್ಲಿ ಯಾವ ವಸ್ತುವಾಗಲೀ, ವ್ಯಕ್ತಿಯಾಗಲೀ ಅನವಶ್ಯಕವಲ್ಲ. ಆದರೆ ಅವುಗಳನ್ನು ಹೇಗೆ ಬಳಸುತ್ತೇವೆ ಎಂಬುದು ಮುಖ್ಯವಾಗುತ್ತದೆ. ಪರಿಸರಕ್ಕೆ ಪೂರಕವಾದ ಸೌರ, ವಾಯು ಶಕ್ತಿಯನ್ನು ಹೆಚ್ಚು ಬಳಸಬೇಕು. ಶ್ರೀ ಸುತ್ತೂರು ಮಠವು ಆಧ್ಯಾತ್ಮ ಮತ್ತು ವಿಜ್ಞಾನದ ಸಮ್ಮಿಲನದ ಕೇಂದ್ರವಾಗಿದೆ. ಎರಡನ್ನೂ ಸಮತೋಲನಗೊಳಿಸಿಕೊಂಡು ಸಾಗುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಶ್ರೀ ಸುತ್ತೂರು ಮಠದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡುತ್ತಾ, ಪ್ರಕೃತಿ ಮತ್ತು ಮಾನವನ ನಡುವೆ ಸಾಮರಸ್ಯದ ಸಹಬಾಳ್ವೆಯನ್ನು ಸೃಷ್ಟಿಸಲು ನಾವೀನ್ಯತೆಯನ್ನು ಅಳವಡಿಸಿಕೊಳ್ಳಬೇಕಿದೆ. ಕನಸುಗಳು ಮತ್ತು ಆಕಾಂಕ್ಷೆಗಳೊಂದಿಗೆ ಸುಸ್ಥಿರ ಭವಿಷ್ಯಕ್ಕಾಗಿ ಒಂದಾಗಿ ಸಾಗಬೇಕಿದೆ. ಸುಸ್ಥಿರತೆ ಎಂಬುದು ಇಂದು ಅತ್ಯಂತ ಅರ್ಹವಾದ ನಿರ್ಣಾಯಕ ವಿಷಯವಾಗಿದೆ. ಎಲ್ಲಾ ಜೀವಿಗಳು ಇದನ್ನು ತಮ್ಮ ಆದ್ಯತೆಯಾಗಿ ಪರಿಗಣಿಸಬೇಕು. ಇಂತಹ ಸಮ್ಮೇಳನಗಳು ಪ್ರಕೃತಿ ಮತ್ತು ಆರ್ಥಿಕ ಅಭಿವೃದ್ಧಿಯ ನಡುವೆ ಸಾಮರಸ್ಯವನ್ನು ತರುವುದರೊಂದಿಗೆ, ಸರ್ಕಾರ ಮತ್ತು ಸಮಾಜದ ಬದ್ಧತೆಯನ್ನು ಹೆಚ್ಚಿಸುತ್ತವೆ. ಸುಸ್ಥಿರ ಭಾರತಕ್ಕಾಗಿ 'ಸೀಪಾ'ದಂತಹ ಸಂಸ್ಥೆಗಳು ಕೈಗೊಳ್ಳುತ್ತಿರುವ ಜಾಗೃತಿಯ ಕಾರ್ಯಕ್ರಮಗಳು ಶ್ಲಾಘನೀಯ ಎಂದು ತಿಳಿಸಿದರು. ಸೋಲಾರ್ ಎನರ್ಜಿ ಕಾರ್ಪೊರೇಷನ್ ಆಫ್ ಇಂಡಿಯಾದ ಅಧ್ಯಕ್ಷರಾದ ಪ್ರೊ.ಆರ್.ಪಿ.ಗುಪ್ತಾ, ಸೀಪಾ ಅಧ್ಯಕ್ಷರಾದ ಡಾ.ರಘುರಾಮ್ ಅರ್ಜುನನ್, ಎಪಿಜೆ ಅಬ್ದುಲ್ ಕಲಾಂ ವಿಶ್ವವಿದ್ಯಾಲಯ ಕುಲಪತಿಗಳಾದ ಪ್ರೊ. ಜೆ.ಪಿ. ಪಾಂಡೆ ಅವರು ಮಾತನಾಡಿದರು. ಡಾ. ಸಿ.ಜಿ. ಬೆಟಸೂರಮಠ ಅವರು ಸ್ವಾಗತಿಸಿದರು. ಪ್ರೊ. ಅಮರ್ಜಿತ್ ಸಿಂಗ್ ವಂದಿಸಿದರು. ಪರವೀಣ್ ಪೊನ್‌ತರೆಂಗ್ ಕಾರ್ಯಕ್ರಮ ನಿರೂಪಿಸಿದರು.

ಮೈಸೂರು ವಿವಿ ಆಶ್ರಯದಲ್ಲಿ ವಿವಿಧ ಸ್ಪರ್ಧೆಗಳಿಗೆ ಮೈಸೂರು ಎಸ್ಪಿ ಸೀಮಾ ಲಾಟ್ಕರ್ ಚಾಲನೆ



ಮೈಸೂರು, ನ. 21–ಮೈಸೂರು ವಿಶ್ವವಿದ್ಯಾನಿಲಯದ ಆಶ್ರಯದಲ್ಲಿ ನ. 21ರಿಂದ 23ರವರೆಗೆ ನಡೆಯುತ್ತಿರುವ ಮೈಸೂರು ವಿಶ್ವವಿದ್ಯಾನಿಲಯದ ಅಂತರ ಕಾಲೇಜು ಜಿಮ್ನಾಸ್ಟಿಕ್ಸ್, ಈಜು, ಯೋಗಾಸನ, ಕರಾಟೆ, ಭಾರ ಎತ್ತುವ (ಪುರುಷ ಮತ್ತು ಮಹಿಳೆಯರ) ಹಾಗೂ ಅತ್ಯುತ್ತಮ ದೇಹದಾರ್ಢ್ಯ (ಪುರುಷರ) ಸ್ಪರ್ಧೆಗಳನ್ನು ಸೂಪರಿಂಟೆಂಡೆಂಟ್ ಆಫ್ ಪೊಲೀಸ್ ಸೀಮಾ ಲಾಟ್ಕರ್ ಉದ್ಘಾಟಿಸಿದರು.

ಬಳಿಕ ಮಾತನಾಡಿ, ವಿದ್ಯಾರ್ಥಿ ಕ್ರೀಡಾಪಟುಗಳು ಕ್ರೀಡೆಯ ಜೊತೆಗೆ ವ್ಯಾಸಂಗಕ್ಕೂ ಸಹ ಆದ್ಯತೆಯನ್ನು ನೀಡಿ ತಮ್ಮ ದೈಹಿಕ ಸಾಮರ್ಥ್ಯವನ್ನು ವೃದ್ಧಿಸಿಕೊಳ್ಳಲು ವಿಶ್ವವಿದ್ಯಾನಿಲಯದಲ್ಲಿರುವ ಸೌಲಭ್ಯಗಳನ್ನು ಉಪಯೋಗಿಸುವುದರ ಮೂಲಕ ಉತ್ತಮ ಕ್ರೀಡಾಪಟುಗಳಾಗಿ ವಿಶ್ವವಿದ್ಯಾನಿಲಯ ರಾಜ್ಯ ಹಾಗೂ ರಾಷ್ಟ್ರಕ್ಕೆ ಕೀರ್ತಿ ತರುವಲ್ಲಿ ಯುವ ಪೀಳಿಗೆಯಾದ ತಾವುಗಳು ಶ್ರಮಿಸಬೇಕೆಂದು ತಿಳಿಸಿದರು.

ಮೈಸೂರು ವಿವಿಯ ಹಣಕಾಸು ಅಧಿಕಾರಿ ರೇಖಾ ಮಾತನಾಡಿ, ವಿದ್ಯಾರ್ಥಿ ಕ್ರೀಡಾಪಟುಗಳು ಸ್ವೀಕರಿಸಿದ ಪ್ರಮಾಣ ವಚನವು ಈ ಕ್ರೀಡಾಕೂಟಕ್ಕೆ ಮಾತ್ರ ಕ್ರೀಡಾ ಸ್ಫೂರ್ತಿ ಮತ್ತು ಕ್ರೀಡಾ ಮನೋಭಾವನೆ ಸೀಮಿತವಾಗದೆ ಜೀವನದಾದ್ಯಂತ ಕ್ರೀಡಾ ಸ್ಫೂರ್ತಿ ಮತ್ತು ಕ್ರೀಡಾ ಮನೋಭಾವನೆಯಿಂದ ನಿಯಮಗಳಿಗೆ ಅನುಗುಣವಾಗಿ ಕ್ರೀಡಾಪಟುಗಳಾಗಿ ಕ್ರೀಡೆಯ ಘನತೆಯನ್ನು ಹೆಚ್ಚಿಸುವಲ್ಲಿ ಸಹಕಾರಿಯಾಗುತ್ತದೆ ಎಂದು ತಿಳಿಸಿದರಲ್ಲದೆ, ತಮ್ಮ ಆರೋಗ್ಯ ವೃದ್ಧಿಗಾಗಿ ಮತ್ತು ದೇಶವನ್ನು ಉನ್ನತ ಸ್ಥಾನಕ್ಕೆ ಕೊಂಡೊಯ್ಯಲು ಕ್ರೀಡೆಯಿಂದ ಮಾತ್ರ ಸಾಧ್ಯ ಆದ್ದರಿಂದ ವಿದ್ಯಾರ್ಥಿ ಕ್ರೀಡಾಪಟುಗಳು ತಮ್ಮ ಜೀವನದಾದ್ಯಂತ ಕ್ರೀಡೆಯಲ್ಲಿ ತೊಡಗಿಸಿಕೊಳ್ಳಲು ತಿಳಿಸಿದರು. ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ.ಸಿ.ವೆಂಕಟೇಶ್ ಅಧ್ಯಕ್ಷತೆ ವಹಿಸಿದ್ದರು.

ಮತದಾನದಲ್ಲಿ ಯುವ ಮತದಾರರ ಪಾತ್ರ ಮಹತ್ವದ್ದು



ಮೈಸೂರು, ನ. 21– ಭಾರತದಂತಹ ದೊಡ್ಡ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರು ರಾಜಕೀಯ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಯುವ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿ ಉತ್ತೇಜಿಸುವ ಸಲುವಾಗಿ ಶಾಲಾ ಕಾಲೇಜುಗಳಲ್ಲಿ ಮತದಾನ ಸಾಕ್ಷರತಾ ಸಂಘಗಳನ್ನು ಸ್ಥಾಪಿಸುವ ಮೂಲಕ ವಿದ್ಯಾರ್ಥಿಗಳಲ್ಲಿ ಮತದಾನದ ಜಾಗೃತಿ ಮೂಡಿಸಬಹುದು ಎಂದು ನಂಜನಗೂಡಿನ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಲಯನ್ ಸಿ.ಆರ್ ದಿನೇಶ್ ಅಭಿಪ್ರಾಯಪಟ್ಟರು.

ನಂಜನಗೂಡು ತಾಲೂಕು ಮಟ್ಟದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಮತದಾನ ಕುರಿತು ರಸಪ್ರಶ್ನೆ, ಭಿತ್ತಿಚಿತ್ರ ಹಾಗೂ ಪ್ರಬಂಧ ಸ್ಪರ್ಧೆಗಳ ಉದ್ಘಾಟನೆ ಸಮಾರಂಭದಲ್ಲಿ ಅವರು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಕಾರ್ಯಕ್ರಮದಲ್ಲಿ ತಾಲೂಕು ನೌಕರರ ಸಂಘದ ಅಧ್ಯಕ್ಷರಾದ ರಂಗಸ್ವಾಮಿ ಮಾತನಾಡಿ, ದೇಶ ಸರ್ವತೋಮುಖ ಬೆಳವಣಿಗೆ ಕಾಣಬೇಕಾದರೆ ಪ್ರತಿಯೊಬ್ಬರು ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ಅರ್ಹ ಆಡಳಿತಗಾರರನ್ನು ಚುನಾಯಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವೆಂದು ಹೇಳಿದರು. ಉಪನ್ಯಾಸಕ ಡಾ. ಕೆ.ಆರ್.ರಾಘವೇಂದ್ರ ಮಾತನಾಡಿ, ವಿದ್ಯಾರ್ಥಿಗಳು ಮತದಾನದ ಮಹತ್ವ ಮತ್ತು ಸಾರ್ವಜನಿಕರನ್ನು ಯಾವ ರೀತಿಯಲ್ಲಿ ಮತದಾನದಲ್ಲಿ ಪ್ರೇರಣೆ ಮಾಡಬೇಕು ಎಂದು ಮಾಹಿತಿಯನ್ನು ನೀಡಿದರು. ಹಿರಿಯ ಉಪನ್ಯಾಸಕರಾದ ಅಶ್ವಥ್‌ನಾರಾಯಣಗೌಡ, ಡಾ.ರವಿ ಯೋಗೀಶ್, ಪ್ರಶಾಂತ್‌ಕುಮಾರ್, ರಾಜೇಶ್ವರಿ, ಭವ್ಯ, ಬಾಲಸುಬ್ರಹ್ಮಣ್ಯಂ, ಸಾಯಿರ ಬಾನು ಉಪಸ್ಥಿತರಿದ್ದರು. ಕಾಲೇಜಿನ ರಾಜ್ಯಶಾಸ್ತ್ರ ಉಪನ್ಯಾಸಕರಾದ ಹೆಚ್.ಕೆ.ಸ್ವಾಮಿಗೌಡ ನಿರೂಪಿಸಿದರು. ತಾಲೂಕಿನ ವಿವಿಧ ಕಾಲೇಜಿನ 60 ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು.


ಡಿ.9ರಂದು ರಾಷ್ಟ್ರೀಯ ಲೋಕ ಅದಾಲತ್

ಮೈಸೂರು, ನ.21– ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಡಿಸೆಂಬರ್ 9ರಂದು ರಾಷ್ಟ್ರೀಯ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗಿದ್ದು, ಸದರಿ ಅದಾಲತ್‌ನಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಲು ಇಚ್ಛಿಸಿದ್ದಲ್ಲಿ ಮುಂಚಿತವಾಗಿ ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲೂಕು ಕಾನೂನು ಸೇವೆಗಳ ಸಮಿತಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು.

ಲೋಕ್ ಅದಾಲತ್‌ನಲ್ಲಿ ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗದಲ್ಲಿ ಪುನರ್ ಸ್ಥಾಪಿಸಲ್ಪಡುವ ಪ್ರಕರಣಗಳು, ಕೈಗಾರಿಕಾ ಕಾರ್ಮಿಕರ ವೇತನಕ್ಕೆ ಸಂಬಂಧಿಸಿದ ಕ್ಲೇಮುಗಳು, ಜಿಲ್ಲಾ ಗ್ರಾಹಕರ ವೇದಿಕೆಯಲ್ಲಿನ ಪ್ರಕರಣಗಳು, ಖಾಯಂ ಜನತಾ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳು, ಚೆಕ್ಕು ಅಮಾನ್ಯದ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ಕಾರ್ಮಿಕ ವಿವಾದಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಭೂಸ್ವಾಧೀನ ಪ್ರಕರಣಗಳು, ವೇತನ ಮತ್ತು ಭತ್ಯೆಗಳಿಗೆ ಸಂಬಂಧಿಸಿದ ಸೇವಾ ಪಿಂಚಣಿ ಪ್ರಕರಣಗಳು, ಸಾರ್ವಜನಿಕ ಉಪಯುಕ್ತ ಸೇವೆಗಳ ಸಂಬಂಧಿತ ಪ್ರಕರಣಗಳು, ರಾಜಿಯಾಗಬಲ್ಲ ಸಿವಿಲ್ ಮತ್ತು ಇತರೆ ಪ್ರಕರಣಗಳು ಹಾಗೂ ವೈವಾಹಿಕ ಕುಟುಂಬ ನ್ಯಾಯಾಲಯದ ಪ್ರಕರಣಗಳನ್ನು (ವಿಚ್ಛೇದನೆಯನ್ನು ಹೊರತುಪಡಿಸಿ) ರಾಜೀ ಮೂಲಕ ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂ:1800–425–0131 ಅಥವಾ www.kslsa.kar.nic.in ವೆಬ್‌ಸೈಟ್ ಅನ್ನು, ನಿಮ್ಮ ಹತ್ತಿರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ತಾಲೂಕು ಕಾನೂನು ಸೇವೆಗಳ ಸಮಿತಿಗಳ ಸದಸ್ಯ ಕಾರ್ಯದರ್ಶಿ ಅವರುಗಳನ್ನು ಸಂಪರ್ಕಿಸಬಹುದು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಿ.3, ಮಿಸ್ಟಿ ಕಪ್–2023 ಕಬಡ್ಡಿ ಪಂದ್ಯಾವಳಿ



ನ್ಯಾಷನಲ್ ಕಬಡ್ಡಿ ಆಟಗಾರ ಸಚಿನ್ ಪೂವಯ್ಯ ನೇತೃತ್ವ



ಮಡಿಕೇರಿ, ನ.21– ಕೊಡಗಿನ ಕಬಡ್ಡಿ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಿ, ಬೆಳೆಸುವ ನಿಟ್ಟಿನಲ್ಲಿ ಮಡಿಕೇರಿಯ ಡಿಪಿ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ಡಿ.3ರಂದು ಜಿಲ್ಲಾ ಮಟ್ಟದ ನಾಕೌಟ್ ಮಾದರಿಯ ಕಬಡ್ಡಿ ಚಾಂಪಿಯನ್ ಶಿಪ್ 'ಮಿಸ್ಟಿ ಕಪ್–2023' ಪಂದ್ಯಾವಳಿ ನಡೆಯಲಿದೆ.

ಹರಿಯಾಣದಲ್ಲಿ ನಡೆದ ಸೀನಿಯರ್ ನ್ಯಾಷನಲ್ ಕಬಡ್ಡಿ ಚಾಂಪಿಯನ್‌ಶಿಪ್‌ನಲ್ಲಿ ಆಡಿರುವ ಕಬಡ್ಡಿ ಕ್ರೀಡಾಪಟು ಹೊಟ್ಟೆಯಂಡ ಸಚಿನ್ ಪೂವಯ್ಯ ನೇತೃತ್ವದಲ್ಲಿ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ ಎಂದು ಪಂದ್ಯಾಟ ಆಯೋಜಕರು ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಪಂದ್ಯಾಟದ ಕುರಿತು ಮಾಹಿತಿ ನೀಡಿದ ಬೊಳ್ಳಜಿರ ಅಯ್ಯಪ್ಪ, ನಗರದ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಿಗ್ಗೆ 9.30 ಗಂಟೆಗೆ ನಡೆಯಲಿರುವ ಪಂದ್ಯಾವಳಿಯನ್ನು ರಾಷ್ಟ್ರೀಯ ತರಬೇತುದಾರ ಮಂಜುನಾಥ್ ಹಾಗೂ ರಾಷ್ಟ್ರೀಯ ಕಬಡ್ಡಿ ಆಟಗಾರ ಶಶಿಧರ್ ಉದ್ಘಾಟಿಸಲಿದ್ದಾರೆ. ಡಿಪಿ ಸ್ಪೋರ್ಟ್ಸ್ ಕ್ಲಬ್‌ನ ಕಾರ್ಯದರ್ಶಿ ಅಜ್ಜಮಕ್ಕಡ ವಿನು ಕುಶಾಲಪ್ಪ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಕೊಡವ ಮಕ್ಕಡ ಕೂಟದ ಅಧ್ಯಕ್ಷ ಬೊಳ್ಳಜಿರ ಬಿ.ಅಯ್ಯಪ್ಪ, ಆಸ್ಪ್ರಾ ಕಾಫಿ ಲಿಂಕ್ಸ್ ಮಾಲೀಕ ಕುಮಾರ್, ಅರ್ಜುನ ಪ್ರಶಸ್ತಿ ವಿಜೇತ ಸಿ.ಹೊನ್ನಪ್ಪಗೌಡ, ಬೆಂಗಳೂರಿನ ಬಿಎಂಟಿಸಿಯ ಗಂಗಾ ಹನುಮಯ್ಯ ರಾಜೀವ್ ಗಾಂಧಿ ಪಂಚಾಯತ್ ರಾಜ್ ಸಂಘಟನೆಯ ಜಿಲ್ಲಾಧ್ಯಕ್ಷ ತೆನ್ನೀರ ಮೈನಾ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.



ಸಚಿನ್ ಪೂವಯ್ಯ

ಪಂದ್ಯಾವಳಿಯಲ್ಲಿ ಪ್ರಥಮ ವಿಜೇತ ತಂಡಕ್ಕೆ ರೂ.15 ಸಾವಿರ ನಗದು ಹಾಗೂ ಆಕರ್ಷಕ ಟ್ರೋಫಿ, ದ್ವಿತೀಯ ಸ್ಥಾನ ಪಡೆದ ತಂಡಕ್ಕೆ ರೂ.10 ಸಾವಿರ ನಗದು ಹಾಗೂ ಟ್ರೋಫಿ, ತೃತೀಯ ಹಾಗೂ 4ನೇ ವಿಜೇತ ತಂಡಕ್ಕೆ ತಲಾ ರೂ.5 ಸಾವಿರ ನಗದು ಹಾಗೂ ಆಕರ್ಷಕ ಟ್ರೋಫಿ ನೀಡಲಾಗುತ್ತದೆ ಎಂದು ಹೇಳಿದರು. ಪಂದ್ಯಾವಳಿಯಲ್ಲಿ 15ಕ್ಕೂ ಹೆಚ್ಚು ತಂಡಗಳು ಪಾಲ್ಗೊಳ್ಳುವ ನಿರೀಕ್ಷೆ ಇದ್ದು, ಆಸಕ್ತ ತಂಡಗಳು ನ.30ರ ಒಳಗೆ ಪ್ರವೇಶ ಶುಲ್ಕ ರೂ1 ಸಾವಿರ ಪಾವತಿಸಿ, ತಂಡದ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗೆ 8762880355, 6362099525 ಸಂಪರ್ಕಿಸಬಹುದಾಗಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಡಿಪಿ ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷ ಹೊಟ್ಟೆಯಂಡ ಸಚಿನ್ ಪೂವಯ್ಯ, ಕಾರ್ಯದರ್ಶಿ ಕಾಂಗೀರ ಗಗನ್, ಖಜಾಂಚಿ ದಿಲೀಪ್ ತೋರೆರ, ಸದಸ್ಯರಾದ ಪೊನ್ನಚೆಟ್ಟಿರ ಪ್ರದೀಪ್, ಪ್ರದೀಪ್ ಕಂಡಕೆರೆ ಹಾಜರಿದ್ದರು.

ನ.26, 33ನೇ ಕೊಡವ ನ್ಯಾಷನಲ್ ಡೇ

ಕಾರ್ಯಕ್ರಮ ಯಶಸ್ಸಿಗೆ ದೇವಟ್ ಪರಂಬುವಿನಲ್ಲಿ ವಿಶೇಷ ಪೂಜೆ



ಮಡಿಕೇರಿ, ನ.21– ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ವತಿಯಿಂದ ನ.26 ರಂದು ನಡೆಯುವ '33ನೇ ಕೊಡವ ನ್ಯಾಷನಲ್ ಡೇ' ಯಶಸ್ಸಿಗಾಗಿ ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ಹಾಗೂ ಪ್ರಮುಖರು ದೇವಟ್ ಪರಂಬುವಿನಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಕೊಡವ ನರಮೇಧದ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿದ ಪ್ರಮುಖರು ಗಾಳಿಯಲ್ಲಿ ಗುಂಡು ಹಾರಿಸಿ ಹಿರಿಯರನ್ನು ಸ್ಮರಿಸಿದರು.

ಕೊಡವ ಲ್ಯಾಂಡ್ ಭೌಗೋಳಿಕ–ರಾಜಕೀಯ ಸ್ವಾಯತ್ತತೆಗಾಗಿ ನಿರಂತರ ಹೋರಾಟಗಳನ್ನು ನಡೆಸಿಕೊಂಡು ಬರಲಾಗುತ್ತಿದ್ದು, ಕೊಡವ ನ್ಯಾಷನಲ್ ಡೇ ಸಂದರ್ಭ ಮತ್ತೊಮ್ಮೆ ಕೊಡವರ ಹಕ್ಕೊತ್ತಾಯಗಳನ್ನು ಮಂಡಿಸಲಾಗುವುದು. ಅಂದು ಭಾರತೀಯ ಸಂವಿಧಾನದ ದಿನವನ್ನು ಕೂಡ ಸಿಎನ್‌ಸಿ ವತಿಯಿಂದ ಆಚರಿಸಲಾಗುವುದು ಎಂದು ನಾಚಪ್ಪ ಹೇಳಿದರು. ಸಿಎನ್‌ಸಿಯ ಸದಸ್ಯರಾದ ಕಲಿಯಂಡ ಪ್ರಕಾಶ್, ಅಲ್ಲಂಡ ಜ್ಯಾ, ಪಟ್ಟಮಾಡ ಕುಶ, ಅರೆಯಡ ಗಿರೀಶ್, ಮಂದಪಂಡ ಮನೋಜ್ ಮತ್ತಿತರರು ವಿಶೇಷ ಪ್ರಾರ್ಥನೆ ಸಂದರ್ಭ ಹಾಜರಿದ್ದರು.

ಇಂದು ಕಾಡಾನೆಗಳನ್ನು ಕಾಡಿಗಟ್ಟುವ ಕಾರ್ಯಾಚರಣೆ

ಮಡಿಕೇರಿ, ನ.21– ವಿರಾಜಪೇಟೆ ವಲಯದ ಹೆಗ್ಗಳ ಶಾಖೆ ಹಾಗೂ ಚೆಯ್ಯಂಡಾಣೆ ಶಾಖೆಗೆ ಒಳಪಡುವ ಗ್ರಾಮಗಳಲ್ಲಿ ಬೀಡು ಬಿಟ್ಟಿರುವ ಕಾಡಾನೆಗಳನ್ನು ಕಾಡಿಗಟ್ಟುವ ಕಾರ್ಯಾಚರಣೆ ಬುಧವಾರ ನಡೆಯಲಿದೆ. ಹಲವು ದಿನಗಳಿಂದ ಅಲ್ಲಿನ ಗ್ರಾಮಸ್ಥರ ಗದ್ದೆ ಹಾಗೂ ತೋಟಗಳಿಗೆ ಲಗ್ಗೆ ಇಟ್ಟು ಕೃಷಿ ನಷ್ಟಪಡಿಸುತ್ತಿರುವುದರಿಂದ ಹಾಗೂ ಹೆಚ್ಚು ಉಪಟಳ ನೀಡುತ್ತಿರುವುದರಿಂದ ಗ್ರಾಮಸ್ಥರ ಮನವಿಯ ಮೇರೆಗೆ ಹೆಗ್ಗಳ, ಪಾಲಂಗಾಲ, ಕೆದಮುಳ್ಳೂರು, ಕರಡ ಮುಂತಾದ ಗ್ರಾಮಗಳಲ್ಲಿ ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಕಾಡಾನೆಗಳನ್ನು ಬುಧವಾರ ಮರಳಿ ಕಾಡಿಗೆ ಓಡಿಸುವ ಕಾರ್ಯಾಚರಣೆಯನ್ನು ಕೈಗೊಳ್ಳಲಾಗುತ್ತಿದೆ.

ಈ ಕಾರ್ಯಾಚರಣೆ ನಡೆಯುವ ಸಂದರ್ಭ ತೋಟದ ಕಾರ್ಮಿಕರು ತಮ್ಮ ಕೆಲಸ ಕಾರ್ಯಗಳನ್ನು ಸ್ಥಗಿತಗೊಳಿಸುವಂತೆ ಹಾಗೂ ಗ್ರಾಮಸ್ಥರು ಶಾಲಾ ಮಕ್ಕಳು ಎಚ್ಚರಿಕೆ ವಹಿಸುವ ಮೂಲಕ ಕಾಡಾನೆ ಕಾರ್ಯಾಚರಣೆಗೆ ಅರಣ್ಯ ಇಲಾಖೆಯೊಂದಿಗೆ ಸಹಕರಿಸುವಂತೆ ವಿರಾಜಪೇಟೆ ವಿಭಾಗ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಕೆ.ಎ. ನೆಹರು ಅವರು ಮನವಿ ಮಾಡಿದ್ದಾರೆ. ಮಾತ್ರವಲ್ಲದೇ, ಕಾಡಾನೆ ಕಾರ್ಯಾಚರಣೆ ಸಂದರ್ಭ ಸಾರ್ವಜನಿಕರು ಪಟಾಕಿಗಳನ್ನು ಸಿಡಿಸಬಾರದೆಂದು ಪ್ರಕಟಣೆಯಲ್ಲಿ ಕೋರಿದ್ದಾರೆ.

ಪೇರಿಯಂಡ ಸಿ.ಅಪ್ಪಾಜಿ ನಿಧನ

ನಾಪೋಕ್ಲು, ನ.21– ಇಲ್ಲಿಗೆ ಸಮೀಪದ ಕೈಕಾಡು ಗ್ರಾಮದ ನಿವಾಸಿ, ಪ್ರಸ್ತುತ ಬೆಂಗಳೂರಿನಲ್ಲಿ ನೆಲೆಸಿದ್ದ ಪಿ.ಸಿ. ಅಪ್ಪಾಜಿ (ಪೇರಿಯಂಡ) ಅವರು ಮಂಗಳವಾರ ನಿಧನರಾಗಿದ್ದಾರೆ. ಅವರಿಗೆ 81 ವರ್ಷ ವಯಸ್ಸಾಗಿತ್ತು. ಇವರು ಪ್ರಖ್ಯಾತ ಕೊಡವ ಆಂದೋಳತ ಪಾಟ್ ಅನ್ನು ಬರೆದ ಪೇರಿಯಂಡ ದಿವಂಗತ ಚೆಂಗಪ್ಪನವರ ಕಿರಿಯ ಪುತ್ರ. ಪ್ರಾರಂಭದಲ್ಲಿ ಪತ್ರಕರ್ತರಾಗಿ ಕೊಡಗು ದೈನಿಕ (ಕೊಡಗು ಪ್ರೆಸ್) ದಲ್ಲಿ ತಮ್ಮ ವೃತ್ತಿ ಜೀವನವನ್ನು ಪ್ರಾರಂಭಿಸಿದ ಇವರು ತದನಂತರ ಸಂಯುಕ್ತ ಕರ್ನಾಟಕ ಪತ್ರಿಕೆಯಲ್ಲಿ ಕೆಲಸ ಮಾಡಿ ಅಂತಿಮವಾಗಿ ದಿ. ಮೈಸೂರ್ ಪ್ರಿಂಟರ್ಸ್ ಲಿಮಿಟೆಡ್ ನ ಪ್ರಜಾವಾಣಿ ಪತ್ರಿಕೆಯ ಕ್ರೀಡಾ ವಿಭಾಗದಲ್ಲಿ, ವಿಶೇಷವಾಗಿ ಕುದುರೆ ಓಟದ ಬರವಣಿಗೆಗಾರರಾಗಿ ಜನಮನ್ನಣೆ ಗಳಿಸಿದ್ದರು. ಬುಧವಾರ ಬೆಳಗ್ಗೆ ಬೆಂಗಳೂರಿನ ಸುಮನಹಳ್ಳಿಯಲ್ಲಿ ಅವರ ಅಂತ್ಯಕ್ರಿಯೆ ನೆರವೇರಲಿದೆ.



ಸರ್ಕಾರದ ಆದೇಶವಿದ್ದರೂ ಮಾಜಿ ಸೈನಿಕರ ಕುಟುಂಬಕ್ಕೆ ಜಾಗ ನೀಡದೆ ನಿರ್ಲಕ್ಷ್ಯ

ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಎ.ಎಸ್. ಪೊನ್ನಣ್ಣ ಅವರಿಗೆ ಮಾಜಿ ಸೈನಿಕರ ದೂರು



ವಿರಾಜಪೇಟೆ, ನ.21– ಸರ್ಕಾರದಿಂದ ಆದೇಶವಾಗಿದ್ದರೂ ಮಾಜಿ ಸೈನಿಕರ ಕುಟುಂಬಗಳಿಗೆ ನಿವೇಶನ ನೀಡದೆ ಜಿಲ್ಲಾಡಳಿತ ನಿರ್ಲಕ್ಷ್ಯ ವಹಿಸಿದೆ ಎಂದು ಆಪಾದಿಸಿ ರುವ ಮಾಜಿ ಸೈನಿಕರು ಈ ಕೂಡಲೇ ಸ್ಥಳ ಮಂಜೂರು ಮಾಡಿಸಿ ಕೊಡುವಂತೆ ಮುಖ್ಯಮಂತ್ರಿಗಳ ಸಲಹೆಗಾರ ಎ.ಎಸ್.ಪೊನ್ನಣ್ಣ ಅವರಿಗೆ ಮನವಿ ಸಲ್ಲಿಸುವ ಮೂಲಕ ದೂರು ನೀಡಿದ್ದಾರೆ.

ಕೊಡಗಿನ ಮಾಜಿ ಸೈನಿಕರ ಕುಟುಂಬಗಳಿಗೆ ಜಾಗ ನೀಡುವಂತೆ ಸರ್ಕಾರ ಆದೇಶ ಹೊರಡಿಸಿದೆ. ಆದರೆ ಇದುವರೆಗೂ ಜಿಲ್ಲಾಧಿಕಾರಿಗಳು ಜಾಗವನ್ನು ಮಾಜಿ ಸೈನಿಕರಿಗೆ ನೀಡದೆ ಕಡೆಗಣಿಸಿದ್ದಾರೆ ಎಂದು ಅವರು ದೂರಿದ್ದಾರೆ.

ಈ ವೇಳೆ ಮಾಜಿ ಸೈನಿಕರ ಸಹಕಾರ ಸಂಘದ ವತಿಯಿಂದ ಶಾಸಕ ಎ.ಎಸ್. ಪೊನ್ನಣ್ಣ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು. ಸನ್ಮಾನ ಸ್ವೀಕರಿಸಿದ ಶಾಸಕ ಪೊನ್ನಣ್ಣ ಅವರು ಮಾತನಾಡಿ, ಮಾಜಿ ಸೈನಿಕರಿಗೆ ಜಾಗದ ಬಗ್ಗೆ ಸಂಬಂಧಪಟ್ಟ ಸಚಿವರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಮನವಿ ಸಲ್ಲಿಸುವ ಸಂದರ್ಭ ಮೇ.ಜ. ಕಾರ್ಯಪ್ಪ, ಮೇ.ಚಿಂಗಪ್ಪ, ವಿರಾಜಪೇಟೆ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಚಪ್ಪಂಡ ಹರೀಶ್, ಸಂಘದ ಸದಸ್ಯರಾದ ಕೊಂಗಂಡ ಭೀಮಯ್ಯ, ಪಟ್ರಪಂಡ ಕರುಂಬಯ್ಯ ಹಾಗೂ ಸೋಮೇಶ್, ತೊರೇರ ರಾಜ ಪೂವಯ್ಯ, ಸುಬ್ಬಯ್ಯ ಮತ್ತು ಟಿ.ಶೆಟ್ಟಿಗೇರಿ ಸಂಘದ ಆಡಳಿತ ಮಂಡಳಿ ಸದಸ್ಯರು ಉಪಸ್ಥಿತರಿದ್ದರು.

ಹೋಟೆಲ್, ಶಾಮಿಯಾನ ಅಂಗಡಿಗೆ ನುಗ್ಗಿದ ಟ್ಯಾಂಕರ್



ಸುಂಟಿಕೊಪ್ಪ, ನ.21– ಚಾಲಕನ ನಿಯಂತ್ರಣ ಕಳೆದುಕೊಂಡ ಟ್ಯಾಂಕರ್‌ವೊಂದು ಹೊಟೇಲ್ ಹಾಗೂ ಶಾಮಿಯಾನ ಅಂಗಡಿಗೆ ನುಗ್ಗಿದ ಘಟನೆ ಸುಂಟಿಕೊಪ್ಪ–ಕುಶಾಲನಗರ ರಾಷ್ಟ್ರೀಯ ಹೆದ್ದಾರಿ 275 ರಲ್ಲಿ ನಡೆದಿದೆ.

ಕುಶಾಲನಗರದಿಂದ ಮಂಗಳೂರು ಕಡೆಗೆ ತೆರಳುತ್ತಿದ್ದ ಟ್ಯಾಂಕರ್ ಸೋಮವಾರ ನಡುರಾತ್ರಿ ಚಾಲಕನ ನಿಯಂತ್ರಣ ಕಳೆದುಕೊಂಡು ಗದ್ದೆಹಳ್ಳದ ರಾಷ್ಟ್ರೀಯ ಹೆದ್ದಾರಿ ಬದಿಯಲ್ಲಿದ್ದ ಹೊಟೇಲ್‌ಗೆ ನುಗ್ಗಿದೆ. ಇದರಿಂದ ಹೊಟೇಲ್ ಸಮೀಪದಲ್ಲಿದ್ದ ಶಾಮಿಯಾನ ಅಂಗಡಿಗೂ ಅಪಾರ ಹಾನಿಯಾಗಿದೆ. ಅದೃಷ್ಟವಶಾತ್ ಹೊಟೇಲ್ ಮತ್ತು ಶಾಮಿಯಾನ ಅಂಗಡಿಯಲ್ಲಿ ಜನರಿಲ್ಲದ ಕಾರಣ ಅಪಾಯ ತಪ್ಪಿದಂತಾಗಿದೆ. ಅಪಘಾತದ ಕುರಿತು ಅಂಗಡಿ ಮಾಲೀಕರು ಪೊಲೀಸರಿಗೆ ದೂರು ನೀಡಿದ ಹಿನ್ನೆಲೆಯಲ್ಲಿ ಸುಂಟಿಕೊಪ್ಪ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಸ್ಥಳ ಪರಿಶೀಲನೆ ನಡೆಸಿ ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

ಅಣ್ಣನ ಮೇಲೆ ಹಲ್ಲೆ ನಡೆಸಿದ ಸಹೋದರ

ಮಡಿಕೇರಿ, ನ.21– ಹಳೆಯ ಮನೆಯ ದುರಸ್ತಿ ಕಾಮಗಾರಿ ನಡೆಸುತ್ತಿದ್ದ ಸಂದರ್ಭ ವಿಶೇಷಚೇತನ ಅಣ್ಣನ ಮೇಲೆ ತಮ್ಮನೋರ್ವ ಗಂಭೀರವಾಗಿ ಹಲ್ಲೆ ನಡೆಸಿದ ಘಟನೆ ವಿರಾಜಪೇಟೆ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ವಿರಾಜಪೇಟೆ ಹೊರ ವಲಯದ ಕಾಕೋಟುಪರಂಬು ನಿವಾಸಿ ದಯಾನಂದ ಕೆ.ಜಿ(67) ಎಂಬವರೇ ಹಲ್ಲೆಗೆ ಒಳಗಾದ ವ್ಯಕ್ತಿಯಾಗಿದ್ದು, ವಿರಾಜಪೇಟೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಘಟನೆ ಹಿನ್ನೆಲೆ: ಕೆ.ಜಿ.ದಯಾನಂದ ಅವರಿಗೆ ಸೇರಿದ ಹಳೆಯ ಮನೆ ಮಳೆಗಾಲದಲ್ಲಿ ಸಂಪೂರ್ಣ ಸೋರುತ್ತಿದ್ದು ಇದೀಗ ಮಳೆ ಕಡಿಮೆಯಾದ ಹಿನ್ನೆಲೆಯಲ್ಲಿ ಮನೆ ರಿಪೇರಿ ಮಾಡಲು ದಯಾನಂದ ಕುಟುಂಬ ಸದಸ್ಯರು ಮುಂದಾಗಿದ್ದರು. ರಿಪೇರಿ ಕೆಲಸ ಮಾಡುವ ಸಂದರ್ಭ ದಯಾನಂದ ಅವರ ಸಹೋದರ ಸತೀಶ್ ಹಾಗೂ ಅವರ ಪತ್ನಿ ಕಮಲಾಕ್ಷಿ ಎಂಬವರು ದಯಾನಂದ ಅವರ ಜೊತೆಗೆ ಕ್ಷುಲ್ಲಕ ವಿಚಾರಕ್ಕೆ ಜಗಳವಾಡಿ ದೊಣ್ಣೆಯಿಂದ ಥಳಿಸಿದ್ದಾರೆ. ಇದರಿಂದ ವಿಶೇಷಚೇತನರಾದ ದಯಾನಂದ ಅವರ ಕಾಲು ಹಾಗೂ ಕೈಗಳಿಗೆ ಗಂಭೀರ ಸ್ವರೂಪದ ಗಾಯಗಳಾಗಿವೆ. ಹಲ್ಲೆಯನ್ನು ತಡೆಯಲು ಮುಂದಾದ ದಯಾನಂದ ಅವರ ಪತ್ನಿ ಲಲಿತ(60) ಅವರ ಮುಖ ಭಾಗಕ್ಕೆ ಗಂಭೀರವಾಗಿ ಗಾಯವಾಗಿದೆ. ಗಾಯಾಳುಗಳಿಗೆ ವಿರಾಜಪೇಟೆ ಸರಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗೆ ಮಡಿಕೇರಿ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ಹಲ್ಲೆ ಪ್ರಕರಣದ ಕುರಿತು ವಿರಾಜಪೇಟೆ ಗ್ರಾಮಾಂತರ ಠಾಣೆಯಲ್ಲಿ ಸತೀಶ್ ಮತ್ತು ಆತನ ಪತ್ನಿ ಕಮಲಾಕ್ಷಿ ಎಂಬವರ ವಿರುದ್ಧ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಮೊಕದ್ದಮೆ ದಾಖಲಿಸಲಾಗಿದ್ದು, ಪೊಲೀಸರು ಮುಂದಿನ ಕಾನೂನು ಕ್ರಮಕೈಗೊಂಡಿದ್ದಾರೆ.

ಕೇಂದ್ರ, ರಾಜ್ಯ ಸರ್ಕಾರಗಳ ಆಡಳಿತ ವೈಖರಿ ವಿರೋಧಿಸಿ

ನ.26ರಿಂದ 72 ಗಂಟೆಗಳ ಮಹಾಧರಣಿ



ಚಾಮರಾಜನಗರ, ನ.21– ಸಂಯುಕ್ತ ಕಿಸಾನ್ ಮೋರ್ಚಾ ಹಾಗೂ ಕೇಂದ್ರ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ವತಿಯಿಂದ ನ.26 ರಿಂದ 28 ರವರೆಗೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ 72 ಗಂಟೆಗಳ ಮಹಾಧರಣಿಯನ್ನು ನಡೆಸಲಾಗುವುದು ಎಂದು ರಾಜ್ಯ ರೈತಸಂಘ ಹಾಗೂ ಹಸಿರುಸೇನೆಯ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ತಿಳಿಸಿದ್ದಾರೆ.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕೇಂದ್ರ ಸರ್ಕಾರದ ಜನವಿರೋಧಿ ನೀತಿಗಳನ್ನು ಹಿಮ್ಮೆಟ್ಟಿಸಲು, ರಾಜ್ಯ ಸರ್ಕಾರದ ರೈತ ವಿರೋಧಿ ಕೃಷಿ ಕಾಯ್ದೆಗಳ ರದ್ಧತಿಗಾಗಿ ಹಾಗೂ ಪರ್ಯಾಯ ನೀತಿಗಳಿಗಾಗಿ ಒತ್ತಾಯಿಸಿ ದೇಶದ ಎಲ್ಲಾ ರಾಜ್ಯಗಳಲ್ಲಿ ಆಯಾಯ ರಾಜಭವನಗಳ ಮುಂದೆ, ಕರ್ನಾಟಕ ರಾಜ್ಯದಲ್ಲಿ ಫ್ರೀಡಂ ಪಾರ್ಕ್ ಮುಂದೆ ಮೂರು ದಿನಗಳ ಮಹಾಧರಣಿ ನಡೆಸಲಾಗುವುದು ಎಂದು ತಿಳಿಸಿದರು.

ಸ್ವಾಮಿನಾಥನ್ ವರದಿಯಂತೆ ಕನಿಷ್ಠ ಬೆಂಬಲ ಬೆಲೆ ಕಾಯ್ದೆ ಜಾರಿ ಮಾಡಬೇಕು. ವಿದ್ಯುತ್ ತಿದ್ದುಪಡಿ ಮಸೂದೆ ರದ್ದತಿ ಮಾಡಬೇಕು. ರಾಜ್ಯ ಸರ್ಕಾರದ ಭೂ ಸುಧಾರಣಾ ತಿದ್ದುಪಡಿ ಕಾಯ್ದೆ, ಎಪಿಎಂಸಿ ತಿದ್ದುಪಡಿ ಕಾಯ್ದೆ, ಜಾನುವಾರು ಸಂರಕ್ಷಣಾ ತಿದ್ದುಪಡಿ ಕಾಯ್ದೆಗಳನ್ನು ರದ್ದುಪಡಿಸಬೇಕು. ಹಾಗೆಯೇ 2023 ರ ಫೆಬ್ರವರಿಯಲ್ಲಿ ಜಾರಿಗೆ ತಂದಿದ್ದ ಕಾರ್ಮಿಕರ ಕೆಲಸದ ಅವಧಿಯನ್ನು 8 ರಿಂದ 12 ಗಂಟೆಗೆ ಏರಿಸುವ ತಿದ್ದುಪಡಿಯನ್ನು ರದ್ದುಗೊಳಿಸುವಂತೆ ಆಗ್ರಹಿಸಿ ಮನವಿ ಸಲ್ಲಿಸಲಾಗುವುದು ಎಂದರು. ನ. 26ರಂದು ಸಂವಿಧಾನ ದಿನವಾಗಿದ್ದು, ಅಂದು ಬೆಳಗ್ಗೆ 8 ಗಂಟೆಗೆ ಫ್ರೀಡಂ ಪಾರ್ಕ್‌ನಲ್ಲಿ ಧ್ವಜಾರೋಹಣ ನಡೆಸಿ, ಸಂಜೆ 4 ರಿಂದ 7 ರ ತನಕ ಸಂವಿಧಾನದ ಆಶಯಗಳನ್ನು ಕುರಿತು ವಿವಿಧ ಗಣ್ಯರಿಂದ ಉಪನ್ಯಾಸ ಕಾರ್ಯಕ್ರಮವನ್ನು ನಡೆಸಲಾಗುವುದು ಎಂದರು. ನ. 27ರಂದು ಪ್ರತಿಭಟನಾ ಸ್ಥಳಕ್ಕೆ ರಾಜ್ಯಪಾಲರು ಆಗಮಿಸಿ ನಮ್ಮ ಬೇಡಿಕೆಗಳ ಮನವಿಯನ್ನು ಸ್ವೀಕರಿಸಬೇಕು ಎಂದು ಒತ್ತಾಯಿಸಿದರು.

ಅಂದು ಅಗ್ನಿಕುಂಡಾ ರಚಿಸಿ ಅದರಲ್ಲಿ ರೈತ ಹಾಗೂ ಕಾರ್ಮಿಕ ವಿರೋಧಿ ಕಾಯ್ದೆಗಳನ್ನು ದಹನ ಮಾಡಲಾಗುವುದು. 28 ರಂದು ರಾಜ್ಯದ ರೈತ ವಿರೋಧಿ ಕಾಯ್ದೆಗಳ ರದ್ದತಿಯ ಬೇಡಿಕೆಗಳ ಮನವಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮಿಸಿ ಪಡೆಯಬೇಕು ಎಂದು ಒತ್ತಾಯಿಸಿದರು. ಅಂದಿನ ಪ್ರತಿಭಟನೆಗೆ ಜಿಲ್ಲೆಯಿಂದ ಒಂದು ಸಾವಿರ ರೈತ ಮುಖಂಡರು ಹಾಗೂ ರಾಜ್ಯದಿಂದ ಸುಮಾರು 60 ಸಾವಿರ ರೈತ ಮುಖಂಡರು ಪಾಲ್ಗೊಳ್ಳಲಿದ್ದೇವೆ ಎಂದರು.

ಸುದ್ದಿಗೋಷ್ಠಿಯಲ್ಲಿ ರೈತಸಂಘ ಹಾಗೂ ಹಸಿರುಸೇನೆಯ ರಾಜ್ಯ ಉಪಾಧ್ಯಕ್ಷ ಮಹೇಶ್ ಪ್ರಭು, ಜಿಲ್ಲಾಧ್ಯಕ್ಷ ಟಿ.ಎಸ್. ಶಾಂತ ಮಲ್ಲಪ್ಪ, ಕಾರ್ಯಾಧ್ಯಕ್ಷ ಶಿವಪುರ ಮಹದೇವಪ್ಪ, ಪ್ರಧಾನ ಕಾರ್ಯದರ್ಶಿ ಭಾಸ್ಕರ್, ಉಪಾಧ್ಯಕ್ಷರಾದ ಹಂಗಳ ಮಾಧು ಹಾಗೂ ಗೌಡೇಗೌಡ ಇದ್ದರು.

ಕಾಂತರಾಜು ಆಯೋಗದ ವರದಿ ಜಾರಿಗೆ ಒತ್ತಾಯಿಸಿ ಪ್ರತಿಭಟನೆ



ಚಾಮರಾಜನಗರ, ನ.21– ಕಾಂತರಾಜು ಆಯೋಗದ ವರದಿ ಹಾಗೂ ಸದಾಶಿವ ಆಯೋಗದ ವರದಿ ಜಾರಿಗೆ ಆಗ್ರಹಿಸಿ ನಗರದಲ್ಲಿ ಮಂಗಳವಾರ ಬಹುಜನ ಸಮಾಜ ಪಕ್ಷದ ಜಿಲ್ಲಾ ಘಟಕದಿಂದ ಪ್ರತಿಭಟನೆ ನಡೆಸಲಾಯಿತು. ನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಜಮಾಯಿಸಿದ ಬಿಎಸ್‌ಪಿ ಕಾರ್ಯಕರ್ತರು, ಪದಾಧಿಕಾರಿಗಳು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ, ಆಕ್ರೋಶ ವ್ಯಕ್ತಪಡಿಸಿದರು.

ಬಳಿಕ ಪಚ್ಚಪ್ಪ ಸರ್ಕಲ್, ಬಿ. ರಾಚಯ್ಯ ಜೋಡಿ ರಸ್ತೆ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಕೆಲಕಾಲ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಈ ವೇಳೆ ಬಿಎಸ್‌ಪಿ ಜಿಲ್ಲಾಧ್ಯಕ್ಷ ಎನ್. ನಾಗಯ್ಯ ಮಾತನಾಡಿ, ಸದಾಶಿವ ಮತ್ತು ಕಾಂತರಾಜು ಆಯೋಗ ವರದಿ ಜಾರಿಗೊಳಿಸಬೇಕು. ಈ ಬಗ್ಗೆ ಬಿಎಸ್‌ಪಿ ಹಿಂದಿನಿಂದಲೂ ಹೋರಾಟ ಮಾಡಿಕೊಂಡು ಬಂದಿದೆ. ಈ ಸರ್ಕಾರವನ್ನು ಜಾರಿಗೊಳಿಸಬೇಕು ಎಂದು ಆಗ್ರಹಿಸುತ್ತೇವೆ ಎಂದರು.

ಈಗಾಗಲೇ ಕಾಂತರಾಜು ಆಯೋಗದ ವರದಿ ಜಾರಿಯಾಗಬೇಕಿತ್ತು. ಆದರೆ, ಕೆಲವೊಂದು ಗೊಂದಲಗಳನ್ನು ಸೃಷ್ಟಿಸಿ ಮೇಲು ಜಾತಿಯ ಪಟ್ಟಭದ್ರ ಹಿತಾಸಕ್ತಿ ಹೊಂದಿರುವ ಜನರು ಆ ವರದಿಯನ್ನು ಜಾರಿ ಮಾಡುವುದು ಬೇಡ ಎಂದು ಒತ್ತಾಯ ಮಾಡುತ್ತಿದೆ. ಸಣ್ಣ–ಪುಟ್ಟ ಜನಾಂಗಗಳಿಗೆ ಪ್ರಾತಿನಿಧ್ಯ ದೊರಕಿಸಿಕೊಡುವ ನಿಟ್ಟಿನಲ್ಲಿ ಬಿಎಸ್‌ಪಿ ಹೋರಾಟ ಮಾಡುತ್ತಿದೆ ಎಂದರು.

ಮುಸ್ಲಿಂರು ಸೇರಿದಂತೆ ಶೇ. 50ಕ್ಕಿಂತ ಹೆಚ್ಚಿರುವ ಒಬಿಸಿಗಳಿಗೆ ಶೇ. 24ರಷ್ಟು ಮೀಸಲಾತಿ ನೀಡಲಾಗಿದೆ. ಇದು ಇನ್ನು ಮುಂದೆ ಇನ್ನಷ್ಟು ಕಡಿಮೆಯಾಗಲಿದೆ. ಜೊತೆಗೆ ಹಿಂದುಳಿದ ವರ್ಗಗಳ ಕೋಟಾ 2ಬಿ ಅಡಿಯಲ್ಲಿ ಮುಸ್ಲಿಂ ಸಮಾಜಕ್ಕೆ ಲಭ್ಯವಿದ್ದ ಶೇ. 4ರಷ್ಟು ಮೀಸಲಾತಿಯನ್ನು ಕಿತ್ತು ಶೇ. 2ರಷ್ಟು ಒಕ್ಕಲಿಗರಿಗೆ, ಶೇ. 2ರಷ್ಟು ಲಿಂಗಾಯತರಿಗೆ ಹಿಂದಿನ ಬಿಜೆಪಿ ಸರ್ಕಾರ ನೀಡುವ ಮೂಲಕ ಸಾಮಾಜಿಕ ನ್ಯಾಯದ ವಿರುದ್ಧ ಕೆಲಸ ಮಾಡಿದೆ ಎಂದು ಆರೋಪಿಸಿದರು. ಕಾಂತರಾಜು ಆಯೋಗದ ವರದಿ ಮತ್ತು ಸದಾಶಿವ ಆಯೋಗದ ವರದಿ ಜಾರಿ ಮಾಡಿ, ಇಲ್ಲದಿದ್ದರೆ ಕುರ್ಚಿ ಖಾಲಿ ಮಾಡಿ ಎಂದು ಸಾಮಾಜಿಕ ನ್ಯಾಯಕ್ಕಾಗಿ ಬಿಎಸ್‌ಪಿ ಜನಾಂದೋಲನ ನಡೆಸುತ್ತಿದೆ ಎಂದರು.

ಕೇಂದ್ರ ಸರ್ಕಾರ ಶೇ. 15ರಷ್ಟು ಇರುವ ಬ್ರಾಹ್ಮಣ, ಕ್ಷತ್ರಿಯ, ಹಾಗೂ ವೈಶ್ಯ ಮೇಲ್ಜಾತಿಯವರಿಗೆ ಸಂವಿಧಾನ ಬಾಹಿರವಾಗಿ ಶೇ. 10ರಷ್ಟು ಮೀಸಲಾತಿ ನೀಡಿದೆ. ರಾಜ್ಯದಲ್ಲಿ ಶೇ. 25.5ರಷ್ಟು ಇರುವ ಮೇಲ್ಜಾತಿಗಳು ಮಾತ್ರವೇ ರಾಜ್ಯದ ಮುಖ್ಯ ಮಂತ್ರಿಗಳಾಗಿದ್ದಾರೆ ಎಂದರು.

ಸಂವಿಧಾನದ ಆಶಯದಂತೆ ಸಾಮಾಜಿಕ ನ್ಯಾಯ ಎತ್ತಿ ಹಿಡಿಯುವ ಕಾಂತರಾಜು ಆಯೋಗದ ವರದಿ ಹಾಗೂ ಸದಾಶಿವ ಆಯೋಗದ ವರದಿಯನ್ನು ವಿಧಾನಸಭೆಯಲ್ಲಿ ಮಂಡಿಸಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಲೋಕಸಭಾ ಕ್ಷೇತ್ರ ಉಸ್ತುವಾರಿಗಳಾದ ಸಿ. ಮಹದೇವಯ್ಯ, ಬಿಎಸ್‌ಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬ.ಮ. ಕೃಷ್ಣಮೂರ್ತಿ, ಉಪಾಧ್ಯಕ್ಷ ಬ್ಯಾಡಮೂಡು ಬಸವಣ್ಣ ಕೊಳ್ಳೇಗಾಲ ನಗರಸಭಾ ಸದಸ್ಯೆ ಜಯಮರಿ, ಮುಖಂಡರಾದ ಎಸ್.ಪಿ. ಮಹೇಶ್, ಗೋವಿಂದರಾಜು ಸಿದ್ದರಾಜು, ರಂಗಸ್ವಾಮಿ ಇತರರು ಭಾಗವಹಿಸಿದ್ದರು.

ಶ್ರೀ ಅಯ್ಯಪ್ಪಸ್ವಾಮಿ ಪೂಜಾ ಮಹೋತ್ಸವ



ಚಾಮರಾಜನಗರ, ನ.21– ತಾಲೂಕಿನ ನಾಗವಳ್ಳಿ ಗ್ರಾಮದ ಉಪ್ಪಾರ ಬಡಾವಣೆಯಲ್ಲಿ ಶ್ರೀ ಅಯ್ಯಪ್ಪಸ್ವಾಮಿ ಭಕ್ತ ಮಂಡಳಿ ವತಿಯಿಂದ 25ನೇ ವರ್ಷದ ಶ್ರೀ ಅಯ್ಯಪ್ಪಸ್ವಾಮಿ ಪೂಜಾ ಮಹೋತ್ಸವವು ಗುರುಗಳ ಸಮ್ಮುಖದಲ್ಲಿ ಭಕ್ತಿಪೂರಕವಾಗಿ ಜರುಗಿತು.

ಗ್ರಾಮದ ಬಡಾವಣೆಗಳಲ್ಲಿ ಸತ್ತಿಗೆ–ಸುರಪಾನಿ ವಾದ್ಯಗೋಷ್ಠಿಗಳೊಂದಿಗೆ ಕಂಡಾಯ ಮೆರವಣಿಗೆ ವಿಜೃಂಭಣೆಯಿಂದ ಸಾಗಿತು. 101 ಹೆಣ್ಣು ಮಕ್ಕಳು ಹಾಲರವೆ ಉತ್ಸವದೊಂದಿಗೆ ಮೆರವಣಿಗೆಯಲ್ಲಿ ಸಾಗಿದರು.ಗ್ರಾಮದ ಪ್ರಮುಖ ಬೀದಿಗಳು ತಳಿರು–ತೋರಣಗಳಿಂದ ಅಲಂಕೃತಗೊಂಡು ಕಂಡಾಯ ಮೆರವಣಿಗೆ ಉದ್ದಕ್ಕೂ ರಂಗೋಲಿ ಹಾಕಿ ಮೆರವಣಿಗೆಗೆ ಪೂರ್ಣಕುಂಭ ಸ್ವಾಗತವನ್ನು ಭಕ್ತಾದಿಗಳು ಕೋರಿದರು. ಶ್ರೀ ಅಯ್ಯಪ್ಪಸ್ವಾಮಿ ಭಕ್ತ ಮಂಡಳಿ ವತಿಯಿಂದ ಭಕ್ತಾದಿಗಳಿಗೆ ಅನ್ನ ಸಂತರ್ಪಣೆ ಮಾಡಿದರು. ಅಯ್ಯಪ್ಪಸ್ವಾಮಿ ಭಕ್ತರು, ಉಪ್ಪಾರ ಸಮುದಾಯದ ಯಜಮಾನರುಗಳು, ಕುಲಸ್ಥರು ಪಾಲ್ಗೊಂಡಿದ್ದರು.

ಸುಧಾಮಣಿ ನಿಧನ



ಚಾಮರಾಜನಗರ: ತಾಲೂಕಿನ ಆಲೂರು ಗ್ರಾಮದ ಲೇಟ್ ಅಂಗಡಿ ಸಿದ್ದಪ್ಪನವರ ಮಕ್ಕಳಾದ ಎಸ್. ರಾಜಶೇಖರ ಮೂರ್ತಿ (ಎಸ್. ಮಲ್ಲು) ಅವರ ಧರ್ಮಪತ್ನಿ ಶ್ರೀಮತಿ ಸುಧಾಮಣಿ (55) ಅವರು ಮಂಗಳವಾರ ಸಂಜೆ ನಿಧನರಾದರು.

ಮೃತರು ಪತಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಬುಧವಾರ ಮಧ್ಯಾಹ್ನ ಅವರ ಜಮೀನಿನಲ್ಲಿ ನಡೆಯಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

ಹೊಂಗನೂರಿನಲ್ಲಿ ಪಿಯು ಕಾಲೇಜು ಆರಂಭಿಸಲು ಕ್ರಮ: ಎಆರ್‌ಕೆ

ಹೊಂಗನೂರು ಗ್ರಾ.ಪಂ ಕೇಂದ್ರದಲ್ಲಿ ಜನ ಸಂಪರ್ಕ ಸಭೆ ಯಶಸ್ವಿ



ಚಾಮರಾಜನಗರ, ನ.21– ಗ್ರಾಪಂ ಕೇಂದ್ರ ಹೊಂಗನೂರು ಗ್ರಾಮದಲ್ಲಿ ಪದವಿ ಪೂರ್ವ ಕಾಲೇಜು ಆರಂಭಿಸಲು ಶಿಕ್ಷಣ ಸಚಿವರಿಗೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಿದ್ದು, ಆಡಳಿತಾತ್ಮಕ ಮಂಜೂರಾತಿ ವೇಳೆಯಲ್ಲಿ ಪ್ರಥಮ ಆದ್ಯತೆಯಾಗಿ ಹೊಂಗನೂರು ಶಾಲೆಯನ್ನು ಸೇರಿಸಲಾಗುವುದು ಎಂದು ಕೊಳ್ಳೇಗಾಲ ಕ್ಷೇತ್ರದ ಶಾಸಕ ಎ.ಆರ್. ಕೃಷ್ಣಮೂರ್ತಿ ತಿಳಿಸಿದರು.

ತಾಲೂಕಿನ ಹೊಂಗನೂರು ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರ ಆವರಣದಲ್ಲಿ ನಡೆದ ಜನಸಂಪರ್ಕ ಸಭೆಯಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಮಾತನಾಡಿದ ಅವರು, ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಸೇರಿದ ಹೊಂಗನೂರು ಬಹಳ ದೊಡ್ಡ ಗ್ರಾಮದ ಜೊತೆಗೆ ಪರಿಶಿಷ್ಟಜಾತಿ, ಪರಿಶಿಷ್ಟ ವರ್ಗ ಹಾಗೂ ಹಿಂದುಳಿದ ಜನಾಂಗದವರೇ ಹೆಚ್ಚು ವಾಸಿಸುತ್ತಿರುವ ಪ್ರದೇಶವಾಗಿದೆ. ಗ್ರಾಮದಲ್ಲಿ ಎಸ್‌ಎಸ್‌ಎಲ್‌ಸಿ ವರೆಗೆ ಮಾತ್ರ ವ್ಯಾಸಂಗ ಮಾಡಲು ಅವಕಾಶ ಇದೆ ಪಿಯುಸಿ ಹಾಗೂ ಪದವಿ ಎಂದರು.

ಇನ್ನೂ ಬಹಳಷ್ಟು ಮಹಿಳೆಯರು ಗೃಹಲಕ್ಷ್ಮಿ ಯೋಜನೆಯಲ್ಲಿ 2 ಸಾವಿರ ಬರುತ್ತಿಲ್ಲ ಎಂದು ದೂರಿದ್ದೀರಿ. ಈಗಾಗಲೇ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಹಾಗೂ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯ ಸಹಯೋಗದಲ್ಲಿ ಪಡಿತರ ಚೀಟಿಗಳ ತಿದ್ದುಪಡಿ ಹಾಗೂ ಮನೆಯ ಯಜಮಾನಿ ಮಹಿಳೆಯೇ ಆಗಿರಬೇಕು ಎಂಬ ನಿಯಮದಡಿಯಲ್ಲಿ ಕಾರ್ಡುಗಳ ತಿದ್ದುಪಡಿಯಾಗುತ್ತಿದೆ. ಆಧಾರ್ ಕಾರ್ಡು, ಬ್ಯಾಂಕ್ ಖಾತೆ ಮತ್ತು ಪಡಿತರ ಚೀಟಿಗಳಲ್ಲಿ ಹೊಂದಾಣಿಕೆಯ ಸಮಸ್ಯೆಯಿಂದ ಹಲವರಿಗೆ ಹಣ ಬಂದಿಲ್ಲ ಇದನ್ನು ಸರಿಪಡಿಸಲು ಎರಡು ಇಲಾಖೆಯ ಜೊತೆಗೆ ಕಂದಾಯ ಇಲಾಖೆಯವರನ್ನು ಸಹ ತೊಡಗಿಸಿಕೊಂಡು ಕೆಲಸ ಮಾಡಲಾಗುತ್ತಿದೆ. ಪ್ರತಿ ಮಾಹೆ 2 ಸಾವಿರ ರೂ. ಒಬ್ಬರಿಗೂ ಮಿಸ್ ಆಗದೆ ಅವರ ಖಾತೆಗೆ ಜಮಾ ಮಾಡಬೇಕೆಂದು ಚಾ.ನಗರಕ್ಕೆ ಆಗಮಿಸಿದ್ದ ನಮ್ಮ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಖಡಕ್ ಆಗಿ ಅಧಿಕಾರಿಗಳಿಗೆ ಸೂಚನೆ ಕೊಟ್ಟಿದ್ದಾರೆ. ನ.20 ರಂದು ಎರಡನೇ ಹಂತದ ಹಣವನ್ನು ಖಾತೆಗೆ ಹಾಕಲಾಗುತ್ತಿದೆ. ಈ ಸಂದರ್ಭದಲ್ಲಿ ಎಲ್ಲರಿಗೂ ಬರುವ ನಿರೀಕ್ಷೆ ಇದೆ ಎಂದು ಕೃಷ್ಣಮೂರ್ತಿ ತಿಳಿಸಿದರು.

ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯರು ಸರಿಯಾಗಿ ರೋಗಿಗಳನ್ನು ನೋಡುತ್ತಿಲ್ಲ ಎಂಬ ದೂರಿನ ಹಿನ್ನೆಲೆಯಲ್ಲಿ ಸ್ಥಳಕ್ಕೆ ವೈದ್ಯಾಧಿಕಾರಿ ಮಮತಾ ಕುಮಾರಿ ಅವರನ್ನು ಕರೆಸಿದ ಶಾಸಕರು, ಸೂಕ್ತ ಚಿಕಿತ್ಸೆಯನ್ನು ಎಲ್ಲರಿಗೂ ನೀಡಬೇಕು ಎಂದು ತಾಕೀತು ಮಾಡಿದರು. ಅಲ್ಲದೇ ವೃದ್ಧಾಪ್ಯ ಇತರೇ ಯೋಜನೆಗಳಿಗೆ ವೈದ್ಯಕೀಯ ದಾಖಲಾತಿ ನೀಡುವಾಗ ಲಂಚದ ಆರೋಪ ಕೇಳಿಬರುತ್ತಿದೆ. ಎಚ್ಚರಿಕೆಯಿಂದ ಕೆಲಸ ಮಾಡಿ, ಜನ ಸಾಮಾನ್ಯರು ಮೆಚ್ಚುವಂತೆ ಕರ್ತವ್ಯ ನಿರ್ವಹಿಸಬೇಕು. ಮುಂದೆ ಇಂಥ ದೂರುಗಳು ಬರದಂತೆ ನೋಡಿಕೊಂಡರೆ ಒಳ್ಳೆಯದು ಎಂದರು. ರಾತ್ರಿ ಪಾಳಿಯಲ್ಲಿ ವೈದ್ಯರನ್ನು ನೇಮಕ ಮಾಡುವುದು ಹಾಗೂ ಅಂಬುಲೆನ್ಸ್ ಅನ್ನು ಹೊಂಗನೂರು ಕೇಂದ್ರಕ್ಕೆ ಪ್ರತ್ಯೇಕವಾಗಿ ನೀಡುವ ಕುರಿತು ಮುಂದಿನ ದಿನಗಳಲ್ಲಿ ಪರಿಶೀಲನೆ ಮಾಡುವುದಾಗಿ ತಿಳಿಸಿದರು.

ಗ್ರಾಮದ ಹೊಸ ಬಡಾವಣೆಗಳಿಗೆ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ರಸ್ತೆ, ಚರಂಡಿ ಹಾಗೂ ನೈರ್ಮಲ್ಯಕ್ಕೆ ಹೆಚ್ಚಿನ ಒತ್ತು ನೀಡಬೇಕು. ಹೊಂಗನೂರು ಪಂಚಾಯಿತಿಯಲ್ಲಿ ಒಬ್ಬರು ಪೌರಕಾರ್ಮಿಕರು ಇಲ್ಲ. ಇನ್ನು ಗ್ರಾಮ ಸ್ವಚ್ಛವಾಗುವುದು ಹೇಗೆ ಎಂದು ಮುಖಂಡರು ಪ್ರಶ್ನೆ ಮಾಡಿದರು. ಜಲ ಜೀವನ ಮಿಷನ್‌ನಲ್ಲಿ ಮನೆಗಳಿಗೆ ನೀರು ಬರುತ್ತಿಲ್ಲ. ಎಸ್‌ಇಪಿ, ಟಿಎಸ್‌ಪಿ ಅನುದಾನದಲ್ಲಿ ಕೆಲಸ ಮಾಡಿದ್ದರು. ಆ ವರ್ಗದವರ ಮನೆಗಳಿಗೆ ನೀರು ಬರುತ್ತಿಲ್ಲ ಇತರೇ ವರ್ಗಗಳಿಗೆ ನೀಡಲಾಗಿದೆ. ಇದರೊಟ್ಟಿಗೆ ಗ್ರಾಮದ ಸರ್ವಾಂಗೀಣ ಅಭಿವೃದ್ಧಿಗೆ ತಾವು ಕಂಕಣ ಬದ್ಧರಾಗಬೇಕು. ಎಂದು ಗ್ರಾಮಸ್ಥರು ಮನವಿ ಮಾಡಿಕೊಳ್ಳುವ ಜೊತೆಗೆ ಎ.ಆರ್.ಕೃಷ್ಣಮೂರ್ತಿ ಅವರಿಗೆ ಶಾಲು ಹೊದಿಸಿ, ಹಾರ ಹಾಕಿ, ಅಂಬೇಡ್ಕರ್ ಅವರ ಪುತ್ಥಳಿಯನ್ನು ನೆನಪಿನ ಕಾಣಿಕೆಯಾಗಿ ಹೊಂಗನೂರು ಗ್ರಾಮದ ಮುಖಂಡರು ನೀಡಿದರು.

ಸಭೆಯಲ್ಲಿ ವಿವಿಧ ಸಮಸ್ಯೆಗಳನ್ನು ಪರಿಹರಿಸುವಂತೆ 100ಕ್ಕೂ ಹೆಚ್ಚು ಅರ್ಜಿಗಳು ಬಂದವು. ವಿವಿಧ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ, ತಮ್ಮ ಇಲಾಖೆಯ ಸಮಸ್ಯೆಗಳನ್ನು ಅಲ್ಲಿಯೇ ಬಗೆಹರಿಸುವ ಪ್ರಯತ್ನ ಮಾಡಿದರು. ಕೆಲವು ವಿಚಾರಗಳಿಗೆ ಕಾಲಾವಕಾಶ ಪಡೆದುಕೊಂಡರು.

ಮೈಸೂರು ಮಿತ್ರ

ಚಿಕ್ಕಮಗಳೂರು: ಬಿರಿಯಾನಿ ಸೇವಿಸಿ 17 ಮಂದಿ ಅಸ್ವಸ್ಥ

ಕಡೂರು, ನ.21– ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲೂಕಿನ ಮರವಂಜಿ ಗ್ರಾಮದ ಮನೆಯೊಂದರಲ್ಲಿ ನಡೆದ ಕುಟುಂಬ ಸಮಾರಂಭದಲ್ಲಿ ಬಿರಿಯಾನಿ ಸೇವಿಸಿದ 17 ಮಂದಿ ಅಸ್ವಸ್ಥಗೊಂಡಿರುವ ಘಟನೆ ಭಾನುವಾರ ನಡೆದಿದೆ. ಮರವಂಜಿ ಗ್ರಾಮದಲ್ಲಿ ಭಾನುವಾರ ಕಾರ್ಯಕ್ರಮ ನಡೆದಿತ್ತು. ಈ ಕಾರ್ಯಕ್ರಮದಲ್ಲಿ ತಯಾರಿಸಿದ ಬಿರಿಯಾನಿ ಸೇವಿಸಿದ ಕೆಲವರಲ್ಲಿ ಸೋಮವಾರ ವಾಂತಿ–ಭೇಧಿ ಕಾಣಿಸಿಕೊಂಡು ಅಸ್ವಸ್ಥಗೊಂಡಿದ್ದಾರೆ. ಕೂಡಲೇ ಗ್ರಾಮಸ್ಥರು ಅವರನ್ನು ಆಂಬುಲೆನ್ಸ್ ಮೂಲಕ ಆಸ್ಪತ್ರೆಗೆ ದಾಖಲಿಸಿದ್ದಾರೆ. ಈ ವೇಳೆ ಸಾರ್ವಜನಿಕ ಆಸ್ಪತ್ರೆಯ ಆಡಳಿತಾಧಿಕಾರಿ ಡಾ.ಎಸ್.ಎನ್. ಉಮೇಶ್ ಹಾಗೂ ಸಿಬ್ಬಂದಿ ತಪಾಸಣೆ ನಡೆಸಿ ಚಿಕಿತ್ಸೆ ನೀಡಿದರು. ದಾಖಲಾದವರ ಪೈಕಿ 8 ಪುರುಷರು, 9 ಮಹಿಳೆಯರು ಸೇರಿದ್ದಾರೆ.

ಒಂದನೇ ಪುಟದಿಂದ

ಅಭಾವ ಉಂಟಾಗಲ್ಲ!

ಕೋಟಿ ರೂ. ಮನ್ನಾ ಮಾಡಿ, ಗೃಹ ಜ್ಯೋತಿ ಯೋಜನೆಗೆ ಸೇರ್ಪಡೆಗೊಳಿಸಲಾಗಿದೆ.

ಕಾಫಿ ಬೆಳೆಗಾರರ ಬಾಕಿ ಪಾವತಿಸಿದರೆ ಬಡ್ಡಿ ಮನ್ನಾ: ಕೊಡಗು, ಹಾಸನ ಮತ್ತು ಚಿಕ್ಕಮಗಳೂರು ಜಿಲ್ಲೆಯ ಕಾಫಿ ಬೆಳೆಗಾರರ 10 ಹೆಚ್.ಪಿ.ವರೆಗಿನ ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಬಿಲ್ ಅಸಲು 47.7 ಕೋಟಿ ರೂ. ಮತ್ತು ಬಡ್ಡಿ 16.47 ಕೋಟಿ ರೂ. ಸೇರಿ ಒಟ್ಟು 64.24 ಕೋಟಿ ರೂ. 2023ರ ಸೆಪ್ಟೆಂಬರ್ 30 ರವರೆಗೆ ಬಾಕಿ ಉಳಿದಿದೆ. ಅಸಲು ಮೊತ್ತ ಪಾವತಿಸಿದ ನಂತರ ಸಂಚಿತ ಬಡ್ಡಿಯನ್ನು ಮನ್ನಾ ಮಾಡಲಾಗುವುದು. ರಾಜ್ಯದಲ್ಲಿ 2500 ಮೆ.ವ್ಯಾ. ಪಂಪ್ಡ್ ಸ್ಟೋರೇಜ್, ಹೈಡ್ರೋ, ಸೋಲಾರ್ ಸೇರಿದಂತೆ 15,000 ಕೋಟಿ ರೂ. ಮೊತ್ತದ ವಿವಿಧ ವಿದ್ಯುತ್ ಯೋಜನೆಗಳನ್ನು ಕೈಗೊಳ್ಳುವ ಸಂಬಂಧ ಕೇಂದ್ರ ಸರ್ಕಾರ ಸ್ವಾಮ್ಯದ ತೆಹ್ರಿ ಹೈಡ್ರೊ ಡೆವಲಪ್‌ಮೆಂಟ್ ಕಾರ್ಪೊರೇಶನ್ ಲಿಮಿಟೆಡ್ ಜತೆ ರಾಜ್ಯ ಸರ್ಕಾರ ಒಪ್ಪಂದ ಮಾಡಿಕೊಂಡಿದೆ.

ಹಾದಿ ಬೀದಿಯಲ್ಲಿ ಕಾರ್ಯಕರ್ತರ ಮಾರಾಮಾರಿ

ಇದು ಹೀಗೇ ಮುಂದುವರೆದರೆ ಹಾದಿ–ಬೀದಿಯಲ್ಲಿ ಕಾರ್ಯಕರ್ತರ ನಡುವೆ ಮಾರಾಮಾರಿ ನಡೆಯುವ ಪರಿಸ್ಥಿತಿ ಸೃಷ್ಟಿ ಆಗುತ್ತದೆ. ಅಂತಹ ಪರಿಸ್ಥಿತಿ ಸೃಷ್ಟಿಯಾದರೆ ಸರ್ಕಾರ ಮತ್ತು ಪೊಲೀಸ್ ಇಲಾಖೆಯೇ ಹೊಣೆ ಆಗಬೇಕಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಅವರ ಹಿಂಬಾಲಕರು ಈ ಕೃತ್ಯದಲ್ಲಿ ತೊಡಗಿದ್ದಾರೆ. ಗೃಹ ಇಲಾಖೆ ಇದಕ್ಕೆ ಕಡಿವಾಣ ಹಾಕದಿದ್ದರೆ ಇದಕ್ಕಿಂತ ಹೆಚ್ಚಿನ ಪೋಸ್ಟರ್ ಚಳವಳಿ ನಡೆಯುತ್ತದೆ.

ರಾಜ್ಯದ ಜನತೆಗೆ ಕಾಂಗ್ರೆಸ್ ಭ್ರಷ್ಟಾಚಾರದ ಬಗ್ಗೆ ತಿಳಿಸುವ ಕೆಲಸವನ್ನು ಕುಮಾರಸ್ವಾಮಿ ಮಾಡುತ್ತಿದ್ದಾರೆ. ಕಾಂಗ್ರೆಸ್‌ನವರು ಮಾಡಿದ್ದೆಲ್ಲಾ ಸರಿಯಾಗಿದ್ದರೆ ಈ ರೀತಿ ಪೋಸ್ಟರ್ ಅಂಟಿಸುವ ಕೆಲಸ ಮಾಡುತ್ತಿರಲಿಲ್ಲ ಎಂದು ಕಿಡಿಕಾರಿದರು. ಪೋಸ್ಟರ್ ಅಂಟಿಸಲು ನಮ್ಮಲ್ಲೂ ಕಾರ್ಯಕರ್ತರು, ಅಭಿಮಾನಿಗಳು ಇದ್ದಾರೆ. ಕಾಂಗ್ರೆಸ್ ಮಾಡಿದ್ದನ್ನೇ ನಾವು ಮಾಡುತ್ತೇವೆ. ಡಿಸೆಂಬರ್ 4ರಿಂದ ಬೆಳಗಾವಿಯಲ್ಲಿ ವಿಧಾನಸಭಾ ಅಧಿವೇಶನ ಆರಂಭವಾಗಲಿದ್ದು ಕುಮಾರಸ್ವಾಮಿ ಅವರ ಆರೋಪಗಳಿಗೆ ಸರ್ಕಾರ ಸದನದಲ್ಲಿ ಉತ್ತರ ನೀಡಲಿ, ಜೆಡಿಎಸ್ ನಾಯಕರು ಸುಮ್ಮನೆ ಕೂರಲ್ಲ ಎಂಬುದನ್ನು ಕಾಂಗ್ರೆಸ್ ಅರ್ಥ ಮಾಡಿಕೊಳ್ಳಬೇಕು ಎಂದು ಮಂಜುನಾಥ್ ಆಕ್ರೋಶ ವ್ಯಕ್ತಪಡಿಸಿದರು. ಪೋಸ್ಟರ್ ಅಂಟಿಸಬಾರದು ಎಂಬುದಾಗಿ ಹೈಕೋರ್ಟ್‌ನ ಸ್ಪಷ್ಟ ಆದೇಶವಿದೆ, ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಪರವಾಗಿ ಸ್ಮಾರ್ಟ್ ಕಾರ್ಡ್‌ಗಳನ್ನು ನೀಡಿದ್ದ ಏಜೆನ್ಸಿಯೇ ಇಂದು ವಿವಾದಾತ್ಮಕ ಪೋಸ್ಟರ್‌ಗಳನ್ನು ಅಂಟಿಸುವ ಕೆಲಸ ಮಾಡುತ್ತಿದೆ. ಕುಮಾರಸ್ವಾಮಿ ಯಾವುದೇ ಆರೋಪ ಮಾಡಿದರೂ ದಾಖಲೆ ಇಟ್ಟುಕೊಂಡು ಮಾತನಾಡುತ್ತಾರೆ. ನಮ್ಮ ನಾಯಕರ ಆರೋಪಕ್ಕೆ ಕಾಂಗ್ರೆಸ್‌ನವರು ಏಕೆ ಹೆದರುತ್ತಾರೆ. ಪೆನ್‌ಡ್ರೈವ್ ಬಗ್ಗೆಯೂ ಕುಮಾರಸ್ವಾಮಿ ಉತ್ತರ ಕೊಟ್ಟಿದ್ದಾರೆ. 'ಪೆನ್‌ಡ್ರೈವ್ ವಿಷಯ ಬೇಡ, ಸರ್ಕಾರ ಬಂದು ಸ್ವಲ್ಪ ತಿಂಗಳಾಗಿದೆ' ಎಂದು ಕಾಂಗ್ರೆಸ್ ನಾಯಕರೇ ಕುಮಾರಸ್ವಾಮಿ ಬಳಿ ಮನವಿ ಮಾಡಿದ್ದರು ಎಂದರು.

ನಿಗಮ–ಮಂಡಳಿಗೆ ಶಾಸಕರ ಪಟ್ಟಿ

ಸಚಿವಸ್ಥಾನಕ್ಕೆ ಪಟ್ಟು ಹಿಡಿದಿರುವ ಕೆಲ ಹಿರಿಯ ಶಾಸಕರು ಕೊಟ್ಟ ನಿಗಮ–ಮಂಡಳಿ ಅಧ್ಯಕ್ಷಗಾಗಿ ಒಪ್ಪಿಕೊಳ್ಳದಿದ್ದರೆ, ತಪ್ಪು ಸಂದೇಶ ರವಾನೆ ಆಗಲಿದೆ ಎಂಬ ಕಾರಣಕ್ಕೆ ಮೊದಲೇ ಗೊಂದಲ ಬಗೆಹರಿಸಲು ಈ ಕ್ರಮ ಕೈಗೊಳ್ಳಲಾಗಿದೆ.

ಸಂಭಾವ್ಯರ ಪಟ್ಟಿ	
ಪಿ.ಎಂ ನರೇಂದ್ರ ಸ್ವಾಮಿ	ಯಶವಂತ್ ರಾಯ್ ಗೌಡ ಪಾಟೀಲ್
ರಮೇಶ್ ಬಾಬು ಬಂಡಿಸಿದ್ದೇಗೌಡ	ಬಿ.ಜಿ ಗೋವಿಂದಪ್ಪ
ಅನಿಲ್ ಚಿಕ್ಕಮಾದು	ರಾಘವೇಂದ್ರ ಹಿಟ್ನಾಳ್
ಟಿ.ಡಿ ರಾಜೇಗೌಡ	ರಘುಮೂರ್ತಿ
ಶಿವಲಿಂಗೇಗೌಡ	ಭೀಮಣ್ಣ ನಾಯ್ಕ್
ಬಿ.ಕೆ ಸಂಗಮೇಶ್	ಸತೀಶ್ ಸೈಲ್
ಬಂಗಾರಪೇಟೆ ನಾರಾಯಣಸ್ವಾಮಿ	ಪ್ರಸಾದ್ ಅಬ್ಬಯ್ಯ
ಕೆ.ವೈ ನಂಜೇಗೌಡ	ಜಿ.ಟಿ ಪಾಟೀಲ್
ಬಿ.ಆರ್ ಪಾಟೀಲ್	ಡಿ.ಆರ್ ಪಾಟೀಲ್
ಗಣೇಶ್ ಹುಕ್ಕೇರಿ	ಬಸನಗೌಡ ತುರುವಿಹಾಳ್
ಮಹಾಂತೇಶ್ ಕೌಜಲಗಿ	

ಜೈಲು, 10 ಕೋಟಿ ದಂಡ!

ನಕಲು ಅಥವಾ ಹೊರಗಿನಿಂದ ಸಹಾಯ ಪಡೆದು ಪರೀಕ್ಷಾ ಅಕ್ರಮ ಎಸಗುವ ಅಭ್ಯರ್ಥಿಗೆ ಐದು ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ರೂ. 10 ಲಕ್ಷ ದಂಡ ವಿಧಿಸುವ ಪ್ರಸ್ತಾವ ಮಸೂದೆಯ ಸೆಕ್ಷನ್ 10 (1)ರಲ್ಲಿದೆ. ಅಭ್ಯರ್ಥಿಯೂ ಸೇರಿದಂತೆ ಯಾವುದೇ ವ್ಯಕ್ತಿ ಬೇರೊಬ್ಬರ ಹೆಸರಿನಲ್ಲಿ ಪರೀಕ್ಷೆ ಬರೆಯಲು ಪ್ರಯತ್ನಿಸುವುದು, ಪ್ರಶ್ನೆಪತ್ರಿಕೆ ಸೋರಿಕೆ ಮಾಡುವುದು, ಸೋರಿಕೆಗೆ ಪ್ರಯತ್ನಿಸುವುದು, ಅಕ್ರಮವಾಗಿ ಪ್ರಶ್ನೆ ಪತ್ರಿಕೆಗಳನ್ನು ಸಂಗ್ರಹಿಸಿಟ್ಟುಕೊಳ್ಳುವುದು, ಅಕ್ರಮವಾಗಿ ಉತ್ತರ ಬರೆಯುವುದು ಅಥವಾ ಬರೆಯಲು ನೆರವಾಗುವುದು, ನೆರವು ಕೋರುವುದು ಸೇರಿದಂತೆ ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಪರೀಕ್ಷಾ ಅಕ್ರಮಕ್ಕೆ ನೆರವು ನೀಡುವವರಿಗೆ ಎಂಟರಿಂದ 12 ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ ರೂ. 15 ಲಕ್ಷದಿಂದ ರೂ. 10 ಕೋಟಿ ಯವರೆಗೂ ದಂಡ ವಿಧಿಸುವ ಪ್ರಸ್ತಾವ ಸೆಕ್ಷನ್ 10 (2)ರಲ್ಲಿದೆ. ಪರೀಕ್ಷಾ ಅಕ್ರಮಗಳಲ್ಲಿ ಭಾಗಿಯಾದ ಅಭ್ಯರ್ಥಿಗಳು ಮುಂದಿನ ಎರಡು ವರ್ಷಗಳವರೆಗೆ ಯಾವುದೇ ಸಾರ್ವಜನಿಕ ಪರೀಕ್ಷೆಯನ್ನು ತೆಗೆದುಕೊಳ್ಳದಂತೆ ಅನರ್ಹಗೊಳಿಸುವ ಪ್ರಸ್ತಾವವು ಸೆಕ್ಷನ್ 11 (2)ರಲ್ಲಿದೆ. ಯಾವುದೇ ಸಂಸ್ಥೆ ಅಥವಾ ಅದರ ಆಡಳಿತ ಮಂಡಳಿಯು ಪರೀಕ್ಷಾ ಅಕ್ರಮದಲ್ಲಿ ಭಾಗಿಯಾದರೆ ಆ ಪರೀಕ್ಷೆಯ ಸಂಪೂರ್ಣ ವೆಚ್ಚವನ್ನು ಅಂತಹ ಸಂಸ್ಥೆ, ಆಡಳಿತ ಮಂಡಳಿಯಿಂದಲೇ ವಸೂಲಿ ಮಾಡಲು ಸೆಕ್ಷನ್ 13 ಅವಕಾಶ ಕಲ್ಪಿಸಲಿದೆ.

ಕಾಂಗ್ರೆಸ್ ಮುಖಂಡ ರೌಡಿಶೀಟರ್ ಬಂಧನ

ಹಲವು ಪ್ರಕರಣಗಳಲ್ಲಿ ಬಂಧನವಾದ ಸಂದರ್ಭದಲ್ಲಿ ಪೊಲೀಸರು ನೇವಲ್ ಅಶೋಕ್‌ಗೆ ಎಚ್ಚರಿಕೆ ನೀಡಿದ್ದರೂ, ಪದೇ ಪದೇ ಅಪರಾಧ ಕೃತ್ಯಗಳಲ್ಲಿ ಭಾಗಿಯಾಗುತ್ತಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಮಧ್ಯೆ ಈತನ ತಂದೆ ಎಂ.ಕೆ.ಅಶೋಕ್ ಸಹ ರೌಡಿಶೀಟರ್ ಎಂದು ಪೊಲೀಸ್ ಆಯುಕ್ತ ರಮೇಶ್ ಬಾನೋತ್ ತಿಳಿಸಿದ್ದಾರೆ.

ಎಂ.ಕೆ.ಅಶೋಕ್ ಹಾಗೂ ಮಗ ನೇವಲ್ ಅಶೋಕ್, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ಫೋಟೋಗಳಲ್ಲಿ ಕಾಣಿಸಿಕೊಂಡಿದ್ದಾರೆ.

ವಾಪಸ್ ಪಡೆಯಲು ಜಿಲ್ಲಾಡಳಿತ ನಿರ್ಧಾರ

ಹೆಸರು ಸೇರ್ಪಡೆಯಾಯಿತು. ಸಮಯಾವಕಾಶ ಇಲ್ಲದ ಕಾರಣ ಪೊಲೀಸರಿಂದ ವರದಿ ತರಿಸಿಕೊಳ್ಳುವುದು ತಡವಾಯಿತು. ತನ್ನ ವಿರುದ್ಧ ಯಾವುದೇ ಪ್ರಕರಣ ಇಲ್ಲ ಎಂದು ಅಶೋಕ್ ಕೂಡ ಸ್ಪಷ್ಟಪಡಿಸಿದ್ದರು. ಆದರೆ ಈಗ ಅಶೋಕ್ ರೌಡಿಶೀಟರ್ ಎಂಬ ವಿಚಾರ ತಿಳಿದು ಬಂದಿದೆ. ಜಿಲ್ಲಾಡಳಿತ ಇದನ್ನು ಸ್ಪಷ್ಟಪಡಿಸಿಕೊಂಡು ಪ್ರಶಸ್ತಿ ವಾಪಸ್ ಪಡೆಯಲು ನಿರ್ಧರಿಸಿದೆ. ಆದ ಕಾರಣ ಅಶೋಕ್‌ಗೆ ನೀಡಿದ್ದ ರಾಜ್ಯೋತ್ಸವ ಪ್ರಶಸ್ತಿಯನ್ನು ವಾಪಸು ಪಡೆಯುತ್ತೇವೆ ಎಂದು ಸುದರ್ಶನ್ ಹೇಳಿದ್ದಾರೆ.

ಶುಕ್ರವಾರ ಸರ್ಕಾರಕ್ಕೆ ಜಾತಿಗಣತಿ ವರದಿ ಸಲ್ಲಿಕೆ

ಪಕ್ಷದೊಳಗೂ ಬಿರುಕು ಸೃಷ್ಟಿಯಾಗುವ ಸಂಭವ ಇದೆ ಎಂದು ಎಚ್ಚರಿಕೆ ನೀಡಿದೆ ಎನ್ನಲಾಗಿದೆ. ಸಮುದಾಯವಾರು ಭಿನ್ನಾಭಿಪ್ರಾಯ, ಸಂಘರ್ಷಕ್ಕೂ ಕಾರಣವಾಗಬಹುದು. ಒಬಿಸಿ ವರ್ಗಗಳು ಕಾಂಗ್ರೆಸ್ ಕಡೆ ಮುಖ ಮಾಡಬಹುದು. ಆದರೆ ಲಿಂಗಾಯತ ಸಮುದಾಯ ವಿಮುಖರಾಗಬಹುದು. ಒಕ್ಕಲಿಗ ಸಮುದಾಯ ಕೂಡ ಧ್ರುವೀಕರಣ ಆಗಬಹುದು. ಗ್ಯಾರಂಟಿಗಳ ಲಾಭ ದಕ್ಕದೇ ಹೋಗಬಹುದು ಎಂದು ಗುಪ್ತಚರ ವರದಿ ತಿಳಿಸಿದೆ ಎನ್ನಲಾಗಿದೆ.

ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಗಣತಿ ಗ್ಯಾರಂಟಿ

ಮತ್ತು 10 ಲಕ್ಷ ಉದ್ಯೋಗಾವಕಾಶಗಳು ಸೇರಿದಂತೆ ಹಲವು ಭರವಸೆಗಳನ್ನು ನೀಡಿದೆ. ಬಿಹಾರದಲ್ಲಿ ನಡೆಸಿದ ಜಾತಿ ಗಣತಿ ರೀತಿಯಲ್ಲೇ ರಾಜಸ್ಥಾನದಲ್ಲೂ ಜಾತಿ ಸಮೀಕ್ಷೆ ನಡೆಸಲಾಗುವುದು ಎಂದು ರಾಜಸ್ಥಾನ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ಈ ಹಿಂದೆ ಹೇಳಿದ್ದರು. ಈ ವಿಷಯದ ಬಗ್ಗೆ ಪ್ರಧಾನಿ ನರೇಂದ್ರ ಮೋದಿಯವರ ವಿರುದ್ಧ ವಾಗ್ದಾಳಿ ನಡೆಸಿದ ರಾಹುಲ್, ಈ ಹಿಂದೆ ಪ್ರಧಾನಿ ತಾನು ಒಬಿಸಿ ಎಂದು ಹೇಳುತ್ತಿದ್ದರು. ಆದರೆ ತಾವು ಜಾತಿ ಗಣತಿಗೆ ಬೇಡಿಕೆ ಎತ್ತಿದಾಗ, ಮೋದಿ ಭಾರತದಲ್ಲಿ ಒಂದೇ ಜಾತಿ ಎಂದು ಹೇಳಲು ಪ್ರಾರಂಭಿಸಿದ್ದಾರೆ ಎಂದರು.

ಅಪ್ರಮಾಣಿತ ಕೀಟನಾಶಕ ಬಳಕೆಯಿಂದ ರೇಷ್ಮೆ ಬೆಳೆಯಲ್ಲಿ ಭಾರಿ ಕುಸಿತ

- ರೇಷ್ಮೆ ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ. ಎಸ್.ಗಾಂಧಿ ದಾಸ್ ಎಚ್ಚರಿಕೆ
- ಸಂಸ್ಥೆಯಿಂದ ಶಿಫಾರಸು ಮಾಡಿದ ಕೀಟನಾಶಕ, ಪೋಷಕಾಂಶ ಬಳಕೆಗೆ ಸಲಹೆ



ಮೈಸೂರು, ನ.21(ಎಂಟಿವೈ)– ಶಿಫಾರಸ್ಸು ಮಾಡದ ಮತ್ತು ಅಪ್ರಮಾಣಿತ ಕೀಟನಾಶಕಗಳ ಬಳಕೆಯಿಂದಾಗಿ ರೇಷ್ಮೆ ಬೆಳೆ ಕುಸಿತಕ್ಕೆ ಕಾರಣ ಎಂದು ಕೇಂದ್ರ ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆ ನಿರ್ದೇಶಕ ಡಾ.ಎಸ್. ಗಾಂಧಿ ದಾಸ್ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚಿನ ವರ್ಷಗಳಲ್ಲಿ ರೇಷ್ಮೆ ಇಳುವರಿ ಕ್ಷೀಣಿಸುತ್ತಿದೆ. ಅದರಲ್ಲೂ ಮೈಸೂರು ಭಾಗದ ರೇಷ್ಮೆ ಬೆಳೆಗಾರರು ಹಿಪ್ಪುನೇರಳೆ ಬೆಳೆಗೆ ವಿಷಕಾರಿ ರಾಸಾಯನಿಕ, ಕೀಟನಾಶಕ ಸಿಂಪಡಣೆ ಮಾಡುತ್ತಿದ್ದಾರೆ. ಇದರಿಂದ ಇಳುವರಿ ಸೂಕ್ತ ಪ್ರಮಾಣದಲ್ಲಿ ಸಿಗುತ್ತಿಲ್ಲ. ಹೀಗಾಗಿ ರೇಷ್ಮೆ ಬೆಳೆಗಾರರು ಕೇಂದ್ರ ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆ ಶಿಫಾರಸು ಮಾಡಿದ ಕೀಟನಾಶಕ ಹಾಗೂ ಪೋಷಕಾಂಶಗಳನ್ನೇ ಬಳಸುವಂತೆ ರೇಷ್ಮೆ ಬೆಳೆಗಾರರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ರೇಷ್ಮೆ ಹುಳುಗಳು ಗೂಡು ಕಟ್ಟದಿರುವುದರಿಂದ ಶೇ. 30 ಇಳುವರಿ ಕುಂಠಿತವಾಗಿದೆ ಎಂದು ವಿಷಾದಿಸಿದರು.

ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡಿನಲ್ಲಿ ರೇಷ್ಮೆ ಹುಳು ಗೂಡು ಕಟ್ಟದಿರುವ ಮತ್ತು ಬೆಳೆ ಸ್ಥಿರತೆಯಿಂದ ಗೂಡು ಉತ್ಪಾದನೆಯಲ್ಲಿ ಇಳಿಕೆಯಾಗಿರುವ ಸಮಸ್ಯೆ ವರದಿಯಾಗಿದೆ. ಈ ಸಮಸ್ಯೆಗೆ ಪರಿಹಾರಕ್ಕೆ ಕರ್ನಾಟಕದ ವಿವಿಧ ಸ್ಥಳಗಳಲ್ಲಿ ರೇಷ್ಮೆ ಹುಳು, ಮಣ್ಣು ಹಿಪ್ಪುನೇರಳೆಯ ಎಲೆಯ 90 ಮಾದರಿಗಳನ್ನು ಸಂಗ್ರಹಿಸಲಾಗಿದೆ. ಮಾರುಕಟ್ಟೆಯಲ್ಲಿ ಲಭ್ಯವಿರುವ ಮತ್ತು ಯಾವುದೇ ನಿರ್ಬಂಧಗಳಿಲ್ಲದೆ ಸಿಗುವ ನಕಲಿ ರಸಾಯನಿಕಗಳನ್ನು ರೇಷ್ಮೆ ಕೃಷಿಕರು ಬಳಸುತ್ತಿರುವುದು ರೇಷ್ಮೆ ಹುಳುಗಳ ಮೇಲೆ ದುಷ್ಪರಿಣಾಮ ಬೀರಲು ಕಾರಣ. ಕೀಟ ಹಾವಳಿ ನಿಯಂತ್ರಣಕ್ಕಾಗಿ ರಾಸಾಯನಿಕ ಬಳಸಿ ಇಳುವರಿ ಕಡಿಮೆ ಮಾಡಿಕೊಳ್ಳುತ್ತಿದ್ದಾರೆ ಎಂದರು.

ರೇಷ್ಮೆ ಕೃಷಿಕರು ಹಿಪ್ಪುನೇರಳೆ ಬೆಳೆಗೆ ಯಾವುದೇ ರಾಸಾಯನಿಕ ಬಳಸಬೇಕಾದರೂ ಕಟ್ಟೆಚ್ಚರ ವಹಿಸಬೇಕು. ಮೈಸೂರಿನ ಸಿಎಸ್‌ಆರ್‌ಟಿಐ, ಬೆಂಗಳೂರಿನ ಎಸ್‌ಎಸ್‌ಟಿಎಲ್, ಸಿಎಸ್‌ಬಿ ಸಂಸ್ಥೆಗಳು, ಕೆಎಸ್‌ಎಸ್ ಆರ್‌ಡಿಐ, ಎಪಿಎಸ್‌ಎಸ್‌ಆರ್‌ಡಿಐ ಹಾಗೂ ಇತರೆ ರಾಜ್ಯ ಸಂಸ್ಥೆಗಳು ಅಭಿವೃದ್ಧಿಪಡಿಸಿದ ಹಾಗೂ ಶಿಫಾರಸ್ಸು ಮಾಡಿದ ಉತ್ಪನ್ನಗಳನ್ನು ಮಾತ್ರ ಬಳಸಲು ರೈತರು ಮುಂದಾಗಬೇಕು. ಈ ನಿಯಮ ಅನುಸರಿಸಿದರೆ ರೇಷ್ಮೆ ಬೆಳೆ ಚೇತರಿಕೆ ಕಾಣಲಿದೆ. ಅಲ್ಲದೆ, ರೇಷ್ಮೆಯಲ್ಲಿ ಉತ್ತಮ ಇಳುವರಿ ಪಡೆಯಬಹುದಾಗಿದೆ.

ಹಿಪ್ಪುನೇರಳೆ ಬೇಸಾಯದಲ್ಲಿ ಪರಿಸರ ಸ್ನೇಹಿ ವಿಧಾನ ಅನುಸರಿಸಬೇಕು. ಯಾವುದಾದರೂ ಇತರೆ ಬೆಳೆ ಬೆಳೆದಿದ್ದ ಜಮೀನಿನಲ್ಲಿ ದಿಢೀರನೆ ಹಿಪ್ಪುನೇರಳೆ ಬೇಸಾಯ ಕೈಗೊಳ್ಳುವ ಮೊದಲು ಸಂಶೋಧನಾ ಕೇಂದ್ರಕ್ಕೆ ಭೇಟಿ ನೀಡಿ ಮಣ್ಣಿನಲ್ಲಿನ ರಾಸಾಯನಿಕ ಅಂಶ ನಿವಾರಣೆಗೆ ಅನುಸರಿಸಬೇಕಾದ ಕ್ರಮದ ಬಗ್ಗೆ ಸಲಹೆ ಪಡೆಯಬೇಕು. ರಾಸಾಯನಿಕ ಯುಕ್ತ ಮಣ್ಣಿನಲ್ಲಿ ಬೆಳೆದ ಹಿಪ್ಪುನೇರಳೆ ಸೇವಿಸುವುದರಿಂದಲೂ ರೇಷ್ಮೆ ಹುಳು ಗೂಡು ಕಟ್ಟುವಲ್ಲಿ ದೋಷವಿದೆ ಎಂದು ಸಾಬೀತಾಗಿದೆ ಎಂದರು.

ಮಾರ್ಗದರ್ಶನ: ರೇಷ್ಮೆ ಹುಳು ಗೂಡು ಕಟ್ಟದಿರುವ ಮತ್ತು ಬೆಳೆ ಸ್ಥಿರತೆ ಸಮಸ್ಯೆ ಕುರಿತು ರೈತರು ನೇರವಾಗಿ ಸಂಸ್ಥೆಯ ವಿಜ್ಞಾನಿಗಳನ್ನು ಸಂಪರ್ಕಿಸಿ ಸಲಹೆ ಪಡೆಯಬಹುದಾಗಿದೆ. ಈಗಾಗಲೇ ಕೆಲ ರೈತರು ವಿಜ್ಞಾನಿಗಳನ್ನು ಸಂಪರ್ಕಿಸಿ, ಸಲಹೆ–ಸೂಚನೆ ಪಾಲಿಸಿದ್ದರಿಂದ ಶೇ.50ರಿಂದ 70 ಬೆಳೆಯನ್ನು ಸಂರಕ್ಷಿಸಿಕೊಂಡಿದ್ದಾರೆ ಎಂದು ಹೇಳಿದರು.

1773 ಕೋಟಿ ಆದಾಯ

ಭಾರತದಲ್ಲಿ 2022–23ನೇ ಸಾಲಿನಲ್ಲಿ ಕಚ್ಚಾ ರೇಷ್ಮೆ ಉತ್ಪಾದನೆಯು 27654 ಮಿಲಿಯನ್ ಟನ್ ಆಗಿದೆ. ರೇಷ್ಮೆ ಕೃಷಿ ದೇಶದಲ್ಲಿ ಒಟ್ಟು 9.2 ಮಿಲಿಯನ್ ಜನರಿಗೆ ಉದ್ಯೋಗ ನೀಡಿದೆ ರೇಷ್ಮೆ ಮತ್ತು ಸಿದ್ಧಪಡಿಸಿದ ವಸ್ತುಗಳ ರಫ್ತಿನಿಂದ 1773.38 ಕೋಟಿ ರೂ. ಆದಾಯ ಸಂಗ್ರಹವಾಗಿದೆ ಎಂದು ತಿಳಿಸಿದರು.

ರೇಷ್ಮೆ ಸಂಶೋಧನಾ ಕೇಂದ್ರದ ವಿಜ್ಞಾನಿ ಡಾ.ಆರ್. ಭಾಗ್ಯ ಮಾತನಾಡಿ, ಮೈಸೂರು ಜಿಲ್ಲೆಯಲ್ಲಿ 2333 ಹೆಕ್ಟೇರ್ ಪ್ರದೇಶದಲ್ಲಿ ರೇಷ್ಮೆ ಬೆಳೆ ಬೆಳೆಯಲಾಗುತ್ತಿದೆ. ಜಿಲ್ಲೆಯಲ್ಲಿ ಈಗಾಗಲೇ 4 ಸಾವಿರ ರೈತರು ಹೆಸರು ನೋಂದಾಯಿಸಿಕೊಂಡಿದ್ದಾರೆ. ಹುಣಸೂರು, ಪಿರಿಯಾಪಟ್ಟಣ, ಮೈಸೂರು ತಾಲೂಕಲ್ಲಿ ರೇಷ್ಮೆ ಬೆಳೆಯನ್ನು ಹೆಚ್ಚು ಬೆಳೆಯಲಾಗುತ್ತದೆ ಎಂದರು.

- ಡಾ.ಎಸ್. ಗಾಂಧಿ ದಾಸ್,
ಕೇಂದ್ರ ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆ ನಿರ್ದೇಶಕ

ಸುದ್ದಿಗೋಷ್ಠಿಯಲ್ಲಿ ರೇಷ್ಮೆ ಸಂಶೋಧನಾ ಕೇಂದ್ರದ ವಿಜ್ಞಾನಿಗಳಾದ ಡಾ.ಬಾಲಸರಸ್ವತಿ, ಡಾ.ಕೆ.ಬಿ.ಚಂದ್ರಶೇಖರ್, ಡಾ.ಸಿ.ಎಂ. ಬಾಬು, ಡಾ.ಮಹಿಬಾ ಹೆಲನ್ ಇದ್ದರು.

ವಿದ್ಯಾರ್ಥಿಗಳು ಮೊದಲು ಗುರಿ ನಿರ್ಧರಿಸಬೇಕು

ಉನ್ನತ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳಿಗೆ ರಾಜ್ಯ ಉನ್ನತ ಶಿಕ್ಷಣ ಮಂಡಳಿ ಉಪಾಧ್ಯಕ್ಷ ಪ್ರೊ.ಎಸ್.ಆರ್.ನಿರಂಜನ್ ಸಲಹೆ



ಮೈಸೂರು, ನ.21(ಜಿಎ)–ಕೋರ್ಸ್‌ಗಳಲ್ಲಿ ಚಿಕ್ಕದ್ದು, ದೊಡ್ಡದು ಎಂಬುದಿಲ್ಲ. ಎಲ್ಲಾ ಕೋರ್ಸ್‌ಗಳು ದೇಶದ ಅಭಿವೃದ್ಧಿಗೆ ಸಹಕಾರಿಯಾಗಿದ್ದು, ನೀವು ಆಯ್ಕೆ ಮಾಡಿಕೊಂಡ ಕೋರ್ಸ್‌ನ ಶ್ರೇಷ್ಠತೆಯನ್ನು ತಿಳಿದುಕೊಳ್ಳಿ ಎಂದು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಮಂಡಳಿ ಉಪಾಧ್ಯಕ್ಷ ಪ್ರೊ. ಎಸ್.ಆರ್.ನಿರಂಜನ್ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಮೈಸೂರು ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು ವತಿಯಿಂದ ಸೋಮವಾರ ಆಯೋಜಿಸಿದ್ದ ಪಿ.ಜಿ.ವಿದ್ಯಾರ್ಥಿಗಳ ಸೇರ್ಪಡೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕುಲಪತಿಗಳು, ಕುಲಸಚಿವರು, ಪ್ರಾಂಶುಪಾಲರು, ಪ್ರಾಧ್ಯಾಪಕರು ಅಕಾಡೆಮಿಕ್ ಲೀಡರ್‌ಗಳು, ಒಂದು ವಿಷಯದ ಬಗ್ಗೆ ಮಾಹಿತಿ ನೀಡಲು ಒಂದು ಗಂಟೆಗೂ ಹೆಚ್ಚು ಕಾಲ ಅಧ್ಯಯನ ಮಾಡುತ್ತಾರೆ. ಎಲ್ಲಿ ವಿದ್ಯಾರ್ಥಿಗಳಿರುತ್ತಾರೆ ಅಲ್ಲಿ ಜವಾಬ್ದಾರಿ ಇರುತ್ತದೆ ಎಂದು ತಿಳಿದುಕೊಂಡು ಕಾರ್ಯನಿರ್ವಹಿಸುತ್ತಾರೆ ಎಂದರು.

ವಿದ್ಯಾರ್ಥಿಗಳು ತಮ್ಮ ಗುರಿಯನ್ನು ಮೊದಲು ನಿರ್ಧರಿಸಬೇಕು. ಯಾವುದೇ ಕೋರ್ಸುಗಳನ್ನು ಕೀಳರಿಮೆಯಿಂದ ನೋಡುವುದನ್ನು ಬಿಡಬೇಕಿದೆ. ಇತ್ತೀಚಿನ ದಿನದಲ್ಲಿ ಇಂಜಿನಿಯರಿಂಗ್ ವಿದ್ಯಾರ್ಥಿಗಳು ವಾಣಿಜ್ಯ, ಉದ್ಯಮ ಕ್ಷೇತ್ರದತ್ತ ಮುಖ ಮಾಡುತ್ತಿದ್ದು, ಎಲ್ಲಾ ಕೋರ್ಸ್‌ಗಳು ದೇಶದ ಅಭಿವೃದ್ಧಿಗೆ ಸಹಕಾರಿಯಾಗಿದೆ. ಆದರಿಂದ ನಿಮ್ಮ ಕೋರ್ಸ್ ಬಗ್ಗೆ ಮೊದಲು ತಿಳಿದುಕೊಳ್ಳಿ ಎಂದು ಸಲಹೆ ನೀಡಿದರು.

ಶಿಕ್ಷಕರು ಉನ್ನತ ಶಿಕ್ಷಣ ವ್ಯಾಸಂಗ ಮಾಡುವ ವಿದ್ಯಾರ್ಥಿಗಳ ಅಲೋಚನೆಗೆ ಸ್ಪಂದಿಸಿ, ಪ್ರೇರೇಪಿಸಸುತ್ತಾರೆ. ಉನ್ನತ ಶಿಕ್ಷಣ ಪರಿಷತ್ತು ವಿದ್ಯಾರ್ಥಿಗಳ ಉನ್ನತೀಕರಣಕ್ಕಾಗಿ ಮುಂದಿನ ದಿನಗಳಲ್ಲಿ ಶೈಕ್ಷಣಿಕ ಚಟುವಟಿಕೆಯಲ್ಲಿ ಬೇರೆ ಚಿತ್ರಣ ಮೂಡಿಸಲಿದೆ ಎಂದರು.

ನೀವುಗಳು ಮುಂದೆ ದೇಶವನ್ನು ಮುನ್ನಡೆಸುವವರಾಗಿದ್ದು, 1947ರಿಂದ ಪ್ರತಿ ಹತ್ತು ವರ್ಷಕ್ಕೆ ಆಗಿರುವ ಬದಲಾವಣೆ ಕುರಿತು ಅಧ್ಯಯನ ಮಾಡಿ. ಈಗಾಗಲೇ ಮೆಡಿಸಿನ್, ವ್ಯಾಕ್ಸಿನ್, ಹಸಿರುಕ್ರಾಂತಿ, ಆಟೋಮೊಬೈಲ್ ಸೇರಿದಂತೆ ಅನೇಕ ಕ್ಷೇತ್ರದಲ್ಲಿ ಬದಲಾವಣೆಗಳಾಗಿದ್ದು, ಅದರ ಬಗ್ಗೆ ಜ್ಞಾನ ಹೆಚ್ಚಿಸಿಕೊಳ್ಳಿ. ಕಾರಣ ಐಎಎಸ್ ಪರೀಕ್ಷೆಯಲ್ಲಿ ಶೇ.0.2ರಷ್ಟು ಉತ್ತೀರ್ಣರಾಗುತ್ತಿದ್ದು, ಅವರು ನೇರ ಸಂದರ್ಶನಕ್ಕೆ ಬಂದಾಗ ದೇಶದ ವಿಚಾರವಾಗಿ ಹಲವಾರು ಕ್ರಾಂತಿಗಳ ಬಗ್ಗೆ ಪ್ರಶ್ನಿಸಿದಾಗ ಉತ್ತರವಿರುವುದಿಲ್ಲ. ಆದ್ದರಿಂದ ಕೌಶಲ್ಯ ವೃದ್ಧಿಗೊಳಿಸಿ ಬೇರೆ ವಿಷಯಗಳ ಮಾಹಿತಿಯನ್ನು ಪಡೆದುಕೊಳ್ಳುವುದರ ಜೊತೆಗೆ ದೇಶದ ಸಾಧನೆಗಳ ಬಗ್ಗೆ ತಿಳಿದುಕೊಳ್ಳಿ ಎಂದರು.

ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ.ಆರ್. ಮುರುಗೇಶಪ್ಪ, ಮುಖ್ಯ ಅತಿಥಿಗಳಾದ ಪ್ರೊ ಬಿ.ವಿ.ಶಾಂಭಶಿವಯ್ಯ, ಪ್ರಾಂಶುಪಾಲೆ ಡಾ.ಎಸ್.ಪ್ರತಿಭಾ ಉಪಸ್ಥಿತರಿದ್ದರು.

ಶ್ರೀ ಶಿರಡಿ ಸಾಯಿ ಶಕ್ತಿ ಸನ್ನಿಧಿ ವಾರ್ಷಿಕೋತ್ಸವ



ಮೈಸೂರು, ನ.21––ಮೈಸೂರಿನ ರಾಮಕೃಷ್ಣನಗರ 'ಇ' ಅಂಡ್ 'ಎಫ್' ಬ್ಲಾಕ್‌ನಲ್ಲಿರುವ ಶ್ರೀ ಪ್ರಸನ್ನ ಗಣಪತಿ ಮತ್ತು ಶಿರಡಿ ಸಾಯಿ ಶಕ್ತಿ ಸನ್ನಿಧಿ ಟ್ರಸ್ಟ್ ವತಿಯಿಂದ ನ.24ರಂದು ಶ್ರೀ ಶಿರಡಿ ಸಾಯಿ ಶಕ್ತಿ ಸನ್ನಿಧಿ ಕ್ಷೇತ್ರದ 13ನೇ ವಾರ್ಷಿಕೋತ್ಸವ ಹಾಗೂ ಶ್ರೀ ಶಿರಡಿ ಸಾಯಿ ಗುರುಸ್ಥಾನದ ಪ್ರತಿಷ್ಠಾಪನೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಮಹಾರಾಷ್ಟ್ರದಲ್ಲಿರುವ ಶಿರಡಿ ಶ್ರೀ ಕ್ಷೇತ್ರದ ಪ್ರಧಾನ ಅರ್ಚಕರಾದ ಶ್ರೀ ಸುಲಾಖೆ ಮಹಾರಾಜ್ ಅವರ ಉಪಸ್ಥಿತಿಯಲ್ಲಿ ದೇವಸ್ಥಾನದ ಆವರಣದಲ್ಲಿ ನಡೆಯಲಿರುವ ಈ ಕಾರ್ಯಕ್ರಮದಲ್ಲಿ ಅಂದು ಬೆಳಗ್ಗೆ 7 ಗಂಟೆಯಿಂದ ಕಾಕಡಾರತಿ, ಜಲಾಭಿಷೇಕ, ಪುಷ್ಪಾಭಿಷೇಕ, ಹಿರಣ್ಯಾಭಿಷೇಕ, ಪ್ರಾಕಾರೋತ್ಸವ, ಅಷ್ಟಧಾತು ಮೂರ್ತಿಗೆ ಷೋಡಶೋಪಚಾರ ಪೂಜೆ ನಡೆಯಲಿದೆ.

ಇದೇ ಸಂದರ್ಭದಲ್ಲಿ ಭಕ್ತರಿಂದ ರಜತ ಪ್ರಭಾವಳಿ ಅರ್ಪಣೆ ಮಾಡಲಾಗುವುದು. ನಂತರ ಗುರುಸ್ಥಾನ ಪ್ರತಿಷ್ಠಾಪನೆ ನಡೆಯಲಿದೆ. ಇದರೊಂದಿಗೆ ಹಲವಾರು ಹೋಮಗಳು ಜರುಗಲಿದೆ. ಜೊತೆಗೆ ಅಂದು ಸಂಜೆ 7 ಗಂಟೆಗೆ ತುಳಸಿ ವಿವಾಹ ಮತ್ತು ಕಾರ್ತಿಕ ದೀಪೋತ್ಸವ ಕಾರ್ಯಕ್ರಮಗಳು ಜರುಗಲಿವೆ ಎಂದು ಟ್ರಸ್ಟ್‌ನ ಪ್ರಕಟಣೆ ತಿಳಿಸಿದೆ.

ಕೆ.ಎನ್.ಪುರದ ಶ್ರೀಮಲೈಮಹದೇಶ್ವರ, ಶ್ರೀ ಆದಿಶಕ್ತಿ ಚಾಮುಂಡೇಶ್ವರಿ ಅಮ್ಮನವರ 8ನೇ ವಾರ್ಷಿಕೋತ್ಸವ



ಮೈಸೂರು, ನ.21(ಜಿಎ)–ಮೈಸೂರಿನ ಕೆ.ಎನ್.ಪುರ ಬಡಾವಣೆಯಲ್ಲಿರುವ ಶ್ರೀಮಲೈಮಹದೇಶ್ವರ ಮತ್ತು ಶ್ರೀ ಆದಿಶಕ್ತಿ ಚಾಮುಂಡೇಶ್ವರಿ ಅಮ್ಮನವರ 8ನೇ ವರ್ಷದ ವಾರ್ಷಿಕೋತ್ಸವವನ್ನು ನ.26, 27 ರಂದು ಆಯೋಜಿಸಲಾಗಿದೆ ಎಂದು ದೇವಸ್ಥಾನದ ಜೀರ್ಣೋದ್ಧಾರ ಸಮಿತಿ ಅಧ್ಯಕ್ಷ ಕಾಂಕ್ರಿಟ್ ರಾಜು ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ.26ರಂದು ಬೆಳಗ್ಗೆ 8 ಗಂಟೆಗೆ ಸ್ವಾಮಿಗೆ ಪಂಚಾಮೃತ ಅಭಿಷೇಕ, ಪುಣ್ಯಾಹ ನಾಂದಿ, ಗಣಪತಿ ಹೋಮ, ಪಂಚ ಕಳಶ ಹಾಗೂ ಉಮಾ ಮಹೇಶ್ವರ ಕಳಸ ಆರಾಧನೆ ನಂತರ ಮೃತ್ಯುಂಜಯ ಯಾಗ ನಡೆಯಲಿದ್ದು, ನಂತರ 11.30ಕ್ಕೆ ಮಹಾ ಪೂರ್ಣಾಹುತಿ ಮಹಾಮಂಗಳಾರತಿ ಹಾಗೂ ಮಧ್ಯಾಹ್ನ 1 ಗಂಟೆಗೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿದೆ. ಜೊತೆಗೆ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಬಹುಮಾನ ವಿತರಣೆಯೂ ಇದೆ.

ನ.27ರಂದು ಬೆಳಗ್ಗೆ 8 ಗಂಟೆಗೆ ಶ್ರೀ ಮಲೈಮಹದೇಶ್ವರ ಸ್ವಾಮಿಗೆ ಮಹಾನ್ಯಾಸ ರುದ್ರಾಭಿಷೇಕ ಅಲಂಕಾರ ಮಹಾ ಮಂಗಳಾರತಿ ಜರುಗಲಿದೆ. ನಂತರ ಮಧ್ಯಾಹ್ನ 3ಗಂಟೆಗೆ ಮಲೈ ಮಹದೇಶ್ವರ ಸ್ವಾಮಿಯ ಹುಲಿವಾಹನ ಉತ್ಸವ ದೇವಸ್ಥಾನದಿಂದ ಹೊರಟು ಕೆ.ಎನ್.ಪುರದ ಪ್ರಮುಖ ರಸ್ತೆಗಳಲ್ಲಿ ವಿಜೃಂಭಣೆಯಿಂದ ನಡೆಯಲಿದೆ ಎಂದು ವಿವರಿಸಿದರು.

ಎರಡು ದಿನಗಳ ಕಾರ್ಯಕ್ರಮಕ್ಕೆ ಶಾಸಕರಾದ ತನ್ವೀರ್ ಸೇಠ್, ಟಿ.ಎಸ್. ಶ್ರೀವತ್ಸ ಸಂಸದ ಪ್ರತಾಪ್ ಸಿಂಹ, ಮಾಜಿ ಮೇಯರ್‌ಗಳಾದ ಶಿವಕುಮಾರ್, ಸಂದೇಶ್ ಸ್ವಾಮಿ ಸೇರಿದಂತೆ ಇತರರು ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಸಮಿತಿಯ ಪದ್ಮನಾಭ, ಮಹದೇವ, ಅಂಬರೀಶ್, ರಾಘವೇಂದ್ರ ಉಪಸ್ಥಿತರಿದ್ದರು.

ನಾಳೆಯಿಂದ ಮಾರಾಟಗಾರರ ಅಭಿವೃದ್ಧಿ ಕಾರ್ಯಕ್ರಮ; ಕೈಗಾರಿಕಾ ವಸ್ತು ಪ್ರದರ್ಶನ ಆಯೋಜನೆ



ಮೈಸೂರು, ನ.21(ಜಿಎ)–ಕೈಗಾರಿಕೆಗಳ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ನ.23, 24 ರಂದು ಬೆಂಗಳೂರು ಎಂಎಸ್‌ಎಂಇ ಅಭಿವೃದ್ಧಿ ಮತ್ತು ಸೌಲಭ್ಯ ಕಚೇರಿ, ಭಾರತ ಸರ್ಕಾರದ ಎಂಎಸ್ ಎಂಇ ಸಚಿವಾಲಯ, ಮೈಸೂರು ವಾಣಿಜ್ಯ ಮತ್ತು ಕೈಗಾರಿಕೆ ಸಂಸ್ಥೆ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ವಿಜಯನಗರದ ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನ ಸಹಯೋಗದಲ್ಲಿ ಮಾರಾಟಗಾರರ ಅಭಿವೃದ್ಧಿ ಕಾರ್ಯಕ್ರಮ ಮತ್ತು ಕೈಗಾರಿಕಾ ವಸ್ತು ಪ್ರದರ್ಶನವನ್ನು ಆಯೋಜಿಸಲಾಗಿದೆ ಎಂದು ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಕೆ.ಬಿ.ಲಿಂಗರಾಜು, ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಜಯನಗರದ ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನ ಆವರಣದಲ್ಲಿ ನಡೆಯುವ ಕಾರ್ಯಕ್ರಮವನ್ನು ನ.23ರ ಬೆಳಿಗ್ಗೆ 10ಕ್ಕೆ ಎಫ್‌ಕೆಸಿಸಿಐ ಮಾಜಿ ಅಧ್ಯಕ್ಷ ಸುಧಾಕರ್ ಎಸ್.ಶೆಟ್ಟಿ ಉದ್ಘಾಟಿಸಲಿದ್ದು, ಬೆಂಗಳೂರು ಎಂಎಸ್ ಎಂಇ ಅಭಿವೃದ್ಧಿ ಮತ್ತು ಸೌಲಭ್ಯ ಕಚೇರಿಯ ಜಂಟಿ ನಿರ್ದೇಶಕ ಡಾ.ಕೆ.ಸಾಕ್ರೆಟಿಸ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಯಾಗಿ ಸಿಐಐ ಮಾಜಿ ಅಧ್ಯಕ್ಷ ಡಾ.ಎನ್.ಮುತ್ತು ಕುಮಾರ್ ಭಾಗವಹಿಸುವರು. ಅತಿಥಿಗಳಾಗಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಟಿ.ದಿನೇಶ್ ಭಾಗವಹಿಸಲಿದ್ದಾರೆ ಎಂದರು.

ಎರಡು ದಿನಗಳ ಕಾಲ 80 ಮಳಿಗೆಗಳಲ್ಲಿಯೂ ಸಿಎಫ್‌ಟಿಆರ್‌ಐ, ಬೆಮೆಲ್, ರೈಲ್ವೆ, ಎಂಎಸ್ ಎಂಇ ಸೇರಿ ನಾನಾ ಕಂಪನಿಗಳು ಮಹತ್ವದ ಮಾಹಿತಿ ವಿನಿಮಯ ಮಾಡಿಕೊಳ್ಳಲಿವೆ. ಜತೆಗೆ ಎರಡು ದಿನಗಳ ಕಾಲ ಆಸಕ್ತ ನವ ಉದ್ಯಮಿಗಳಿಗೆ ಉತ್ಪಾದನೆ, ರಫ್ತು ಹಾಗೂ ಆಮದು ಕುರಿತು ಜಾಗೃತಿ ಮೂಡಿಸುವ ಸಂಕಿರಣಗಳು ಸಹ ನಡೆಯಲಿವೆ ಎಂದರು. ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಗೌರವ ಕಾರ್ಯದರ್ಶಿ ಎ.ಕೆ.ಶಿವಾಜಿರಾವ್ ಮತ್ತಿತರರು ಉಪಸ್ಥಿತರಿದ್ದರು.

> ಕೋವಿಡ್ ಬಳಿಕ ಕೈಗಾರಿಕೆಗಳು ಚೇತರಿಕೆ ಕಂಡಿವೆ. ಮೈಸೂರು ಸೇರಿದಂತೆ ರಾಜ್ಯದ ಕೈಗಾರಿಕೋದ್ಯಮಿಗಳು ಎದುರಿಸುತ್ತಿರುವ ಸಮಸ್ಯೆ ಪರಿಹಾರಕ್ಕೆ ಮುಂದಿನ ತಿಂಗಳಲ್ಲಿ ಸಿಎಂ ನೇತೃತ್ವದಲ್ಲಿ ಸಭೆ ನಡೆಯಲಿದೆ. ಆ ಮೂಲಕ ಅನೇಕ ಸಮಸ್ಯೆಗಳು ಇತ್ಯರ್ಥವಾಗಲಿದೆ.
> -ಕೆ.ಬಿ.ಲಿಂಗರಾಜು,
> ಅಧ್ಯಕ್ಷ, ಎಂಎಸ್‌ಎಂಇ.

ಕಂಪ್ಯೂಟರ್ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು, ನ. 21– ಸಖಿ ಫೌಂಡೇಶನ್ ಮತ್ತು ಸೂರ್ಯ ಚಾರಿಟಬಲ್ ಟ್ರಸ್ಟ್ ವತಿಯಿಂದ ಮೂವತ್ತು ದಿನಗಳ ಕಂಪ್ಯೂಟರ್ ತರಬೇತಿಗಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ. ನವೆಂಬರ್ 30ರಿಂದ ಪ್ರಾರಂಭವಾಗುವ ಈ ತರಬೇತಿಯಲ್ಲಿ ಕಂಪ್ಯೂಟರ್ ಫಂಡಮೆಂಟಲ್, ಕನ್ನಡ ನುಡಿ,ಟೈಪಿಂಗ್ ಸ್ಕಿಲ್, ಟ್ಯಾಲಿ ಮುಂತಾದ ವಿಷಯಗಳ ಕುರಿತು ನುರಿತ ಉಪನ್ಯಾಸಕರಿಂದ ತರಬೇತಿ ನಡೆಯಲಿದೆ.

ಹಿರಿಯ ನಾಗರಿಕರು, ಗೃಹಿಣಿಯರು, ಉದ್ಯೋಗಾಕಾಂಕ್ಷಿಗಳು ಈ ತರಬೇತಿಯ ಫಲಾನುಭವಿಗಳಾಗಿರುತ್ತಾರೆ. ಆಸಕ್ತರು ಅರ್ಜಿಗಳಿಗಾಗಿ ಎಸ್.ಎಸ್.ಐ ಟಿ ಸಲ್ಯುಷನ್ಸ್, ಜಯಲಕ್ಷ್ಮಿ ದೇವಿ ಪದವಿಪೂರ್ವ ಕಾಲೇಜು ಆವರಣ, ರಾಮಕೃಷ್ಣನಗರ ಇಲ್ಲಿ ಸಂಪರ್ಕಿಸಬಹುದು. ಮಾಹಿತಿಗಾಗಿ 9964790442 ಅಥವಾ 8310306882 ಸಂಪರ್ಕಿಸಬಹುದು.

ವಿದ್ಯಾರ್ಥಿ ವೇತನ ಬಿಡುಗಡೆಗೆ ಆಗ್ರಹಿಸಿ ಪ್ರತಿಭಟನೆ



ಮೈಸೂರು,ನ.21(ಎಂಟಿವೈ)– ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೂ ವಿದ್ಯಾರ್ಥಿ ವೇತನ ನೀಡುವಂತೆ ಒತ್ತಾಯಿಸಿ ಆಲ್ ಇಂಡಿಯಾ ಡೆಮಾಕ್ರೆಟಿಕ್ ಸ್ಟೂಡೆಂಟ್ಸ್ ಆರ್ಗನೈಜೇಷನ್(ಎಐಡಿಎಸ್‌ಓ) ನೇತೃತ್ವದಲ್ಲಿ ಮೈಸೂರಿನ ಹಳೆ ಜಿಲ್ಲಾಧಿಕಾರಿ ಕಚೇರಿ ಬಳಿ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳು ಸೇರಿದಂತೆ ಹಲವು ವಿಭಾಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರಾಗಿಲ್ಲ. ಕಳೆದ ಶೈಕ್ಷಣಿಕ ವರ್ಷದಲ್ಲಿ ಅರ್ಜಿ ಹಾಕಿರುವ ವಿದ್ಯಾರ್ಥಿಗಳಿಗೂ ವಿದ್ಯಾರ್ಥಿವೇತನ ದೊರೆತಿಲ್ಲ. ಕೆಲ ದಿನಗಳ ಹಿಂದಷ್ಟೇ ರಾಜ್ಯದ ಕಟ್ಟಡ ಕಾರ್ಮಿಕರ ಮಕ್ಕಳಿಗೆ ನೀಡುತ್ತಿದ್ದ ಶಿಷ್ಯವೇತನವನ್ನು ಕಡಿತಗೊಳಿಸಲಾಗಿದೆ. ಪ್ರತಿ ವಿದ್ಯಾರ್ಥಿಗೆ ನೀಡುತ್ತಿದ್ದ ವಾರ್ಷಿಕ 5 ಸಾವಿರದಿಂದ 60 ಸಾವಿರ ರೂ. ವಿದ್ಯಾರ್ಥಿ ವೇತನವನ್ನು ಒಂದು ಸಾವಿರದಿಂದ 11 ಸಾವಿರ ರೂ.ಗೆ ಕಡಿತಗೊಳಿಸಲಾಗಿದೆ ಎಂದು ದೂರಿದರು.

ಈಗಾಗಲೇ ಎಲ್ಲಾ ಹಂತದ ಶಿಕ್ಷಣ ವ್ಯಾಪಾರೀಕರಣಗೊಳಿಸಿ, ಶುಲ್ಕ ಹೆಚ್ಚಳ ಮಾಡಲಾಗಿದೆ ಇದರಿಂದ ಬಡ ಕುಟುಂಬದ ವಿದ್ಯಾರ್ಥಿಗಳಿಗೆ ಶಿಕ್ಷಣ ಪಡೆಯುವುದು ಅಸಾಧ್ಯವಾಗುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಸರ್ಕಾರ ನೀಡುವ ಶಿಷ್ಯವೇತನ ಬಡ ವಿದ್ಯಾರ್ಥಿಗಳು ಪದವಿಪೂರ್ವ ಶಿಕ್ಷಣ, ಪದವಿ ಸೇರಿದಂತೆ ಇಂಜಿನಿಯರಿಂಗ್ ಮತ್ತು ಮೆಡಿಕಲ್‌ನಂತಹ ಉನ್ನತ ವ್ಯಾಸಂಗವನ್ನು ಪಡೆಯಲು ನೆರವಾಗಲಿದೆ. ಆದರೆ, ಈಗ ಭಾರಿ ಪ್ರಮಾಣದಲ್ಲಿ ಶಿಷ್ಯವೇತನದ ಮೊತ್ತ ಕಡಿತಗೊಳಿಸಿರುವುದು ಹಾಗೂ ವಿತರಣೆಯಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವುದು ಕಾರ್ಮಿಕರ ಹಾಗೂ ಬಡಮಕ್ಕಳ ಶಿಕ್ಷಣದ ಕನಸುಗಳನ್ನು ಚಿವುಟಿ ಹಾಕಿದಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸರ್ಕಾರ ಜನಸಾಮಾನ್ಯರಿಂದ ಸಂಗ್ರಹವಾಗಿರುವ ತೆರಿಗೆ ಹಣವನ್ನು ಶಿಕ್ಷಣಕ್ಕೆ ವಿನಿಯೋಗಿಸಬೇಕು. ಸೆಸ್ ಹೆಸರಲ್ಲಿ ಸಂಗ್ರಹವಾಗುತ್ತಿರುವ ಹಣ ಕಾರ್ಮಿಕ ನಿಧಿಯಲ್ಲಿ ಶೇಖರಣೆಯಾಗುತ್ತಿದೆ. ಇದು ಕಾರ್ಮಿಕರ ಬೆವರಿನ ಫಲ, ಇದನ್ನು ಸಂಪೂರ್ಣವಾಗಿ ಕಾರ್ಮಿಕರ ಏಳಿಗೆಗೆ ಬಳಸಬೇಕು. ಸರ್ಕಾರ ಈ ಕುರಿತು ಗಮನ ಹರಿಸಿ ಕೂಡಲೇ ವಿದ್ಯಾರ್ಥಿ ವೇತನ ಮಂಜೂರು ಮಾಡಬೇಕು. ಕಡಿತಗೊಳಿಸಿರುವ ಕಾರ್ಮಿಕರ ಮಕ್ಕಳ ಶಿಷ್ಯವೇತನದ ಮೊತ್ತ ಹೆಚ್ಚಿಸಬೇಕು. ಈ ಮೂಲಕ ಬಡ ವಿದ್ಯಾರ್ಥಿಗಳ ಭವಿಷ್ಯ ರೂಪಿಸಲು ರಾಜ್ಯ ಸರ್ಕಾರ ನೆರವಾಗಬೇಕೆಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಎಐಡಿಎಸ್‌ಓ ಜಿಲ್ಲಾಧ್ಯಕ್ಷ ಸುಭಾಷ್, ಜಿಲ್ಲಾ ಕಾರ್ಯದರ್ಶಿ ಚಂದ್ರಕಲಾ, ಪದಾಧಿಕಾರಿಗಳಾದ ನಿತಿನ್, ಚಂದ್ರಿಕಾ, ಚಂದನ, ಹೇಮ, ಅಂಜಲಿ, ಬೀರಪ್ಪ, ಅಭಿಷೇಕ್, ವಿಷ್ಣು ಹಾಗೂ ಮಹಾರಾಜ, ಯುವರಾಜ, ಮಹಾರಾಣಿ ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ನಂಜನಗೂಡು ರಸಬಾಳೆ ಬೆಳೆಗೆ ಉತ್ತೇಜನ

● ಶಾಸಕ ದರ್ಶನ್ ಧ್ರುವನಾರಾಯಣ ಹೇಳಿಕೆ ● ದೇವರಸನಹಳ್ಳಿಯಲ್ಲಿ ವಿಚಾರ ಸಂಕಿರಣ

ನಂಜನಗೂಡು, ನ.21-ಮೈಸೂರು ಮಲ್ಲಿಗೆ, ವಿಳ್ಯೆದೆಲೆ ಹಾಗೂ ನಂಜನಗೂಡು ರಸಬಾಳೆ ಬೆಳೆಗಳಿಗೆ ಉತ್ತೇಜನ ನೀಡಿ, ಇವುಗಳನ್ನು ಹೆಚ್ಚಿನ ಪ್ರದೇಶದಲ್ಲಿ ಬೆಳೆಯುವಂತೆ ಪ್ರೇರೇಪಿಸಲು ಸರ್ಕಾರ ಕಾರ್ಯಕ್ರಮ ರೂಪಿಸಿದೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ ಹೇಳಿದರು.

ತಾಲೂಕಿನ ದೇವರಸನಹಳ್ಳಿ ಗ್ರಾಮದ ರಮೇಶ್ ಅವರ ತೋಟದಲ್ಲಿ ನಡೆದ ನಂಜನಗೂಡು ರಸಬಾಳೆ ಬೆಳೆ, ಹಾಗೂ ತೆಂಗಿನ ಬೆಳೆಯಲ್ಲಿ ವಿನೂತನ ತಂತ್ರಜ್ಞಾನ ಬೇಸಾಯ ಪದ್ಧತಿ ಕುರಿತ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ಮೈಸೂರಿನ ಹೆಮ್ಮೆಯ ನಂಜನಗೂಡು ರಸಬಾಳೆ, ಮೈಸೂರು ವಿಳ್ಯೆದೆಲೆ, ಮೈಸೂರು ಮಲ್ಲಿಗೆ ಬೆಳೆಗಳಿಗೆ ಮಾರುಕಟ್ಟೆ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ನಂಜನಗೂಡು ರಸಬಾಳೆ ಗೊನೆ ಕಟ್ಟುವ ಸಮಯದಲ್ಲಿ ರೋಗ ಬಾಧೆ ಹೆಚ್ಚುತ್ತಿದೆ. ಹೀಗಾಗಿ ಕಂದು ನೆಟ್ಟು ಬಾಳೆ ಬೆಳೆಯುವ ಬದಲಾಗಿ ತಳಿಯನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಟಿಶ್ಯೂಕಲ್ಚರ್ ವಿಧಾನ ಬಳಸಿ ರೋಗಗಳಿಂದ ರಕ್ಷಿಸಬಹುದು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬಜೆಟ್ ಮಂಡಿಸುವ ವೇಳೆ ನಂಜನಗೂಡು ರಸಬಾಳೆ ಬೆಳೆಯುವ ಪ್ರದೇಶವನ್ನು ಹೆಚ್ಚಿಸುವ ನಿರ್ಧಾರ ಪ್ರಕಟಿಸಿದ್ದರು. ಇದೀಗ ಇದನ್ನು ಕಾರ್ಯರೂಪಕ್ಕೆ ತರಲಾಗುತ್ತಿದೆ ಎಂದು ತಿಳಿಸಿದರು.



ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ವಿಷ್ಣುವರ್ಧನ್ ಮಾತನಾಡಿ, ತಾಲೂಕಿನಲ್ಲಿ 5 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಾಳೆ ಬೆಳೆಯಲಾಗುತ್ತಿದೆ. ಸತತವಾಗಿ ರಾಸಾಯನಿಕ ಬಳಸಿ ಭೂಮಿಯ ಫಲವತ್ತತೆಯನ್ನು ಹಾಳು ಮಾಡಲಾಗಿದೆ. ಹೀಗಾಗಿ ರೈತರು ಮಣ್ಣಿಗೆ ಮತ್ತೆ ಜೀವಕಳೆ ತುಂಬಿ ಕೃಷಿ ಮಾಡಬೇಕಾಗಿದೆ. ಸಾವಯವ ಪದಾರ್ಥಗಳಲ್ಲಿ ಸೂಕ್ಷ್ಮ ಜೀವಿಗಳಿವೆ. ಭೂಮಿಗೆ ಸಾವಯವ ಅಂಶಗಳನ್ನು ಸೇರಿಸಿ ಫಲವತ್ತತೆ ಹೆಚ್ಚಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ರೈತರು ತೋಟಗಾರಿಕೆ ಇಲಾಖೆಯ ವಿಜ್ಞಾನಿಗಳ ಮಾರ್ಗದರ್ಶನದಲ್ಲಿ ರಸಬಾಳೆ ಬೆಳೆಯುವ ಪ್ರಯತ್ನ ಮಾಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಕಳಲೆ ಕೇಶವ ಮೂರ್ತಿ, ತೋಟಗಾರಿಕೆ ಇಲಾಖೆಯ ವಿಭಾಗೀಯ ಜಂಟಿ ನಿರ್ದೇಶಕ ನಾಗರಾಜ್, ಉಪನಿರ್ದೇಶಕ ಮಂಜುನಾಥ್, ಆಕಾಶವಾಣಿ ನಿಲಯದ ಸಂಯೋಜಕ ಕೇಶವಮೂರ್ತಿ, ಗ್ರಾಪಂ ಅಧ್ಯಕ್ಷೆ ಸುಮತಿ, ಉಪಾಧ್ಯಕ್ಷ ವೆಂಕಟೇಶ್, ಗೋವರ್ಧನ್ ಉಪಸ್ಥಿತರಿದ್ದರು.

> ರಸಬಾಳೆ ಬೆಳೆ ನಶಿಸಿಹೋಗುತ್ತಿದ್ದು, ಈ ಬೆಳೆಗಳನ್ನು ವಿಸ್ತರಿಸಲು ಮತ್ತು ಉತ್ಪಾದನೆಯನ್ನು ಹೆಚ್ಚಿಸುವ ಸಲುವಾಗಿ ಇಲಾಖೆ ವತಿಯಿಂದ ಸಮಗ್ರ ತೋಟಗಾರಿಕೆ ಯೋಜನೆಯಡಿ ಸಹಾಯಧನ ನೀಡಲಾಗುತ್ತಿದೆ. ರೈತರು ಇದರ ಸದುಪಯೋಗಪಡೆದುಕೊಂಡು ರಸಬಾಳೆ ಹೆಚ್ಚು ಬೆಳೆಯಲು ಮುಂದಾಗಬೇಕು.
>
> -ಚಂದ್ರು, ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ

ಕೂಡ್ಲಾಪುರದಲ್ಲಿ ಹೆಬ್ಬಾಗಿಲು ಉದ್ಘಾಟನೆ



ನಂಜನಗೂಡು, ನ.21-ತಾಲೂಕಿನ ಕೂಡ್ಲಾಪುರ ಗ್ರಾಮದ ಶ್ರೀ ಸೋಂಪುರ ಮಾರಮ್ಮ ದೇವಸ್ಥಾನ ಗೋಪುರದ ಹೆಬ್ಬಾಗಿಲನ್ನು ಶಾಸಕ ದರ್ಶನ್ ಧ್ರುವನಾರಾಯಣ್ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಇಂತಹ ಧಾರ್ಮಿಕ ಕಾರ್ಯ ಆಯೋಜನೆ ಮೂಲಕ ಗ್ರಾಮದ ಎಲ್ಲಾ ಜನಾಂಗ ಒಂದೇ ಎಂಬ ಮನೋಭಾವನೆಯ ಸಾಮರಸ್ಯ ಮೂಡಿಸುವ ಕೆಲಸವನ್ನು ಗ್ರಾಮಸ್ಥರು ಮಾಡುತ್ತಿರುವುದು ಸಂತಸ. ಪ್ರತಿ ಗ್ರಾಮದಲ್ಲೂ ಎಲ್ಲಾ ಜನಾಂಗ ಒಗ್ಗೂಡಿ ಅಣ್ಣ-ತಮ್ಮಂದಿರಂತೆ ಕೂಡಿ ಬಾಳಿದರೆ ಸಂಘರ್ಷಕ್ಕೆ ಅವಕಾಶ ಇರುವುದಿಲ್ಲ. ಇಂತಹ ಧಾರ್ಮಿಕ ಕಾರ್ಯಕ್ರಮಗಳು ಹೆಚ್ಚು ಹೆಚ್ಚು ನಡೆಯಲಿ. ಗ್ರಾಮಕ್ಕೆ ಮೂಲಸೌಕರ್ಯ ಒದಗಿಸಲು ಶ್ರಮಿಸುತ್ತೇನೆ ಎಂದರು.

ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ ಮಾತನಾಡಿ, ಉಪ್ಪಾರ ಸಮಾಜ ಶಿಕ್ಷಣದಲ್ಲಿ ಅತಿ ಹಿಂದೆ ಉಳಿದಿದೆ. ಹಿಂದುಳಿದವರು ಸಮಾಜದ ಮುಖ್ಯವಾಹಿನಿಗೆ ಬರಬೇಕಾದರೆ ಶಿಕ್ಷಣವೇ ಪ್ರಮುಖ ಅಸ್ತ್ರ. ಆದ್ದರಿಂದ ಸಮಾಜದ ಬಂಧುಗಳು ಕಡ್ಡಾಯವಾಗಿ ನಿಮ್ಮ ಮಕ್ಕಳಿಗೆ ಉನ್ನತ ಶಿಕ್ಷಣ ನೀಡಬೇಕು ಎಂದು ಕರೆ ನೀಡಿದರು.

ಹೆಬ್ಬಾಗಿಲು ಉದ್ಘಾಟನೆ ಅಂಗವಾಗಿ ದೇವಾಲಯದಲ್ಲಿ ದೇವತಾಕಾರ್ಯ, ಗಣಪತಿ ಹೋಮ, ಕಳಸ ಪೂಜೆ, ಪಂಚಶಾಂತಿ, ಪಾರಾಯಣ, ಕಳಸ ಪ್ರತಿಷ್ಠಾಪನೆ ಮೂಲಕ ಧಾರ್ಮಿಕ ಕಾರ್ಯ ನಡೆಸಲಾಯಿತು. ಇದೇ ವೇಳೆ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಗ್ರಾಮದ ಯಜಮಾನರಾದ ಎಸ್.ಮಾದಶೆಟ್ಟಿ, ಶಿವಕುಮಾರ್, ಚಿಕ್ಕೆಜಮಾನರು, ವಿವಿಧ ಜನಾಂಗದ ಮುಖಂಡರು ಇದ್ದರು.

ನ.29ಕ್ಕೆ ತಂಬಾಕು ಬೆಳೆಗಾರರ ಪಾದಯಾತ್ರೆ

ಹುಣಸೂರು, ನ.21-ಪರವಾನಗಿ ಇಲ್ಲದವರಿಗೆ (ಕಾರ್ಡ್‌ದಾರರು) ಕೂಡಲೇ ತಂಬಾಕು ಮಾರಾಟಕ್ಕೆ ಅನುಮತಿ ನೀಡುವಂತೆ ಒತ್ತಾಯಿಸಿ ನ.29ರಂದು ಪಾದಯಾತ್ರೆ ನಡೆಸಲು ರೈತರ ಸಭೆಯಲ್ಲಿ ತೀರ್ಮಾನಿಸಲಾಯಿತು.

ಪಟ್ಟಣದ ನಗರಸಭೆ ಮೈದಾನದಲ್ಲಿ ರಾಜ್ಯ ತಂಬಾಕು ಬೆಳೆಗಾರರ ಹೋರಾಟ ಸಮಿತಿ ಮತ್ತು ಕರ್ನಾಟಕ ಪ್ರಾಂತ ರೈತ ಸಂಘ (ಕೆಪಿಆರ್‌ಎಸ್) ನೇತೃತ್ವದಲ್ಲಿ ನಡೆದ ರೈತರ ಸಭೆಯಲ್ಲಿ ನ.29ರಂದು ಹುಣಸೂರು ನಗರಸಭೆ ಮೈದಾನದಿಂದ ಕಟ್ಟೆಮಳಲವಾಡಿಯ ತಂಬಾಕು ಮಾರುಕಟ್ಟೆವರೆಗೆ ಪಾದಯಾತ್ರೆ ನಡೆಸಲು ಒಮ್ಮತದ ತೀರ್ಮಾನ ಕೈಗೊಳ್ಳಲಾಯಿತು.

ಸಭೆಯಲ್ಲಿ ರಾಜ್ಯ ತಂಬಾಕು ಬೆಳೆಗಾರರ ಹೋರಾಟ ಸಮಿತಿಯ ಅಧ್ಯಕ್ಷ ತಮ್ಮಡಹಳ್ಳಿ ಗೋವಿಂದಯ್ಯ ಮಾತನಾಡಿ, ಹಲವಾರು ವರ್ಷಗಳಿಂದ ಹೋರಾಟ ಮಾಡುತ್ತಿದ್ದರೂ ತಂಬಾಕು ಬೆಳೆಗಾರರ ಸಮಸ್ಯೆಗಳನ್ನು ಬಗೆಹರಿಸಿಲ್ಲ. ಹಾಗಾಗಿ ಎಲ್ಲಾ ಸಂಘಟನೆಗಳು ಒಗ್ಗಟ್ಟಾಗಿ ಹೋರಾಡಬೇಕಾಗಿದೆ. ತಂಬಾಕು ಬೆಳೆಯುವ ವೇಳೆ ಯಾವುದೇ ಸವಲತ್ತು ನೀಡುವುದಿಲ್ಲ. ಸಾಲ ಮಾಡಿ ತಂಬಾಕು ಬೆಳೆಯುವ ನಮಗೆ ಸೂಕ್ತ ಸಮಯದಲ್ಲಿ ಮಾರಾಟಕ್ಕೆ ಅನುಮತಿ ನೀಡದೆ ಅನ್ಯಾಯ ಮಾಡಲಾಗುತ್ತಿದೆ. ಎಲ್ಲರಿಗೂ ತಕ್ಷಣ ಮಾರಾಟಕ್ಕೆ ಅನುಮತಿ ನೀಡಬೇಕು ಎಂದು ಒತ್ತಾಯಿಸಿದರು.



ಸಿಪಿಐ(ಎಂ) ಪ್ರಧಾನ ಕಾರ್ಯದರ್ಶಿ ವಿ.ಬಸವರಾಜ ಕಲ್ಕುಣಿಕೆ ಮಾತನಾಡಿ, ರೈತರು ಪ್ರತಿವರ್ಷ ತಂಬಾಕು ಮಾರಾಟಕ್ಕೆ ಹೆಣಗಾಡಬೇಕಾದ ಪರಿಸ್ಥಿತಿ ಇದೆ. ಜನಪ್ರತಿನಿಧಿಗಳು ಬೆಳೆಗಾರರ ಬೇಡಿಕೆಗಳ ಈಡೇರಿಕೆಗೆ ಗಮನ ಹರಿಸುತ್ತಿಲ್ಲ. ಸಮಸ್ಯೆ ಬಗೆಹರಿಸುವವರೆಗೂ ಹೋರಾಟ ನಿಲ್ಲುವುದಿಲ್ಲ. ಸಂಬಂಧಪಟ್ಟ ತಂಬಾಕು ಮಂಡಳಿಯ ಅಧಿಕಾರಿಗಳು ಕೂಡಲೇ ಗಮನಹರಿಸಿ ತಂಬಾಕು ಮಾರಾಟಕ್ಕೆ ತಕ್ಷಣ ಅನುಮತಿ ನೀಡಬೇಕು. ಇಲ್ಲದಿದ್ದರೆ ಹೋರಾಟವನ್ನು ತೀವ್ರಗೊಳಿಸುವುದಾಗಿ ಎಚ್ಚರಿಸಿದರು.

ಸಭೆಯಲ್ಲಿ ತಂಬಾಕು ಬೆಳೆಗಾರರ ಹೋರಾಟ ಸಮಿತಿಯ ಉಪಾಧ್ಯಕ್ಷರಾದ ಕಲ್ಲಳ್ಳಿ ಚಂದ್ರಶೇಖರ್, ಮೂಡಲಕೊಪ್ಪಲು ಚಂದ್ರೇಗೌಡ, ಕುಪ್ಪೆಮುದ್ದನಹಳ್ಳಿ ಸ್ವಾಮಿಗೌಡ, ಮುಖಂಡರಾದ ಮಂಜುನಾಥ, ಮೋದೂರು ರಾಜೇಗೌಡ, ಕಾಳೇಗೌಡನಕೊಪ್ಪಲು ಲೋಕೇಶ್, ಉದ್ದೂರು ನಟರಾಜು, ಹೊಸಕೋಟೆ ರಾಮಕೃಷ್ಣೇಗೌಡ, ಹುಣಸೆಗಾಲ ಸುರೇಶ, ಮಂಜಮ್ಮ, ಮಹದೇವಮ್ಮ, ನಟರಾಜು, ಬಸವರಾಜಗೌಡ, ಯಮಗುಂಭ ನಿಂಗರಾಜು, ಶಿವಸ್ವಾಮಿ, ಬಸವರಾಜೇಗೌಡ ಮುಂತಾದವರು ಹಾಜರಿದ್ದರು.

ವಲಯ ಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿ



ಹುಣಸೂರು, ನ.21-ಹುಣಸೂರು ರೋಟರಿ ಕ್ಲಬ್ ವತಿಯಿಂದ ನಗರದ ರಾಮಯ್ಯ ಬ್ಯಾಡ್ಮಿಂಟನ್ ಅಕಾಡೆಮಿಯಲ್ಲಿ ವಲಯ ಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿ ಆಯೋಜಿಸಲಾಗಿತ್ತು.

ರೋಟರಿ ವಲಯ-6ರ ಸಹಾಯಕ ಗವರ್ನರ್ ಸತ್ಯನಾರಾಯಣ ತಿಲಕ್ ಮತ್ತು ವಲಯ ಸೇನಾನಿ ಕೆ.ಬಸವರಾಜು ಪಂದ್ಯಾವಳಿಗೆ ಚಾಲನೆ ನೀಡಿದರು. ಮಡಿಕೇರಿ, ಪಿರಿಯಾಪಟ್ಟಣ, ಕುಶಾಲನಗರ ಹಾಗೂ ಹುಣಸೂರು ರೋಟರಿ ಕ್ಲಬ್‌ನ ಆಟಗಾರರು ಭಾಗವಹಿಸಿದ್ದರು.

30-45 ವರ್ಷದ ಪುರುಷರ ಡಬಲ್ಸ್ ವಿಭಾಗದಲ್ಲಿ ಹುಣಸೂರಿನ ರೋಟರಿ ಕ್ಲಬ್ ಪ್ರಥಮ ಮತ್ತು ಪಿರಿಯಾಪಟ್ಟಣದ ಐಕಾನ್ ಕ್ಲಬ್ ದ್ವಿತೀಯ ಸ್ಥಾನ, 45-60 ವರ್ಷದ ಪುರುಷರ ಡಬಲ್ಸ್ ವಿಭಾಗದಲ್ಲಿ ಪಿರಿಯಾಪಟ್ಟಣದ ಐಕಾನ್ ಕ್ಲಬ್ ಪ್ರಥಮ ಹಾಗೂ ಹುಣಸೂರಿನ ರೋಟರಿ ಕ್ಲಬ್ ದ್ವಿತೀಯ ಸ್ಥಾನ ಹಾಗೂ 60 ವರ್ಷ ಮೇಲ್ಪಟ್ಟ ಪುರುಷರ ಡಬಲ್ಸ್ ವಿಭಾಗದಲ್ಲಿ ಹುಣಸೂರಿನ ರೋಟರಿ ಕ್ಲಬ್ ಪ್ರಥಮ ಮತ್ತು ಪಿರಿಯಾಪಟ್ಟಣದ ಮಿಡ್‌ಟೌನ್ ಕ್ಲಬ್ ದ್ವಿತೀಯ ಸ್ಥಾನಗಳಿಸಿದವು.

30-45 ವರ್ಷದ ಪುರುಷರ ಸಿಂಗಲ್ಸ್‌ನಲ್ಲಿ ಹುಣಸೂರು ರೋಟರಿ ಪ್ರಥಮ ಮತ್ತು ಕುಶಾಲನಗರ ದ್ವಿತೀಯ ಸ್ಥಾನ, 45-60 ವರ್ಷದ ವಿಭಾಗದಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನಗಳನ್ನು ಹುಣಸೂರು ರೋಟರಿ ಕ್ಲಬ್ ಹಾಗೂ 60 ವರ್ಷ ಮೇಲ್ಪಟ್ಟ ವಿಭಾಗದಲ್ಲಿ ಪಿರಿಯಾಪಟ್ಟಣದ ಮಿಡ್‌ಟೌನ್ ಪ್ರಥಮ ಮತ್ತು ಹುಣಸೂರಿನ ರೋಟರಿ ಕ್ಲಬ್ ದ್ವಿತೀಯ ಸ್ಥಾನ ಪಡೆದುಕೊಂಡಿವೆ.

45 ವರ್ಷದ ಮಹಿಳೆಯರ ಡಬಲ್ಸ್‌ನಲ್ಲಿ ಕುಶಾಲನಗರ ಪ್ರಥಮ, ಹುಣಸೂರು ದ್ವಿತೀಯ, ಸಿಂಗಲ್ಸ್‌ನಲ್ಲಿ ಹುಣಸೂರು ಪ್ರಥಮ, ಕುಶಾಲನಗರ ದ್ವಿತೀಯ ಹಾಗೂ ಮಿಕ್ಸ್‌ಡ್ ಡಬಲ್ಸ್‌ನಲ್ಲಿ ಹುಣಸೂರು ಪ್ರಥಮ ಮತ್ತು ಕುಶಾಲನಗರ ಕ್ಲಬ್ ದ್ವಿತೀಯ ಸ್ಥಾನಗಳಿಸಿದವು.

ಪಂದ್ಯಾವಳಿಯ ವಿವಿಧ ವಿಭಾಗಗಳಲ್ಲಿ 10 ಪ್ರಶಸ್ತಿ ಗಳಿಸುವ ಮೂಲಕ ಹುಣಸೂರು ರೋಟರಿ ಕ್ಲಬ್ ಚಾಂಪಿಯನ್ ಆಗಿದೆ ಎಂದು ಹುಣಸೂರು ರೋಟರಿ ಕ್ಲಬ್‌ನ ಅಧ್ಯಕ್ಷ ಚನ್ನಕೇಶವ ತಿಳಿಸಿದ್ದಾರೆ. ಕಾರ್ಯದರ್ಶಿ ಪ್ರಸನ್ನ, ಖಜಾಂಚಿ ಆನಂದ್, ಚೇರಿಯನ್, ಸಿದ್ದೇಶ್ವರ, ಡಾ.ರಘು ಮತ್ತು ಎಚ್.ಆರ್. ಕೃಷ್ಣಕುಮಾರ್ ಉಪಸ್ಥಿತರಿದ್ದರು.

ವರುಣದಲ್ಲಿ ತಿಂಗಳಿಗೊಮ್ಮೆ ಜನಸಂಪರ್ಕ ಸಭೆ



ತಿ.ನರಸೀಪುರ, ನ.21-ವರುಣ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಜನತೆಯ ಸಮಸ್ಯೆಗಳ ಪರಿಹಾರಕ್ಕಾಗಿ ತಿಂಗಳಿಗೊಮ್ಮೆ ಜನಸಂಪರ್ಕ ಸಭೆ ನಡೆಸಲು ಮುಖ್ಯಮಂತ್ರಿ ಸಚಿವಾಲಯ ಆದೇಶ ನೀಡಲಿದೆ ಎಂದು ವರುಣ ಕ್ಷೇತ್ರದ ಆಶ್ರಯ ಸಮಿತಿ ಅಧ್ಯಕ್ಷ ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ವರುಣ ಕ್ಷೇತ್ರ ವ್ಯಾಪ್ತಿಯ ಹುಣಸೂರು ಗ್ರಾಮದಲ್ಲಿ ಆಯೋಜಿಸಿದ್ದ ಜನಸಂಪರ್ಕ ಸಭೆಯಲ್ಲಿ ಗ್ರಾಮಸ್ಥರ ಅಹವಾಲು ಸ್ವೀಕರಿಸಿ ಮಾತನಾಡಿದ ಅವರು, ಕ್ಷೇತ್ರದ ಬಹುತೇಕ ಗ್ರಾಮಗಳಲ್ಲಿ ಸಮಸ್ಯೆಗಳು ಹೆಚ್ಚಾಗಿರುವುದು ಕಂಡುಬಂದಿದೆ. ಗ್ರಾಮಸ್ಥರು ತಾಲೂಕು ಕೇಂದ್ರಕ್ಕೆ ಹೋಗಲು ಶಕ್ತರಾಗಿಲ್ಲದ ಕಾರಣ ಹಳ್ಳಿಗಳಲ್ಲೇ ಜನಸಂಪರ್ಕ ಸಭೆ ಏರ್ಪಡಿಸಿ ಸಾಧ್ಯವಾದಷ್ಟು ಜನರ ಸಮಸ್ಯೆ ಬಗೆಹರಿಸಲು ಅಧಿಕಾರಿಗಳು ಕ್ರಮ ಜರುಗಿಸಬೇಕು. ಈ ನಿಟ್ಟಿನಲ್ಲಿ ತಿಂಗಳಿಗೊಮ್ಮೆ ಗ್ರಾಮಗಳಲ್ಲಿ ಜನಸಂಪರ್ಕ ಸಭೆ ನಡೆಸಲು ಆದೇಶ ನೀಡಲಾಗುವುದು ಎಂದು ತಿಳಿಸಿದರು.

ಹುಣಸೂರು ಗ್ರಾಮದಲ್ಲಿ ಸಾಕಷ್ಟು ಸಮಸ್ಯೆಗಳಿವೆ. ನಾನು ಶಾಸಕನಾಗಿದ್ದ ವೇಳೆ ಸಾಕಷ್ಟು ಕೆಲಸಗಳನ್ನು ಮಾಡಿದ್ದೇನೆ. ಕೆಲವೊಂದು ಸಮಸ್ಯೆ ಬಗೆಹರಿಸಲು ಸಾಧ್ಯವಾಗಿಲ್ಲ. ಆ ವೇಳೆ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದ ಕಾರಣ ಹೆಚ್ಚಿನ ಅನುದಾನ ದೊರೆಯದ ಕಾರಣ ಕೆಲ ಅಭಿವೃದ್ಧಿ ಕಾಮಗಾರಿಗಳಿಗೆ ಹಿನ್ನಡೆ ಉಂಟಾಯಿತು. ಗ್ರಾಮಸ್ಥರ ವೈಯಕ್ತಿಕ ಸಮಸ್ಯೆಗಳನ್ನು ಸಾಧ್ಯವಾದಷ್ಟು ಜನಸಂಪರ್ಕ ಸಭೆಯಲ್ಲಿ ಬಗೆಹರಿಸಲಾಗುವುದು ಎಂದು ಭರವಸೆ ನೀಡಿದರು.

ಸಭೆಯಲ್ಲಿ ಜಿಪಂ ಮಾಜಿ ಸದಸ್ಯ ಕೆ.ಮಹದೇವ್, ತಾಲೂಕು ಕುರುಬರ ಸಂಘದ ಅಧ್ಯಕ್ಷ ಮನ್ನೇಹುಂಡಿ ಮಹೇಶ್, ಮಾಜಿ ಅಧ್ಯಕ್ಷ ಟಿ.ಎಸ್.ಪ್ರಶಾಂತ್ ಬಾಬು, ಡೈರಿ ಅಧ್ಯಕ್ಷ ಬಿ.ಮಂಟೇಲಿಂಗಪ್ಪ, ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಮಹ ದೇವಣ್ಣ, ಕಿರಗಸೂರು ಗ್ರಾಪಂ ಅಧ್ಯಕ್ಷೆ ಚಂದ್ರಮ್ಮ, ಉಪಾಧ್ಯಕ್ಷೆ ಭಾಗ್ಯ, ಮಾಜಿ ಉಪಾಧ್ಯಕ್ಷ ಹುಣಸೂರು ನಾಗರಾಜು, ತುಂಬಲ ಗ್ರಾಪಂ ಅಧ್ಯಕ್ಷ ರಾಮನಂಜಯ್ಯ, ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ವಕ್ತಾರ ಹುಣಸೂರು ಬಸವಣ್ಣ, ತಾಪಂ ಮಾಜಿ ಸದಸ್ಯ ರಮೇಶ್, ವರುಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮುದ್ದೇಗೌಡ, ಡಿಕೆಶಿ ಅಭಿಮಾನಿ ಬಳಗದ ಅಧ್ಯಕ್ಷ ಚೇತನ್, ಗ್ರಾಪಂ ಮಾಜಿ ಅಧ್ಯಕ್ಷ ಎ.ಜೆ.ವೆಂಕಟೇಶ್, ವೈದ್ಯಕೀಯ ವಿಭಾಗದ ಜಿಲ್ಲಾಧ್ಯಕ್ಷ ಡಾ.ಪ್ರದೀಪ್, ಡಿಸಿಸಿ ಸದಸ್ಯ ಗೋಪಾಲಪುರ ಮಹೇಶ್, ರೇವಣ್ಣ, ಗುತ್ತಿಗೆದಾರ ಬಸವರಾಜು, ತಹಶೀಲ್ದಾರ್ ಸುರೇಶ್ ಆಚಾರ್, ತಾಪಂ ಇಓ ಸಿ.ಕೃಷ್ಣ, ಕ್ಷೇತ್ರ ಶಿಕ್ಷಣಾಧಿಕಾರಿ ಶೋಭಾ, ಕೃಷಿ ಸಹಾಯಕ ನಿರ್ದೇಶಕಿ ಸುಹಾಸಿನಿ, ವೃತ್ತ ನಿರೀಕ್ಷಕ ಧನಂಜಯ, ಆಪ್ತ ಸಹಾಯಕ ಪ್ರದೀಪ್ ಮತ್ತಿತರರಿದ್ದರು.

ನಾಳೆ ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಚಾಲನೆ

ಕೆ.ಆರ್.ನಗರ, ನ.21-ಅಂಬೇಡ್ಕರ್ ಭವನ ನಿರ್ಮಾಣ ಕಾಮಗಾರಿಗೆ ಚಾಲನೆ ಹಾಗೂ ಅಭಿನಂದನಾ ಕಾರ್ಯಕ್ರಮವನ್ನು ಪಟ್ಟಣದಲ್ಲಿ ನ.23ರಂದು ಬೆಳಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದು ಜಿಪಂ ಮಾಜಿ ಅಧ್ಯಕ್ಷ ಸಿದ್ದಪ್ಪ ತಿಳಿಸಿದರು.

ಮೈಸೂರಿನ ಉರಿಲಿಂಗಿಪೆದ್ದಿ ಮಠದ ಶ್ರೀ ಜ್ಞಾನಪ್ರಕಾಶಸ್ವಾಮೀಜಿ ಕಾರ್ಯ ಕ್ರಮದ ಸಾನ್ನಿಧ್ಯ ವಹಿಸಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್. ಸಿ.ಮಹದೇವಪ್ಪ ಉದ್ಘಾಟಿಸಲಿದ್ದಾರೆ. ಶಾಸಕ ಡಿ.ರವಿಶಂಕರ್ ಅಧ್ಯಕ್ಷತೆ ವಹಿಸಲಿದ್ದು, ಮಂಡ್ಯ ಸಂಸದೆ ಸುಮಲತಾ ಅಂಬರೀಶ್, ವಿಧಾನಪರಿಷತ್ ಸದಸ್ಯರಾದ ಎಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಕೆಪಿಸಿಸಿ ಕಾರ್ಯಕಾರಿಣಿ ಸದಸ್ಯ ದೊಡ್ಡಸ್ವಾಮಿಗೌಡ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಎಸ್.ಮಹದೇವ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ರಾಜಯ್ಯ, ಕೆ.ಆರ್.ನಗರ ತಾಲೂಕು ಕಾಂಗ್ರೆಸ್ ಎಸ್‌ಸಿ ಘಟಕದ ಅಧ್ಯಕ್ಷ ನಂದೀಶ್, ಸಾಲಿಗ್ರಾಮ ತಾಲೂಕು ಎಸ್‌ಸಿ ಘಟಕದ ಅಧ್ಯಕ್ಷ ಕಂಠಿಕುಮಾರ್, ಚೆಲುವರಾಜ್, ಸಿದ್ದಯ್ಯ, ಮರಿಯಯ್ಯ ಇನ್ನಿತರರು ಹಾಜರಿದ್ದರು.

ಸರಗೂರು ಪಟ್ಟಣಕ್ಕೆ ಮೂಲಸೌಕರ್ಯ ಒದಗಿಸಲು ತೀರ್ಮಾನ

ರಾಧಿಕಾ ಶ್ರೀನಾಥ್ ಅಧ್ಯಕ್ಷತೆಯಲ್ಲಿ ಪಪಂ ಸಾಮಾನ್ಯ ಸಭೆ

ಸರಗೂರು, ನ.21-ಪಟ್ಟಣದ ನಿವಾಸಿಗಳಿಗೆ ಶುದ್ಧ ಕುಡಿಯುವ ನೀರು, ವಿದ್ಯುತ್ ಸೌಲಭ್ಯದೊಂದಿಗೆ ಮೂಲಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಪಟ್ಟಣದ ಸಮಗ್ರ ಅಭಿವೃದ್ಧಿಗೆ ಶ್ರಮಿಸಲು ಪಟ್ಟಣ ಪಂಚಾಯಿತಿ ಸಭೆಯಲ್ಲಿ ತೀರ್ಮಾನಿಸಲಾಯಿತು.

ಪಪಂ ಕಚೇರಿಯಲ್ಲಿ ಮಂಗಳವಾರ ಅಧ್ಯಕ್ಷೆ ರಾಧಿಕಾ ಶ್ರೀನಾಥ್ ಅಧ್ಯಕ್ಷತೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಸಮರ್ಪಕ ನೀರು ಸರಬರಾಜು ಹಾಗೂ ಬೀದಿದೀಪಗಳ ನಿರ್ವಹಣೆಯನ್ನು ಅಚ್ಚುಕಟ್ಟಾಗಿ ಮಾಡಬೇಕು. ಇಲ್ಲವಾದಲ್ಲಿ ವಾರ್ಡ್‌ನ ನಿವಾಸಿಗಳು ಸಮಸ್ಯೆ ಹೊತ್ತು ಪಟ್ಟಣ ಪಂಚಾಯಿತಿಗೆ ಬರುತ್ತಾರೆ. ಇದಕ್ಕೆ ಆಸ್ಪದ ನೀಡದೆ ಸೌಲಭ್ಯಗಳನ್ನು ಒದಗಿಸಲು ನಿರ್ಧರಿಸಲಾಯಿತು.

ಪಟ್ಟಣ ಪಂಚಾಯಿತಿಯ ಆರ್ಥಿಕತೆ ಹೆಚ್ಚಿಸಲು ಕಡ್ಡಾಯವಾಗಿ ಕಂದಾಯ ವಸೂಲಾತಿ ಮಾಡಬೇಕು. ಇದಕ್ಕಾಗಿ ಕಂದಾಯ ಅದಾಲತ್ ನಡೆಸಬೇಕು. ಕೋತಿ, ಬೀದಿನಾಯಿ, ಬಿಡಾಡಿ ದನಗಳ ಹಾವಳಿ ನಿಯಂತ್ರಣಕ್ಕೆ ಕ್ರಮವಹಿಸಬೇಕು. ಶವಸಂಸ್ಕಾರದ ವಾಹನ ಖರೀದಿಸಬೇಕು. 2023-24ನೇ ಸಾಲಿನಲ್ಲಿ ಎಸ್‌ಎಫ್‌ಸಿ ಅನುದಾನದಲ್ಲಿ ಶೇ.24.10 ಹಾಗೂ 7.25ರ ಯೋಜನೆಯ ಫಲಾನುಭವಿಗಳ ಆಯ್ಕೆ, ಒತ್ತುವರಿ ತೆರವುಗೊಳಿಸಬೇಕು. ಘನತ್ಯಾಜ್ಯ ವಿಲೇವಾರಿಗೆ ಸಂಬಂಧಪಟ್ಟಂತೆ ಅರಿವು ಕಾರ್ಯಕ್ರಮ ಸೇರಿದಂತೆ ಇನ್ನಿತರ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಅಧ್ಯಕ್ಷೆ ರಾಧಿಕಾ ಶ್ರೀನಾಥ್ ಮಾತನಾಡಿ, ಪಟ್ಟಣದ ಅಭಿವೃದ್ಧಿಗೆ ಪೂರಕವಾಗಿ ಅಧಿಕಾರಿಗಳು ಕೆಲಸ ನಿರ್ವಹಿಸಬೇಕು. ಸಾರ್ವಜನಿಕರೊಂದಿಗೆ ಉತ್ತಮ ಒಡನಾಡಿಯಾಗಿರಬೇಕು. ವಿನಾಕಾರಣ ಕೆಲಸ ವಿಳಂಬ ಮಾಡಬಾರದು. ಕುಡಿಯುವ ನೀರು, ವಿದ್ಯುತ್ ದೀಪ ಸರಿಪಡಿಸಲು ಮುಂದಾಗಬೇಕು ಎಂದು ಸಲಹೆ ನೀಡಿದರು.



ಉಪಾಧ್ಯಕ್ಷ ವಿನಾಯಕ್ ಪ್ರಸಾದ್ ಮಾತನಾಡಿ, ಹೈಮಾಸ್ಟ್ ದೀಪ ಅಳವಡಿಸಿದ ಗುತ್ತಿಗೆದಾರರಿಗೆ ಕೂಡಲೇ ಬಿಲ್ ನೀಡಬೇಕು. ಬಿಲ್ ನೀಡದೆ ಕಾಲ ವಿಳಂಬ ಮಾಡುವುದು ಸರಿಯಲ್ಲ ಎಂದು ತಿಳಿಸಿದರು.

ಮುಖ್ಯಾಧಿಕಾರಿ ಎಸ್.ಎಸ್.ಮಂಜುನಾಥ್ ಮಾತನಾಡಿ, ಆಶ್ರಯ ಬಡಾವಣೆಯ ಬೀದಿದೀಪ ಅಳವಡಿಕೆಗೆ 30 ಲಕ್ಷ ರೂ. ಅನುದಾನ ಬಿಡುಗಡೆಯಾಗಿ ಟೆಂಡರ್ ಪ್ರಕ್ರಿಯೆ ಮುಗಿದಿದೆ. ಕೆಲಸ ಆರಂಭಿಸಬೇಕಾಗಿದೆ. ಇದಲ್ಲದೆ ವಾರ್ಡ್‌ಗಳಲ್ಲಿ ಕುಡಿಯುವ ನೀರು ಪೂರೈಕೆಗಾಗಿ 7 ಲಕ್ಷ ರೂ. ಅನುದಾನ ಬಿಡುಗಡೆಯಾಗಿದ್ದು, ಇನ್ನು ಕೆಲವೇ ದಿನಗಳಲ್ಲಿ ಕಾಮಗಾರಿ ಶುರುವಾಗಲಿದೆ. 9 ಲಕ್ಷ ರೂ. ವೆಚ್ಚದಲ್ಲಿ ಪಟ್ಟಣದ ಎಸ್‌ಬಿಐ ಬ್ಯಾಂಕ್ ಬಳಿ ಸಾರ್ವಜನಿಕ ಶೌಚಾಲಯ ನಿರ್ಮಿಸಲು ಕ್ರಮವಹಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸ್ಥಾಯಿ ಸಮಿತಿ ಅಧ್ಯಕ್ಷೆ ಉಮಾ ರಾಮಚಂದ್ರ, ಸದಸ್ಯರಾದ ಎಸ್.ಎಲ್.ರಾಜಣ್ಣ, ಶ್ರೀನಿವಾಸ್, ಹೇಮಾವತಿ ರಮೇಶ್, ಚೈತ್ರಾಸ್ವಾಮಿ, ಸಣ್ಣತಾಯಮ್ಮ, ನೂರಾಳಸ್ವಾಮಿ, ಶಿವಕುಮಾರ್, ದಿವ್ಯಾ ನವೀನ್, ಚಲುವಕೃಷ್ಣ, ಸಿಬ್ಬಂದಿ ಎಚ್.ಕೆ.ರಾಮು, ಅರುಣ್ ಆರಾಧ್ಯ, ಮಹದೇವಸ್ವಾಮಿ, ಶಿವಪ್ರಸಾದ್, ಸತೀಶ್, ಪಳನಿಸ್ವಾಮಿ, ಅರ್ಜುನ್ ಹಾಜರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	(ದೂ: 2521923)
ಮಂಗಳ ವರುಂ(ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಘೋಸ್ಟ್ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಟೈಗರ್-3 (ಹಿಂದಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಜಪಾನ್ (ಇ)	4 ಪ್ರದರ್ಶನಗಳು
ಗಾಯಿತ್ರಿ	
ಲಿಯೋ (ಕ)	2 ಪ್ರದರ್ಶನಗಳು
ರಾಜಕಮಲ್	
ಟೈಗರ್-3 (ಹಿಂದಿ)	4 ಪ್ರದರ್ಶನಗಳು
ಸಂಗಂ	
ಸಪ್ತ ಸಾಗರದಾಚೆ ಎಲ್ಲೋ-ಸೈಡ್ B(ಕ)	4 ಪ್ರದರ್ಶನಗಳು
ಲಿಡೋ	
ಗರಡಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಮಂಗಳ ವರುಂ (ಕ)	4 ಪ್ರದರ್ಶನಗಳು
ಪ್ರಭಾ	
ನೇತ್ರಂ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	**ಟೈಗರ್ 3(ಹಿಂ):** ಬೆ.10.20ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, **ಟಗರುಪಲ್ಯ (ಕ):** ಮ.1.20ಕ್ಕೆ.
ಸ್ಕ್ರೀನ್ 2	**ದಿ ವೆಕೆಂಟ್ ಹೌಸ್ (ಕ):** ಬೆ.11ಕ್ಕೆ, **ರಾಜಯೋಗ (ಕ):** ಮ.1.15ಕ್ಕೆ, **ನೇತ್ರಂ (ಕ):** ಸಂ.4.30ಕ್ಕೆ, **ಗರಡಿ (ಕ):** ರಾ.7.10ಕ್ಕೆ, **ಸ್ಪಾರ್ಕ್ ಲೈಫ್ (ತೆ):** ರಾ.10ಕ್ಕೆ.
ಸ್ಕ್ರೀನ್ 3	**ಟ್ರೋಲ್ಸ್ ಬ್ಯಾಂಡ್ ಟುಗೆದರ್ (3ಡಿ)(ಇಂ):** ಬೆ.11ಕ್ಕೆ, ಮ.3.35ಕ್ಕೆ, ಸಂ.5.30ಕ್ಕೆ, **ಬೆಂಬಿಡದ ನಾವಿಕ (ಕ):** ಮ.1ಕ್ಕೆ, **ಶೇಶಮ್ ಮೈಕ್ ಇಲ್ ಫಾತಿಮಾ (ಮ):** ರಾ.7.30ಕ್ಕೆ, **ದಿ ಹಂಗರ್ ಗೇಮ್ಸ್ (ಇಂ):** ರಾ.10.10ಕ್ಕೆ.
ಸ್ಕ್ರೀನ್ 4	**ಸಪ್ತ ಸಾಗರದಾಚೆ ಎಲ್ಲೋ 2 (ಕ):** ಬೆ.10.05ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	**ಸಪ್ತ ಸಾಗರದಾಚೆ ಎಲ್ಲೋ 2 (ಕ):** ಬೆ.9.40ಕ್ಕೆ, ಮ.12.50ಕ್ಕೆ, ಸಂ.4ಕ್ಕೆ, ರಾ.7.10ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	**ಸಪ್ತ ಸಾಗರದಾಚೆ ಎಲ್ಲೋ 2 (ಕ):** ಬೆ.9ಕ್ಕೆ, ಮ.12.10ಕ್ಕೆ, ಸಂ.3.20ಕ್ಕೆ, ಸಂ.6.30ಕ್ಕೆ, ರಾ.9.40ಕ್ಕೆ.
ಸ್ಕ್ರೀನ್ 3	**ಟೈಗರ್ 3 (ಹಿಂ):** ಬೆ.9.10ಕ್ಕೆ, ಮ.12.30ಕ್ಕೆ, ಮ.3.50ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 4	**ಮಂಗಳವಾರಂ (ತೆ):** ಬೆ.9.10ಕ್ಕೆ, ಮ.12.25ಕ್ಕೆ, ಸಂ.6.45ಕ್ಕೆ, **ಗರಡಿ (ಕ):** ಮ.3.40ಕ್ಕೆ, **ಟೈಗರ್ 3 (ಹಿಂ):** ರಾ.10ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821-2973519

ಸ್ಕ್ರೀನ್ 1	**ದಿ ವೆಕೆಂಟ್ ಹೌಸ್ (ಕ):** ಬೆ.11ಕ್ಕೆ, ಸಂ.4.10ಕ್ಕೆ, **ರಾಜಯೋಗ (ಕ):** ಮ.1.05ಕ್ಕೆ, ಸಂ.6.15ಕ್ಕೆ, **ಟಗರುಪಲ್ಯ (ಕ):** ರಾ.9.15ಕ್ಕೆ.
ಸ್ಕ್ರೀನ್ 2	**ಸಪ್ತ ಸಾಗರದಾಚೆ ಎಲ್ಲೋ 2 (ಕ):** ಬೆ.10ಕ್ಕೆ, ಮ.1.15ಕ್ಕೆ, ರಾ.7.30ಕ್ಕೆ, **ಟೈಗರ್ 3 (ಹಿಂ):** ಸಂ.4.20ಕ್ಕೆ.
ಸ್ಕ್ರೀನ್ 3	**ಟೈಗರ್ 3(ಹಿಂ):** ಬೆ.11ಕ್ಕೆ, **ಸಪ್ತ ಸಾಗರದಾಚೆ ಎಲ್ಲೋ 2 (ಕ):** ಮ.3.45ಕ್ಕೆ, ಸಂ.6.35ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	**ಟಗರುಪಲ್ಯ (ಕ):** ಬೆ.10.30ಕ್ಕೆ, ಸಂ.4.10ಕ್ಕೆ, ಸಂ.6.50ಕ್ಕೆ, **ಟೈಗರ್ 3 (ಹಿಂ):** ಮ.1.05ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಘೋಸ್ಟ್ (ಕ): ಬೆ.9ಕ್ಕೆ, ಬೆ.10.20ಕ್ಕೆ, ಮ.1.15ಕ್ಕೆ, ಮ.3.20ಕ್ಕೆ, ರಾ.7.35ಕ್ಕೆ, ರಾ.9.45ಕ್ಕೆ, ರಾ.10.30ಕ್ಕೆ, **12th ಫೇಲ್ (ಹಿಂ):** ಮ.3.50ಕ್ಕೆ, **ಭಗವಂತ್ ಕೇಸರಿ (ತೆ):** ರಾ.7.05ಕ್ಕೆ, **ಗಣಪತ್: ಎ ಹೀರೋ (ಹಿಂ):** ಸಂ.4.10ಕ್ಕೆ, **ಕಿಲ್ಲರ್ಸ್ ಆಫ್ ಫ್ಲವರ್ ಮೂನ್ (ಇಂ):** ಬೆ.10ಕ್ಕೆ, ಮ.2.05ಕ್ಕೆ, ಸಂ.6.10ಕ್ಕೆ, ರಾ.10.15ಕ್ಕೆ, **ಲಿಯೋ (ಕ):** ಮ.12.45ಕ್ಕೆ, **ಲಿಯೋ (ತ):** ಬೆ.11.55ಕ್ಕೆ, ಸಂ.4.10ಕ್ಕೆ, ಸಂ.6.15ಕ್ಕೆ, ರಾ.9.40ಕ್ಕೆ, ರಾ.10.30ಕ್ಕೆ, **ಮುಜಿಬ್ ದಿ ಮೇಕಿಂಗ್ ಆಫ್ ಎ ನೇಷನ್ (ಹಿಂ):** ರಾ.10ಕ್ಕೆ, **ಟಗರುಪಲ್ಯ (ಕ):** ಮ.1ಕ್ಕೆ, ರಾ.7ಕ್ಕೆ, **ತೇಜಸ್ (ಹಿಂ):** ಬೆ.11.05ಕ್ಕೆ, ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಕೋಟೆಯಲ್ಲಿ ಚುಂಚಾದ್ರಿ ಕ್ರೀಡೋತ್ಸವ



ಹೆಚ್.ಡಿ.ಕೋಟೆ, ನ.21-ಪಟ್ಟಣದ ತಾಲೂಕು ಕ್ರೀಡಾಂಗಣ ಆವರಣದಲ್ಲಿ ಆದಿಚುಂಚನಗಿರಿ ಸಂಸ್ಥೆಯ ಮೈಸೂರು ಜಿಲ್ಲಾ ಮಟ್ಟದ ಚುಂಚಾದ್ರಿ ಕ್ರೀಡೋತ್ಸವ ನಡೆಯಿತು.

ಕ್ರೀಡೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ತಹಶೀಲ್ದಾರ್ ಶ್ರೀನಿವಾಸ್, ಕ್ರೀಡೆ ಪ್ರತಿಯೊಬ್ಬರ ಜೀವನದಲ್ಲಿ ವಿಶೇಷ ಪಾತ್ರ ವಹಿಸುತ್ತದೆ. ಕ್ರೀಡೆಗಳು ಯಾವಾಗಲೂ ಮನುಷ್ಯನನ್ನು ಆರೋಗ್ಯಕರ, ಸಮೃದ್ಧ ಮತ್ತು ಕ್ರಿಯಾಶೀಲವಾಗಿರುವಂತೆ ಮಾಡುತ್ತದೆ. ನಾವು ಎಲ್ಲಾ ಸಮಯದಲ್ಲೂ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಂಡಾಗ ಮಾತ್ರ ಜೀವನದಲ್ಲಿ ಉತ್ತಮ ಸಾಧನೆಗಳನ್ನು ಸಾಧಿಸಬಹುದು ಎಂದರು.

ಬ್ಯಾಸ್ಕೆಟ್‌ಬಾಲ್, ಫುಟ್‌ಬಾಲ್, ವಾಲಿಬಾಲ್, ಕ್ರಿಕೆಟ್ ಇತ್ಯಾದಿಗಳು ಪ್ರಸಿದ್ಧ ಕ್ರೀಡೆಗಳಾಗಿವೆ. 1896ರಲ್ಲಿ ಮೊದಲ ಒಲಂಪಿಕ್ ಕ್ರೀಡಾಕೂಟವನ್ನು ಅಥೆನ್ಸ್‌ನಲ್ಲಿ ನಡೆಸಲಾಯಿತು. ಇದು ಈಗ ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ವಿವಿಧ ದೇಶಗಳಲ್ಲಿ ನಿಯಮಿತವಾಗಿ ನಡೆಯುತ್ತಿದೆ. ಒಳಾಂಗಣ ಮತ್ತು ಹೊರಾಂಗಣ ಆಟಗಳನ್ನು ಒಳಗೊಂಡಿದೆ ಎಂದರು.

ಆದಿಚುಂಚನಗಿರಿಯ ಮೈಸೂರು ಶಾಖಾ ಮಠದ ಸೋಮೇಶ್ವರನಾಥ ಸ್ವಾಮೀಜಿ, ಪ್ರೊ.ಚಂದ್ರೇಗೌಡ, ಎ.ಜೆ. ಕಾಳೇಗೌಡ, ಸಿ.ಎನ್.ನರಸಿಂಹಗೌಡ, ಕೃಷ್ಣೇಗೌಡ, ದೈಹಿಕ ಶಿಕ್ಷಣ ಪರಿವೀಕ್ಷಕ ರಾಮಪ್ರಸಾದ್, ತಾಲೂಕು ಆರೋಗ್ಯಾಧಿಕಾರಿ ಡಾ.ಟಿ.ರವಿಕುಮಾರ್, ಮುಖ್ಯಶಿಕ್ಷಕಿ ನಂದಿನಿ, ಸಂತೋಷ್, ಸತೀಶ್, ರವಿ ಇದ್ದರು.

ದಾಸೇಗೌಡ ನಿಧನ



ಹಿರೀಕ್ಯಾತನಹಳ್ಳಿ: ಹುಣಸೂರು ತಾಲೂಕಿನ ಕಾಳೇಗೌಡನಕೊಪ್ಪಲು ಗ್ರಾಮದ ದಾಸೇಗೌಡ(91) ಮಂಗಳವಾರ ಮುಂಜಾನೆ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಐವರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗ ಅಗಲಿದ್ದಾರೆ. ಗ್ರಾಮದ ಮೃತರ ತೋಟದಲ್ಲಿ ಅಂತ್ಯಕ್ರಿಯೆ ನೆರವೇರಿತು.



10ನೇ ವರ್ಷದ ಹುಟ್ಟುಹಬ್ಬದ ಶುಭಾಶಯಗಳು

ಹಿಶಿತಾ

ಶುಭಕೋರುವವರು:
ತಂದೆ: ಸುಂದರರಾಜ್, ತಾಯಿ–ನಿರುಪಮ
ತಾತಂದಿರು: ಗಂಗಾಧರ್ ಎಂ. & ಜವರಯ್ಯ
ಅಜ್ಜಿಯಂದಿರು: ಲಕ್ಷ್ಮಿ & ರೇಗಿಣಿ
ಮಧುಪಮ– ಚಿರಾಗ್
ಹಾಗೂ ಕುಟುಂಬವರ್ಗದವರು

ಬೇಕಾಗಿದ್ದಾರೆ

ಮೈಸೂರಿನ ಪ್ರತಿಷ್ಠಿತ ಆಯುರ್ವೇದ ಆಸ್ಪತ್ರೆಗೆ ಕನ್ನಡ ಮತ್ತು ಇಂಗ್ಲೀಷ್ ಟೈಪಿಂಗ್ ಬಲ್ಲ ಮಹಿಳಾ ಆಫೀಸ್ ಅಸಿಸ್ಟೆಂಟ್ ಬೇಕಾಗಿದ್ದಾರೆ.

9686264040

WANTED

For Luxury Resort

- FO Executive - 4 Nos
- F&B Captain - 4 Nos
- F & B Manager - 1 No
- HR/Accounts (MBA)
- Digital Mkt - 1 No
- Stewards, H K Boys and all types Cooks & Electrical Plumbing Maintenance.

Contact: 99029 84872 / 99029 84674

Walk-in Drive: rProcess is Hiring Data Annotators for AI projects - Night Shift

Wanted candidates with Good communication and computer skills, Attention to detail, Ability to meet deadlines & self-motivation are required qualities.

Walk-in with all Documents: 22nd to 24th Nov 2023 (9AM to 2PM)

Walk-in Venue:
rProcess, Gunamba Towers, D. Subbaiah Road, Lakshmi Puram, Mysuru
Email: arpana@rprocess.in; Ph.: 99800 07732, 79968 79076
www.rprocess.in

VIDYAVARDHAKA SANGHA (R), Mysuru

Vidyavardhaka First Grade College, PG Centre

DOS in Commerce - M.Com Course
Sheshadri Iyer Road, Mysuru-01, Phone:0821-2420284, 2422385

WANTED

Sl.No	Name of the post	Education Qualification	Remarks
1	Assistant Professor in Commerce	M.Com. with First Class Essential : NET/K-SET Ph.D., Preferable	01 Post

Candidate with experience will be preferred.
Please submit the applications within 7 days along with copies of Certificates, Bio-Data & Passport Size photo to the office.

Sd/- Hon.President Sd/- Hon. Secretary

SITES FOR SALE

DTCP Approved Layout
on 120 feet Main Road
Murudgalli, next to Udbur.
2 KM from upcoming peripheral Ring Road
Price: 14.5 Lakhs
Bank Loan 8 Lakhs
Ready for Registration
Call: 9036 35 6060 / 99450 16370

ಹೆರಿಟೇಜ್ ಹೋಮ್ಸ್

MUDA LIMITS

ಮೈಸೂರು - ಹುಣಸೂರು ಮುಖ್ಯರಸ್ತೆ, ಮೈಸೂರು

ನಿಮ್ಮ ಕನಸಿನ ನಿವೇಶನ ನಿಮ್ಮ ಕೈಗೆಟುಕುವ ಬೆಲೆಯಲ್ಲಿ
MEGA RESIDENTIAL TOWNSHIP

30x40 | 30x50 | 40x60 | 50x80

ಸುಲಭ 4 ಕಂತುಗಳ ಸೌಲಭ್ಯವಿದೆ

ಕೇವಲ ₹550/ ಪ್ರತಿ ಚದರ ಅಡಿ

ಅಚ್ಚತೆಯ ಎಲ್ಲಾ ಸೌಲಭ್ಯಗಳನ್ನು ಒಳಗೊಳ್ಳುವ ನಿವೇಶನಗಳು

ಕೆಲವೇ ಸೈಟ್‌ಗಳು ಮಾತ್ರ ಲಭ್ಯ

ಅಧ್ವಿಕಾ ವೆಂಚರ್ಸ್
95133 01854
90713 86615

HERO MOTOCORP

Shah Mysore is Hiring for New Exclusive Electric Vehicle Dealership

- **Sales Manager:** Graduate, min 5-7 years experience
- **Team Leader:** Graduate, min 2-3 years experience
- **Product Specialist:** Freshers, Young Graduates, & Experienced.
- **Premium Products:** Commuter & off-road bikes, Electric Vehicles
- **Sales Assistance:** Boys & Girls having 2W DL. Computer & Smart Phone knowledge preferred.

EXPERIENCE IN AUTOMOBILES, RETAIL FINANCE, CONSUMER DURABLES PREFERRED.

ATTRACTIVE SALARY + INCENTIVES
Post your resume to shahmobikes2022@gmail.com or Whatsapp to 9742297448

VIDYAVARDHAKA SANGHA (R), Mysuru

VIDYAVARDHAKA LAW COLLEGE

(Affiliated to Karnataka State Law University, Hubballi)
Sheshadri Iyer Road, Mysuru - 01 | Ph : 0821-2426220
Email : vidyavardhakalawcollege@gmail.com

WANTED

- **Asst. Professor in Law (Full Time)**
  Education Qualification: With Minimum 55% in LL.M, NET/ SLET/ PhD., qualified candidates with good communication skills will be preferred.
- **Physical Education Director**
  Education Qualification: With Minimum 55% in MPEd, NET/ SLET/ PhD., qualified candidates with good communication skills will be preferred.

Please submit the application at the above address within 7 days along with copies of certificates, Resume & Passport size photo.

Hon.President Hon. Secretary

ನಿಮ್ಮ ಹಳೆಯ ಹಾಸಿಗೆ ಹತ್ತಿಯನ್ನು

ವಿದ್ಯುತ್ ಚಾಲಿತ ಯಂತ್ರದಿಂದ ಶುದ್ಧೀಕರಿಸಿ ನೂತನ ಹಾಸಿಗೆಯನ್ನು ತಯಾರಿಸಿಕೊಡುತ್ತೇವೆ.
ಸೂ: ನಿಮ್ಮ ಮನೆಯಿಂದ ಪಡೆಯುವುದು ಮತ್ತು ತಲುಪಿಸುವುದು ಉಚಿತ.

ಬಾಹುಸಾರ್ ಟ್ರೇಡಿಂಗ್ ಕಂ.
ನಂ.50, ಡಿ. ದೇವರಾಜ ಅರಸು ರಸ್ತೆ, ಮೈಸೂರು
9448062224, 0821-2427224

PROFESSIONALLY MANAGED AND INDUSTRIAL ORGANIZATION IN HEBBAL INDUSTRIAL AREA REQUIRES THE FOLLOWING CANDIDATES IMMEDIATELY

SENIOR ACCOUNTS EXECUTIVE (Female and Male) - B.Com / M.Com
> with minimum 3-5 years of experience.
> Preparing financial documents such as invoices, bills and accounts payable and receivable.
> Processing business exercises and managing day to day transactions

PURCHASE EXECUTIVE (Male and Female)
> Commerce Graduate with a knowledge of MS office & Tally.
> Minimum 3 years of experience having knowledge of Purchase, Stock handling and Distribution Process.

Interested candidates may contact and submit their CVs to below mentioned ID : **manufacturer.hr246@gmail .com**

DTCP SITES FOR SALE

DTCP Sites
Rs. 699 per sq.ft.,
Near Jayapura,
H.D. Kote Road, Mysore.
9590491194,9606783264

ಕಾಂಚೀಪುರಂ ರೇಷ್ಮೆ ಸೀರೆಗಳು

50% ರಿಯಾಯಿತಿ
ಮಾರಾಟ ಮತ್ತು
ಹಳೆ ಸೀರೆಗಳ ಎಕ್ಸ್‌ಚೇಂಜ್ ಆಫರ್
ಈ ಅವಕಾಶ 7 ದಿನಗಳು ಮಾತ್ರ
ಹೋಟೆಲ್
ಮಯೂರ ಯಾತ್ರಿನಿವಾಸ್
ಜೆ.ಎಲ್.ಬಿ. ರಸ್ತೆ, ಮೈಸೂರು - 5
ಮೊ. : 9481820079

ಮೈಸೂರು ಮಿತ್ರ

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಆದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಚಿರಸ್ಮರಣೆ



ಡಿ.ರಾಜಮ್ಮ (W/o ಡಿ.ದೊಡ್ಡಯ್ಯ, ಎಲೆಕ್ಟ್ರಿಕಲ್ಸ್)

ಅಮ್ಮ ನೀವು ನಮ್ಮನ್ನಗಲಿ ಇಂದಿಗೆ 19 ವರ್ಷಗಳಾದರೂ, ನಮ್ಮ ಮನಪಂಗಳದಲ್ಲಿ ನಿಮ್ಮ ನೆನಪು ಸದಾ ಹಸಿರು. ನಿಮ್ಮ ಆಶೀರ್ವಾದ ನಮ್ಮನ್ನು ಎಂದೆಂದಿಗೂ ಕಾಯಲೆಂದು ಶ್ರದ್ಧೆ ಭಕ್ತಿಯಿಂದ ಬೇಡುವವ್ರು.

ಡಿ.ದೊಡ್ಡಯ್ಯ, ಲಕ್ಷ್ಮಿ, ಜನ್ನೇಗೌಡ, ಸುಂದರಮ್ಮ, ಗೋವಿಂದರಾಜು, ಸರೋಜ, ಜೈಕುಮಾರ್, ಲತಾ, ಕೃಷ್ಣಮೂರ್ತಿ, ಆಶಾಧರ್ಮಪ್ಪ, ಮೀನಾ, ಮಂಜುನಾಥ್, ಭಾರತಿ, ಸೋಮಶೇಖರ್,ಮೊಮ್ಮಕ್ಕಳಾದ ರೂಪ, ರವಿ, ದೀಪಿಕಮಾರಾ, ಚೇತನಾ, ಪ್ರಿಯ, ಅನಿಲ್, ಅಂಬಿಕ, ದಿನೇಶ್, ಸುಕನ್ಯ, ಮಾಲವಿಕ, ಮನೀಶ್, ಕೌಶಿಕ್, ಪ್ರಜ್ಞಾ, ವಿಜಯ್‌ಕಿರಣ್, ತನೀಶ್, ಅಪೂರ್ವ, ಮರಿಮೊಕ್ಕಳಾದ ರವೀಂದ್ರ, ಪೂರ್ವಿಕ, ಕ್ಷಿತಿಜ್, ತನೀಷಾ, ಪೂರ್ವಿ

ಜಿಲ್ಲಾ ಪಂಚಾಯತ್ ಮೈಸೂರು

(ಕೈಗಾರಿಕಾ ವಿಭಾಗ)
ಉಪ ನಿರ್ದೇಶಕರು(ಖಾಗ್ರಾ)ರವರ ಕಛೇರಿ, ಸಿ.ಟಿ.ಐ.ಕಟ್ಟಡ, ಸಯ್ಯಾಜಿರಾವ್ ರಸ್ತೆ, ಮೈಸೂರು.
ದೂರವಾಣಿ:0821–2563370

ಸಂಖ್ಯೆ:ಉನಿ/(ಖಾಗ್ರಾ/ಜಿಪಂ/ಮೈ/ಮರು ಇ–ಟೆಂಡರ್/2023–24 ದಿನಾಂಕ: 18.11.2023

ವೃತ್ತಿನಿರತ ಕುಶಲಕರ್ಮಿಗಳಿಗೆ ಸುಧಾರಿತ ಉಪಕರಣಗಳ ಸರಬರಾಜಿಗಾಗಿ ಮರು ಇ–ಟೆಂಡರ್ ಪ್ರಕಟಣೆ

ಉಪನಿರ್ದೇಶಕರು(ಖಾಗ್ರಾ), ಜಿಲ್ಲಾ ಪಂಚಾಯತ್ (ಕೈಗಾರಿಕಾ ವಿಭಾಗ), ಮೈಸೂರು ರವರ ಕಛೇರಿಯಿಂದ ಮೈಸೂರು ಜಿಲ್ಲೆಯಲ್ಲಿರುವ ವೃತ್ತಿನಿರತ ಕುಶಲಕರ್ಮಿಗಳಿಗೆ ಸುಧಾರಿತ ಉಪಕರಣಗಳನ್ನು ಸರಬರಾಜು ಮಾಡಲು ಈ ಕೆಳಕಂಡ ಉಪಕರಣಗಳ ಸರಬರಾಜಿಗಾಗಿ ಮರು ಇ–ಟೆಂಡರ್ ಆಹ್ವಾನಿಸಿದೆ.

ಕ್ರ ಸಂ	ವಿವರಗಳು	ಅಂದಾಜು ಸಂಖ್ಯೆ	ಇ.ಎಂ.ಡಿ ರೂ.ಲಕ್ಷಗಳಲ್ಲಿ	ಅಂದಾಜು ಟೆಂಡರ್ ಮೊತ್ತ ರೂ.ಲಕ್ಷಗಳಲ್ಲಿ
1.	ವಿದ್ಯುತ್ ಚಾಲಿತ ಹೊಲಿಗೆಯಂತ್ರ	337	0.54	27.00
2.	ವಿದ್ಯುತ್ ಚಾಲಿತ ಮರಗೆಲಸದ ಉಪಕರಣಗಳು	100	0.16	8.00

ಟೆಂಡರ್ ಆದೇಶ ಸಂಖ್ಯೆ:ಉನಿ/(ಖಾಗ್ರಾ)/ಜಿಪಂ/ಮೈ/ಮರು ಇ–ಟೆಂಡರ್/2023–24, ದಿನಾಂಕ:18.11.2023. ಇ–ಟೆಂಡರ್ ಮೂಲಕ ಅರ್ಜಿ ಸ್ವೀಕರಿಸುವ **ದಿನಾಂಕ: 18.11.2023 ರಿಂದ 29.11.2023 ಸಂಜೆ 05.30 ಗಂಟೆಯೊಳಗೆ.** ಭರ್ತಿ ಮಾಡಿದ ಟೆಂಡರ್‌ಗಳನ್ನು **https://kppp.karnataka.gov.in** ಆನ್‌ಲೈನ್ ಮುಖಾಂತರ ಸ್ವೀಕರಿಸುವ ಕೊನೆಯ ದಿನಾಂಕ ಮತ್ತು ಸಮಯ: **29.11.2023 ಸಂಜೆ 5.30 ಗಂಟೆಯೊಳಗೆ.** ಅಲ್ಪಾವಧಿ ಮರು ಟೆಂಡರ್ ತೆರೆಯುವ ತಾತ್ಕಾಲಿಕ ದಿನಾಂಕ ಮತ್ತು ಸಮಯ: **01.12.2023 ಬೆಳಿಗ್ಗೆ 11.00 ಗಂಟೆ.** ಅಲ್ಪಾವಧಿ ಮರು ಟೆಂಡರ್ ತೆರೆಯುವ ಅಧಿಕಾರಿ: ಉಪ ನಿರ್ದೇಶಕರು(ಖಾಗ್ರಾ), ಜಿ.ಪಂ.ಮೈಸೂರು. ಸಂಪರ್ಕಿಸಬೇಕಾದ ಕಛೇರಿ ವಿಳಾಸ: ಉಪ ನಿರ್ದೇಶಕರು(ಖಾಗ್ರಾ)ರವರ ಕಛೇರಿ, ಜಿಲ್ಲಾ ಪಂಚಾಯತ್, ಕೈಗಾರಿಕಾ ವಿಭಾಗ, ಮೈಸೂರು. ಮೇಲ್ಮನವಿ ಪ್ರಾಧಿಕಾರ: ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು.

ಸಹಿ/–
ಉಪನಿರ್ದೇಶಕರು (ಖಾಗ್ರಾ),
ಜಿಲ್ಲಾ ಪಂಚಾಯತ್, ಮೈಸೂರು.

DIPR/MYS/KAVITA/664/23-24

ಪ್ಲಾಸ್ಟಿಕ್ ಬಳಕೆ ನಿಷೇಧಿಸಿ ಪರಿಸರವನ್ನು ಕಾಪಾಡಿ

22ನೇ ವರ್ಷದ ಸವಿನೆನಪು



ನೀವು ನಮ್ಮನ್ನಗಲಿ ಇಂದಿಗೆ 22 ವರ್ಷ ಕಳೆದರೂ ಸದಾ ನಿಮ್ಮ ಪ್ರೀತಿ, ಆದರ್ಶಗಳು ನಮಗೆ ದಾರಿದೀಪವಾಗಿದೆ. ಸದಾ ನಿಮ್ಮ ನೆನಪು ನಮ್ಮ ಮನದಲ್ಲಿ ಅಚ್ಚಹಸಿರಾಗಿದೆ.

ಬೀರಮ್ಮನವರು

ದುಃಖತಪ್ತರು: ಮಗ – ನಾಗರಾಜು, ಸೊಸೆ – ಜಯಮ್ಮ ಹಾಗೂ ಕುಟುಂಬವರ್ಗದವರು.

ಪ್ರಕಟಣೆ: ಬೀರಮ್ಮ ಟೀ ಸ್ಟಾಲ್, ಕುರುಬಾರಹಳ್ಳಿ

ನೋಂದಾವಣೆ ಸಂಖ್ಯೆ :ಎ.ಆರ್.41/ಎಚ್.ಕೆ.ಎ/10445/84–85 ದೂರವಾಣಿ :0821–2447492

ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ (ನಿ)., ಮೈಸೂರು

ಸಹಕಾರ ಸಂಕೀರ್ಣ, ಸಹಕಾರ ಭವನ, ಚಾಮರಾಜ ಜೋಡಿ ರಸ್ತೆ, ಮೈಸೂರು – 570004
ದಿನಾಂಕ : 20–11–2023

ತಿಳುವಳಿಕೆ ಪತ್ರ ಸಂಖ್ಯೆ: 28/2023–24

ಮಾನ್ಯರೆ,
ವಿಷಯ : ಮೇಲ್ಕಂಡ ಸಂಘದ ಪಾಲು ಬಂಡವಾಳದ ಮುಖ ಬೆಲೆ ರೂ.10,000/– ಗಳನ್ನು ತುಂಬುವ ಬಗ್ಗೆ.
ಉಲ್ಲೇಖ : ದಿನಾಂಕ : 31–10–2023 ರಂದು ಸಂಘವು ನೀಡಿರುವ ನೋಂದಾಯಿತ ಅಂಚೆ ತಿಳುವಳಿಕೆ ನೋಟಿಸ್.

ಸಂಘದ ಉಪನಿಯಮ ಸಂಖ್ಯೆ 7 ಹಾಗೂ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆಯ ಕಲಂ 19ರಂತೆ ಒಂದು ಪೂರ್ಣ ಷೇರು ಮೊಬಲಗಿಗೆ ಕೊರತೆಯಾಗಿರುವ ಹಣವನ್ನು, ಸಂಘದ ಯಾವ ಯಾವ ಸದಸ್ಯರು ಒಂದು ಪೂರ್ಣ ಷೇರು ಮೊಬಲಗಿಗೆ ಸಮನಾದ ಹಣವನ್ನು ಅಂದರೆ ರೂ. 10,000/–ಗಳನ್ನು ಪಾವತಿ ಮಾಡಿರುವುದಿಲ್ಲವೋ ಅಂತಹ ಎಲ್ಲಾ ಸದಸ್ಯರುಗಳೂ ದಿನಾಂಕ: **15–12–2023** ರೊಳಗೆ ಕನಿಷ್ಠ ಒಂದು ಷೇರಿನ ಮುಖಬೆಲೆಗೆ ಸಮನಾಗಿರುವಂತೆ ಬಾಕಿಯಾಗಿರುವ ಷೇರು ಹಣವನ್ನು ತುಂಬಕತಕ್ಕದ್ದು. ಈಗಾಗಲೇ ಷೇರು ಧನ ಪಾವತಿಸಿರುವ ಸದಸ್ಯರಿಗೆ ಇದು ಅನ್ವಯಿಸಿರುವುದಿಲ್ಲ. ತಪ್ಪಿದಲ್ಲಿ ಕೊರತೆಯಾದ ಷೇರುಹಣವನ್ನು ತುಂಬದಿರುವ ಸದಸ್ಯರುಗಳು ತಮ್ಮ ಸದಸ್ಯತ್ವದ ಹಕ್ಕನ್ನು ಚಲಾಯಿಸಲು ಸಾಧ್ಯವಾಗುವುದಿಲ್ಲವೆಂದು ಈ ಮೂಲಕ ತಿಳಿಯಪಡಿಸಲಾಗಿದೆ. ಸಂಘದ ಹಾಲಿ ಆಡಳಿತ ಮಂಡಳಿಯ ಅಧಿಕಾರಾವಧಿಯು ದಿನಾಂಕ: **14–01–2024**ಕ್ಕೆ ಮುಕ್ತಾಯವಾಗಲ್ಲಿದ್ದು, ಸರ್ಕಾರವು ಸೂಚಿಸಿದ ದಿನಾಂಕದಂದು ನಡೆಯುವ ಚುನಾವಣೆಯಲ್ಲಿ **ಮತ ಚಲಾಯಿಸುವ ಹಕ್ಕನ್ನು ಹೊಂದಲೂ** ಸಹ ಸದಸ್ಯರುಗಳು ಕೊರತೆಯಾಗಿರುವ ಷೇರುಹಣವನ್ನು ನಿಗದಿತ ಅವಧಿಯೊಳಗೆ ತುಂಬಿ ಅಧಿಕೃತ ರಶೀದಿಯನ್ನು ಹೊಂದಿರದಿದ್ದಲ್ಲಿ ಸದರಿ ಚುನಾವಣೆಯಲ್ಲಿ ಠೀತ್ಯಾ ಮತ ಚಲಾಯಿಸುವ **ಹಕ್ಕನ್ನು ಕಳೆದುಕೊಳ್ಳುವುದಾಗಿಯೂ** ಈ ಮೂಲಕ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ
ಸಹಿ/– ಮುಖ್ಯ ಕಾರ್ಯನಿರ್ವಾಹಣಾಧಿಕಾರಿ

ಸಾರ್ವಜನಿಕರ ಗಮನಕ್ಕಾಗಿ

ನನ್ನ ಕಕ್ಷಿದಾರರಾದ ಮಹಮ್ಮದ್ ಯಾಸೀನ್ ಹಾಗೂ ಆತನ ಪತ್ನಿ ಕರಿಷ್ಮಾ ಇರ್ಶಾದೆಯ ಮೇರೆಗೆ, ಏನೆಂದರೆ, ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತಿನ ಸಂಬಂಧ ಹುಣಸೂರು ತಾಲ್ಲೂಕು, ಹನಗೋಡು ಹೋಬಳಿ, ಚಿಲಕುಂದ ಗ್ರಾಮದಲ್ಲಿರುವ ರಿಜ್ವಾನ್ ಪರ್ವಿನ್ ಕೋಂ ಲೇಟ್ ನೂರುಲ್ಲಾ ಷರೀಫ್ ಮತ್ತು ಅವರ ಕುಟುಂಬದವರಿಗೂ, ಹಾಗೂ ನನ್ನ ಕಕ್ಷಿದಾರರಿಗೂ ಕೆಳಕಂಡ ಜಮೀನಿನ ಸಂಬಂಧ ಮಾರಾಟ ಮಾಡುವ ಸಂಬಂಧ ಒಡಂಬಡಿಕೆಯಾಗಿದ್ದು ಸದರಿ ಜಮೀನನ್ನು ನನ್ನ ಕಕ್ಷಿದಾರರು ಕ್ರಯಕ್ಕೆ ಪಡೆಯಲು ಇಚ್ಛಿಸಿದ್ದು ಈಗಾಗಲೇ ಆ ಸಂಬಂಧ ನನ್ನ ಕಕ್ಷಿದಾರರಿಗೆ ಕೆಲವು ದಾಖಲಾತಿಗಳನ್ನು ಹಾಜರು ಮಾಡಿದ್ದು ನನ್ನ ಕಕ್ಷಿದಾರರು ಸದರಿ ಜಮೀನನ್ನು ನೋಂದಾಯಿತ ಕ್ರಯ ಪತ್ರದ ಮೂಲಕ ಖರೀದಿಸಲು ತೀರ್ಮಾನಿಸಿದ್ದು ಸದರಿ ಜಮೀನಿನ ಸಂಬಂಧ ಯಾರಿಗಾದರೂ ಯಾವುದೇ ರೀತಿಯ ಹಕ್ಕು ಹಿತಾಸಕ್ತಿ, ಕೋರ್ಟ್ ಡಿಕ್ರಿ, ಜೀವನಾಂಶ, ಆಧಾರ, ಭೋಗ್ಯ, ವ್ಯವಸ್ಥಾ ಪತ್ರ, ಭಾಗಾಂಶ, ಇನ್ನಿತರೆ ಯಾವುದೇ ಹಕ್ಕು ಇದ್ದಲ್ಲಿ ಸಂಬಂಧಪಟ್ಟವರು ಈ ಪತ್ರಿಕಾ ಪ್ರಕಟಣೆ ಹೊರಡಿಸಿದ 7 ದಿವಸದೊಳಗಾಗಿ ನನ್ನ ಕಕ್ಷಿದಾರರಿಗಾಗಲೀ, ನನಗಾಗಲೀ ಲಿಖಿತವಾಗಿ ಸಂಬಂಧಪಟ್ಟ ದಾಖಲಾತಿಗಳೊಡನೆ ನನ್ನ ಕೆಳಕಂಡ ವಿಳಾಸದ ಕಛೇರಿಯ ಸಮಯದಲ್ಲಿ ಹಾಜರಾಗಿ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು. ಮೇಲ್ಕಂಡ ಸಮಯದೊಳಗೆ ಯಾವುದೇ ತಕರಾರು ಬರದೇ ಇದ್ದ ಪಕ್ಷದಲ್ಲಿ ನನ್ನ ಕಕ್ಷಿದಾರರು ಕೆಳಕಂಡ ಜಮೀನಿನ ಸಂಬಂಧ ಕ್ರಯ ಪತ್ರವನ್ನು ಪಡೆದುಕೊಳ್ಳುತ್ತಾರೆ. ಮುಂದೆ ಬರುವ ತಂಟೆ ತಕರಾರುಗಳಿಗೆ ನನ್ನ ಕಕ್ಷಿದಾರರು ಬದ್ಧರಾಗಿರುವುದಿಲ್ಲವೆಂದು ಈ ಮೂಲಕ ತಿಳಿಯತಕ್ಕದ್ದು.

ಷೆಡ್ಯೂಲ್ ಸ್ವತ್ತಿನ ವಿವರ: ಹುಣಸೂರು ತಾಲ್ಲೂಕು, ಹನಗೋಡು ಹೋಬಳಿ, ಚಿಲಕುಂದ ಗ್ರಾಮಕ್ಕೆ ಸೇರಿದ ಸರ್ವೆ.ನಂ. 120/2 ರಲ್ಲಿ 6 ಎಕರೆ 2 ಗುಂಟೆ ಮತ್ತು ಸರ್ವೆ ನಂ. 121/2 ರಲ್ಲಿ 1 ಎಕರೆ 18 ಗುಂಟೆ ವಿಸ್ತೀರ್ಣದ **ಜಮೀನಿಗೆ ಚೆಕ್ ಬಂದಿ:** ಪೂರ್ವಕ್ಕೆ: ಚಿಲಕುಂದ ದಿಂದ ಮುತ್ತುರಾಯನ ಹೊಸಹಳ್ಳಿಯ ರಸ್ತೆ, ಪಶ್ಚಿಮಕ್ಕೆ: ಅಂಕಯ್ಯನ ಕೆರೆ, ಉತ್ತರಕ್ಕೆ : ಕೆ. ಜಿಯೋಉಲ್ಲಾ ಷರೀಫ್ ರವರ ಸ್ವತ್ತು, ದಕ್ಷಿಣಕ್ಕೆ : ಸಿ.ಡಿ.ರಾಜೇಗೌಡ ಬಿನ್ ಲೇಟ್ ದೇವೇಗೌಡ ರವರ ಜಮೀನು

ಕಕ್ಷಿದಾರರ ಪರ ವಕೀಲರು, ಸಹಿ/– ಶ್ರೀ ಪಾಲಾಕ್ಷ, ವಕೀಲರು, ನಂ. 645, ಮೊದಲನೇ ಮಹಡಿ, ನಾರಾಯಣ ಶಾಸ್ತ್ರಿ ರಸ್ತೆ, ಶಾಂತಲ ಚಿತ್ರ ಮಂದಿರ ಹತ್ತಿರ, ಮೈಸೂರು, ಮೊ: 9448075718

apmcnanjangud@gmail.com ದೂ.ಸಂ.08221–226309

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ನಂಜನಗೂಡು

ಹುಲ್ಲಹಳ್ಳಿ ರಸ್ತೆ, ನಂಜನಗೂಡು, ಮೈಸೂರು ಜಿಲ್ಲೆ.
ಸಂಖ್ಯೆ: ಕೃಉಮಾಸ(ನಂ)/502/2023–24 ದಿ: 21.11.2023

ಟೆಂಡರ್ ಪ್ರಕಟಣೆ

(ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪದ್ಧತಿಯಲ್ಲಿ ಮಾತ್ರ)

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ನಂಜನಗೂಡು ಇವರು ಈ ಕೆಳಕಂಡ ಕಾಮಗಾರಿಗೆ ಏಕ ಲಕೋಟೆ ಪದ್ಧತಿಯಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪಾರದರ್ಶಕತೆ ಕಾಯಿದೆ 1999 ಮತ್ತು ನಿಯಮ 2000 ಹಾಗೂ ತತ್ಸಂಬಂಧವಾಗಿ ಹೊರಡಿಸಿರುವ ಸರ್ಕಾರದ ಆದೇಶ, ಸುತ್ತೋಲೆ ಮತ್ತು ಮಾರ್ಗಸೂಚಿ ಅನುಸಾರ ಐಟಂವಾರು ಟೆಂಡರುಗಳನ್ನು ಲೋಕೋಪಯೋಗಿ ಇಲಾಖೆಯಲ್ಲಿ ಮತ್ತು ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್‌ನಲ್ಲಿ ನೊಂದಾಯಿತ ಹಾಗೂ Standard Tender Documents KW-2 Clause-3 ನಲ್ಲಿ ಅರ್ಹರಿರುವ ಸಿವಿಲ್ ಗುತ್ತಿಗೆದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್‌ನ ಆಡಿಯಲ್ಲಿ ಸಲ್ಲಿಸಲು ಆಹ್ವಾನಿಸಲಾಗಿದೆ.

ಕ್ರ.ಸಂ.1 **ಕಾಮಗಾರಿಯ ಹೆಸರು:** ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ನಂಜನಗೂಡು: 2023–24ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಅನುಮೋದಿತ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿರುವ 2 ನೇ ಮುಖ್ಯ ರಸ್ತೆಯ ಎಡ ಭಾಗದಲ್ಲಿರುವ ಗೋದಾಮು ಅಭಿವೃದ್ಧಿ ಕಾಮಗಾರಿ. (ಐಟಂವಾರು ಟೆಂಡರ್). **ಟೆಂಡರಿಗಿಟ್ಟ ಮೊತ್ತ (ರೂ.ಗಳಲ್ಲಿ):** 30,12,393=51 **ಇ.ಎಂ.ಡಿ. ಮೊಬಲಗು (ಶೇಕಡ 2.00 ರಂತೆ:** 60,300=00 (ಇ ಪೇಮೆಂಟ್) (ರೂ.ಗಳಲ್ಲಿ). **ಕೆಲಸ ಪೂರೈಸಲು ನಿಗಧಿಪಡಿಸಿದ ಅವಧಿ:** 3 ತಿಂಗಳು (ಮಳೆಗಾಲ ಹೊರತುಪಡಿಸಿ). **ಅರ್ಹ ಗುತ್ತಿಗೆದಾರರ ದರ್ಜೆ:** ಕೆ.ಡಬ್ಲ್ಯು.–2, ಕ್ಲಾಸ್–3 ರಲ್ಲಿ ಅರ್ಹರಿರುವ & ಲೋ.ಇ.ಯಲ್ಲಿ ನೊಂದಾಯಿತ ಸಿವಿಲ್ ಗುತ್ತಿಗೆದಾರರು **ಇ ಪ್ರೋಸಸಿಂಗ ಫೀ:** ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್ ನಂತೆ (ಇ ಪೇಮೆಂಟ್)

ಟೆಂಡರ್ ಪ್ರಕ್ರಿಯೆ ವೇಳಾಪಟ್ಟಿ: 1) ಭರ್ತಿ ಮಾಡಿದ ಟೆಂಡರ್ ದಾಖಲೆಗಳನ್ನು ಇ ಪೋರ್ಟಲ್‌ನಲ್ಲಿ ಸ್ವೀಕರಿಸುವ ಕೊನೆ ದಿ: 11.12.2023 ರಂದು ಸಂಜೆ 4.30 ಗಂಟೆಯವರೆಗೆ. 2) ಟೆಂಡರುಗಳನ್ನು ತೆರೆಯುವ ದಿನಾಂಕ ಮತ್ತು ವೇಳೆ: 14.12.2023ರ ಮಧ್ಯಾಹ್ನ 2.30 ಗಂಟೆಗೆ. 3) ಹೆಚ್ಚಿನ ಷರತ್ತು ಹಾಗೂ ನಿಬಂಧನೆಗಳನ್ನು, ಕಛೇರಿ ವೇಳೆಯಲ್ಲಿ ಪಡೆಯಬಹುದು.

Tender documents may be downloaded from Government of Karnataka Public Procurement Portal website https://kppp.karnataka.gov.in/#/portal/portal-home under login for Contractors

ಟೆಂಡರುಗಳನ್ನು ತೆರೆಯುವ ಸ್ಥಳ: ಕಾರ್ಯದರ್ಶಿಯವರ ಕಛೇರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ನಂಜನಗೂಡು, ಮೈಸೂರು ಜಿಲ್ಲೆ
ಪತ್ರ ವ್ಯವಹಾರದ ವಿಳಾಸ: ಕಾರ್ಯದರ್ಶಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ನಂಜನಗೂಡು, ಮೈಸೂರು ಜಿಲ್ಲೆ

ಸಹಿ/– ಕಾರ್ಯದರ್ಶಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ನಂಜನಗೂಡು
ಸಹಿ/– ಆಡಳಿತಾಧಿಕಾರಿಯವರು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ನಂಜನಗೂಡು

PUBLIC NOTICE

My Clients Dr. N.SIDDHARTH SHANKAR son of Sri. Dr. N.Sriram & SMT.DR. RADHIKA Y.G wife of Dr.N.Siddharth Shankar negotiating to purchase the Property more fully described in the schedule below from its owners SRI. BHASKAR KUMAR CHAKRAVARTHY, son of Sri. Tapan Kumar Chakrabarthy & DR. SHARMISTA, daughter of Sri. Tapan Kumar Chakrabarty both are residing at # 215, Saraswathipuram Thonachikoppal, chamaraja Mohalla, Mysore. Any persons/s, interested parties, claimants, Agreement Holders, Banks, Financial institutions and/or statutory authorities having/asserting any right, title, interest, claims of any nature or any lien, charge, enforceable right or intending to oppose the development and/or has any objections of any nature to the aforesaid transaction should lodge such claims or objections in writing to the undersigned together with documentary proof/ supporting documents within SEVEN DAYS from the date of publication of this notice, failing which it will be presumed that no valid claims or objections subsist and where after no such claims will be entertained.

SCHEDULE

The House bearing No. 215 built on Site No. 215 situated at Kamakshi Hospital Road, 10th Main, 1st Cross, Saraswathipuram Thonachikoppal, Chamaraja Mohalla, Mysore an bounded on: East by: Property No.214, West by : Property No.216, North by: Road, South by: Property No.210 measuring East to West 40 Feet and North to South 60 Feet, Total 2400 Square Feet with RCC building.

Advocate: A.N Puttaswamygowda, BA.L.L.B, Advocate & Notary, #324/1, D Subbaiah Road, Mysuru - 570004, Mobile: 9620562745

ಗುತ್ತಿಗೆದಾರರ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಲಿಮಿಟೆಡ್ ಮೈಸೂರು

ಮುಡಾ ಕಛೇರಿ ಆವರಣ, ಜೆಎಲ್‌ಬಿ ರಸ್ತೆ, ಮೈಸೂರು – 570005
ಫೋನ್: 0821–2424246, ಮೊ.ನಂ. 9880875242, 9663859200

ನಮ್ಮ ನೆಚ್ಚಿನ ಅಧ್ಯಕ್ಷರಾದ
ಶ್ರೀ ಮಹಾಲಿಂಗಂ ರವರಿಗೆ ಅಭಿನಂಧನೆಗಳು

ದಿನಾಂಕ 17.11.2023 ರಂದು ಧಾರವಾಡ ಜಿಲ್ಲೆ, ಕಲಘಟಗಿಯಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಹಾಗೂ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಇವರ ಸಹಯೋಗದೊಂದಿಗೆ ನಡೆದ **70ನೇ ಅಖಿಲ ಭಾರತ ಸಹಕಾರ ಸಪ್ತಾಹ – 2023** ಸಮಾರಂಭದಲ್ಲಿ ಸಹಕಾರ ಸಂಘಗಳಲ್ಲಿ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ನಮ್ಮ ಸಂಸ್ಥೆಯ ಹೆಮ್ಮೆಯ ಅಧ್ಯಕ್ಷರಾದ ಶ್ರೀ. ಮಹಾಲಿಂಗಂ ರವರಿಗೆ 'ಉತ್ತಮ ಸಹಕಾರಿ' ಪ್ರಶಸ್ತಿ ನೀಡಿರುತ್ತಾರೆ. ನಮ್ಮ ಸಂಸ್ಥೆಯು ಇವರ ನೇತೃತ್ವದಲ್ಲಿ ಇನ್ನೂ ಹೆಚ್ಚಿನ ಅಭಿವೃದ್ಧಿ ಹೊಂದಲಿ ಎಂದು ಮತ್ತು ತಾಯಿ ಚಾಮುಂಡೇಶ್ವರಿ ಇವರಿಗೆ ಹೆಚ್ಚಿನ ಆಯಸ್ಸು, ಆರೋಗ್ಯ ನೀಡಲಿ ಎಂದು ಆಡಳಿತ ಮಂಡಳಿಯ ಸದಸ್ಯರು, ನೌಕರ ವರ್ಗದವರು, ಮತ್ತು ಸದಸ್ಯರುಗಳು ಹಾರೈಸುತ್ತಾರೆ.



ಶ್ರೀ ಮಹಾಲಿಂಗಂ ರವರು
ಅಧ್ಯಕ್ಷರು



ಮಾನ್ಯ ಸದಸ್ಯರುಗಳ ಗಮನಕ್ಕೆ : "ಸಂಸ್ಥೆಯ ಹಿಂದಿನ ಮಹಾಸಭೆಗಳಲ್ಲಿ ಆಡಳಿತ ಮಂಡಳಿಯು ಸದಸ್ಯರಿಗೆ ನೀಡಿರುವ ವಾಗ್ದಾನದಂತೆ ಸದಸ್ಯರುಗಳಿಗೆ ನಿವೇಶನ ನೀಡುವ ಬಗ್ಗೆ ಈಗಾಗಲೇ ತೀರ್ಮಾನಿಸಿದ್ದು, ಮೇಲ್ಕಂಡ ಆಡಳಿತ ಮಂಡಳಿಯ ಸದಸ್ಯರನ್ನೊಳಗೊಂಡಂತೆ ಹೊಸದಾಗಿ ಗುತ್ತಿಗೆದಾರರ ಗೃಹ ನಿರ್ಮಾಣ ಸಹಕಾರ ಸಂಘವು ರಚನೆಯಾಗುತ್ತಿದ್ದು, ಆ ಸೊಸೈಟಿಯಿಂದ ಸದಸ್ಯರಿಗೆ ಕಡಿಮೆ ಬೆಲೆಯಲ್ಲಿ ನಿವೇಶನಗಳನ್ನು ಹಂಚಲಾಗುವುದು".